ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 29 ಶುಕ್ರವಾರ 2026

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 47 | ಸಂಚಿಕೆ: 43 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ವರಿಷ್ಠರ ಸೂಚನೆಯಂತೆ ಮುಖ್ಯಮಂತ್ರಿ ಸ್ಥಾನಕ್ಕೆ

ಸಿದ್ದರಾಮಯ್ಯ ರಾಜೀನಾಮೆ

- ಬೆಳಗ್ಗೆ ಸಚಿವ ಸಹೋದ್ಯೋಗಿಗಳಿಗೆ ಉಪಹಾರ ಕೂಟ
- ಮಧ್ಯಾಹ್ನ ರಾಜಭವನಕ್ಕೆ ತೆರಳಿ ರಾಜ್ಯಪಾಲರ ಅನುಪಸ್ಥಿತಿಯಲ್ಲಿ ಅವರ ಕಾರ್ಯದರ್ಶಿಗೆ ರಾಜೀನಾಮೆ ಸಲ್ಲಿಕೆ
- ರಾಜ್ಯಪಾಲರು ರಾಜೀನಾಮೆ ಅಂಗೀಕರಿಸಿದ ಬಳಿಕ ಹೊಸ ನಾಯಕನ ಆಯ್ಕೆ ಪ್ರಕ್ರಿಯೆ ಆರಂಭ

ಬೆಂಗಳೂರು, ಮೇ 28(ಕೆಎಂಶಿ)– ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಸಲ್ಲಿಸಿದ್ದಾರೆ.

ಗುರುವಾರ ಮಧ್ಯಾಹ್ನ ತಮ್ಮ ಸಹೋದ್ಯೋಗಿಗಳೊಂದಿಗೆ ಲೋಕಭವನಕ್ಕೆ ತೆರಳಿದ ಮುಖ್ಯಮಂತ್ರಿ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅನುಪಸ್ಥಿತಿಯಲ್ಲಿ ಅವರ ಕಾರ್ಯದರ್ಶಿ ಪ್ರಭುಶಂಕರ್ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿದರು.

ಪತ್ರ ಸ್ವೀಕರಿಸಿದ ಕಾರ್ಯದರ್ಶಿ, ರಾಜೀನಾಮೆ ವಿಷಯವನ್ನು ಇಂದೋರ್ ಪ್ರವಾಸದಲ್ಲಿರುವ ರಾಜ್ಯಪಾಲರ ಗಮನಕ್ಕೆ ತಂದು, ಅವರ ನಿರ್ದೇಶನದಂತೆ ಮುಂದಿನ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ. ರಾಜ್ಯಪಾಲರು ಬುಧವಾರ ತಡರಾತ್ರಿ ಮುಂಬೈಗೆ ತೆರಳಿ ಅಲ್ಲಿನ ಲೋಕಭವನದಲ್ಲಿ ತಂಗಿ ಇಂದು ಬೆಳಗ್ಗೆ ಇಂದೋರ್‌ಗೆ ಪ್ರಯಾಣಿಸಿದ್ದಾರೆ.

ರಾಜ್ಯಪಾಲರ ಹಠಾತ್ ಪ್ರವಾಸದ ಹಿನ್ನೆಲೆಯಲ್ಲಿ ಕಾಂಗ್ರೆಸ್‌ನಲ್ಲಿ ಅನೇಕ ವದಂತಿಗಳು ಕೇಳಿಬಂದವಾದರೂ, ಪಕ್ಷದ ವರಿಷ್ಠರ ಆದೇಶದಂತೆ ಸಿದ್ದರಾಮಯ್ಯ ಲೋಕಭವನಕ್ಕೆ ತೆರಳಿ ರಾಜೀನಾಮೆ ಪತ್ರ ಸಲ್ಲಿಸಿ ಹಿಂತಿರುಗಿದರು.

ರಾಜೀನಾಮೆ ಪತ್ರ ನೀಡುವುದಕ್ಕೂ ಮುನ್ನ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣ ಮತ್ತು ಕಾವೇರಿಯಲ್ಲಿ ಅನೇಕ ನಾಟಕೀಯ ಬೆಳವಣಿಗೆಗಳು ನಡೆದವು. ತಮ್ಮ ಸಹೋದ್ಯೋಗಿ ಗಳಿಗೆ ಕಾವೇರಿಯಲ್ಲಿ ಉಪಹಾರ ಕೂಟ ಏರ್ಪಡಿಸಿದ್ದ ಮುಖ್ಯಮಂತ್ರಿ, ಅದಕ್ಕೂ ಮುನ್ನ ಮುಂದಿನ ಮುಖ್ಯಮಂತ್ರಿ ಎಂದೇ ಬಿಂಬಿತ ವಾಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜೊತೆ ಸುಮಾರು 30 ನಿಮಿಷ ಮುಖಾಮುಖಿ ಚರ್ಚೆ ನಡೆಸಿದರು.



ಲೋಕಭವನದಲ್ಲಿ ರಾಜ್ಯಪಾಲರ ಕಾರ್ಯದರ್ಶಿ ಪ್ರಭುಶಂಕರ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸಚಿವ ಸಹೋದ್ಯೋಗಿಗಳ ಸಮ್ಮುಖದಲ್ಲಿ ಗುರುವಾರ ರಾಜೀನಾಮೆ ಸಲ್ಲಿಸಿದರು.

ಸಿದ್ದರಾಮಯ್ಯ ಭೇಟಿ ಮಾಡುತ್ತಿದ್ದಂತೆ ಅವರನ್ನು ಶಿವಕುಮಾರ್ ಅಪ್ಪಿಕೊಂಡು, ಕಾಲಿಗೆರಗಿ ಆಶೀರ್ವಾದ ಪಡೆದರು.

ನಂತರ ಉಪಹಾರ ಕೂಟದಲ್ಲಿ ಸಿದ್ದರಾಮಯ್ಯ ಸ್ವಯಂ ಪ್ರೇರಿತರಾಗಿ ಪಕ್ಷದ ಆದೇಶದ ಮೇರೆಗೆ ಮುಖ್ಯಮಂತ್ರಿ ಸ್ಥಾನ ತ್ಯಜಿಸುತ್ತಿದ್ದೇನೆ. ಈ ಬೆಳವಣಿಗೆಯಿಂದ ನನಗೆ ಯಾವುದೇ ಅಸಮಾಧಾನ ಇಲ್ಲ, ಮನಃಪೂರ್ವಕವಾಗಿಯೇ ಅಧಿಕಾರದಿಂದ ಕೆಳಗಿಯುತ್ತಿದ್ದೇನೆ ಎನ್ನುತ್ತಾ ಪಕ್ಕದಲ್ಲೇ ಕುಳಿತಿದ್ದ ಡಿ.ಕೆ. ಶಿವಕುಮಾರ್ ಹೆಗಲು ತಟ್ಟಿ, ಒಳ್ಳೆಯದಾಗಲಿ ಎನ್ನುವ ಮೂಲಕ ಪರೋಕ್ಷವಾಗಿ, ಇವರೇ ಮುಂದಿನ ನಮ್ಮ ನಾಯಕರು ಎಂಬ ಸಂದೇಶವನ್ನು ಸೂಚ್ಯವಾಗಿ ತಮ್ಮ ಸಹೋದ್ಯೋಗಿಗಳಿಗೆ ತಲುಪಿಸಿದರು. ನಾನು ಅಧಿಕಾರ ವಹಿಸಿಕೊಳ್ಳುವುದಕ್ಕೂ ಮುನ್ನ ದೆಹಲಿ ವರಿಷ್ಠರ ಮುಂದೆ ■ 6ನೇ ಪುಟಕ್ಕೆ

ನಿಮ್ಮ ಪ್ರೀತಿಗೆ ಧನ್ಯವಾದ...

ಬೆಂಗಳೂರು, ಮೇ 28– ಸಿದ್ದರಾಮಯ್ಯ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿದ ನಂತರ ರಾಜ್ಯದ ಜನರು ನೀಡಿದ ಪ್ರೀತಿ ಮತ್ತು ಬೆಂಬಲಕ್ಕಾಗಿ ಧನ್ಯವಾದ ಹೇಳುವ ಭಾವನಾತ್ಮಕ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದಾರೆ.



ಕೃತಜ್ಞತೆಯ ಸೂಚಕವಾಗಿ ವೇದಿಕೆಯ ಮೇಲೆ ಕೈಗಳನ್ನು ಎತ್ತಿ ನಮಸ್ಕರಿಸುವ ಫೋಟೋವೊಂದನ್ನು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಅವರು ಹಂಚಿಕೊಂಡಿದ್ದು, ಧನ್ಯವಾದಗಳು. ನಿಮ್ಮ ಪ್ರೀತಿ. ನಿಮ್ಮ ನಂಬಿಕೆ. ನನ್ನ ಶಾಶ್ವತ ಶಕ್ತಿ ಎಂದು ಬರೆದುಕೊಂಡಿದ್ದಾರೆ. ಕಷ್ಟದ ಸಮಯದಲ್ಲಿ ತನ್ನೊಂದಿಗೆ ನಿಂತಿದ್ದಕ್ಕಾಗಿ ಜನರಿಗೆ ಧನ್ಯವಾದ ಹೇಳಿದ್ದಾರೆ. ನನ್ನನ್ನು ತಮ್ಮಲ್ಲಿ ಒಬ್ಬನೆಂದು ಪರಿಗಣಿಸಿದ, ನನ್ನನ್ನು ಆಶೀರ್ವದಿಸಿದ, ಪ್ರೋತ್ಸಾಹಿಸಿದ, ಸರಿಪಡಿಸಿದ, ಕಷ್ಟದ ಸಮಯದಲ್ಲಿ ನನ್ನೊಂದಿಗೆ ನಿಂತ ಮತ್ತು ಈ ದೀರ್ಘ ಪ್ರಯಾಣದುದ್ದಕ್ಕೂ ನನ್ನ ಕೈ ಹಿಡಿದ ಲಕ್ಷಾಂತರ ಪ್ರೀತಿಯ ಹೃದಯಗಳಿಗೆ ತಲೆಬಾಗುತ್ತೇನೆ. ನಾನು ಇಂದು ಏನಾಗಿದ್ದೇನೆಯೋ ಅದಕ್ಕೆ ನೀವೇ ಕಾರಣ ಎಂದಿದ್ದಾರೆ. ■ 6ನೇ ಪುಟಕ್ಕೆ

ಒಂದು ನೋಟ... ಹಲವು ಪಾಠ...!





ಕಾವೇರಿ ನಿವಾಸದಲ್ಲಿ ಏರ್ಪಡಿಸಿದ್ದ ಉಪಹಾರ ಕೂಟದಲ್ಲಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕಾಲುಮುಟ್ಟಿ (1) ನಮಸ್ಕರಿಸಿದರು. ಬಳಿಕ ಇಬ್ಬರು (2) ಆಲಂಗಿಸಿಕೊಂಡರು. ಈ ಒಂದು ಪ್ರಸಂಗ ರಾಜಕೀಯವಾಗಿ ಹತ್ತು ಹಲವು ಸಂದೇಶಗಳನ್ನು ಸಾರುತ್ತಿವೆ!

ರಾಷ್ಟ್ರ ರಾಜಕಾರಣಕ್ಕೆ ಹೋಗಲ್ಲ; ಸಕ್ರಿಯ ರಾಜಕಾರಣ ಬಿಡಲ್ಲ...

- ರಾಜೀನಾಮೆ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಸಿದ್ದರಾಮಯ್ಯ ಸ್ಪಷ್ಟನೆ
- ಎರಡು ಬಾರಿ ವಿಪಕ್ಷ ನಾಯಕ, ಮುಖ್ಯಮಂತ್ರಿ ಆಗಲು ಅವಕಾಶ ಕೊಟ್ಟ ವರಿಷ್ಠರಿಗೆ ಅಭಾರಿ; ಮತದಾರ ದೇವರುಗಳಿಗೆ ಕೃತಜ್ಞತೆ



ಲೋಕಭವನದಲ್ಲಿ ರಾಜೀನಾಮೆ ಸಲ್ಲಿಸಿದ ಬಳಿಕ ಕೃಷ್ಣಾದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಿದ್ದರಾಮಯ್ಯ

ಬೆಂಗಳೂರು, ಮೇ 28(ಕೆಎಂಶಿ)–ಪಕ್ಷದ ವರಿಷ್ಠರಿಗೆ ಕೊಟ್ಟ ಮಾತಿನಂತೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದೇನೆ ಎಂದು ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಲೋಕಭವನಕ್ಕೆ ತೆರಳಿ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ಸಲ್ಲಿಸಿ ಬಂದ ನಂತರ ಗೃಹ ಕಚೇರಿ ಕೃಷ್ಣಾದಲ್ಲಿ ಸುದೀರ್ಘ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜೀನಾಮೆ ನೀಡಬೇಕಾದ ಕಾರಣ ತಿಳಿಸಿ, ತಮಗೆ 18 ವರ್ಷಗಳ ಕಾಲ ಮುಖ್ಯಮಂತ್ರಿ ಹಾಗೂ ವಿರೋಧ ಪಕ್ಷದ ನಾಯಕನಾಗಿ ಕಾರ್ಯನಿರ್ವಹಿಸಲು ಅವಕಾಶ ಕಲ್ಪಿಸಿದ ಎಐಸಿಸಿ ನಾಯಕರಿಗೆ ಧನ್ಯವಾದ ಅರ್ಪಿಸಿದರು.

ಕಾಂಗ್ರೆಸ್ ಅಧಿನಾಯಕರು ಸೂಚಿಸಿದ ದಿನವೇ ಅಧಿಕಾರ ತ್ಯಜಿಸುವುದಾಗಿ ನಾನು ಯಾವಾಗಲೂ ಹೇಳುತ್ತಿದ್ದೆ. ಕಳೆದ ಮಂಗಳವಾರ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಸೂಚಿಸಿದರು. ಅದರಂತೆ ಇಂದು ನಾನು ಪದತ್ಯಾಗ ಮಾಡಿದ್ದೇನೆ.

ಲೋಕಭವನಕ್ಕೆ ತೆರಳಿ ರಾಜ್ಯಪಾಲರ ಅನುಪಸ್ಥಿತಿಯಲ್ಲಿ ಅವರ ಕಾರ್ಯದರ್ಶಿ ಅವರಿಗೆ ರಾಜೀನಾಮೆ ಪತ್ರ ನೀಡಿ ಬಂದಿದ್ದೇನೆ. ರಾಜ್ಯಪಾಲರು ಇಂದು ರಾತ್ರಿ ನಗರಕ್ಕೆ ಹಿಂತಿರುಗಲಿದ್ದು, ನಂತರ ಸಂವಿಧಾನ ರೀತ್ಯಾ ನನ್ನ ರಾಜೀನಾಮೆ ಅಂಗೀಕರಿಸಿ, ಮುಂದಿನ ನಾಯಕನ ಆಯ್ಕೆಗೆ ಅನುವು ಮಾಡಿಕೊಡಲಿದ್ದಾರೆ.

ವಿಧಾನಸಭೆಯಲ್ಲಿ ಕಾಂಗ್ರೆಸ್‌ಗೆ 136 ಸದಸ್ಯ ಬಲವಿದೆ. ಆದ್ದರಿಂದ ಮುಂದಿನ ಮುಖ್ಯಮಂತ್ರಿ ಆಯ್ಕೆಗೆ ಸಂವಿಧಾನಬದ್ಧವಾಗಿ ಅವಕಾಶ ಮಾಡಿಕೊಡಬೇಕಿದೆ ಎಂದರು. ■ 6ನೇ ಪುಟಕ್ಕೆ

ಮುಂದಿನ ಮುಖ್ಯಮಂತ್ರಿಯನ್ನು ಶಾಸಕಾಂಗ ಸಭೆ, ವರಿಷ್ಠರು ಆಯ್ಕೆ ಮಾಡ್ತಾರೆ!

ಬೆಂಗಳೂರು, ಮೇ 28(ಕೆಎಂಶಿ)–ಕಾಂಗ್ರೆಸ್ ಶಾಸಕಾಂಗ ಸಭೆ ಹಾಗೂ ಪಕ್ಷದ ವರಿಷ್ಠರು ಮುಂದಿನ ಮುಖ್ಯಮಂತ್ರಿಯನ್ನು ಆಯ್ಕೆ ಮಾಡಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವರಿಷ್ಠರ ಅಣತಿಯಂತೆ ಅಧಿಕಾರ ತ್ಯಜಿಸಿದ್ದೇನೆ. ಮುಂದಿನ ಆಯ್ಕೆಯೂ ಅವರಿಗೇ ಬಿಟ್ಟಿದ್ದು. ಅಧಿಕಾರ ತ್ಯಜಿಸುತ್ತಿರುವ ನನಗೆ ರಾಹುಲ್ ಗಾಂಧಿ ಅವರು ರಾಜ್ಯಸಭೆಗೆ ಬರುವಂತೆ ಆಹ್ವಾನ ನೀಡಿದರು. ಆದರೆ, ಈ ಆಹ್ವಾನವನ್ನು ನಯವಾಗಿ ನಿರಾಕರಿಸಿ, ನನಗೆ ರಾಷ್ಟ್ರ ರಾಜಕಾರಣದಲ್ಲಿ ಆಸಕ್ತಿ ಇಲ್ಲ, ಕೊನೆವರೆಗೂ ನನ್ನ ಜನರ ಸೇವೆ ಮಾಡುವುದಾಗಿ, ರಾಜ್ಯ ರಾಜಕಾರಣದಲ್ಲಿ ಮುಂದುವರೆಯುವುದಾಗಿ ತಿಳಿಸಿದ್ದೇನೆ. ನನ್ನ ಕ್ಷೇತ್ರದ ಮತದಾರರು ನನಗೆ ಐದು ವರ್ಷ ಆಶೀರ್ವಾದ ಮಾಡಿದ್ದಾರೆ. ಇನ್ನೂ ಎರಡು ವರ್ಷ ಇದೆ, ಜನರ ಸೇವೆ ಮಾಡಬೇಕು. ಸಕ್ರಿಯ ರಾಜಕಾರಣದಿಂದ ದೂರ ಉಳಿಯುವುದಿಲ್ಲ. ಕೋಮುವಾದಿ ಶಕ್ತಿಗಳ ವಿರುದ್ಧ ಹೋರಾಟ ಮುಂದುವರೆಸುವುದಾಗಿ ತಿಳಿಸಿದರು.

ಡಿ.ಕೆ. ಶಿವಕುಮಾರ್ ಮುಂದಿನ ಸಿಎಂ

- ಉಪಹಾರ ಕೂಟ ಸಭೆಯಲ್ಲಿ ಸಹೋದ್ಯೋಗಿಗಳಿಗೆ ಸಿದ್ದರಾಮಯ್ಯ ಸಂದೇಶ
- ಸಿದ್ದರಾಮಯ್ಯರ ಹೇಳಿಕೆಯ ಪುನರುಚ್ಚರಿಸಿದ ಸಚಿವ ಹೆಚ್.ಕೆ. ಪಾಟೀಲ್
- ಸೋಮವಾರ ಗೋಧೂಳಿ ಮುಹೂರ್ತದಲ್ಲಿ ಪಟ್ಟಾಭಿಷೇಕ?

ಬೆಂಗಳೂರು, ಮೇ 28–ಡಿ.ಕೆ. ಶಿವಕುಮಾರ್ ಅವರೇ ಮುಂದಿನ ಮುಖ್ಯಮಂತ್ರಿ ಆಗಲಿದ್ದಾರೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸಚಿವ ಸಹೋದ್ಯೋಗಿಗಳಿಗೆ ಸಂದೇಶ ನೀಡಿದ್ದಾರೆ. ಇಂದು ಕಾವೇರಿಯಲ್ಲಿ ಏರ್ಪಡಿಸಿದ್ದ ಉಪಹಾರ ಕೂಟಕ್ಕೆ ಡಿಸಿಎಂ ಡಿ.ಕೆ ಶಿವಕುಮಾರ್ ಬರುತ್ತಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾಲು ಮುಟ್ಟಿ ನಮಸ್ಕರಿಸಿದರು. ಈ ವೇಳೆ ಭಾವುಕರಾದ ಸಿದ್ದರಾಮಯ್ಯ, ಶಿವಕುಮಾರ್‌ಗೆ ಕೈನೀಡಿ, ಕೊನೆಗೆ ಇಬ್ಬರೂ ಆಲಂಗಿಸಿಕೊಂಡರು.



ಡಿ.ಕೆ. ಶಿವಕುಮಾರ್ ಅವರಿಗೆ ಅವರ ಆರಾಧ್ಯ ಗುರು ನೊಣವಿನಕೆರೆ ಶ್ರೀಗಳಾದ ಅಜ್ಜಯ್ಯ ಕಿವಿಮಾತು.

ಉಪಹಾರ ಸೇವನೆ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರು ಸಚಿವ ಸಹೋದ್ಯೋಗಿಗಳಿಗೆ ಡಿ.ಕೆ.ಶಿವಕುಮಾರ್ ಅವರೇ ಮುಂದಿನ ಸಿಎಂ. ವರಿಷ್ಠರು ಇದನ್ನ ಅಧಿಕೃತವಾಗಿ ಘೋಷಿಸಲಿದ್ದಾರೆ ಎಂದು ತಿಳಿಸಿದ್ದಾರೆ. ಉಪಹಾರ ಕೂಟದ ಬಳಿಕ ■ 6ನೇ ಪುಟಕ್ಕೆ

ಮಾತು ಆಡಿದರೆ... ಮುತ್ತು ಒಡೆದು ಹೋಗಲಿದೆ...!

ತುಮಕೂರು, ಮೇ 28– ಮಾತು ಆಡಿದರೆ ಮುತ್ತು ಒಡೆದು ಹೋಗಲಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್‌ಗೆ ನೊಣವಿನಕೆರೆ ಅಜ್ಜಯ್ಯ ಸಲಹೆ ಕೊಟ್ಟಿದ್ದಾರೆ. ಅಜ್ಜಯ್ಯನ ಸೂಚನೆಯಂತೆ ಡಿಕೆ ಶಿವಕುಮಾರ್ ಮೌನ ವಹಿಸಿದ್ದಾರೆ.

ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವವರೆಗೂ ಯಾವುದೇ ಮಾತನಾಡದಂತೆ ನೊಣವಿನಕೆರೆ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಶ್ರೀಗಳು ಎಚ್ಚರಿಕೆ ಕೊಟ್ಟಿದ್ದಾರೆ. ಮಾತಾಡಿದರೆ ಮುತ್ತು ಒಡೆದು ಹೋಗಲಿದೆ. ಅರ್ಥಾತ್ ಕೆಲಸ ಕೆಡಲಿದೆ ಎಂಬ ಸಂದೇಶವನ್ನು ಶ್ರೀಗಳು ಡಿಕೆಶಿಗೆ ಕೊಟ್ಟಿದ್ದಾರೆ. ಹಾಗಾಗಿ ಡಿಕೆಶಿ ಬೆಂಬಲಿಗರಿಗೂ ಯಾವುದೇ ಹೇಳಿಕೆ ಕೊಡದಂತೆ ತಾಕೀತು ಮಾಡಲಾಗಿದೆ. ಈ ಹಿನ್ನೆಲೆ ಡಿಸಿಎಂ ಡಿಕೆಶಿ ಬ್ರೇಕ್‌ಫಾಸ್ಟ್ ಸಭೆ ಬಳಿಕ ಮಾಧ್ಯಮಗಳಿಗೆ ಯಾವುದೇ ಪ್ರತಿಕ್ರಿಯೆ ನೀಡದೇ ತೆರಳಿದ್ದಾರೆ. ಇದಕ್ಕೂ ಮೊದಲು ದೆಹಲಿಗೆ ಹೋಗುವ ಮುನ್ನ ಡಿಸಿಎಂ ಡಿಕೆಶಿ ಒಂದೇ ದಿನ ಎರಡು ಬಾರಿ ನೊಣವಿನಕೆರೆ ಕಾಡಸಿದ್ದೇಶ್ವರ ಮಠಕ್ಕೆ ಭೇಟಿ ನೀಡಿ ಅಜ್ಜಯ್ಯನ ದರ್ಶನ ಪಡೆದು ಆಶೀರ್ವಾದ ಪಡೆದಿದ್ದರು. ಅಜ್ಜಯ್ಯನ ಅಪ್ಪಣೆ ಪಡೆಯದೇ ನಾನು ಯಾವ ಕೆಲಸವನ್ನೂ ಮಾಡಲ್ಲ ಎಂದು ಈ ಹಿಂದೆ ಡಿಕೆಶಿ ಹಲವು ಬಾರಿ ಹೇಳಿದ್ದರು.

ಮೈಸೂರು ಮಿತ್ರ ಶುಕ್ರವಾರ 29 ಮೇ 2026

ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕರಾಗಿ ಪ್ರೊ.ನಂಜಯ್ಯ ಹೊಂಗನೂರು ಅಧಿಕಾರ ಸ್ವೀಕಾರ



ನಿರ್ಗಮಿತ ನಿರ್ದೇಶಕಿ ಪ್ರೊ.ಎನ್.ಕೆ.ಲೋಲಾಕ್ಷಿ ಅವರು ಪ್ರೊ.ನಂಜಯ್ಯ ಹೊಂಗನೂರು ಅವರಿಗೆ ಅಧಿಕಾರ ಹಸ್ತಾಂತರಿಸಿದರು.

ಮೈಸೂರು, ಮೇ 28(ವಿವಿಹೆಚ್)– ಮೈಸೂರು ವಿಶ್ವವಿದ್ಯಾನಿಲಯದ ಪ್ರತಿಷ್ಠಿತ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ 22ನೇ ನಿರ್ದೇಶಕರಾಗಿ ಹಿರಿಯ ಜಾನಪದ ಪ್ರಾಧ್ಯಾಪಕ ಪ್ರೊ.ಎಂ.ನಂಜಯ್ಯ ಹೊಂಗನೂರು ಅಧಿಕಾರ ಸ್ವೀಕರಿಸಿದರು.

ಪ್ರೊ.ಎನ್.ಕೆ.ಲೋಲಾಕ್ಷಿ ಅವರು ಪ್ರೊ.ನಂಜಯ್ಯ ಅವರಿಗೆ ಅಧಿಕಾರ ಹಸ್ತಾಂತರಿಸಿದರು. ಸಂಸ್ಥೆ ಅಧೀಕ್ಷಕಿ ಹೇಮಲತಾ ಅಧಿಕಾರ ಸ್ವೀಕಾರದ ಪ್ರಕ್ರಿಯೆ ಪೂರೈಸಿದರು. ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಸಂಶೋಧಕರು, ವಿದ್ಯಾರ್ಥಿಗಳು ನೂತನ ನಿರ್ದೇಶಕರನ್ನು ಅಭಿನಂದಿಸಿದರು.

ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲೂಕಿನ ಹೊಂಗನೂರಲ್ಲಿ ಜನಿಸಿದ ಪ್ರೊ.ಎಂ.ನಂಜಯ್ಯ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ವಿದ್ಯಾರ್ಥಿಯಾಗಿ, ಪ್ರಾಧ್ಯಾಪಕರಾಗಿ, ಪ್ರಸಾರಾಂಗ ನಿರ್ದೇಶಕರಾಗಿ ಅದಕ್ಕೆ ಘನತೆ ತುಂಬುವ ಎತ್ತರಕ್ಕೆ ಬೆಳೆದಿದ್ದಾರೆ. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಜಾನಪದ ವಿಭಾಗ ಮುಚ್ಚಿಹೋಗುವ ಹಂತದಲ್ಲಿದ್ದಾಗ ಮರುಜೀವ ಕೊಟ್ಟು ಅನೇಕ ವಿದ್ಯಾರ್ಥಿಗಳ ಏಳಿಗೆಗೆ ಕಾರಣೀಕರ್ತರಾಗಿದ್ದಾರೆ. ಜಾನಪದ ವಿಭಾಗದಲ್ಲಿ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಡಾಕ್ಟರೇಟ್ ಪದವಿ ಪಡೆದರೆ, ಇವರ ಮಾರ್ಗದರ್ಶನದಲ್ಲಿಯೇ 22 ವಿದ್ಯಾರ್ಥಿಗಳು ಪಿಎಚ್.ಡಿ ಪದವಿ ಪಡೆದಿದ್ದಾರೆ.

ಮೈಸೂರಲ್ಲಿ ಸಾವರ್ಕರ್ 143ನೇ ಜಯಂತಿ ಆಚರಣೆ

ಸ್ವಾತಂತ್ರ್ಯ ನಂತರವೂ ಸಾವರ್ಕರ್ ಅನುಭವಿಸಿದ ನೋವು ಅಷ್ಟಿಷ್ಟಲ್ಲ: ಸಂಸದ ಯದುವೀರ್ ಒಡೆಯರ್ ಸ್ಮರಣೆ

ಮೈಸೂರು,ಮೇ28(ಎಂಕೆ)–ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ವೃತ್ತ(ಮೆಟ್ರೊಫೋಲ್ ವೃತ್ತ)ದಲ್ಲಿ ಸಾವರ್ಕರ್ ಪ್ರತಿಷ್ಠಾನ ಮೈಸೂರು ಹಾಗೂ ಸಾವರ್ಕರ್ ಯುವ ಬಳಗದ ವತಿಯಿಂದ ಸ್ವಾತಂತ್ರ್ಯ ಹೋರಾಟಗಾರ ವಿನಾಯಕ ದಾಮೋದರ ಸಾವರ್ಕರ್ ಅವರ 143ನೇ ಜಯಂತಿ ಆಚರಿಸಲಾಯಿತು.

ವೀರ ಸಾವರ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಾವರ್ಕರ್ ಅವರ ಅಭಿಮಾನಿಗಳಿಗೆ ಸಿಹಿ ನೀಡಿ, ಸಾವರ್ಕರ್ ಅವರ ಸ್ವಾತಂತ್ರ್ಯ ಹೋರಾಟ, ದೇಶಕ್ಕಾಗಿ ಮಾಡಿದ ತ್ಯಾಗವನ್ನು ಸ್ಮರಿಸಿದರು.

ದೇಶದ ಸ್ವಾತಂತ್ರ್ಯಕ್ಕಾಗಿ ವಿನಾಯಕ ದಾಮೋದರ ಸಾವರ್ಕರ್ ಅವರು, ತಮ್ಮ ಜೀವಿತಾವಧಿಯ ಬಹುಪಾಲು ಜೈಲಿನಲ್ಲಿ ಸವೆದು, ದೇಶ ಸೇವೆಗಾಗಿ ತಮ್ಮನ್ನು ತಾವೇ ಸಮರ್ಪಿಸಿಕೊಂಡವರು. ಸ್ವಾತಂತ್ರ್ಯ ಬಂದ ನಂತರವೂ ಅವರು ಅನುಭವಿಸಿದ ಶಿಕ್ಷೆ ನೋವು ಹೇಳತೀರದು. ಬ್ರಿಟಿಷರ ವಿರುದ್ಧ ಹೋರಾಟಕ್ಕಾಗಿ ಸಂಘಟನೆಯನ್ನು ಸಜ್ಜುಗೊಳಿಸಿದರು ಎಂದು ತಿಳಿಸಿದರು.



ಮೈಸೂರಿನ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತ (ಮೆಟ್ರೊಪೋಲ್ ವೃತ್ತ)ದಲ್ಲಿ ಸ್ವಾತಂತ್ರ್ಯ ಹೋರಾಟಗಾರ ವಿನಾಯಕ ದಾಮೋದರ ಸಾವರ್ಕರ್ ಅವರ 143ನೇ ಜಯಂತಿ ಆಚರಿಸಲಾಯಿತು.

ಅಂಡಮಾನ್ ಜೈಲಿನ ಚಿಕ್ಕ ಕೋಣೆಯೊಂದರಲ್ಲಿ ಕಠಿಣ ಕರಿನೀರಿನ ಶಿಕ್ಷೆ ಅನುಭವಿಸಿದ್ದರು. ಅಂತಹ ಮಹಾನ್ ವ್ಯಕ್ತಿಯ ಜಯಂತಿಯಂದು ಅವರ ತ್ಯಾಗವನ್ನು ನೆನೆದು ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಭಾರತದ ಪರಂಪರೆಯನ್ನು ಉಳಿಸುವ ನಿಟ್ಟಿನಲ್ಲಿ ಮಹತ್ವದ ಕೊಡುಗೆ ನೀಡಿದ ಸಾವರ್ಕರ್‌ರ ಆದರ್ಶಗಳನ್ನು ಮೈಗೂಡಿಸಿಕೊಂಡು ಶ್ರೇಷ್ಠ ಭಾರತ ನಿರ್ಮಾಣಕ್ಕೆ ನಾವೆಲ್ಲರೂ ಕೈ ಜೋಡಿಸೋಣ ಎಂದು ಕರೆ ನೀಡಿದರು.

ನಗರಪಾಲಿಕೆ ಮಾಜಿ ಸದಸ್ಯರಾದ ಪ್ರಶಾಂತ್ ಗೌಡ, ಜಗದೀಶ್, ಸಾವರ್ಕರ್ ಪ್ರತಿಷ್ಠಾನದ ಪ್ರಧಾನ ಕಾರ್ಯದರ್ಶಿ ರಾಕೇಶ್ ಭಟ್, ಮುಖಂಡರಾದ ವಿಕ್ರಂ ಅಯ್ಯಂಗಾರ್, ಸಂದೇಶ್, ಪ್ರಮೋದ್ ಗೌಡ, ಸಂಜಯ್, ಸಂತೋಷ್, ಟಿ.ಎಸ್.ಅರುಣ್, ದೀಪಕ್, ರವಿ, ಗೈಡ್ ಚಂದ್ರು, ಸಂಜಯ್, ಪ್ರಸನ್ನ, ಡಿ.ರಾಘವೇಂದ್ರ, ಚೇತನ್, ಭಾಗ್ಯರಾಜ್, ಮಧು ಸೋಮಶೇಖರ್, ಶಿವುಪಾಟೀಲ್, ಚಂದನ್ ಗೌಡ, ಮುರಳಿ, ನಾಗೇಂದ್ರ, ವಿಷ್ಣುವರ್ಧನ್ ಮತ್ತಿತರರಿದ್ದರು.

ಮೈಸೂರಿನ ಸುಪಾರಿ ಕಿಲ್ಲರ್ ಅಬಿದ್ ಪಾಷಾನನ್ನ ಎನ್‌ಕೌಂಟರ್ ಮಾಡಿ

ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಗಿರಿಧರ್ ಆಗ್ರಹ

ಮೈಸೂರು, ಮೇ28(ಜಿಎ)–ಇತ್ತೀಚಿಗೆ ಪಿರಿಯಾಪಟ್ಟಣದ ಬಳಿ ಓರ್ವನನ್ನು ಕೊಲೆ ಮಾಡಲು ಸುಪಾರಿ ಪಡೆದು ಸಿಕ್ಕಿಬಿದ್ದಿರುವ ಆರೋಪಿ ಅಬಿದ್ ಪಾಷಾ ಅನೇಕ ಕೊಲೆಗಳನ್ನು ಮಾಡಿ, ಹಲವರ ಹತ್ಯೆಗೆ ಯತ್ನಿಸಿದ್ದು, ಪೊಲೀಸರು ಎನ್‌ಕೌಂಟರ್ ಮಾಡುವಂತೆ ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ವಿ.ಗಿರಿಧರ್ ಒತ್ತಾಯಿಸಿದರು.



ವಿ.ಗಿರಿಧರ್

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಬಿದ್ ಪಾಷಾ ಈ ಹಿಂದೆ ತಮ್ಮ ಮೇಲೆ ನಡೆದ ಮಾರಣಾಂತಿಕ ಹಲ್ಲೆ ಪ್ರಕರಣದ ಪ್ರಮುಖ ಆರೋಪಿಯೂ ಆಗಿದ್ದು, ಪೊಲೀಸರು ಹಾಗೂ ನ್ಯಾಯಾಲಯ ಈತ ತಪ್ಪಿಸಿಕೊಳ್ಳಲು ಬಿಡದೇ ಜೀವಾವಧಿ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದರು.

ಶಾಸಕ ತನ್ವೀರ್‌ಸೇಠ್ ಮೇಲೆ ನಡೆದ ಭೀಕರ ಹಲ್ಲೆ ಪ್ರಕರಣದಲ್ಲಿಯೂ ಈತನ ಕೈವಾಡವಿದೆ. ಈತನಿಂದಾಗಿ ಎನ್.ಆರ್. ಕ್ಷೇತ್ರದಲ್ಲಿ ಹಾಗೂ ಇನ್ನಿತರೆಡೆ ಹಿಂದೂಗಳು ನೆಮ್ಮದಿಯಿಂದ ಇರಲು ಸಾಧ್ಯವಾಗದಂತಾಗಿದೆ. ಹಿಂದೂಗಳಿಂದಲೇ ಸುಪಾರಿ ಪಡೆದು, ಹಿಂದೂಗಳನ್ನು ಕೊಲೆ ಮಾಡುವ ಕ್ರೂರಿ ಈತ. ಈ ಹಿಂದೆ ಹುಣಸೂರಿನ ಓರ್ವ ಬಾಲಕನ ಬರ್ಬರ ಕೊಲೆ ಪ್ರಕರಣದಲ್ಲಿಯೂ ಭಾಗಿಯಾಗಿದ್ದಾನೆ. ಆದರೂ ಇಷ್ಟು ದಿನ ಈತ ಪೊಲೀಸರ ಕಣ್ಣಿಗೆ ಮಣ್ಣೆರಚಿ ಓಡಾಡಲು ಬಿಟ್ಟವರಾರು ಎಂಬುದು ತಿಳಿಯುತ್ತಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಈತ ಈ ಹಿಂದೆ ಎಸ್‌ಡಿಪಿಐ ಸ್ಟಾರ್ ಪ್ರಚಾರಕನೂ ಆಗಿದ್ದ. ಜಿಹಾದಿ ಮನಸ್ಥಿತಿಯ ಈತನಿಂದಾಗಿ ಉದಯಗಿರಿಯಲ್ಲಿ ಅನೇಕ ಕೊಲೆಗಳು, ಹಲ್ಲೆಗಳು ನಡೆದಿವೆ. ಕ್ಯಾತಮಾರನಹಳ್ಳಿ ಕೋಮು ಗಲಭೆಯಲ್ಲಿಯೂ ಈತನ ಪಾತ್ರವಿದೆ. ಹೀಗಾಗಿ ಈತ ನಡೆಸಿದ ಕೊಲೆ ಯತ್ನದಲ್ಲಿ ಬದುಕುಳಿದ ಕೆಲವೇ ಮಂದಿಯಲ್ಲಿ ತಾವೂ ಒಬ್ಬ. ಹೀಗಾಗಿ ಈತನಿಂದ ತಮಗೆ ಜೀವ ಭಯವಿದ್ದು, ಈತನಿಗೆ ಉಗ್ರ ಶಿಕ್ಷೆ ವಿಧಿಸಬೇಕೆಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಬಾಲಸುಬ್ರಹ್ಮಣ್ಯಂ, ಪ್ರದೀಪ್ ಉಪಸ್ಥಿತರಿದ್ದರು.

ಗ್ರಾಪಂ ನೌಕರರ ಸಂಬಳ ಹೆಚ್ಚಳಕ್ಕೆ ಸ್ವಾಗತ

ಮೈಸೂರು, ಮೇ28(ಜಿಎ)–ರಾಜ್ಯ ಸರ್ಕಾರ ಶೇ.60ರಷ್ಟು ವೇತನ ಹೆಚ್ಚಳ ಮಾಡಿರುವುದನ್ನು ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘ ಸ್ವಾಗತಿಸಿದೆ. ಆದರೆ ಗ್ರಾಪಂಗಳಲ್ಲಿ ತ್ಯಾಜ್ಯ ವಿಲೇವಾರಿ ಕೆಲಸ ಮಾಡುತ್ತಿರುವ ಚಾಲಕಿಯರು ಹಾಗೂ ಸಹಾಯಕಿಯರನ್ನೂ ಪಂಚಾಯ್ತಿ ನೌಕರರನ್ನಾಗಿ ಪರಿಗಣಿಸಬೇಕು ಎಂದು ಸಂಘದ ಜಿಲ್ಲಾಧ್ಯಕ್ಷ ಕೆ.ಬಸವರಾಜು ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೌಕರರಿಗೆ ಸಂಬಂಧಿಸಿದಂತೆ ಒಟ್ಟು 17 ಬೇಡಿಕೆ ಸರ್ಕಾರದ ಮುಂದೆ ಇರಿಸಲಾಗಿತ್ತು. ಇವುಗಳಲ್ಲಿ ಒಂದನ್ನು ಮಾತ್ರ ಈಡೇರಿಸಲಾಗಿದೆ. ಹೀಗಾಗಿ ಉಳಿದವನ್ನೂ ಈಡೇರಿಸಬೇಕೆಂದು ಕೋರಿದರು.

ರಾಜ್ಯ ಉಪಾಧ್ಯಕ್ಷ ಜಿ.ರಾಮಕೃಷ್ಣ ಮಾತನಾಡಿ, ಕಳೆದ ಮೂರು ವರ್ಷಗಳಿಂದ ಗ್ರಾಪಂ ನೌಕರರಿಗೆ ಸೇವಾ ಹಿರಿತನ ಭತ್ಯೆ ಹೆಚ್ಚಳ, ಪಿಂಚಣಿ ಅಥವಾ ಇಡಿಗಂಟು, ಎಲ್ಲಾ ಗ್ರಾಪಂಗೆ ಲೆಕ್ಕ ಸಹಾಯಕರ ನೇಮಕಾತಿ ಮಾಡಿಕೊಳ್ಳಬೇಕು ಎಂಬುವು ಇನ್ನಿತರ ಬೇಡಿಕೆಗಳಾಗಿವೆ ಎಂದರು.

ಮತ್ತೋರ್ವ ರಾಜ್ಯ ಉಪಾಧ್ಯಕ್ಷರಾದ ಎಸ್.ರೇಖಾ ಮಾತನಾಡಿ, ಸಂಜೀವಿನಿ ಒಕ್ಕೂಟದ ಅಡಿಯಲ್ಲಿ ತ್ಯಾಜ್ಯ ವಿಲೇವಾರಿ ಮಾಡುವ ಚಾಲಕಿಯರು ಹಾಗೂ ಸಹಾಯಕಿಯರ ನೇಮಕ ಮಾಡಿಕೊಂಡು ಕೆಲಸ ಮಾಡಿಸಲಾಗುತ್ತಿದೆ. ಆದರೆ ನೀವೇ ಗ್ರಾಮಸ್ಥರಿಂದ ಶುಲ್ಕ ವಸೂಲಿ ಮಾಡಿ, ಬಂದ ಹಣದಿಂದ ವೇತನವಾಗಿ ಪಡೆದುಕೊಳ್ಳಿ ಎಂದು ಒತ್ತಾಯ ಮಾಡುತ್ತಿರುವುದು ಸರಿಯಲ್ಲ. ಹೀಗಾಗಿ ಪಂಚಾಯ್ತಿಗಳಿಂದಲೇ ಹಣ ನೀಡಬೇಕೆಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಟಿ.ಎಸ್.ದಿನೇಶ್, ಮಲ್ಲೇಶ್, ಎಸ್.ನಾಗರಾಜು ಮತ್ತಿತರರು ಉಪಸ್ಥಿತರಿದ್ದರು.

ನಿಧನ

ರಿಯಾಜ್ ಅಹಮದ್



ಮೈಸೂರು, ಮೇ 28– ನಿವೃತ್ತ ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು ಮತ್ತು ಮಾಜಿ ಕೆಪಿಎಸ್‌ಸಿ ಸದಸ್ಯರಾದ ರಿಯಾಜ್ ಅಹಮದ್ (79) ಮಂಗಳವಾರ (ಮೇ 26) ನಿಧನರಾದರು. ಮೃತರು ಪತ್ನಿ, ಪುತ್ರ, ಪುತ್ರಿ ಮತ್ತು ಅಪಾರ ಬಂಧುಗಳು, ಸ್ನೇಹಿತರನ್ನು ಅಗಲಿದ್ದಾರೆ. ಈ ಸಂಬಂಧ ಮೇ 27ರ ಬುಧವಾರ ಮಧ್ಯಾಹ್ನ 2:00 ಗಂಟೆಗೆ ಜ್ಹೊಹರ್ ಪ್ರಾರ್ಥನೆಯ ನಂತರ ಮಸೀದಿ ಖಾದ್ರಿಯಾ, ಬೆಂಗಳೂರು ಇಲ್ಲಿ ನಮಾಜ್–ಎ–ಜನಾಜಾ (ಅಂತ್ಯಕ್ರಿಯೆಯ ಪ್ರಾರ್ಥನೆ) ನಡೆಯಿತು. ನಂತರ ಬೆಂಗಳೂರಿನ ಖುದ್ದುಸ್ ಸಾಹೇಬ್ ರುದ್ರಭೂಮಿಯಲ್ಲಿ ಅಂತ್ಯ ಸಂಸ್ಕಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬಿ.ಮರಿಯಪ್ಪ



ಮೈಸೂರು: ಅಲ್ಯುಮಿನಿಯಂ ಉದ್ಯಮಿ, ಮೈಸೂರಿನ ಸಿದ್ಧಾರ್ಥನಗರದ ನಿವಾಸಿ ಬಿ.ಮರಿಯಪ್ಪ(75) ಅವರು ಬುಧವಾರ ರಾತ್ರಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ದಿವಂಗತರು ಪತ್ನಿ ಸುಧಾಮಣಿ, ಪುತ್ರಿ ಮೇಘಾಶ್ರೀ, ಪುತ್ರ ಗೌತಮ್, ಅಳಿಯ, ಸೊಸೆ ಮತ್ತು ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಶುಕ್ರವಾರ (ಮೇ 29) ಮಧ್ಯಾಹ್ನ 12 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಸ್.ಸೋಮಶೇಖರ್



ಮೈಸೂರಿನ ಕ್ಯಾತಮಾರನಹಳ್ಳಿಯ ನಿವಾಸಿ ಎಸ್.ಸೋಮಶೇಖರ್ (40) ಗುರುವಾರ ಬೆಳಗ್ಗೆ ನಿಧನರಾದರು.

ಮೃತರಿಗೆ ಪತ್ನಿ, ಪುತ್ರ, ತಾಯಿ, ಸಹೋದರರು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಇಂದು ಸಂಜೆ ಕ್ಯಾತಮಾರನಹಳ್ಳಿಯ ಸ್ಮಶಾನದಲ್ಲಿ ನೆರವೇರಿತು.

ಮೇ 31, ಮಹಾ ಮೃತ್ಯುಂಜಯ ಹೋಮ

ಮೈಸೂರು,ಮೇ28–ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಹುಣ್ಣಿಮೆ ಪ್ರಯುಕ್ತ ಮೇ 31ರ ಭಾನುವಾರದಂದು ಬೆಳಗ್ಗೆ 9 ಗಂಟೆಗೆ ಮಹಾಮೃತ್ಯುಂಜಯ ಹೋಮ ಮತ್ತು ಶ್ರೀ ಸತ್ಯನಾರಾಯಣ ಪೂಜೆ, ಮೇಷ, ಸಿಂಹ ವೃಶ್ಚಿಕ ಕುಂಭ ಮೀನ ರಾಶಿಯವರಿಗೆ ಶನಿಮಹಾಶಾಂತಿ ಮತ್ತು ಗುರು ಮಹಾ ಶಾಂತಿ ಕುಜ ಶಾಂತಿ, ಕೇತು ಶಾಂತಿ ಬಾದಾನಿವಾರಕ ಸುದರ್ಶನ ಹೋಮ ಆರೋಗ್ಯಕ್ಕಾಗಿ ಧನ್ವಂತರಿ ಹೋಮ ಏರ್ಪಡಿಸಲಾಗಿದೆ. ಮಧ್ಯಾಹ್ನ 12.30ಕ್ಕೆ ಪೂರ್ಣಾಹುತಿ ಮತ್ತು ಮಹಾಮಂಗಳಾರತಿ. ಎಂದಿನಂತೆ ಪ್ರಸಾದ ವಿನಿಯೋಗವಿರುತ್ತದೆ.

ಸ್ನೇಹಿತ ಕಳುಹಿಸಿದ ಲಿಂಕ್ ಮುಟ್ಟಿ 14.39 ಲಕ್ಷ ರೂ. ಕಳೆದುಕೊಂಡ!

ಮೈಸೂರು, ಮೇ28(ಜಿಎ)–ಸ್ನೇಹಿತ ಕಳುಹಿಸಿದ ಲಿಂಕ್‌ನಿಂದ ಯುವಕ ನೋರ್ವ 14.39 ಲಕ್ಷ ರೂ ಕಳೆದುಕೊಂಡಿರುವ ಸಂಬಂಧ ಸೆನ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಮೈಸೂರಿನ ವಿಜಯನಗರ 3ನೇ ಹಂತ ಸಿದ್ದಲಿಂಗೇಶ್ವರ ನಗರದ 25 ವರ್ಷದ ಯುವಕನಿಗೆ ಏ.4ರಂದು ಸ್ನೇಹಿತ ವಾಟ್ಸಾಪ್ ಮುಖಾಂತರ ಸಣ್ಣ ಆಟ ಆಡಿ ಕಂತುಗಳಲ್ಲಿ ಹಣ ಹೂಡಿ ಹಣ ಗಳಿಸಬಹುದಾಗಿ ಲಿಂಕ್ ಕಳುಹಿಸಿದ್ದಾನೆ. ಸ್ನೇಹಿತನ ಮೇಲಿನ ನಂಬಿಕೆಯಿಂದ ಯುವಕ ಲಿಂಕ್ ಮೂಲಕ ಟಿ10 ಎಕ್ಸ್‌ಚೇಂಜ್ ಎಂಬ ಪ್ಲಾಟ್‌ಫಾರಂನಲ್ಲಿ ಯೂಸರ್ ನೇಮ್ ಮತ್ತು ಪಾಸ್‌ವರ್ಡ್ ಕ್ರಿಯೆಟ್ ಮಾಡಿ ಅವರು ತಿಳಿಸಿದ ಮೊಬೈಲ್‌ಗೆ ವಾಟ್ಸಾಪ್ ಮೂಲಕ ಹೂಡಿಕೆ ಆರಂಭಿಸಿ, ಅವರಿಗೆ ತನ್ನ ಬ್ಯಾಂಕ್ ಖಾತೆ, ಫೋನ್ ಪೇ ನಂಬರ್ ವಿವರ ಕಳುಹಿಸಿದ್ದಾನೆ. ನಂತರ ಏ.6ರಿಂದ ಮೇ 19ರವರೆಗೆ ವಿವಿಧ ಖಾತೆಯಿಂದ 14.39 ಲಕ್ಷ ರೂ. ಹಣ ಹೂಡಿಕೆ ಮಾಡಿದ್ದಾನೆ. ನಂತರ ಹಣ ವಿತ್‌ಡ್ರಾ ಮಾಡಲು ಪ್ರಯತ್ನಿಸಿದ್ದಾಗ ಅದು ಸಾಧ್ಯವಾಗಿಲ್ಲ. ಟಿ10 ಎಕ್ಸ್‌ಜೇಂಜ್‌ನಲ್ಲಿಯೂ ಲಾಗಿನ್ ಬ್ಲಾಕ್ ಮಾಡಿದ್ದರು. ಹಾಗೇ ಯುವಕನಿಗೆ ತನ್ನ ಬ್ಯಾಂಕ್ ಖಾತೆ ಲೀನ್ ಮಾರ್ಕ್ ಆಗಿರುವುದು ಗಮನಕ್ಕೆ ಬಂದು ವಿಚಾರಿಸಿದಾಗ ಅವನ ಬ್ಯಾಂಕ್ ಖಾತೆಯಿಂದ ಬೇರೆ ವ್ಯಕ್ತಿಗಳಿಗೆ ವಂಚಿಸಿರುವ ಹಣ ವರ್ಗಾವಣೆಯಾಗಿರುವುದು ಕಂಡು ಬಂದಿದೆ. ಈ ಎಲ್ಲಾ ಮೋಸವನ್ನು ಅರಿತ ಯುವಕ 1930ಗೆ ಕರೆ ಮಾಡಿ ದೂರು ಸಲ್ಲಿಸಿದ್ದಾನೆ.

ಶಾಸಕ ಪುಟ್ಟರಂಗಶೆಟ್ಟರಿಗೆ ಡಿಸಿಎಂ ಸ್ಥಾನ ನೀಡಿ

ಮೈಸೂರು, ಮೇ28(ಜಿಎ)–ಚಾಮರಾಜನಗರ ಶಾಸಕರೂ ಆದ ರಾಜ್ಯ ಉಪ್ಪಾರರ ಸಂಘದ ಅಧ್ಯಕ್ಷ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವಂತೆ ಮೈಸೂರು ಜಿಲ್ಲಾ ಭಗೀರಥ ಉಪ್ಪಾರ ಸಂಘದ ಜಿಲ್ಲಾಧ್ಯಕ್ಷ ಎಸ್.ಯೋಗೀಶ್ ಉಪ್ಪಾರ ಒತ್ತಾಯಿಸಿದರು.



ಪುಟ್ಟರಂಗಶೆಟ್ಟಿ

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಡೀ ರಾಜ್ಯದ 224 ಕ್ಷೇತ್ರಗಳಲ್ಲಿ 25ರಿಂದ 30 ಲಕ್ಷ ಉಪ್ಪಾರ ಸಮುದಾಯದ ಮತದಾರರಿದ್ದು, ಕಳೆದ ವಿಧಾನಸಭಾ ಚುನಾವಣೆಯಲ್ಲಿ 136 ಕ್ಷೇತ್ರಗಳಲ್ಲಿಯೂ ಅತಿ ಹೆಚ್ಚು ಬೆಂಬಲ ನೀಡಿ ಕಾಂಗ್ರೆಸ್ ಗೆಲುವಿಗೆ ಕಾರಣರಾಗಿದ್ದಾರೆ ಎಂದರು. ಸಮುದಾಯದವರು ಸದಾ ಕಾಂಗ್ರೆಸ್ಸನ್ನು ಬೆಂಬಲಿಸುವವರಾಗಿದ್ದು, ಈ ಹಿನ್ನೆಲೆಯಲ್ಲಿ 4 ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಪುಟ್ಟರಂಗಶೆಟ್ಟಿ ಹಿರಿಯ ಜನ ನಾಯಕ ಹಾಗೂ ಹಿಂದುಳಿದ ವರ್ಗದ ಪ್ರಮುಖ ಮುಖಂಡರಾಗಿದ್ದಾರೆ. ದೀರ್ಘಕಾಲದ ಜನ ಸೇವೆ, ಪಕ್ಷ ಸಂಘಟನೆ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿದ್ದು, ಅವರಿಗೆ ಉಪಮುಖ್ಯ ಮಂತ್ರಿ ಸ್ಥಾನ ನೀಡಬೇಕೆಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಮಹದೇವಸ್ವಾಮಿ, ಮರಿಸ್ವಾಮಿ, ಗೋವಿಂದಶೆಟ್ಟಿ, ರಾಜು, ಬಸವರಾಜು ಮತ್ತಿತರರು ಉಪಸ್ಥಿತರಿದ್ದರು.

ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಿ

ಮೈಸೂರು, ಮೇ28(ಜಿಎ)–ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಜಿಲ್ಲಾ ಉಪ್ಪಾರರ ಸಂಘದ ಅಧ್ಯಕ್ಷ ನಾಗರಾಜು ಕರಳಾಪುರ ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ವರಿಷ್ಠರಲ್ಲಿ ಮನವಿ ಮಾಡಿದರು. ಚಾಮರಾಜನಗರ ಕ್ಷೇತ್ರದಿಂದ 4 ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಪುಟ್ಟರಂಗಶೆಟ್ಟಿ ಹಿರಿಯ ಜನನಾಯಕ ಹಾಗೂ ಹಿಂದುಳಿದ ವರ್ಗದ ಪ್ರಮುಖ ಮುಖಂಡರಾಗಿದ್ದಾರೆ. ದೀರ್ಘಕಾಲದ ಜನಸೇವೆ, ಪಕ್ಷ ಸಂಘಟನೆ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿದ್ದು, ಹೀಗಾಗಿ ಇವರನ್ನು ಸಚಿವರನ್ನಾಗಿಸುವ ಮೂಲಕ ಉಪ್ಪಾರ ಸಮುದಾಯಕ್ಕೆ ಶಕ್ತಿ ತುಂಬಬೇಕೆಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಜಿ.ರಾಮಚಂದ್ರ, ಎಂ.ಸೋಮಣ್ಣ, ಆರ್.ನಾಗರಾಜು, ಎಂ.ಗೋವಿಂದರಾಜು, ಸಿ.ಗೋವಿಂದರಾಜು, ಸಿದ್ದಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಇತ್ತೀಚೆಗೆ ಪ್ರಜಾಪ್ರಭುತ್ವ ಸೊರಗುತ್ತಿದೆ!

ಡಾ.ಅಂಬೇಡ್ಕರ್ ದಿನಾಚರಣೆಯಲ್ಲಿ ಚಿಂತಕ ಎನ್.ವಿಜಯಕುಮಾರ್ ಆತಂಕ



ಡಾ.ಅಂಬೇಡ್ಕರ್ ಜನ್ಮ ದಿನಾಚರಣೆ ಅಂಗವಾಗಿ 'ಸಮಕಾಲೀನ ಭಾರತದ ಸವಾಲುಗಳು' ಕುರಿತು ಚಿಂತಕ ಎನ್.ವಿಜಯಕುಮಾರ್ ಮಾತನಾಡಿದರು.

ಮೈಸೂರು, ಮೇ 28(ಎಸ್‌ಪಿಎನ್)– ಕಳೆದ 12 ವರ್ಷಗಳಿಂದ ನಾನಾ ಕಾರಣದಿಂದ ದೇಶದಲ್ಲಿ ಪ್ರಜಾಪ್ರಭುತ್ವ ಸೊರಗುತ್ತಿದೆ ಎಂದು ಚಿಂತಕ ಎನ್.ವಿಜಯಕುಮಾರ್ ಆತಂಕ ವ್ಯಕ್ತಪಡಿಸಿದರು.

ಮೈಸೂರು ಐಡಿಯಲ್ ಜಾವಾ ರೋಟರಿ ಶಾಲೆ ಸಭಾಂಗಣದಲ್ಲಿ ವಿಮಾ ನಿಗಮ ನೌಕರರ ಸಂಘ ಮೈಸೂರು ವಿಭಾಗದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 136ನೇ ಜನ್ಮ ದಿನಾಚರಣೆ ಅಂಗವಾಗಿ 'ಸಮಕಾಲೀನ ಭಾರತದ ಸವಾಲುಗಳು' ವಿಷಯ ಕುರಿತು ಮಾತನಾಡಿದರು.

ಈ ಹಿಂದೆ ವರ್ಣಾಶ್ರಮದಿಂದಾಗಿ ಸಮಾಜದಲ್ಲಿ ಅಸಮಾನತೆ ಈ ದೇಶದಲ್ಲಿ ತಾಂಡವಾಡುತ್ತಿತ್ತು. ಈ ಅನಿಷ್ಟ ಪದ್ಧತಿಯಿಂದ ನೊಂದಿದ್ದ ಡಾ.ಅಂಬೇಡ್ಕರ್ ಅವರು, ದೇಶದ ಜನರಿಗೆ ಎಂತಹ ಸಂವಿಧಾನ ಬೇಕು ಎಂಬುದನ್ನು ಅರಿತು ಉತ್ತಮ ಸಂವಿಧಾನ ರಚಿಸಿಕೊಟ್ಟಿದ್ದಾರೆ. ಅಲ್ಲದೆ ಇಂದು ದೇಶದ ಪ್ರತಿಯೊಬ್ಬರು ಸಮಾನರಾಗಿ ಬದುಕಲು ಸಂವಿಧಾನ ಕಾರಣವಾಗಿದೆ. ಹಾಗಾಗಿ ಪ್ರತಿಯೊಬ್ಬರು ಅಂಬೇಡ್ಕರ್ ಅವರ ತತ್ವ–ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಂವಿಧಾನ ಓದಿದವರು ಅಥವಾ ಅರ್ಧಂಬರ್ಧ ಓದಿದವರು ಇಲ್ಲವೇ ಓದದೇ ಇರುವವರಿಂದ ಪ್ರಜಾಪ್ರಭುತ್ವದ ಆಶಯ ಅದಲು–ಬದಲಾಗುತ್ತಿದೆ. ಅಂತೆಯೇ ಕೇಂದ್ರ ಸರ್ಕಾರ ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳ ಸ್ವಾಯತ್ತತೆಯನ್ನು ಕಸಿದುಕೊಳ್ಳುತ್ತಿದೆ. ಇಂತಹ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ದೇಶದ ಜನರು ತಿರಸ್ಕರಿಸಬೇಕು ಎಂದು ಮನವಿ ಮಾಡಿದರು.

ಪ್ರಜಾಪ್ರಭುತ್ವದ ಮೂಲಕ ರಚನೆಯಾಗುವ ಸರ್ಕಾರಗಳು ಒಂದು ಸಾಮಾಜಿಕ ಸಂಘಟನೆಯು ರೂಪವಿದ್ದಂತೆ. ಡಾ.ಅಂಬೇಡ್ಕರ್ ಅವರು, ಒಂದು ಉತ್ತಮ ಸಂವಿಧಾನ ರಚನೆಯಾಗಲು ಅವರಿಗಿದ್ದ ಅಪಾರ ಜ್ಞಾನಸಂಪತ್ತು ಹಾಗೂ ಬೌದ್ಧ ಧರ್ಮದ ಹಿನ್ನೆಲೆಯಲ್ಲಿ ಉತ್ತಮ ಪ್ರಜಾಪ್ರಭುತ್ವ ಆಶಯ ಹೊಂದಿದ್ದರು. ಆ ಹಿನ್ನೆಲೆಯಲ್ಲಿ ಸಂವಿಧಾನ ರಚಿತವಾಗಿದೆ ಎಂದರು.

ಮೈಸೂರು ವಿಭಾಗದ ವಿಮಾ ನಿಗಮ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಎಸ್.ನಾಗೇಶ್, ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸಲಹೆಗಾರ ಡಾ.ಎಸ್.ತುಕಾರಾಮ್, ವಿಮಾ ನಿಗಮ ನೌಕರರ ಸಂಘದ ಅಧ್ಯಕ್ಷ ತುಕಾರಾಮ್ ಇದ್ದರು.

ಮಳವಳ್ಳಿ ಶಾಸಕ ನರೇಂದ್ರಸ್ವಾಮಿಗೆ ಸಚಿವ ಸ್ಥಾನ ನೀಡಲು ಆಗ್ರಹ

ಮೈಸೂರು, ಮೇ28(ಜಿಎ)–ಮಳವಳ್ಳಿ ಶಾಸಕ ನರೇಂದ್ರ ಸ್ವಾಮಿಗೆ ಸೂಕ್ತ ಸಚಿವ ಸ್ಥಾನ ನೀಡುವಂತೆ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.



ನರೇಂದ್ರಸ್ವಾಮಿ

ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಹಾರೋಹಳ್ಳಿ ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಸುರೇಶ್‌ಕುಮಾರ್ ಮಾತನಾಡಿ, ಈ ಬಾರಿ ಮುಖ್ಯಮಂತ್ರಿಗಳ ಸ್ಥಾನಕ್ಕೆ ದಲಿತ ಸಮುದಾಯದ ಮುಖಂಡರನ್ನು ಆಯ್ಕೆ ಮಾಡಬೇಕಿತ್ತು. ಆದರೆ, ಅದು ಸಾಧ್ಯವಾಗಿಲ್ಲ. ಈ ಹಿನ್ನೆಲೆಯಲ್ಲಿ ದಲಿತ ಸಮುದಾಯದ ಪರ ನಿಲ್ಲುವ ನರೇಂದ್ರ ಸ್ವಾಮಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದರು.

ನರೇಂದ್ರಸ್ವಾಮಿ ಅವರು ಈ ಹಿಂದೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ಸಾಕಷ್ಟು ಸುಧಾರಣೆ ಮಾಡಿದ್ದಾರೆ. ದಲಿತರ ಏಳಿಗೆಗಾಗಿ ಶ್ರಮಿಸಿದ್ದಾರೆ. ಕೇವಲ ದಲಿತರಿಗೆ ಸಿಮೀತರಲ್ಲ. ಎಲ್ಲಾ ಸಮುದಾಯದೊಟ್ಟಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಈ ಹಿನ್ನೆಲೆ ಅವರಿಗೆ ಸೂಕ್ತ ಸಚಿವ ಸ್ಥಾನ ನೀಡುಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.5.2026 ಶುಕ್ರವಾರ, ಮಳೆ ನಕ್ಷತ್ರ: ರೋಹಿಣಿ 25.05.2026ರಿಂದ 07.06.2026ರವರೆಗೆ ಪರಾಭವ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ (ಅಧಿಕ) ಮಾಸ, ಶುಕ್ಲ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ಸ್ವಾತಿ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9ರಿಂದ ಮಧುಮೇಹದ ಗಾಯಗಳು, ವೆರಿಕೋಸ್ ವೇನ್ಸ್, ಆರೋಗ್ಯಾಯುಷ್ಯ ಆರೋಗ್ಯವರ್ಧಕ ಶಿಬಿರ, ಮೂತ್ರಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ, ಬೆಳಗ್ಗೆ 9.30 ರಿಂದ ಕಣ್ಣಿನ ದೃಷ್ಟಿ ಸಮಸ್ಯೆಗಳಿಗೆ ವಿಶೇಷ ಬೇಸಿಗೆ ಶಿಬಿರ, ಬೊಜ್ಜು, ಸಕ್ಕರೆ ಕಾಯಿಲೆ, ಬಿಪಿ, ಕೀಲುನೋವು, ಅಲರ್ಜಿ, ಚರ್ಮದ ರೋಗಗಳು, ಒತ್ತಡ, ಆತಂಕ, ಬಾಲನೆರೆ, ತಲೆನೋವು, ಅಸ್ತಮಾ, ಪಿಸಿಓಡಿ, ಪುರುಷ ಹಾಗೂ ಸ್ತ್ರೀ ಬಂಜೆತನ, ಪಿಎಂಎಸ್ ತೊಂದರೆಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.

■ **ರಾಮ್‌ಸನ್ಸ್ ಕ್ರೀಡಾ ಕೌಶಲ್ಯ:** ಪಾರಂಪರಿಕ ಹಾಸು ಆಟಗಳ 11ನೇ ದ್ವೈವಾರ್ಷಿಕ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್, ಬೆಳಗ್ಗೆ 10 ರಿಂದ.

■ **ರೋಟರಿ ಕ್ಲಬ್ ಆಫ್ ಮೈಸೂರು ಎಲೈಟ್** : ನಂಜನಗೂಡು ತಾಲೂಕು ಬಸವನಪುರ, ಕಬ್ಬಳಗೆರೆ ಹುಂಡಿ, ಹನಿಯಂಬಳ್ಳಿ ಗ್ರಾಮಗಳ ಅಂಗನವಾಡಿ ಕೇಂದ್ರಗಳಿಗೆ ಪೀಠೋಪಕರಣ ವಿತರಣಾ ಕಾರ್ಯಕ್ರಮ, ಉದ್ಘಾಟನೆ : ಕರ್ನಾಟಕ ಮುಕ್ತಕ ಸಾಹಿತ್ಯ ಪರಿಷತ್ ಸಂಸ್ಥಾಪಕ ಅಧ್ಯಕ್ಷ ಎಸ್. ರಾಮಪ್ರಸಾದ್, ಉಪಸ್ಥಿತರು : ಕೆ.ಎಸ್. ಕುಮಾರ್, ಕೆ.ವಿ. ರಾಘವೇಂದ್ರ, ಶ್ರೀಮತಿ ಎಸ್. ಸುಧಾ, ಎನ್.ಎಸ್. ಮಹದೇವಸ್ವಾಮಿ, ಸ್ಥಳ: ಅಂಗನವಾಡಿ ಕೇಂದ್ರ, ಬಸವನಪುರ, ನಂಜನಗೂಡು ತಾ, ಬೆಳಗ್ಗೆ 10.30ಕ್ಕೆ.

■ **ಅಕ್ಷರ ನಮನ :** ಪ್ರೊ. ವೈ.ಎಚ್. ನಾಯಕವಾಡಿ ಅವರ ಅಭಿನಂದನಾ ಸಮಾರಂಭ ಹಾಗೂ ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಅಭಿನಂದನಾ ಗ್ರಂಥ ಬಿಡುಗಡೆ : ಚಾಮರಾಜನಗರ ವಿವಿ ಕುಲಪತಿ ಪ್ರೊ. ಎಂ.ಆರ್. ಗಂಗಾಧರ್, ಪ್ರಧಾನ ಭಾಷಣ : ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಎ. ಸತ್ಯನಾರಾಯಣ, ಸನ್ಮಾನಿತರು : ಹಿರಿಯ ಪ್ರಾಧ್ಯಾಪಕ ಪ್ರೊ. ವೈ.ಎಚ್. ನಾಯಕವಾಡಿ, ಅಧ್ಯಕ್ಷತೆ : ಸಂದರ್ಶಕ ಪ್ರಾಧ್ಯಾಪಕರಾದ ಪ್ರೊ. ಉಷಾದೇವಿ, ಸ್ಥಳ: ರಾಣಿ ಬಹದ್ದೂರ್ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ಬಸವ ಬಳಗಗಳ ಒಕ್ಕೂಟ :** ಅಖಿಲ ಭಾರತ ವೀರಶೈವ ಮಹಾಸಭಾ, ಮೈಸೂರು ನಗರ ಪಾಲಿಕೆ ಘಟಕ, ಮೈಸೂರು ತಾಲೂಕು ಘಟಕ, ಕೆ.ಆರ್. ನಗರ ತಾಲೂಕು ಹಾಗೂ ಸಾಲಿಗ್ರಾಮ ತಾಲೂಕು ಘಟಕಗಳಿಗೆ ನೂತನವಾಗಿ ಆಯ್ಕೆಯಾದ ಅಧ್ಯಕ್ಷರು, ನಿರ್ದೇಶಕರು ಮತ್ತು ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಅಭ್ಯರ್ಥಿಗಳಿಗೆ ಅಭಿನಂದನಾ ಸಮಾರಂಭ ಮತ್ತು ಸ್ನೇಹ ಮಿಲನ ಕಾರ್ಯಕ್ರಮ, ಅಧ್ಯಕ್ಷತೆ : ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಎಂ.ಪ್ರದೀಪ್ ಕುಮಾರ್, ಸ್ಥಳ: ಶಿವ ಭವನ, ಶ್ರೀರಾಂಪುರ, ಬೆಳಗ್ಗೆ 11ಕ್ಕೆ.

■ **ಗಾನ–ನಂದನ** : ರೆಬಲ್‌ಸ್ಟಾರ್ ಅಂಬರೀಷ್ ಹುಟ್ಟುಹಬ್ಬದ ಪ್ರಯುಕ್ತ ಕಿನ್ನರ ಲೋಕದ ಗಿಣಿಯೇ ಸಂಗೀತ ಸಂಜೆ, ಉದ್ಘಾಟನೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಅಧ್ಯಕ್ಷತೆ : ಕರ್ನಾಟಕ ಸುಗಮ ಸಂಗೀತ ಪರಿಷತ್ತಿನ ಮೈಸೂರು ಘಟಕದ ಅಧ್ಯಕ್ಷ ಡಾ. ನಾಗರಾಜ ವಿ. ಬೈರಿ, ಮುಖ್ಯ ಅತಿಥಿಗಳು : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸಂಸ್ಕೃತಿ ಚಿಂತಕ ಡಾ. ರಘುರಾಂ ವಾಜಪೇಯಿ, ಎಸ್. ಜಗದೀಶ್, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೈ.ಡಿ. ರಾಜಣ್ಣ, ಗಾನನಂದನದ ಅಧ್ಯಕ್ಷ ಎನ್. ಬೆಟ್ಟೇಗೌಡ, ಸ್ಥಳ: ಪುರಭವನ, ಸಂಜೆ 4.30ಕ್ಕೆ.

■ **ಶ್ರೀ ಉತ್ತರಾದಿ ಮಠ, ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ:** ಅಧಿಕ ಮಾಸೋತ್ಸವ, ಪರಮಪೂಜ್ಯ ಶ್ರೀ ಶ್ರೀ 1008 ಶ್ರೀ ಸತ್ಯಾತ್ಮ ತೀರ್ಥ ಶ್ರೀಪಾದಂಗಳವರ 33 ದಿನಗಳ ಮೈಸೂರು ದಿಗ್ವಿಜಯ–2026, ಸಾಂಸ್ಕೃತಿಕ ಕಾರ್ಯಕ್ರಮಗಳು, ಪಂಡಿತ್ ಆನಂದತೀರ್ಥಾಚಾರ್ಯ ಅವರಿಂದ ವೇಣುಗಾನ ಲಹರಿ, ಸ್ಥಳ: ಶ್ರೀ ಕಾಶಿ ವಿಶ್ವೇಶ್ವರ ಸನ್ನಿಧಿ ಆವರಣ, ಅಗ್ರಹಾರ, ಸಂಜೆ 5.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಗೀತಾರಾಧನ, 6.30 ಚಿಂತನ, 6.35 ಮತ್ತು ಸಂಜೆ 6.10 ಜ್ಞಾನ ಜ್ಯೋತಿ ಜೀವನ ಪಾಠ ಕಲಿಸಿದ ಸಾಧಕಿಯರ ಪರಿಚಯ ಮಾಲಿಕೆ, ಪ್ರಸ್ತುತಿ : ಬಿ.ಕೆ. ಮೀನಾಕ್ಷಿ, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ ಕಲಿಕೆಯ ವಿಶಿಷ್ಟ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ನಾ ಕಸ್ತೂರಿ ಅವರ ಪಾತಾಳದಲ್ಲಿ ಪಾಪಚ್ಚಿ–ಮಕ್ಕಳ ಸಾಹಿತ್ಯ ಕೃತಿಯ ಬಾನುಲಿ ಓದು, ಪ್ರಸ್ತುತಿ–ಉಮೇಶ್ ಎಸ್.ಎಸ್., 8.45 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಅರೋಗ್ಯ, 9.30 ಗಾಂಧೀ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಕೆ. ಎಸ್. ಹೇರಂಭ ಮತ್ತು ಕೆ.ಎಸ್. ಹೇಮಂತ್–ಯುಗಳ ಕೊಳಲು ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಕಾಮನ ಬಿಲ್ಲ ಬದುಕಿನ ಬಣ್ಣಗಳ ಚಿತ್ತಾರ, ಪ್ರಸ್ತುತಿ: ಜಿ. ಎನ್. ಮಂಜುನಾಥ್

ಮಧ್ಯಾಹ್ನ : 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ –ಕೃಪಾಕರ ಸೇನಾನಿ ಅವರ ಕೆನ್ನಾಯಿಯ ಜಾಡಿನಲಿ ಕೃತಿಯ ಬಾನುಲಿ ಓದು, ಪ್ರಸ್ತುತಿ: ಜಿ ಶಾಂತಕುಮಾರ್, 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ– ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಶ್ವೇತಾ ವೆಂಕಟೇಶ್ – ಹಾಡುಗಾರಿಕೆ, 4.00 ಮಹಿಳಾರಂಗ–ಮಹಿಳಾ ಸಾಹಿತ್ಯರಂಗ–ಮಹಿಳೆಯರ ಪತ್ರಗಳನ್ನಾಧರಿಸಿದ ಕಾರ್ಯಕ್ರಮ, ಪ್ರಸ್ತುತಿ–ಕೀರ್ತನಾ, ಸಹನ ಹಾಗೂ ನೇತ್ರಾ, 4.30 ವೃತ್ತಿ ಮಾರ್ಗದರ್ಶನ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಪ್ರಾಯೋಜಿತ ಕಾರ್ಯಕ್ರಮ–ಕೃಷಿ ಮಾರಾಟ ರಂಗ, ಪ್ರಾಯೋಜಕರು–ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಲಿ, ಮೈಸೂರು ಕೃಷಿ ಮಾರಾಟ ಮಂಡಳಿಯ ಕಾರ್ಯ ಚಟುವಟಿಕೆ ಕುರಿತು ಮಂಡಲಿಯ ಪ್ರಧಾನ ವ್ಯವಸ್ಥಾಪಕರಾದ ಎಸ್. ವಿ. ಭಾಗ್ಯಲಕ್ಷ್ಮಿ ಅವರೊಂದಿಗೆ ಸಂದರ್ಶನ, ಸಂದರ್ಶಕರು– ಎನ್. ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಚರ್ಚೆ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ರಂಜನಿ .ಎನ್ – ಹಾಡುಗಾರಿಕೆ, 10.00 ತತ್ವ ಸಂಚಾರ, ಜನಪದ ಗಾಯಕರ ತತ್ವಗಾಯನ, 10.30 ಸವಿನೆನಪು

ಸಿದ್ದರಾಮಯ್ಯರ 'ಶಿಳ್ಳೆ' ಸೀಕ್ರೇಟ್ ಏನು ಗೊತ್ತಾ?

● ಈ ತನಕ ತಿಳಿಯದೆ ಇದ್ದ ಸಿದ್ದರಾಮಯ್ಯ 'ಶಿಳ್ಳೆ' ಗುಟ್ಟು 'ರಟ್ಟು' ● ಇದು ಶಾಂತತೆ, ವಿಶ್ವಾಸತೆ ಹೆಚ್ಚಿಸುವ ಮಂತ್ರ ● ಈ ಹಿಂದೆಯೂ ಶಿಳ್ಳೆ ಹೊಡೆದ ಸಾಕಷ್ಟು ಉದಾಹರಣೆಗಳಿವೆ





ಮೈಸೂರು, ಮೇ 28(ಬಿಎಲ್‌ಯು)– ಮುಖ್ಯಮಂತ್ರಿಗಾದಿಗೆ ರಾಜೀನಾಮೆ ಸಲ್ಲಿರುವ ಸಿದ್ದರಾಮಯ್ಯನವರ 'ಶಿಳ್ಳೆ' ಬಗ್ಗೆ ಇದೀಗ ಹೆಚ್ಚು ಚರ್ಚೆಯಾಗುತ್ತಿದೆ.

ಈ ಹಿಂದೆ ಇಂತಹ ಉದಾಹರಣೆಗಳು ಸಾಕಷ್ಟಿದ್ದರೂ ಪದತ್ಯಾಗದ ಆಸುಪಾಸಿನಲ್ಲಿ 'ಶಿಳ್ಳೆ' ಹೊಡೆದಿರುವುದರ ಬಗ್ಗೆ ಹೆಚ್ಚು ಚರ್ಚೆಯಾಗಿದೆ. ಹಲವು ವಾಹಿನಿಗಳು, ಸಾಮಾಜಿಕ ಮಾಧ್ಯಮ ಜಾಲತಾಣಗಳಲ್ಲಿ ವಿಭಿನ್ನ ವಿಶ್ಲೇಷಣೆಯಾಗುತ್ತಿದೆ. ಈ ಶಿಳ್ಳೆಯ ಗುಟ್ಟೇನಿರಬಹುದು, ಇದರ ಹಿಂದೆ ಏನಾದರೂ ಸಂದೇಶ ಅಡಗಿದೆಯಾ ಎಂಬ ಪ್ರಶ್ನೆಗಳೂ ಎದ್ದಿವೆ. ಸಭೆ–ಸಮಾರಂಭಗಳಲ್ಲಿ 'ಶಿಳ್ಳೆ' ಹೊಡೆದಾಗ ಗಂಭೀರವಾಗಿ ಪರಿಗಣಿಸದವರು, ಈಗಿನ 'ಶಿಳ್ಳೆ' ಬಗ್ಗೆ ಹೆಚ್ಚು ತಲೆಕೆಡಿಸಿಕೊಂಡಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ಜೊತೆಗಿನ ಮ್ಯಾರಥಾನ್ ಸಭೆ ಬಳಿಕ ಬೆಂಗಳೂರಿಗೆ ಮರಳಿದ ಸಿದ್ದರಾಮಯ್ಯ, ನಿನ್ನೆ ಮಾಜಿ ಪ್ರಧಾನಮಂತ್ರಿ ಜವಾಹರ್ ಲಾಲ್ ನೆಹರು ಅವರ ಪುಣ್ಯ ಸ್ಮರಣೆ ಅಂಗವಾಗಿ ವಿಧಾನಸೌಧದ ಪೂರ್ವ ದಿಕ್ಕಿನಲ್ಲಿರುವ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಸಂದರ್ಭದಲ್ಲಿ ತುಟಿ ಬಿಚ್ಚಿ ಮಾತನಾಡದೆ 'ಶಿಳ್ಳೆ' ಮಾತ್ರ ಹೊಡೆಯುತ್ತಿದ್ದರು. ತರುವಾಯ ವಿಧಾನಸೌಧದ ತಮ್ಮ ಕಚೇರಿಗೆ ಆಗಮಿಸಿ, ಅಲ್ಲಿಂದ ನಿರ್ಗಮಿಸುವ ವೇಳೆ ತಮ್ಮನ್ನು ಎದುರಾದ ನೌಕರರ ಮುಂದೆ ಭಾವುಕರಾದರು. ಅದರಲ್ಲೂ ಗುತ್ತಿಗೆ ನೌಕರರು 'ಅಪ್ಪಾಜಿ' ಎಂದು ಸಂಭೋದಿಸಿ, ನೀವು ಹೋದರೆ ನಮ್ಮನ್ನು ಕೆಲಸದಿಂದ ಕೈಬಿಡುತ್ತಾರೆ ಎಂದು ಗೋಳಾಡುವಾಗ ಸಿದ್ದರಾಮಯ್ಯ 'ಶಿಳ್ಳೆ' ಹೊಡೆಯುತ್ತಾ ಅಲ್ಲಿಂದ ತೆರಳಿದರು. ತರುವಾಯ ಸಿಎಂ ಅಧಿಕೃತ ನಿವಾಸ ಕಾವೇರಿಗೆ ಬಂದಾಗಲೂ ಸಿದ್ದರಾಮಯ್ಯ ಅವರು ಒಂದೂ ಮಾತನಾಡದೆ ಶಿಳ್ಳೆ ಹೊಡೆಯುತ್ತಾ ಮುಂದೆ ಸಾಗಿದರು.

ಹೈಕಮಾಂಡ್ ಭೇಟಿ ಬಗ್ಗೆ ಪತ್ರಕರ್ತರು ಪದೇ ಪದೆ ಪ್ರಶ್ನೆ ಮಾಡಿದಾಗ 'ಈಗ ನನ್ನನ್ನು ಏನನ್ನೂ ಕೇಳಬೇಡಿ' ಎಂದರಲ್ಲದೆ, ಮಹಿಳಾ ಪತ್ರಕರ್ತರೊಬ್ಬರು ಮೈಕ್ ಹಿಡಿದಾಗಲೂ 'ನನಗೆ ಇಂಗ್ಲಿಷ್ ಬರುವುದಿಲ್ಲ' ಎಂದು ಶಿಳ್ಳೆ ಹೊಡೆಯುತ್ತಾ ಮುನ್ನಡೆದರು. ಇಂದು ಬೆಳಗ್ಗೆ ಕಾವೇರಿ ನಿವಾಸದಿಂದ ರಾಜೀನಾಮೆ ನೀಡಲು ಹೊರಟಾಗ ಕೂಡ ಸಿದ್ದರಾಮಯ್ಯ ಅವರು ಒಂದೆರಡು ಬಾರಿ ಶಿಳ್ಳೆ ಹೊಡೆದಿದ್ದು ಕಂಡು ಬಂದಿತು. ಹಾಗೆಯೇ, ರಾಜೀನಾಮೆ ನೀಡಿದ ಬಳಿಕ ಸುದ್ದಿಗೋಷ್ಠಿಗೂ ಶಿಳ್ಳೆ ಹೊಡೆಯುತ್ತಲೇ ಬಂದರು ಎಂದು ಕೆಲ ಮಾಧ್ಯಮಗಳಲ್ಲಿ ವರದಿಯಾಯಿತು. ಶಿಳ್ಳೆ ಬಗ್ಗೆ ತಮ್ಮದೇ ಆದ ವ್ಯಾಖ್ಯಾನ ನೀಡಿದ್ದರು. ಆದರೆ, ಸಿದ್ದರಾಮಯ್ಯನವರ 'ಶಿಳ್ಳೆ' ಹಿಂದಿನ ಗುಟ್ಟು ಬೇರೆಯೇ ಇದೆ. ಅವರ ಆಪ್ತ ವಲಯದ ಮಾಹಿತಿಯಿಂದ 'ಶಿಳ್ಳೆ'ಯ ಗುಟ್ಟು–ರಟ್ಟಾಗಿದೆ.

ಒತ್ತಡ ನಿಯಂತ್ರಣದ ಮಂತ್ರ: ಅತೀ ಸಂತೋಷ ಅಥವಾ ಭಾವುಕರಾದ ಸಂದರ್ಭದಲ್ಲಿ ಮನಸ್ಸಿನ ಒತ್ತಡವನ್ನು ಸ್ವಯಂ ನಿಯಂತ್ರಿಸಿಕೊಳ್ಳಲು ಈ ರೀತಿ 'ಶಿಳ್ಳೆ' ಹೊಡೆಯುವುದನ್ನು ಸಿದ್ದರಾಮಯ್ಯನವರು ರೂಢಿಸಿಕೊಂಡಿದ್ದಾರೆ ಎಂದು ತಿಳಿದುಬಂದಿದೆ. ರಾಜಕಾರಣ ಅಂದರೆ ಒತ್ತಡ ಇದ್ದೆ ಇರುತ್ತದೆ. ಚುನಾವಣೆ ಸಂದರ್ಭದಲ್ಲಿ ಒಂದು ರೀತಿಯ ಒತ್ತಡವಾದರೆ, ಗೆಲುವಿನ ನಂತರ ಮತ್ತೊಂದು ರೀತಿಯ ಒತ್ತಡ ಇರುತ್ತದೆ. ಕೆಲ ವೇದಿಕೆಗಳಲ್ಲಿ ಸಭಿಕರ ಹರ್ಷೋದ್ಗಾರ ಕಂಡು ಇದೇ ರೀತಿ ಶಿಳ್ಳೆ ಹೊಡೆಯುವ ಮೂಲಕ ಸಂತಸ ವ್ಯಕ್ತಪಡಿಸುವುದರ ಜೊತೆಗೆ ಮನಸ್ಸನ್ನು ನಿಯಂತ್ರಿಸಿಕೊಂಡಿದ್ದಾರೆ. ಹಾಗೆಯೇ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾದ ಅನಿವಾರ್ಯ ಪರಿಸ್ಥಿತಿ ಎದುರಾಗಿದ್ದರಿಂದ ಕಳೆದ ಮೂರು ದಿನಗಳಿಂದ ಗಾಢ ಮೌನ ವಹಿಸಿದ್ದ ಸಿದ್ದರಾಮಯ್ಯ, ಶಿಳ್ಳೆ ಹೊಡೆಯುವಂತೆ ತಮ್ಮನ್ನು ತಾವು ನಿಯಂತ್ರಿಸಿಕೊಂಡಂತೆ ಕಂಡುಬಂದಿತು. ಯಾವುದೇ ಸಂದರ್ಭದಲ್ಲಿ ವಿಚಲಿತರಾಗಬಾರದೆಂಬ ಕಾರಣಕ್ಕೆ ಗಾಢ ಮೌನಕ್ಕೆ ಜಾರುವುದರೊಂದಿಗೆ ಶಿಳ್ಳೆ ಹೊಡೆಯುತ್ತಾ ಸ್ವಯಂ ಒತ್ತಡ ನಿಯಂತ್ರಿಸಿಕೊಂಡಿದ್ದಾರೆ. ಈ ಮೂಲಕ ವಿಶ್ವಾಸ ಹಾಗೂ ಶಾಂತತೆಯನ್ನು ಪ್ರದರ್ಶಿಸಿದ್ದಾರೆ. ಇದು ಅವರ ಶಾಂತ ಹಾಗೂ ಸಂಯಮದ ರಾಜಕೀಯ ವ್ಯಕ್ತಿತ್ವವನ್ನು ಸಂಕೇತಿಸುತ್ತದೆ.

ಕಳೆದ 2023ರ ಮೇ ತಿಂಗಳಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕ ಸ್ಥಾನಗಳನ್ನು ಗೆದ್ದಾಗಲೂ ಸಿದ್ದರಾಮಯ್ಯನವರು ಹೀಗೆಯೇ ಸಂತಸ ವ್ಯಕ್ತಪಡಿಸಿದ್ದರು. ಆ ಸಂದರ್ಭದಲ್ಲಿ ಡಿ.ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಅವರ ನಡುವೆ ಮುಖ್ಯಮಂತ್ರಿ ಸ್ಥಾನಕ್ಕೆ ತೀವ್ರ ಪೈಪೋಟಿ ಎದುರಾಗಿತ್ತು. ಅಂದಿನ ರಾಜಕೀಯ ಬಿಕ್ಕಟ್ಟಿನ ಪರಿಸ್ಥಿತಿಯಲ್ಲೂ ಕೂಡ ಸಿದ್ದರಾಮಯ್ಯ ಅವರು ಇದೇ ರೀತಿ ಶಿಳ್ಳೆ ಹೊಡೆಯುತ್ತಿದ್ದ ದೃಶ್ಯ ವೈರಲ್ ಆಗಿತ್ತು. ಇದಲ್ಲದೆ ಮುಡಾ ಪ್ರಕರಣ ಸೇರಿದಂತೆ ಕೆಲವು ಸಂದರ್ಭದಲ್ಲಿ ಪತ್ರಕರ್ತರು ಪ್ರತಿಕ್ರಿಯೆ ಕೇಳಿದಾಗಲೂ ಏನೂ ಮಾತನಾಡದೆ ಶಿಳ್ಳೆ ಹೊಡೆಯುತ್ತಾ ಸಾಗಿದ್ದನ್ನು ಹಲವರು ಗಮನಿಸಿದ್ದರು.

ಮೂರು ದಿನಗಳ ಮೌನ ಮುರಿದಿದ್ದು...

ಸಿದ್ದರಾಮಯ್ಯ ಅವರ 50 ವರ್ಷದ ಸುದೀರ್ಘ ರಾಜಕೀಯ ಜೀವನದಲ್ಲಿ ಎಂದೂ ಕೂಡ ಮೂರು ದಿನಗಳ ಕಾಲ ಮೌನವಾಗಿದ್ದ ಉದಾಹರಣೆಗಳಿಲ್ಲ. ಆದರೆ ಅಧಿಕಾರ ಬಿಟ್ಟುಕೊಡುವ ಅನಿವಾರ್ಯತೆ ಎದುರಾದ ಹಿನ್ನೆಲೆಯಲ್ಲಿ ದೆಹಲಿಯ ಇಂದಿರಾ ಭವನದಲ್ಲಿ ಹೈಕಮಾಂಡ್ ಜೊತೆ ಚರ್ಚೆ ನಡೆಸುವ ಹಿಂದಿನ ದಿನ ಮೌನಕ್ಕೆ ಶರಣಾಗಿದ್ದ ಸಿದ್ದರಾಮಯ್ಯ ಮೂರು ದಿನ ಯಾವುದೇ ಪ್ರತಿಕ್ರಿಯೆ ನೀಡದೆ ಮೌನಕ್ಕೆ ಶರಣಾಗಿದ್ದರು. ಪತ್ರಕರ್ತರು ಏನೇ ಕೇಳಿದರೂ ಶಿಳ್ಳೆ ಹೊಡೆಯುತ್ತಾ ಮುನ್ನಡೆಯುತ್ತಿದ್ದರು. ಆದರೆ ಇಂದು ಲೋಕಭವನಕ್ಕೆ ತೆರಳಿ ರಾಜಿನಾಮೆ ನೀಡಿ ಕಾವೇರಿಗೆ ಹಿಂದುರುಗಿದ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುವ ಮೂಲಕ ಸೈಲೆನ್ಸ್ ಬ್ರೇಕ್ ಮಾಡಿದರು.

ಇದು ಶಿಳ್ಳೆ ಥೆರಪಿ

ಒತ್ತಡ ಸಂದರ್ಭದಲ್ಲಿ ಶಿಳ್ಳೆ ಹೊಡೆಯುವುದು ಚಿಕಿತ್ಸೆಯಾಗಿ ಕೆಲಸ ಮಾಡುತ್ತದೆಯಂತೆ. ಇದನ್ನು 'ಶಿಳ್ಳೆ ಉಸಿರು ಅಥವಾ ಶಿಳ್ಳೆ ಥೆರಪಿ(Whistle Breath, Whistling Therapy)' ಎನ್ನಲಾಗುತ್ತದೆ. ಒತ್ತಡದ ಸಂದರ್ಭದಲ್ಲಿ ಶಿಳ್ಳೆ ಹೊಡೆಯುವುದರಿಂದ ಉಸಿರಾಟದ ತಂತ್ರವು ನರಮಂಡಲವನ್ನು ಶಾಂತಗೊಳಿಸುತ್ತದೆ. ಅಷ್ಟೆ ಅಲ್ಲದೆ ಒತ್ತಡವನ್ನು ಕಡಿಮೆ ಮಾಡಿ, ವಿಶ್ವಾಸತೆಯನ್ನು ಬಲಪಡಿಸುತ್ತದೆ. ಶಿಳ್ಳೆ ಥೆರಪಿ ಮನಸ್ಸನ್ನು ಶಾಂತಗೊಳಿಸುವ ಮತ್ತು ಶ್ವಾಸಕೋಶದ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಒತ್ತಡ ನಿಯಂತ್ರಣದ ಜೊತೆಗೆ ಗಮನವನ್ನು ಕೇಂದ್ರೀಕರಿಸಲು ಹಾಗೂ ದೇಹದ ನರಗಳನ್ನು ಸಡಿಲಗೊಳಿಸಲು ನೆರವಾಗುತ್ತದೆ. ಪ್ರಾಯಶಃ ಸಿದ್ದರಾಮಯ್ಯ ಅವರಿಗೆ ಯಾರೋ ವೈದ್ಯರು ಶಿಳ್ಳೆ ಥೆರಪಿಯನ್ನು ಹೇಳಿ ಕೊಟ್ಟಿರಬಹುದು ಅಥವಾ ತಾವೇ ಈ ಶಿಳ್ಳೆ ಪರಿಣಾಮವನ್ನು ಮನವರಿಕೆ ಮಾಡಿಕೊಂಡು ಅನುಸರಿಸುತ್ತಿರಬಹುದು.

ದೆಹಲಿ, ಹರಿಯಾಣ, ಪಂಜಾಬ್, ತ್ರಿಪುರಾದಲ್ಲಿ ಬಿಜೆಪಿಗೆ ನೂತನ ರಾಜ್ಯಾಧ್ಯಕ್ಷರ ನೇಮಕ


ಹರ್ಷ್ ಮಲ್ಹೋತ್ರಾ


ಕೇವಲ್ ಸಿಂಹ


ಅಭಿಷೇಕ್


ಅರ್ಚನಾ ಗುಪ್ತಾ

ನವದೆಹಲಿ, ಮೇ 28– ನಾಲ್ಕು ರಾಜ್ಯಗಳ ನೂತನ ರಾಜ್ಯಾಧ್ಯಕ್ಷರ ಹೆಸರನ್ನು ಬಿಜೆಪಿ ಘೋಷಣೆ ಮಾಡಿದೆ. ದೆಹಲಿ, ಪಂಜಾಬ್, ತ್ರಿಪುರ, ಹರಿಯಾಣಕ್ಕೆ ನೂತನ ರಾಜ್ಯಾಧ್ಯಕ್ಷರನ್ನು ನೇಮಕ ಮಾಡಿ ಪಕ್ಷ ಆದೇಶ ಹೊರಡಿಸಿದೆ.

ಪಕ್ಷದ ಸಂಘಟನೆಗೆ ಹೊಸ ಚೈತನ್ಯ ತುಂಬುವ ಸಲುವಾಗಿ ಬಿಜೆಪಿ ಈ ನಿರ್ಧಾರ ಕೈಗೊಂಡಿದೆ. ಕೇಂದ್ರ ಮಟ್ಟದಲ್ಲಿ ಮತ್ತು ರಾಜ್ಯ ಮಟ್ಟದಲ್ಲಿ ಪಕ್ಷದ ಬಲವರ್ಧನೆ, ಮುಂದಿನ ಚುನಾವಣೆಗಳಿಗೆ ಸಿದ್ಧತೆ ನಡೆಯುತ್ತಿದೆ. ಪಕ್ಷದ ಸಂಘಟನೆಗೆ ಹೊಸ ಮುಖಗಳನ್ನು ತರಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಬಿಜೆಪಿ ಹೇಳಿದೆ.

ದೆಹಲಿಗೆ ನೂತನ ಬಿಜೆಪಿ ರಾಜ್ಯಾಧ್ಯಕ್ಷ: ದೆಹಲಿ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಹರ್ಷ್ ಮಲ್ಹೋತ್ರಾ ಅವರನ್ನು ನೇಮಿಸಲಾಗಿದೆ. ಅವರು ಕೇಂದ್ರ ಸರ್ಕಾರದಲ್ಲಿ ರಾಜ್ಯ ಖಾತೆ ಸಚಿವರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಕೇಂದ್ರ ರಾಜ್ಯ ಸಚಿವರಾಗಿರುವ ಹರ್ಷ್ ಮಲ್ಹೋತ್ರಾ ಅವರಿಗೆ ರಾಜಕೀಯ ಹಾಗೂ ಆಡಳಿತದ ಅನುಭವವಿದೆ. ದೆಹಲಿ ರಾಜಕೀಯವಾಗಿ ಅತ್ಯಂತ ಪ್ರಮುಖ ಕೇಂದ್ರವಾಗಿರುವುದರಿಂದ, ಇವರ ನೇಮಕಾತಿ ಪಕ್ಷದ ದೃಷ್ಟಿಯಿಂದ ಮಹತ್ವದ್ದಾಗಿದೆ.

ಪಂಜಾಬ್‌ಗೆ ಕೇವಲ್ ಸಿಂಹ ಡಿಲ್ಲೋ: ಪಂಜಾಬ್‌ಗೆ ಸರ್ದಾರ್ ಕೇವಲ್ ಸಿಂಹ ಡಿಲ್ಲೋ ಅವರನ್ನು ರಾಜ್ಯಾಧ್ಯಕ್ಷರಾಗಿ ನೇಮಿಸಲಾಗಿದೆ. ಪಂಜಾಬ್‌ನ ರಾಜಕೀಯ ವಾತಾವರಣ, ಅಲ್ಲಿರುವ ಪ್ರಾದೇಶಿಕ ಹಾಗೂ ಧಾರ್ಮಿಕ ಸಮೀಕರಣಗಳನ್ನು ಗಮನದಲ್ಲಿಟ್ಟುಕೊಂಡು, ಸರ್ದಾರ್ ಕೇವಲ್ ಸಿಂಹ ಡಿಲ್ಲೋ ಅವರನ್ನು ನೇಮಿಸಲಾಗಿದೆ.

ತ್ರಿಪುರಕ್ಕೆ ಅಭಿಷೇಕ್ ದೇಬ್ ರಾಯ್ ರಾಜ್ಯಾಧ್ಯಕ್ಷ: ತ್ರಿಪುರಕ್ಕೆ ಶಾಸಕ ಅಭಿಷೇಕ್ ದೇಬ್ ರಾಯ್ ಅವರನ್ನು ಹೊಸ ಬಿಜೆಪಿ ರಾಜ್ಯಾಧ್ಯಕ್ಷರಾಗಿ ನೇಮಿಸಲಾಗಿದೆ. ಅವರು ಈಗಾಗಲೇ ಶಾಸಕರಾಗಿ ಜನಪ್ರತಿನಿಧಿಗಳಾಗಿ ಕೆಲಸ ಮಾಡುತ್ತಿರುವ ಕಾರಣ, ತ್ರಿಪುರದಲ್ಲಿ ನೆಲಮಟ್ಟದ ರಾಜಕೀಯ ಪರಿಸ್ಥಿತಿಯನ್ನು ಚೆನ್ನಾಗಿ ಅರಿತುಕೊಂಡಿದ್ದಾರೆ. ಉತ್ತರ–ಪೂರ್ವ ಭಾರತದ ಈ ಚಿಕ್ಕ ರಾಜ್ಯದಲ್ಲಿ ಬಿಜೆಪಿ ಕಳೆದ ಕೆಲವು ವರ್ಷಗಳಿಂದ ತನ್ನ ಹಿಡಿತವನ್ನು ಬಲಪಡಿಸಿದೆ.

ಹರಿಯಾಣದ ರಾಜ್ಯಾಧ್ಯಕ್ಷೆಯಾಗಿ ಡಾ. ಅರ್ಚನಾ ಗುಪ್ತಾ: ಹರಿಯಾಣಕ್ಕೆ ಡಾ.ಅರ್ಚನಾ ಗುಪ್ತಾ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷರಾಗಿ ನೇಮಿಸಲಾಗಿದೆ. ಮಹಿಳಾ ನಾಯಕತ್ವಕ್ಕೆ ಮಣೆ ಹಾಕಿರುವುದು ಮಹಿಳಾ ಕಾರ್ಯಕರ್ತರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಸಾಧ್ಯತೆ ಇದೆ.

ಬುದ್ಧಿಮಾಂದ್ಯ ತಾಯಿ–ಮಗನ ಮಧುರ ನೆನಪು 'ಮೆಮೋರಿಸ್ ಎಡ್ಜ್' ಕೃತಿ ಬಿಡುಗಡೆ


ಪ್ರೊ.ಕೆ.ಸಿ.ಬೆಳ್ಳಿಯಪ್ಪ ಅವರು 'ಮೆಮೋರಿಸ್ ಎಡ್ಜ್' ಕೃತಿ ಬಿಡುಗಡೆ ಮಾಡಿದರು.

ಮೈಸೂರು, ಮೇ 28(ವಿವಿಹೆಚ್)– ಬುದ್ಧಿಮಾಂದ್ಯ ತಾಯಿ ಮತ್ತು ಮಗನ ನಡುವಿನ ಮಧುರ ನೆನಪುಗಳ ಮೆಲುಕು 'ಮೆಮೋರಿಸ್ ಎಡ್ಜ್' ಕೃತಿ ನೀಡಲಿದೆ ಎಂದು ಪ್ರೊ.ಕೆ.ಸಿ.ಬೆಳ್ಳಿಯಪ್ಪ ಅಭಿಪ್ರಾಯಿಸಿದರು.

ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸೆಂಟರ್ ಸಭಾಂಗಣದಲ್ಲಿ ರೋಟರಿ ಮೈಸೂರು, ಯುನೈಟ್ ಫಾರ್ ಗುಡ್ ಸಹಯೋಗದಲ್ಲಿ ಗುರುವಾರ 'ಮೆಮೋರಿಸ್ ಎಡ್ಜ್' ಕೃತಿ ಬಿಡುಗಡೆ ಮಾಡಿ ಮಾತನಾಡಿದರು.

ತಾಯಿಗೇ ಮಗನೇ ಯಾರೆಂಬುದು ನೆನಪಿರುವುದಿಲ್ಲ. ಈ ನಡುವೆ ತಾಯಿಯು ಮಗನನ್ನು ಕುರಿತು ಯಾರು ನೀನು ಎಂದು ಕೇಳುತ್ತಾಳೆ. ಈ ವೇಳೆ ಮಗನ ಅಂತರಾಳದ ಗದ್ಗದಿತ ನೋವು, ತುಮುಲ, ತುಡಿತಗಳನ್ನು ಬಹಳ ನಾಜೂಕಾಗಿ ಅಡಗಿಸಿಕೊಂಡು, ಏನೂ ಆಗಿರದಂತೆ ನಟಿಸುವ ಮಗನ ಪಾತ್ರ ಬಹಳ ಆಪ್ತವೆನಿಸುತ್ತದೆ ಎಂದರು.

ಈ ಕೃತಿ ಓದುವಾಗ ಅದ್ಭುತ ಅನುಭವವಾಗುತ್ತದೆ. ಕೃತಿಯ ಬಗ್ಗೆ ಕೇವಲ ಪದಗಳಲ್ಲಿ ಹೇಳಲು ಸಾಧ್ಯವಿಲ್ಲ. ಪೋಷಕರನ್ನು ಹೊಂದಿರುವ ಪ್ರತಿಯೊಬ್ಬರೂ ಓದಲೇಬೇಕಾದ ಪುಸ್ತಕ ಇದು ಎಂದು ಬಣ್ಣಿಸಿದರು.

ಬುದ್ಧಿಮಾಂದ್ಯತೆ ಬಗ್ಗೆ ಆಸ್ಟ್ರೇಲಿಯಾಕ್ಕೆ ತೆರಳಿ ಎಲ್ಲವನ್ನು ಕಲಿತು, ಈ ಪರಿಯ ಕೃತಿ ರಚನೆ ಮಾಡಿದ್ದಾರೆ. ಕೃತಿಗಾಗಿ ತಮ್ಮನ್ನೇ ತಾವು ಸಂಪೂರ್ಣವಾಗಿ ಅರ್ಪಿಸಿಕೊಂಡಿದ್ದಾರೆ. ಭಾರತೀಯ ಚಿತ್ರಗಳಲ್ಲಿ ಬಹುತೇಕ ಭಾವನೆಗಳನ್ನೇ ವೈಭವಿಕರಿಸಲಾಗುತ್ತದೆ. ಮತ್ತೆ ಕೆಲವು ಸನ್ನಿವೇಶಗಳು ನೋಡುಗರನ್ನು ದುಃಖಿತರನ್ನಾಗಿಸುತ್ತದೆ. ಆದರೆ ಈ ಕೃತಿ ತಮ್ಮ ಭಾವನೆಗಳನ್ನು ಮನದಲ್ಲಿಯೇ ಅದುಮಿ, ತಮ್ಮ ಪೋಷಕರ ಮೇಲಿನ ಪ್ರೀತಿ, ಗೌರವವನ್ನು ಮತ್ತಷ್ಟು ಇಮ್ಮಡಿಗೊಳಿಸುತ್ತದೆ ಎಂದರು.

ಈ ಕೃತಿ ಕೇವಲ ಪದಗಳಿಗೆ ಸೀಮಿತವಾಗಿಲ್ಲ. ಬದಲಾಗಿ ಹಲವಾರು ಸನ್ನಿವೇಶಗಳನ್ನು ಕಣ್ಣಿಗೆ ಕಟ್ಟಿಕೊಡುವ ರೇಖಾಚಿತ್ರಗಳನ್ನು ಒಳಗೊಂಡಿದೆ. ಶಬ್ದ ಮನಸ್ಸನ್ನು ಮುಟ್ಟುವ ಮೊದಲೇ ನೋಟ ಇಡೀ ಸಾರಾಂಶವನ್ನೇ ಹೇಳುವ ಹಾಗೆ ಇದರಲ್ಲಿ ಹಲವಾರು ಸುಂದರ ರೇಖಾಚಿತ್ರಗಳು ಮೂಡಿಬಂದಿವೆ. ಇದು ಸಹಾನುಭೂತಿ ಮತ್ತು ತಿಳುವಳಿಕೆಯನ್ನು ನೀಡುತ್ತದೆ ಎಂದರು.

ಜೊತೆಗೆ ಯೋಗ, ಧ್ಯಾನ, ದೈಹಿಕ ಚಟುವಟಿಕೆ, ವ್ಯಾಯಾಮ ಸೇರಿದಂತೆ ಹಲವಾರು ವಿಚಾರಗಳ ಬಗ್ಗೆಯೂ ಇಲ್ಲಿ ಪ್ರಸ್ತಾಪವಿದೆ ಎಂದು ಕೃತಿ ಬಗ್ಗೆ ವಿವರಿಸಿದರು.

ಈ ವೇಳೆ ಡಿಸ್ಟ್ರಿಕ್ ಗೌವರ್ನರ್ ಪಿ.ಕೆ.ರಾಮಕೃಷ್ಣ, ರೋಟರಿ ಮೈಸೂರು ಅಧ್ಯಕ್ಷ ಡಿ.ರವಿಶಂಕರ್, ಕಾರ್ಯದರ್ಶಿ ಜಿ.ಸಂಜಯ್, ಲೇಖಕ ಅರುಣ್ ಬೆಳವಾಡಿ ಉಪಸ್ಥಿತರಿದ್ದರು.

ದೆಹಲಿಯತ್ತ ಪ್ರಯಾಣ ಬೆಳೆಸಿದ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್

ಹವಾಮಾನ ವೈಪರೀತ್ಯದಿಂದ ಜೈಪುರ ತಲುಪಿದ ಸಿದ್ದರಾಮಯ್ಯ ಇದ್ದ ವಿಮಾನ!




ಬೆಂಗಳೂರು, ಮೇ 28– ಹೈಕಮಾಂಡ್ ಸೂಚನೆ ಮೇರೆಗೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಸಿದ್ದರಾಮಯ್ಯ ದೆಹಲಿಗೆ ಪ್ರಯಾಣ ಬೆಳೆಸಿದರು. ಆದರೆ, ಹವಾಮಾನ ವೈಪರೀತ್ಯದಿಂದಾಗಿ ಅವರು, ಅವರ ಪುತ್ರ ಯತೀಂದ್ರ, ಸಚಿವರಾದ ಕೆ.ಜೆ.ಜಾರ್ಜ್, ಬೈರತಿ ಸುರೇಶ್, ಕಾನೂನು ಸಲಹೆಗಾರ ಪೊನ್ನಣ್ಣ, ಕಾಂಗ್ರೆಸ್ ರಾಜ್ಯ ಉಸ್ತುವಾರಿ ಸುರ್ಜೇವಾಲ ಇದ್ದ ವಿಶೇಷ ವಿಮಾನ ಜೈಪುರದಲ್ಲಿ ಇಂದು ರಾತ್ರಿ ಲ್ಯಾಂಡ್ ಆಗಿದೆ. ಹಾಗಾಗಿ ರಾತ್ರಿ ಜೈಪುರದಲ್ಲೇ ಇದ್ದು, ಬೆಳಗ್ಗೆ ದೆಹಲಿಗೆ ತೆರಳುವ ಕಾರ್ಯಕ್ರಮವಿದೆ.

ಇತ್ತ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತುಮಕೂರು ಜಿಲ್ಲೆಯ ನೊಣವಿನಕೆರೆಯಲ್ಲಿರುವ ಅಜ್ಜಯನ ಮಠಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು.

ಆನಂತರ ಅವರು ಕೂಡ ದೆಹಲಿಯತ್ತ ಪ್ರಯಾಣ ಬೆಳೆಸಿದರು. ನಾಳೆ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಜೊತೆಗೆ ಉಭಯ ನಾಯಕರು ಮಾತುಕತೆ ನಡೆಸಲಿದ್ದು, ಮಂತ್ರಿಮಂಡಲ ರಚನೆ ಹಾಗೂ ವಿಧಾನಪರಿಷತ್ ಮತ್ತು ರಾಜ್ಯಸಭೆ ಚುನಾವಣೆಯ ಅಭ್ಯರ್ಥಿಗಳ ಆಯ್ಕೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ.

ಬಹುತೇಕ ಸೋಮವಾರ ಡಿ.ಕೆ.ಶಿವಕುಮಾರ್ ಅವರು ವಿಧಾನಸೌಧದ ಮುಂಭಾಗ ಇಲ್ಲವೆ ಕಂಠೀರವ ಸ್ಟೇಡಿಯಂನಲ್ಲಿ ಪ್ರಮಾಣವಚನ ಸ್ವೀಕರಿಸುವ ನಿರೀಕ್ಷೆಯಿದ್ದು ಇವರೊಂದಿಗೆ ಎಷ್ಟು ಮಂದಿ ಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂಬ ಕುರಿತು ನಾಳೆ ವರಿಷ್ಠರ ಜೊತೆ ನಡೆಯುವ ಸಭೆಯಲ್ಲಿ ತೀರ್ಮಾನವಾಗಲಿದೆ.

ಉನ್ನತ ಮೂಲಗಳ ಪ್ರಕಾರ ಡಿಕೆ ಶಿವಕುಮಾರ್ ಅವರೊಂದಿಗೆ ವೀರಶೈವ ಲಿಂಗಾಯತ, ದಲಿತ, ಹಿಂದುಳಿದ ಮತ್ತು ಮುಸ್ಲಿಂ ಸಮುದಾಯಕ್ಕೆ ಸೇರಿದವರು ಉಪ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗುತ್ತಿದೆ. ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರು ಉಪಮುಖ್ಯಮಂತ್ರಿಯಾಗಿ ನೇಮಕವಾಗಲಿದ್ದಾರೆ ಎಂಬ ಚರ್ಚೆಗಳು ನಡೆಯುತ್ತಿದ್ದು ಈ ಪ್ರಸ್ತಾವವನ್ನು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ತಿರಸ್ಕರಿಸಿದ್ದಾರೆ ಎನ್ನಲಾಗಿದೆ.

ಡಿ.ಕೆ.ಶಿವಕುಮಾರ್ ಅವರ ಸಂಪುಟದಲ್ಲಿ ತಮ್ಮ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರು ಮಂತ್ರಿಯಾಗಿ ಸದ್ಯಕ್ಕೆ ಸೇರ್ಪಡೆಯಾಗುವುದಿಲ್ಲ ಎಂದು ತಮ್ಮ ಬೆಂಬಲಿಗರಿಗೆ ಸ್ಪಷ್ಟಪಡಿಸಿರುವ ಸಿದ್ದರಾಮಯ್ಯ, ತಮ್ಮ ಪುತ್ರನಿಗೆ ಮಂತ್ರಿ ಸ್ಥಾನ ಸಿಕ್ಕಲ್ಲಿ ತಮಗೂ, ಇತರೆ ರಾಜಕಾರಣಿಗಳಿಗೂ ವ್ಯತ್ಯಾಸ ಇಲ್ಲದಂತೆ ಆಗುತ್ತದೆ. ಹೀಗಾಗಿ ಇಂತಹ ಯಾವುದೇ ಪ್ರಸ್ತಾಪಗಳನ್ನು ತಾವು ಒಪ್ಪುವುದಿಲ್ಲ ಎಂದು ತಿಳಿಸಿರುವುದಾಗಿ ಗೊತ್ತಾಗಿದೆ. ಆದರೆ ಕೆ.ಜೆ.ಜಾರ್ಜ್ ಒತ್ತಾಯಕ್ಕೆ ಮಣಿದು ಪುತ್ರ ಸಂಪುಟ ಸೇರ್ಪಡೆಗೆ ಒಪ್ಪಿದ್ದಾರೆನ್ನಲಾಗಿದೆ.

ಅಂತಿಮವಾಗಿ ರಾಹುಲ್‌ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಮತ್ತು ಕೆ.ಸಿ.ವೇಣುಗೋಪಾಲ್ ಅವರ ಜೊತೆ ಚರ್ಚೆ ನಡೆಸಿದ ಬಳಿಕ ಸಂಪುಟಕ್ಕೆ ಯಾರೆಲ್ಲ ಸೇರ್ಪಡೆಯಾಗಲಿದ್ದಾರೆ, ಪಕ್ಷದ ಸಾರಥಿ ಯಾರು ಆಗಲಿದ್ದಾರೆ ಎಂಬ ಕುರಿತಾಗಿ ನಿರ್ಧಾರ ಹೊರಬೀಳುವ ಸಾಧ್ಯತೆ ಇದೆ.

ಸಿದ್ದರಾಮಯ್ಯರನ್ನು ರಾಹುಲ್ ಗಾಂಧಿ ನಡೆಸಿಕೊಂಡ ರೀತಿ ಸರಿಯಿಲ್ಲ: ಪ್ರಹ್ಲಾದ ಜೋಶಿ

ಮಂಗಳೂರು, ಮೇ 28– ಕಾಂಗ್ರೆಸ್ ಒಂದು ಅರಾಜಕ ಪಕ್ಷ. ಅಂದರೆ ಅರಾಜಕತೆ ಗ್ಯಾರಂಟಿ. ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಅಸ್ಥಿರತೆ, ಅರಾಜಕತೆ, ಅವಿಶ್ವಾಸ, ಗೊಂದಲದ ವಾತಾವರಣವಿತ್ತು. ನಿನ್ನೆ ಮೊನ್ನೆಯಿಂದ ಇದು ಪರಾಕಾಷ್ಠೆಗೆ ತಲುಪಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಮಂಗಳೂರಿನಲ್ಲಿ ಹೇಳಿದರು. ದೇಶದಲ್ಲಿ ನಾಲ್ಕು ರಾಜ್ಯಗಳಲ್ಲಿ ಮಾತ್ರ ಕಾಂಗ್ರೆಸ್ ಅಧಿಕಾರದಲ್ಲಿರುವುದು. ಇದರಲ್ಲಿ ಮೂರು ಕಡೆಗಳಲ್ಲಿ ಮೇಲ್ಜಾತಿಯವರೇ ಸಿಎಂ. ಆದರೆ, ದಿನ ಬೆಳಗಾದರೆ ಕಾಂಗ್ರೆಸ್ ಒಬಿಸಿ ಮಂತ್ರ ಜಪಿಸುತ್ತದೆ. ಆದರೆ, ಇದ್ದ ಒಬ್ಬ ಒಬಿಸಿ ಸಿಎಂ ಸಿದ್ದರಾಮಯ್ಯಗೆ ತೊಂದರೆ ಕೊಡಲು ಹೊರಟಿದ್ದಾರೆ. ಯಾವ ರೀತಿ ವೀರೇಂದ್ರ ಪಾಟೀಲ್ ಅವರನ್ನು ರಾಜೀವ್ ಗಾಂಧಿ ಅಪಮಾನ ಮಾಡಿದರೋ, ಅದೇ ರೀತಿ ಅವರ ಪುತ್ರ ರಾಹುಲ್ ಗಾಂಧಿ ಸಿದ್ದರಾಮಯ್ಯ ಅವರನ್ನು ನಡೆಸಿಕೊಂಡಿದ್ದಾರೆ. ಹಾಗೆಂದು ಸಿದ್ದರಾಮಯ್ಯ ಭಾರಿ




ಪ್ರಾಮಾಣಿಕ ಎಂದಲ್ಲ. ಆದರೆ, ಅವರನ್ನು ರಾಹುಲ್ ಗಾಂಧಿ ನಡೆಸಿಕೊಂಡ ರೀತಿ ಮಾತ್ರ ಸರಿಯಲ್ಲ. ಆದ್ದರಿಂದ ಕಾಂಗ್ರೆಸ್ ಪಕ್ಷದ ಅಸ್ಥಿರತೆ ಆದಷ್ಟು ಶೀಘ್ರ ಮುಕ್ತಾಯಗೊಳ್ಳಲಿ ಎಂದರು.

ಇತ್ತೀಚೆಗೆ ಕರ್ನಾಟಕದಲ್ಲಿ ಬಂದ ಸಿಎಂಗಳಲ್ಲಿ ಸಿದ್ದರಾಮಯ್ಯ ಹಾಗೂ ಯಡಿಯೂರಪ್ಪ ಮಾಸ್ ಲೀಡರ್ಸ್‌ಗಳು. ಸಿದ್ದರಾಮಯ್ಯರನ್ನು ನಡೆಸಿಕೊಂಡ ರೀತಿ ಮಾತ್ರ ಸರಿಯಲ್ಲ ಎಂದರು.

ಸಿದ್ದರಾಮಯ್ಯರ ಹುಟ್ಟೂರು ಸಿದ್ದರಾಮನಹುಂಡಿಯಲ್ಲಿ ನೀರಸ ವಾತಾವರಣ

● ಬೆಂಗಳೂರಿಗೆ ದೌಡಾಯಿಸಿದ ಬೆಂಬಲಿಗರು: ಕಂಬನಿ ಮಿಡಿದ ಹಿರಿಯರು ● ಬಣಗುಡುತ್ತಿದ್ದ ಸಿದ್ದರಾಮನಹುಂಡಿಯ ಸಿದ್ದರಾಮಯ್ಯರ ನಿವಾಸ


ಸಿದ್ದರಾಮಯ್ಯರ ನಿವಾಸ ಬಿಕೋ ಎನ್ನುತ್ತಿರುವುದು


ಸಿದ್ದರಾಮಯ್ಯರ ಹುಟ್ಟೂರು ಸಿದ್ದರಾಮನಹುಂಡಿ ಗ್ರಾಮದಲ್ಲಿ ನೀರಸ ವಾತಾವರಣ

ಸಿದ್ದರಾಮನಹುಂಡಿ, ಮೇ 28(ಎಂಟಿವೈ)– ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡುತ್ತಿದ್ದಂತೆ ಅವರ ಹುಟ್ಟೂರು ಸಿದ್ದರಾಮನಹುಂಡಿಯಲ್ಲಿ ನೀರಸ ವಾತಾವರಣ ಆವರಿಸಿದೆ.

ರಾಜ್ಯ ರಾಜಕಾರಣದ ಇತಿಹಾಸದಲ್ಲಿ ದೀರ್ಘಾವಧಿ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ ದಾಖಲೆ ಬರೆದಿರುವ ಸಿದ್ದರಾಮಯ್ಯ ಅವರು ಅಧಿಕಾರ ತ್ಯಾಗ ಮಾಡಲು ಮುಂದಾಗಿರುವುದು ಖಚಿತವಾಗುತ್ತಿದ್ದಂತೆಯೇ ಬುಧವಾರದಿಂದಲೇ ಹುಟ್ಟೂರು ಸಿದ್ದರಾಮನಹುಂಡಿಯ ನಿವಾಸಿಗಳಲ್ಲಿ ಮೌನ ಮಡುಗಟ್ಟಿದೆ. ಅಂದು ಸಂಜೆಯಿಂದಲೇ ನೂರಾರು ಬೆಂಬಲಿಗರು ತಂಡೋಪ ತಂಡವಾಗಿ ಬೆಂಗಳೂರಿಗೆ ದೌಡಾಯಿಸಿ, ಅವರಿಗೆ ಆತ್ಮಸ್ಥೈರ್ಯ ತುಂಬುವ ಪ್ರಯತ್ನ ಮಾಡಿದ್ದಾರೆ. ಇಂದು ಮಧ್ಯಾಹ್ನ ರಾಜೀನಾಮೆ ನೀಡುವುದು ಖಚಿತವಾಗುತ್ತಿದ್ದಂತೆ ಮುಂಜಾನೆಯೇ ಅನೇಕ ಬೆಂಬಲಿಗರು ಬೆಂಗಳೂರಿಗೆ ತೆರಳಿ, ಅಧಿಕಾರದಲ್ಲಿ ಮುಂದುವರೆಯುವಂತೆ ಮನವೊಲಿಸುವ ಪ್ರಯತ್ನ ಮಾಡಿದ್ದಾರೆ.

ಬಿಕೋ ಎನ್ನುತ್ತಿರುವ ಗ್ರಾಮ: ಸಿದ್ದರಾಮನಹುಂಡಿ ಗುರುವಾರ ಅಕ್ಷರಶಃ ಬಿಕೋ ಎನ್ನುತ್ತಿತ್ತು. ಕೆಲವರು ಕೆಲಸ ನಿಮಿತ್ತ ಹೊರಹೋಗಿದ್ದರಲ್ಲದೆ, ಹಲವು ಬೆಂಬಲಿಗರು ಸಿದ್ದರಾಮಯ್ಯನವರ ಭೇಟಿಗೆ ಬೆಂಗಳೂರಿಗೆ ತೆರಳಿದ್ದರು. ಗ್ರಾಮದ ಮಹಿಳೆಯರು ಸುದ್ದಿ ವಾಹಿನಿಗಳಲ್ಲಿ ರಾಜ್ಯ ರಾಜಕೀಯ ಬೆಳವಣಿಗೆ ಬಗ್ಗೆ ಬಿತ್ತರವಾಗುತ್ತಿದ್ದ ಸುದ್ದಿ ವೀಕ್ಷಿಸುತ್ತಿದ್ದರು. ಪರಿಣಾಮ ಬೀದಿಗಳಲ್ಲಿ ಓಡಾಡುವವರ ಸಂಖ್ಯೆ ವಿರಳವಾಗಿತ್ತು. ಗ್ರಾಮದಲ್ಲಿ ಒಂದು ರೀತಿಯಲ್ಲಿ ಅಘೋಷಿತ ಬಂದ್ ವಾತಾವರಣ ನಿರ್ಮಾಣವಾಗಿತ್ತು.

ಮೌನಕ್ಕೆ ಜಾರಿದ್ದ ಸಹೋದರರ ಕುಟುಂಬ: ಸಿದ್ದರಾಮನಹುಂಡಿಯಲ್ಲಿರುವ ಸಿದ್ದರಾಮಯ್ಯರ ನಿವಾಸ, ಅಣ್ಣ ದಿ.ತಮ್ಮಣ್ಣೇಗೌಡ, ತಮ್ಮ ದಿ.ರಾಮೇಗೌಡ, ಕೊನೆಯ ತಮ್ಮ ಸಿದ್ದೇಗೌಡ ಅವರ ನಿವಾಸದಲ್ಲೂ ಮೌನ ಆವರಿಸಿತ್ತು ಸಂಬಂಧಿಕರ ಮನೆಯವರೆಲ್ಲಾ ದುಃಖಿತರಾಗಿದ್ದರು.

ನೆರೆಹೊರೆ ಗ್ರಾಮಸ್ಥರಲ್ಲೂ ಬೇಸರ: ಸಿದ್ದರಾಮಯ್ಯ ಅವರ ಹುಟ್ಟೂರು ಸಿದ್ದರಾಮನಹುಂಡಿ ನೆರೆಹೊರೆ ಹೊಸಳ್ಳಿ, ರಂಗನಾಥಪುರ, ಶ್ರೀನಿವಾಸಪುರ, ದೇವೇಗೌಡನಹುಂಡಿ, ಕಡವೆಕಟ್ಟೆಹುಂಡಿ, ಯಡಕೊಳ, ಅಂಚಿಹುಂಡಿ, ಕುಪ್ಪೆಗಾಲ, ಮುದ್ದೇಗೌಡನಹುಂಡಿ ಗ್ರಾಮಸ್ಥರೂ ಸಿದ್ದರಾಮಯ್ಯ ಅವರ ಪದತ್ಯಾಗದ ಬಳಿಕ ಬೇಸರಗೊಂಡಿದ್ದರು. ಈ ಎಲ್ಲಾ ಗ್ರಾಮಗಳು ಯಡಕೊಳ ಗ್ರಾಮ ಪಂಚಾಯ್ತಿ ವ್ಯಾಪ್ತಿಗೆ ಬರಲಿದ್ದು, ಗ್ರಾಪಂ ಕಚೇರಿ ಸಿದ್ದರಾಮನಹುಂಡಿಯಲ್ಲಿದೆ. ಗ್ರಾಪಂ ವ್ಯಾಪ್ತಿಯಲ್ಲಿ 10 ಸಾವಿರ ಜನಸಂಖ್ಯೆಯಿದ್ದು, ಸಿದ್ದರಾಮನಹುಂಡಿಯಲ್ಲೇ 650 ಕುಟುಂಬಗಳಿಂದ 5 ಸಾವಿರಕ್ಕಿಂತ ಹೆಚ್ಚು ಜನರಿದ್ದಾರೆ. ಕುರುಬ, ಒಕ್ಕಲಿಗ, ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಇನ್ನಿತರ ಹಿಂದುಳಿದ ವರ್ಗದ ಕಾಯಕ ಸಮಾಜದ ಜನ ಸಾಮರಸ್ಯದಿಂದ ಜೀವನ ಸಾಗಿಸುತ್ತಿದ್ದು, ಜಾತ್ಯಾತೀತವಾಗಿ ಸಿದ್ದರಾಮಯ್ಯನವರನ್ನು ಪ್ರೀತಿಯಿಂದ ಕಾಣುತ್ತಾರೆ.

ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುತ್ತಿದ್ದಂತೆ ವರುಣ ವಿಧಾನಸಭಾ ಕ್ಷೇತ್ರದ ಮೂಡಲಹುಂಡಿ, ಬಡಗಲಹುಂಡಿ, ಕೆಂಪೇಗೌಡನಹುಂಡಿ, ಹೊಸಹುಂಡಿ, ವರಕೋಡು, ಮೆಲ್ಲಹಳ್ಳಿ, ವಾಜಮಂಗಲ, ಭುಗತಗಳ್ಳಿ, ವರುಣ, ಉತ್ತನಹಳ್ಳಿ, ಗುಡಮಾದನಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿರುವ ಸಿದ್ದರಾಮಯ್ಯರ ಬೆಂಬಲಿಗರಲ್ಲಿ ಬೇಸರ ಮನೆ ಮಾಡಿದೆ.

ಇಂತಹ ಮನುಷ್ಯ ಮುಂದೆ ಹುಟ್ಟಲ್ಲ

"ಮುಖ್ಯಮಂತ್ರಿ ಸಿದ್ದರಾಮಯ್ಯನಂತಹ ವ್ಯಕ್ತಿ ಮುಂದೆ ಹುಟ್ಟಲ್ಲ. ನಾವು ಚಿಕ್ಕವರಿದ್ದಾಗಿ ನಿಂದ ನೋಡಿದ್ದೇವೆ. ಮೇಲ್ವರ್ಗದವರ ಪರವಾದ ಆಡಳಿತ ಪರಂಪರೆ ಮುರಿದು, ಶೋಷಿತರು, ಹಿಂದುಳಿದ ವರ್ಗಗಳ ಧ್ವನಿಯಾದರು. ರಾಜ್ಯ ರಾಜಕಾರಣದಲ್ಲಿ ಸಿದ್ದರಾಮಯ್ಯ ಅವರಂತಹ ವ್ಯಕ್ತಿತ್ವವನ್ನು ಮತ್ತೆ ನೋಡಲು ಸಾಧ್ಯವಿಲ್ಲ. ಅವರು ಅಧಿಕಾರದಿಂದ ನಿರ್ಗಮಿಸಿದ್ದು ನೋವುಂಟು ಮಾಡಿದೆ.

–ರಾಮಣ್ಣ, ಗ್ರಾಮಸ್ಥ


ಇಂತಹವರನ್ನು ಕೆಳಗಿಳಿಸಬಾರದಿತ್ತು



"ನಾನು ಸಿದ್ದರಾಮನಹುಂಡಿಗೆ ಮದುವೆಯಾಗಿ ಬಂದಾಗಿನಿಂದಲೂ ಸಿದ್ದರಾಮಯ್ಯ ಅವರ ನಿವಾಸದ ಪಕ್ಕದ ಮನೆಯಲ್ಲಿಯೇ ವಾಸಿಸುತ್ತಿದ್ದೇನೆ. ಅವರು ಎರಡು ಬಾರಿ ಮುಖ್ಯಮಂತ್ರಿಯಾದಾಗಲೂ ಸಂಭ್ರಮಿಸಿದ್ದೆವು. ಮೈಸೂರಲ್ಲಿ ದೊಡ್ಡ ದೊಡ್ಡ ಆಸ್ಪತ್ರೆ ಕಟ್ಟಿಸಿದ್ದಾರೆ. ಇದರಿಂದ ಬಡವರಿಗೆ ತುಂಬಾ ಅನುಕೂಲವಾಗಿದೆ. ಇಂತಹ ಮನುಷ್ಯರನ್ನು ಅಧಿಕಾರದಿಂದ ಕೆಳಗಿಳಿಸಿದ್ದಾರೆ ಎಂದರೆ ನೋವು ತಡೆಯಲಾಗುತ್ತಿಲ್ಲ.

– ಮರಮ್ಮ, ಗ್ರಾಮಸ್ಥೆ

ಗ್ರಾಮದ ಸುಪುತ್ರ



"ಕುಗ್ರಾಮ ಸಿದ್ದರಾಮನಹುಂಡಿಯಲ್ಲಿ ಜನಿಸಿ, ರಾಜ್ಯ ರಾಜಕೀಯದಲ್ಲಿ ತಮ್ಮದೇ ಆದ ಛಾಪು ಮೂಡಿಸಿ, ಎರಡು ಬಾರಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಎರಡು ಬಾರಿ ವಿರೋಧ ಪಕ್ಷದ ನಾಯಕ, ಹಣಕಾಸು ಮಂತ್ರಿಯಾಗಿ 17 ಬಾರಿ ಬಜೆಟ್ ಮಂಡಿಸಿರುವ ಸಿದ್ದರಾಮಯ್ಯ ಅವರು ಸಿದ್ದರಾಮನಹುಂಡಿಯ ಸುಪುತ್ರ ಅವರು ಇನ್ನು ಎರಡು ವರ್ಷ ಅಧಿಕಾರದಲ್ಲಿ ಮುಂದುವರೆಯಬೇಕಾಗಿತ್ತು. ಒಳ್ಳೆಯ ಆಡಳಿತ ನೀಡುತ್ತಿದ್ದರು. ಯಾವ ಕಾರಣಕ್ಕೆ ರಾಜೀನಾಮೆ ನೀಡಿದ್ದಾರೋ ಗೊತ್ತಿಲ್ಲ. ಕಾಂಗ್ರೆಸ್ ಪಕ್ಷದ ಮುಖಂಡರು ಸಿದ್ದರಾಮಯ್ಯ ಅವರಿಗೆ ಬೆಂಬಲ ನೀಡಬೇಕಾಗಿತ್ತು.

– ಮಹದೇವ್, ಗ್ರಾಮದ ನಿವಾಸಿ

ನಕ್ಕರೆ ಅದೇ ಸ್ವರ್ಗ

ಮೊಮ್ಮಗ : ತಾತಾ ಈ ಕುಟುಂಬ ಯೋಜನೆ ಅಂದರೆ ಏನು?
ತಾತ : ಇಲ್ಲಿಂದ ಹೋಗು ನನಗೆ ಗೊತ್ತಿಲ್ಲ.
ಮೊಮ್ಮಗ : ನನಗೆ ಗೊತ್ತಿತ್ತು. ನಿಮಗೆ ಗೊತ್ತಿರಲ್ಲ ಅಂತ. ಗೊತ್ತಿದ್ದರೆ ಇಂದು ನಮ್ಮ ಆಸ್ತಿ 6 ತುಂಡುಗಳು ಆಗುತ್ತಿರಲಿಲ್ಲ.

ಮೈಸೂರು ಮಿತ್ರ

ಶುಕ್ರವಾರ, ಮೇ 29, 2026

ಸತ್ಯೇನೋತ್ಪಧಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಮನಸ್ಸಿಗೆ ಇಷ್ಟವಾದವರ ಅಪ್ಪುಗೆಯಿಂದ ಸಿಗುವ ಸಮಾಧಾನ ಜಗತ್ತಿನ ಯಾವ ವಸ್ತುವಿನಿಂದಲೂ ಸಿಗದು.

ವೇದ ಸುಳ್ಳಾದರೂ } ಮಳೆ ನೀರನ್ನು ಬಿಟ್ಟು ಮಂಜಿನ
ಗಾದೆ ಸುಳ್ಳಾಗದು } ನೀರಿಗೆ ಕೈಯೊಡ್ಡಿದ ಹಾಗೆ.

ನಿಮ್ಮ ಪತ್ರಗಳು

ಕುವೆಂಪು ಪುತ್ಥಳಿಯ ನೆಲಮಾಳಿಗೆಯ ಗ್ರಂಥಾಲಯವನ್ನು ಮತ್ತೆ ತೆರೆಯಲಿ



ಮಾನ್ಯರೆ,

ಮೈಸೂರಿನ ಕುವೆಂಪು ನಗರದ ವಿಶ್ವ ಮಾನವ ಜೋಡಿ ರಸ್ತೆಯಲ್ಲಿರುವ ಕುವೆಂಪು ಉದ್ಯಾನವನದ ಕುವೆಂಪು ಪುತ್ಥಳಿಯ ಕೆಳಭಾಗದಲ್ಲಿ, ಸುಮಾರು ಹತ್ತು ವರ್ಷಗಳ ಹಿಂದೆ ಅಂದಿನ ನಗರ ಪಾಲಿಕೆಯ ಸದಸ್ಯರಾದ ಕೆ.ವಿ. ಮಲ್ಲೇಶ್ ಅವರ ಪ್ರಾಮಾಣಿಕ ಪ್ರಯತ್ನದಿಂದಾಗಿ ಕುವೆಂಪು ಪುತ್ಥಳಿಯನ್ನು ಅನಾವರಣ ಮಾಡುವ ಸಂದರ್ಭದಲ್ಲೇ ವಿಶಾಲವಾದ ಸಾರ್ವಜನಿಕರ ಅನುಕೂಲಕ್ಕಾಗಿ ಸಾರ್ವಜನಿಕ ಗ್ರಂಥಾಲಯ ತೆರೆಯಲಾಗಿತ್ತು. ಈ ಗ್ರಂಥಾಲಯಕ್ಕೆ ವಿದ್ಯಾರ್ಥಿಗಳು ಹಾಗೂ ಹಿರಿಯ ನಾಗರಿಕರು ಸೇರಿದಂತೆ ನೂರಾರು ಜನರು ಇದರ ಉಪಯೋಗ ಪಡೆಯುತ್ತಿದ್ದರು. ಆದರೆ ಇತ್ತೀಚೆಗೆ ಕೊರೊನಾ ಮಹಾ ಮಾರಿಯ ನಂತರ ಅಂದರೆ ಕಳೆದ ಐದು ವರ್ಷಗಳಿಂದ ಈ ಗ್ರಂಥಾಲಯವನ್ನು ಸಂಪೂರ್ಣವಾಗಿ ಮುಚ್ಚಿದ್ದಾರೆ. ಇದಕ್ಕೆ ಸ್ಪಷ್ಟ ಕಾರಣ ತಿಳಿದಿಲ್ಲ. ಕೇಂದ್ರ ಗ್ರಂಥಾಲಯದ ಅಧಿಕಾರಿಗಳು ಈ ಬಗ್ಗೆ ಗಮನ ಹರಿಸಿ, ಈ ಗ್ರಂಥಾಲಯವನ್ನು ಪುನಃ ತೆರೆದು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು.

– ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ನಾಯಕತ್ವ ಬದಲಾವಣೆ ಖಂಡನೀಯ

ಮಾನ್ಯರೆ,

ಕರ್ನಾಟಕದಲ್ಲಿ ಸದ್ಯ ನಡೆಯುತ್ತಿರುವ ಮುಖ್ಯಮಂತ್ರಿ ಬದಲಾವಣೆಯ ಹಪಾಹಪಿತನ ಮತ್ತು ರಾಜಕೀಯ ಹೈಡ್ರಾಮಾಗಳು ಅತ್ಯಂತ ಅಸಹ್ಯಕರವಾಗಿದ್ದು ತೀವ್ರ ಖಂಡನೀಯವಾಗಿದೆ. ಅಧಿಕಾರದ ಲಾಲಸೆಯಿಂದ ಸೃಷ್ಟಿಸಲಾಗಿರುವ ಈ ಅನಗತ್ಯ ಗೊಂದಲವು ರಾಜ್ಯದ ಆಡಳಿತ ಯಂತ್ರವನ್ನು ಸಂಪೂರ್ಣವಾಗಿ ಪಾರ್ಶ್ವವಾಯು ಪೀಡಿತವಾಗಿಸಿದೆ. ಜನಸಾಮಾನ್ಯರು, ರೈತರು ಮತ್ತು ಯುವಜನರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಈ ಕಠಿಣ ಪರಿಸ್ಥಿತಿಯಲ್ಲಿ ಅಭಿವೃದ್ಧಿಯ ಕಡೆಗೆ ಗಮನಹರಿಸುವುದನ್ನು ಬಿಟ್ಟು ಕೇವಲ ಕುರ್ಚಿ ಉಳಿಸಿಕೊಳ್ಳುವ ಮತ್ತು ಕಸಿಯುವ ಇಂತಹ ಸ್ವಾರ್ಥ ರಾಜಕಾರಣವು ಕನ್ನಡಿಗರಿಗೆ ಬಗೆಯುವ ಮಹಾ ದ್ರೋಹವಾಗಿದೆ. ಮುಖ್ಯಮಂತ್ರಿ ಹುದ್ದೆಯ ಬದಲಾವಣೆಯು ರಾಜ್ಯದ ಪ್ರಗತಿಯನ್ನು ಸಂಪೂರ್ಣವಾಗಿ ಪಾತಾಳಕ್ಕೆ ತಳ್ಳುವುದರಲ್ಲಿ ಯಾವುದೇ ಸಂಶಯವಿಲ್ಲ. ಈ ಹಂತದಲ್ಲಿ ನಾಯಕತ್ವವನ್ನು ಬದಲಾಯಿಸಿದರೆ ಅದು ಇಡೀ ಆಡಳಿತದ ಮೇಲೆ ಅತ್ಯಂತ ಭೀಕರ ದುಷ್ಪರಿಣಾಮ ಬೀರಲಿದೆ. ಜನಾದೇಶವನ್ನು ಅವಮಾನಿಸಿ ಕೇವಲ ಸ್ವಾರ್ಥ ಲಾಭಕ್ಕಾಗಿ ಕಚ್ಚಾಡುತ್ತಿರುವ ರಾಜಕಾರಣಿಗಳು ರಾಜ್ಯವನ್ನು ಸಂಪೂರ್ಣ ವಿನಾಶದತ್ತ ದೂಡುತ್ತಿದ್ದಾರೆ.

– ಡಾ. ಎಚ್.ಕೆ. ವಿಜಯಕುಮಾರ್, ಮೈಸೂರು.

ಖಾಸಗಿ ಹೋಟೆಲ್ ಮಾಲೀಕರಿಂದ ಮುಖ್ಯ ರಸ್ತೆಯ ಅತಿಕ್ರಮಣ



ಮಾನ್ಯರೆ,

ಮೈಸೂರಿನ ಲಿಂಗದೇವ ಕೊಪ್ಪಲಿನ ಬಳಿ ಇರುವ ಒಂದು ಖಾಸಗಿ ಹೋಟೆಲ್‌ನ ಎದುರುಗಡೆ ಫುಟ್ಪಾತ್ ರಸ್ತೆಯನ್ನು ಅತಿಕ್ರಮಣ ಮಾಡಿಕೊಂಡಿರುವುದರಿಂದ ಓಡಾಡುವ ವಾಹನಗಳಿಗೆ ತುಂಬಾ ತೊಂದರೆ ಉಂಟಾಗುತ್ತಿದೆ.

ಈ ಪಾದಾಚಾರಿ ಮಾರ್ಗವನ್ನು ಹೋಟೆಲಿಗೆ ಬರುವ ಗ್ರಾಹಕರು ಅತಿಕ್ರಮಣ ಮಾಡಿಕೊಂಡು ರಸ್ತೆಗೆ ಅಂಟಿಕೊಂಡಂತೆ ವಾಹನಗಳನ್ನು ನಿಲ್ಲಿಸುತ್ತಿದ್ದಾರೆ. ಇದರಿಂದ ಮುಖ್ಯ ರಸ್ತೆಯಲ್ಲಿ ಓಡಾಡುವ ದ್ವಿಚಕ್ರ ಹಾಗೂ ಲಾರಿ, ಬಸ್ ಇತರೆ ವಾಹನಗಳಿಗೆ ಹಾಗೂ ರಸ್ತೆ ಬದಿಯಲ್ಲಿ ತಿರುಗಾಡುವ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗುತ್ತಿದೆ.

ಅಲ್ಲೇ ಪಕ್ಕದಲ್ಲಿ ದಿನಸಿ ಪದಾರ್ಥಗಳ ದೊಡ್ಡ ಶಾಪಿಂಗ್ ಮಾಲ್ ಓಪನ್ ಆಗಿರುವುದರಿಂದ ಅಲ್ಲಿಗೆ ಬರುವ ಗ್ರಾಹಕರು, ಅಲ್ಲೇ ಅಕ್ಕಪಕ್ಕದಲ್ಲಿ ಕೆಲವು ಕಾರ್ಖಾನೆಗಳು ಇರುವುದರಿಂದ ಅಲ್ಲಿಗೆ ಬರುವ ಉದ್ಯೋಗಿಗಳು ಸಹ ಇಲ್ಲಿ ಓಡಾಡುತ್ತಾರೆ ಹಾಗೂ ಮೈಸೂರು, ಮಡಿಕೇರಿ, ಹಾಸನ ಚಿಕ್ಕಮಗಳೂರು ಈ ಕಡೆಗೆ ಹೋಗುವ ವಾಹನಗಳು ದಟ್ಟವಾಗಿ ತಿರುಗಾಡುತ್ತಿವೆ. ಬೆಳಗಿನ ಸಮಯ ಹಾಗೂ ಸಂಜೆಯ ಸಮಯದಲ್ಲಿ ವಾಹನಗಳ ದಟ್ಟಣೆ ಆ ರಸ್ತೆಯಲ್ಲಿ ಅತಿ ಹೆಚ್ಚಾಗಿರುತ್ತದೆ. ಜೊತೆಗೆ ಕಾರ್ಖಾನೆಗಳ ಉದ್ಯೋಗಿಗಳು ಕೂಡ ಅಲ್ಲಿ ಮನೆಗೆ ಹೋಗುವ ಸಂಜೆಯ ಸಮಯದಲ್ಲಿ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಬಸ್‌ಗಳಿಗಾಗಿ ಕೆಲವು ವಾಹನಗಳಿಗಾಗಿ ಕಾಯುತ್ತಿರುತ್ತಾರೆ. ಈ ಸಂದರ್ಭದಲ್ಲಿ ಅಲ್ಲಿ ವಾಹನದ ದಟ್ಟಣೆ ಅತಿ ಹೆಚ್ಚಾಗಿರುತ್ತದೆ. ಇದರ ಬಗ್ಗೆ ಇಲ್ಲಿ ಓಡಾಡುವ ಜನಪ್ರತಿನಿಧಿಗಳು ಹಾಗೂ ಇಲಾಖೆಯವರು ಯಾವುದೇ ಕ್ರಮ ಕೈಗೊಳ್ಳದೆ ಉದಾಸೀನ ಮಾಡುತ್ತಿದ್ದಾರೆ. ಸಂಬಂಧಪಟ್ಟ ಇಲಾಖೆಯವರು ಅಗತ್ಯ ಕ್ರಮವನ್ನು ತೆಗೆದುಕೊಂಡು ಅತಿಕ್ರಮಣ ತೆರವುಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಈ ಮೂಲಕ ಮನವಿ.

– ಸುರಕ್ಷತೆಯ ಪ್ರಾಮಾಣಿಕ ಹಾಗೂ ಪ್ರಜ್ಞಾವಂತ ನಾಗರಿಕ, ಮೈಸೂರು.

ಸುದೀರ್ಘ ಅಧಿಕಾರ ಅನುಭವಿಸಿದ ಅದೃಷ್ಟವಂತ ಸಿದ್ದರಾಮಯ್ಯ!



ಕಳೆದ 48 ವರ್ಷದ ರಾಜಕೀಯ ಜೀವನದಲ್ಲಿ ಒಂದಲ್ಲ ಒಂದು ಅಧಿಕಾರ ಒಲಿದು ಬಂತು!!
ಈಗ ಒಪ್ಪಂದದಂತೆ ರಾಜ್ಯದ ಅತ್ಯುನ್ನತ ಅಧಿಕಾರ ಸ್ಥಾನ ಮುಖ್ಯಮಂತ್ರಿ ಗಾದಿ ತೊರೆದಿದ್ದಾರೆ

ಮೈಸೂರು ತಾಲೂಕಿನ ರೈತ ಕುಟುಂಬದಲ್ಲಿ ಜನಿಸಿದ ಸಿದ್ದರಾಮಯ್ಯನವರು ಎರಡು ಬಾರಿ ಮುಖ್ಯಮಂತ್ರಿಯಾಗುವುದರ ಜೊತೆಗೆ ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ತಮ್ಮದೇ ಆದ ಛಾಪು ಮೂಡಿಸಿದವರು. ನಾಡಿನ ರಾಜಕೀಯ ಇತಿಹಾಸದಲ್ಲಿ ಸಿದ್ದರಾಮಯ್ಯ ಹೆಸರಲ್ಲಿ ಹಲವು ದಾಖಲೆಗಳೂ ಆಗಿವೆ. ಅಕ್ಷರಸ್ಥರಿಲ್ಲದ, ಯಾವುದೇ ರಾಜಕೀಯ ಹಿನ್ನೆಲೆಯಿಲ್ಲದ ಕುಟುಂಬದಲ್ಲಿ ಜನಿಸಿದರೂ ಛಲ, ಪರಿಶ್ರಮ, ಬದ್ಧತೆ, ಸ್ವ–ಸಾಮರ್ಥ್ಯದಿಂದ ವಕೀಲರಾಗಿ, ಕೆಲಕಾಲ ಕಾನೂನು ಉಪನ್ಯಾಸಕರಾಗಿ, ಚಳವಳಿಗಾರರಾಗಿ, ರಾಜಕೀಯ ಕ್ಷೇತ್ರಕ್ಕೆ ಧುಮುಕಿದ ಸಿದ್ದರಾಮಯ್ಯರ ಸಾಧನೆ, ಯುವ ಜನಾಂಗಕ್ಕೆ ಪ್ರೇರಣೆಯಾಗಿದೆ.

ರಾಜಕೀಯದಲ್ಲಿ ಟೀಕೆ, ಟಿಪ್ಪಣಿ, ವಾದ–ಪ್ರತಿವಾದ, ಆರೋಪ–ಪ್ರತ್ಯಾರೋಪ, ತಂತ್ರ–ಪ್ರತಿತಂತ್ರ ಎಲ್ಲವೂ ಸಹಜ. ಅದಕ್ಕೂ ಮೀರಿ ಪಕ್ಷಾತೀತವಾಗಿ ದೊಡ್ಡ ಆತ್ಮೀಯರ ಬಳಗವನ್ನೇ ಸಿದ್ದರಾಮಯ್ಯ ಸಂಪಾದಿಸಿದ್ದಾರೆ. ಎಷ್ಟು ಎತ್ತರಕ್ಕೇರಿದರೂ ಗ್ರಾಮೀಣ ಭಾಷೆಯ ಸೊಗಡಿನಲ್ಲೇ ಮಾತನಾಡುವ ಮೂಲಕ ತಮ್ಮತನವನ್ನು ಇಂದಿಗೂ ಕಾಯ್ದುಕೊಂಡಿದ್ದಾರೆ. ಸೋಲು–ಗೆಲುವಿನ ರಾಜಕೀಯ ಪಯಣದಲ್ಲಿ 9 ಬಾರಿ ಶಾಸಕರಾಗಿ, ಸಚಿವರಾಗಿ, ವಿಪಕ್ಷ ನಾಯಕರಾಗಿ, ಉಪಮುಖ್ಯಮಂತ್ರಿಯಾಗಿ ಕಡೆಗೆ ಎರಡು ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ.

ಅಲ್ಲದೆ ತಾವು ಸದಾ ಸ್ಮರಿಸುವ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಹೆಸರಲ್ಲಿದ್ದ ದೀರ್ಘಾವಧಿ ಮುಖ್ಯಮಂತ್ರಿ ದಾಖಲೆ ಮುರಿದು, ನಾಡಿನಲ್ಲಿ ಅತೀ ಹೆಚ್ಚು ದಿನ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ ನಾಯಕರೆನಿಸಿಕೊಂಡಿದ್ದಾರೆ. 17 ಬಾರಿ ರಾಜ್ಯದ ಬಜೆಟ್ ಮಂಡಿಸುವ ಮೂಲಕ ಮತ್ತೊಂದು ದಾಖಲೆ ಅಚ್ಚೊತ್ತಿದ್ದಾರೆ. ತಮಗೇ ತಿಳಿಯದಂತೆ ಇಂತಹ ಹಲವು ದಾಖಲೆ ಮಾಡಿರುವ ಅವರು, ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿ, ತಾವು ಪ್ರತಿನಿಧಿಸುವ ವರುಣ ಕ್ಷೇತ್ರದ ಸೇವೆ ಮಾಡುವುದಾಗಿ ಘೋಷಿಸಿದ್ದಾರೆ.

ನೇರ ಐದನೇ ತರಗತಿಯಿಂದ ವಿದ್ಯಾಭ್ಯಾಸ

ಮೈಸೂರು ತಾಲೂಕು, ವರುಣಾ ಹೋಬಳಿಯ ಸಿದ್ದರಾಮನ ಹುಂಡಿ ಗ್ರಾಮದ ಸಿದ್ದರಾಮೇಗೌಡ ಹಾಗೂ ಬೋರಮ್ಮ ದಂಪತಿ ಪುತ್ರನಾಗಿ 1948ರ ಆಗಸ್ಟ್ 12ರಂದು ಜನಿಸಿದ ಸಿದ್ದರಾಮಯ್ಯ, ಪ್ರಾಥಮಿಕ ಶಾಲೆಗೇ ಹೋಗಿರಲಿಲ್ಲ. ಸಿದ್ದರಾಮಯ್ಯ ಅವರ ತಂದೆ, ಅವರನ್ನು ವೀರ ಮಕ್ಕಳ ಕುಣಿತ ಕಲಿಯಲು ಸೇರಿಸಿದ್ದರು. ಕುಣಿತ ಕಲಿಸುತ್ತಿದ್ದ ಮೇಷ್ಟ್ರು ನಂಜೇಗೌಡರು, ಕುಣಿತದೊಂದಿಗೆ ಮರಳಿನ ಮೇಲೆ ಅಕ್ಷರ ಅಭ್ಯಾಸ ಮಾಡಿಸಿದ್ದರು. 2 ವರ್ಷದ ನಂತರ ನಂಜೇ ಗೌಡರು ಕುಣಿತ ಕಲಿಸುವುದು ನಿಲ್ಲಿಸಿದ್ದರಿಂದ ಸಿದ್ದರಾಮಯ್ಯ ಒಂದೆರಡು ವರ್ಷ ಹುಡುಗರ ಜೊತೆಯಲ್ಲಿ ಎಮ್ಮೆ ಮೇಯಿಸುವುದಕ್ಕೆ ಹೋಗುತ್ತಿದ್ದರು. ಆದರೆ ಇವರಲ್ಲಿದ್ದ ಅಕ್ಷರಜ್ಞಾನ ಗುರುತಿಸಿದ ರಾಜಪ್ಪ ಮೇಷ್ಟ್ರು, ಶಾಲೆಗೆ ಕರೆದೊಯ್ದು ನೇರವಾಗಿ 5ನೇ ತರಗತಿಗೆ ದಾಖಲಿಸಿ ಕೊಂಡರು. ಇದು, ಸಿದ್ದರಾಮಯ್ಯನವರ ಬದುಕನ್ನು ಹೊಸ ದಿಕ್ಕಿನಲ್ಲೇ ಕೊಂಡೊಯ್ಯಿತು. ಕಾಲೇಜು ಶಿಕ್ಷಣಕ್ಕೆ ಮೈಸೂರಿಗೆ ಬಂದ ಸಿದ್ದರಾಮಯ್ಯ, ಯುವರಾಜ ಕಾಲೇಜಿನಲ್ಲಿ ಬಿ.ಎಸ್ಸಿ ಪದವಿ ಪಡೆದ ನಂತರ ಶಾರದಾ ವಿಲಾಸ ಕಾನೂನು ಕಾಲೇಜಿಗೆ ದಾಖಲಾದರು. ಎಲ್‌ಎಲ್‌ಬಿ ಪೂರ್ಣಗೊಂಡ ಬಳಿಕ ಮೈಸೂರಿನ ಅಂದಿನ ಹಿರಿಯ ವಕೀಲ ಪಿ.ಎಂ.ಚಿಕ್ಕಬೋರಯ್ಯ ಅವರ ಬಳಿ ಕಿರಿಯ ವಕೀಲರಾಗಿ ಕಾರ್ಯ ನಿರ್ವಹಿಸಿದರು. ಜೊತೆಗೆ ಕೆಲಕಾಲ ವಿದ್ಯಾವರ್ಧಕ ಕಾನೂನು ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರಾಗಿಯೂ ಸೇವೆ ಸಲ್ಲಿಸಿದರು. ನಂತರದಲ್ಲಿ ಸ್ವತಃ ವಕೀಲ ವೃತ್ತಿ ಆರಂಭಿಸಿದರು. ಶಾಲಾ–ಕಾಲೇಜು ದಿನಗಳಲ್ಲೇ ಉತ್ತಮ ಭಾಷಣಕಾರರಾಗಿದ್ದ ಸಿದ್ದರಾಮಯ್ಯ, ವಕೀಲಿ ವೃತ್ತಿ ಹಾಗೂ ಚಳವಳಿಗಳಲ್ಲಿ ಹೆಚ್ಚು ಗುರುತಿಸಿಕೊಂಡರು.

ರಾಜಕಾರಣದ ಯುಗಾರಂಭ

ಶೋಷಿತ ವರ್ಗಗಳ ಕಷ್ಟಕಾರ್ಪಣ್ಯಗಳಿಗಾಗಿ ಮಿಡಿಯುತ್ತಿದ್ದ ಸಿದ್ದರಾಮಯ್ಯನವರಿಗೆ ಡಾ.ರಾಮಮನೋಹರ ಲೋಹಿಯಾ ಚಿಂತನೆಗಳು ಹೆಚ್ಚು ಪ್ರಭಾವ ಬೀರುತ್ತಿದ್ದಂತೆ ಅವರು, ವಕೀಲ ವೃತ್ತಿಯನ್ನು ಬಿಟ್ಟು ರಾಜಕಾರಣಕ್ಕೆ ಧುಮುಕಿದರು. ರಾಜಕಾರಣದಲ್ಲಿ ಒಂದೊಂದೇ ಹೆಜ್ಜೆ ಇಡುತ್ತಾ ಜಾಗರೂಕವಾಗಿ ಮುಂದೆ ಸಾಗಿದರು. 1978ರಲ್ಲಿ ಅಧಿಕೃತವಾಗಿ ರಾಜಕೀಯ ಪ್ರವೇಶಿಸಿದ ಸಿದ್ದರಾಮಯ್ಯ ಅವರು, ತಾಲೂಕು ಅಭಿವೃದ್ಧಿ ಮಂಡಳಿಯ ಸದಸ್ಯರಾಗಿ ಆಯ್ಕೆಯಾದರು. ಇದೇ ವೇಳೆ ರೈತ ಚಳವಳಿಯತ್ತ ಆಕರ್ಷಿತರಾಗಿದ್ದರಿಂದ ಅವರಿಗೆ ಪ್ರೊ.ಎಂ.ಡಿ.ನಂಜುಂಡಸ್ವಾಮಿ ಅವರ ಒಡನಾಟ ದೊರಕಿತು. 1980ರಲ್ಲಿ ಸಿದ್ದರಾಮಯ್ಯ ಅವರು ಮೊದಲ ಬಾರಿ ಮೈಸೂರು ಲೋಕಸಭೆ ಕ್ಷೇತ್ರದಿಂದ ಚುನಾವಣಾ ಅಖಾಡಕ್ಕೆ ಇಳಿದರಾದರೂ ಗೆಲುವು ಸಾಧ್ಯವಾಗಲಿಲ್ಲ. ಆದರೆ ಛಲಬಿಡದ ಸಿದ್ದರಾಮಯ್ಯ ಸೋಲನ್ನೇ ಗೆಲುವಿನ ಸೋಪಾನ ಮಾಡಿಕೊಂಡು ಹಂತ ಹಂತವಾಗಿ ಬೆಳೆದು ಸಾಧನೆ ಮೆರೆದರು. 1983ರ ವಿಧಾನಸಭೆ ಚುನಾವಣೆಯಲ್ಲಿ ಲೋಕದಳದ ಅಭ್ಯರ್ಥಿಯಾಗಿ ಚಾಮುಂಡೇಶ್ವರಿ ವಿಧಾನಸಭೆ ಕ್ಷೇತ್ರದಿಂದ ಸ್ಪರ್ಧಿಸಿದ್ದ ಸಿದ್ದರಾಮಯ್ಯ, ಇಂದಿರಾ ಕಾಂಗ್ರೆಸ್‌ನ ಡಿ.ಜಯದೇವರಾಜ ಅರಸು ಅವರನ್ನು ಸೋಲಿಸಿ, ಮೊದಲ ಬಾರಿ ವಿಧಾನಸಭೆ ಪ್ರವೇಶಿಸಿದರು.



ಹೋರಾಟದ ಜೀವನ

ವಿದ್ಯಾರ್ಥಿ ಆಗಿದ್ದಾಗ ಮೈಸೂರಿನ ಸುಬ್ಬರಾಯನ ಕೆರೆ ಬಳಿ ಇರುವ ಕಟ್ಟಡವೊಂದರಲ್ಲಿ ಬಾಡಿಗೆಗೆ ರೂಂ ಮಾಡಿಕೊಂಡಿದ್ದ ಸಿದ್ದರಾಮಯ್ಯ, ಸಾಕಷ್ಟು ಕಷ್ಟದ ದಿನಗಳನ್ನು ಎದುರಿಸಿದ್ದಾರೆ. ಪ್ರೊ.ಪಿ.ಎಂ.ಚಿಕ್ಕಬೋರಯ್ಯ ಎಂಬುವರ ಬಳಿ ಕಿರಿಯ ವಕೀಲರಾಗಿದ್ದಾಗಲೇ ಕ್ರಮೇಣ ಸಾರ್ವಜನಿಕ ಜೀವನಕ್ಕೆ ತೆರೆದುಕೊಂಡು, ನಾಯಕತ್ವದ ಗುಣಲಕ್ಷಣಗಳನ್ನು ಮೈಗೂಡಿಸಿಕೊಳ್ಳತೊಡಗಿದರು. ವಕೀಲರಾಗಿ ನ್ಯಾಯಾಲಯದಲ್ಲೇ ಕಳೆದು ಹೋಗದೆ, ಶೋಷಿತ ವರ್ಗಗಳ ಪರ ಧ್ವನಿ ಎತ್ತುತ್ತಿದ್ದರು. ಸಮಾಜವಾದಿ ಚಿಂತಕ ಡಾ.ರಾಮಮನೋಹರ ಲೋಹಿಯಾ ಪ್ರಭಾವಕ್ಕೆ ಒಳಗಾಗಿ ಹಲವು ಹೋರಾಟಗಳಲ್ಲಿ ಸಕ್ರಿಯರಾಗಿದ್ದರು.

ಜೆಡಿಎಸ್ ಸೇರಿ ಮೈತ್ರಿ ಸರ್ಕಾರದಲ್ಲಿ ಡಿಸಿಎಂ

1999ರಲ್ಲಿ ಜನತಾದಳ ಮತ್ತೆ ಹೋಳಾದಾಗ ಸಿದ್ದರಾಮಯ್ಯ ಅವರು ಜಾತ್ಯಾತೀತ ಜನತಾದಳ(ಜೆಡಿಎಸ್)ದೊಂದಿಗೆ ಗುರುತಿಸಿಕೊಂಡರು. ಪಕ್ಷದ ಅಧ್ಯಕ್ಷರಾಗಿ ಸಂಘಟನೆಯಲ್ಲಿ ಸಕ್ರಿಯರಾದರು. ಆದರೆ 1999ರಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿ ಚಾಮುಂಡೇಶ್ವರಿ ಕ್ಷೇತ್ರದಿಂದ ಸ್ಪರ್ಧಿಸಿ ಪರಾಜಿತರಾದರು. 2004ರ ಹೊತ್ತಿಗೆ ಜಾತ್ಯತೀತ ಜನತಾದಳದ ಪ್ರಮುಖ ನಾಯಕರಾಗಿ ಬಿಂಬಿತರಾದರು. ಅದೇ ವರ್ಷ ನಡೆದ ಚುನಾವಣೆಯಲ್ಲಿ ಮತ್ತೆ ಗೆಲುವು ಸಾಧಿಸಿದ ಸಿದ್ದರಾಮಯ್ಯ, ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿ ಹಾಗೂ ಹಣಕಾಸು, ಅಬಕಾರಿ ಸಚಿವರಾಗಿ ಕಾರ್ಯ ನಿರ್ವಹಿಸಿದರು.

ಬದಲಾದ ರಾಜಕೀಯ ಸಂದರ್ಭದಲ್ಲಿ 2006ರಲ್ಲಿ ಜೆಡಿಎಸ್ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ ಸಿದ್ದರಾಮಯ್ಯ ಅವರು ಜೆಡಿಎಸ್‌ನಿಂದ ಉಚ್ಛಾಟಿತರಾದರು. ಬಳಿಕ ಅಖಿಲ ಭಾರತ ಪ್ರಗತಿಪರ ಜನತಾ ಪಕ್ಷ ಸ್ಥಾಪಿಸಿ, ಕೆಲ ತಿಂಗಳಲ್ಲೇ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಬೃಹತ್ ಸಮಾವೇಶದಲ್ಲಿ 2006ರ ಜುಲೈ 22ರಂದು ಎಐಸಿಸಿ ಅಧ್ಯಕ್ಷೆಯಾಗಿದ್ದ ಸೋನಿಯಾಗಾಂಧಿ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷ ಸೇರಿದರು. ಈ ಬೆಳವಣಿಗೆ ಸಿದ್ದರಾಮಯ್ಯ ಅವರ ರಾಜಕೀಯ ಜೀವನಕ್ಕೆ ಮತ್ತೊಂದು ತಿರುವು ನೀಡಿತು. ಬಳಿಕ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರಕ್ಕೆ ಅದೇ ವರ್ಷ ಡಿಸೆಂಬರ್‌ನಲ್ಲಿ ನಡೆದ ಉಪ ಚುನಾವಣೆಯಲ್ಲಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ 257 ಮತಗಳ ರೋಚಕ ಗೆಲುವು ಸಾಧಿಸಿದರು.

ಸುದೀರ್ಘ ರಾಜಕೀಯ ಪಯಣ

ಸಿದ್ದರಾಮಯ್ಯ 1983ರ ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಗೆದ್ದ ನಂತರ ಭಾರತೀಯ ಲೋಕದಳದಿಂದ ಜನತಾ ಪಕ್ಷಕ್ಕೆ ಸೇರಿದರು. ರಾಮಕೃಷ್ಣ ಹೆಗಡೆ ಅವರ ನೇತೃತ್ವದ ಸರ್ಕಾರ ರಚನೆ ವೇಳೆ ಬೆಂಬಲ ನೀಡಿದ್ದವರಲ್ಲಿ ಸಿದ್ದರಾಮಯ್ಯ ಅವರೂ ಒಬ್ಬರಾಗಿದ್ದರು. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರನ್ನು ಹೊಸದಾಗಿ ರಚಿಸಿದ ಕನ್ನಡ ಕಾವಲು ಸಮಿತಿಯ ಅಧ್ಯಕ್ಷ ಸ್ಥಾನ ಲಭಿಸಿತು. ಗಡಿಭಾಗಗಳಾದ ಕಾಸರಗೋಡು, ಬೆಳಗಾವಿ, ಕೋಲಾರ ಮುಂತಾದೆಡೆ ಪ್ರವಾಸ ಕೈಗೊಂಡು ವರದಿ ಸಲ್ಲಿಸಿದರು. 1985ರಲ್ಲಿ ವಿಧಾನಸಭೆಯ ಮಧ್ಯಂತರ ಚುನಾವಣೆಯಲ್ಲಿ ಸಿದ್ದರಾಮಯ್ಯ ಅವರು ಚಾಮುಂಡೇಶ್ವರಿ ಕ್ಷೇತ್ರದಿಂದ ಜನತಾಪಕ್ಷದಿಂದ ಸ್ಪರ್ಧಿಸಿ ಎರಡನೇ ಬಾರಿ ಚುನಾಯಿತರಾದರು. ಆ ವೇಳೆ ಪಶುಸಂಗೋಪನೆ ಸಚಿವರಾಗಿದ್ದ ಅವರು, ಸಂಪುಟ ಪುನರ್ರಚನೆಯ ನಂತರ ರೇಷ್ಮೆ ಮತ್ತು ಸಾರಿಗೆ ಸಚಿವರಾಗಿಯೂ ಕಾರ್ಯ ನಿರ್ವಹಿಸಿದರು. ಎಸ್.ಆರ್. ಬೊಮ್ಮಾಯಿ ಅವರ ಮಂತ್ರಿ ಮಂಡಲದಲ್ಲಿ ಸಾರಿಗೆ ಸಚಿವರಾಗಿಯೂ ಕಾರ್ಯನಿರ್ವಹಿಸಿದರು.



1989ರಲ್ಲಿ ಜನತಾಪಕ್ಷ ಇಬ್ಭಾಗವಾಗಿ ಜನತಾದಳ ಮತ್ತು ಸಮಾಜವಾದಿ ಜನತಾ ಪಕ್ಷ ಅಸ್ತಿತ್ವಕ್ಕೆ ಬಂದಾಗ ಸಿದ್ದರಾಮಯ್ಯ ಆಗ ಜನತಾದಳದೊಂದಿಗೆ ಗುರುತಿಸಿಕೊಂಡರು. ಆದರೆ ಆ ವೇಳೆ ಕಾಂಗ್ರೆಸ್ ಅಲೆಯಿದ್ದ ಕಾರಣ ಆ ಪಕ್ಷದ ಅಭ್ಯರ್ಥಿಯಾಗಿ ವಿಧಾನಸಭೆ ಚುನಾವಣೆಯಲ್ಲಿ ಪರಾಜಿತಗೊಂಡರು. 1991ರಲ್ಲಿ ಕೊಪ್ಪಳ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಮತ್ತೆ ಸೋಲು ಕಂಡರು. ಅದು ಸಿದ್ದರಾಮಯ್ಯನವರ ರಾಜಕೀಯ ಜೀವನದಲ್ಲಿ ತುಸು ಹಿನ್ನಡೆಗೆ ಕಾರಣವಾಯಿತು.

ಸೋಲಿನಿಂದ ಎದೆಗುಂದದ ಸಿದ್ದರಾಮಯ್ಯ ಅವರು 1994ರ ವಿಧಾನಸಭೆ ಚುನಾವಣೆಯಲ್ಲಿ ಜನತಾದಳದಿಂದ ಸ್ಪರ್ಧಿಸಿ 3ನೇ ಬಾರಿ ವಿಧಾನಸಭೆ ಪ್ರವೇಶಿಸಿದರು. ಹೆಚ್.ಡಿ.ದೇವೇಗೌಡರ ಸಚಿವ ಸಂಪುಟದಲ್ಲಿ ಹಣಕಾಸು ಮಂತ್ರಿಗಳಾಗಿ ಪಳಗಿದರು. ಅವರು ಮೊಟ್ಟ ಮೊದಲ ಬಾರಿಗೆ ಮುಂಗಡ ಪತ್ರ ಮಂಡಿಸಲು ಸಿದ್ಧತೆ ನಡೆಸುತ್ತಿದ್ದ ವೇಳೆ 'ಕುರಿ ಕಾಯವವನಿಗೇನು ಗೊತ್ತು ಲೆಕ್ಕ' ಎಂದು ಕೆಲವರು ಹೀಯ್ಯಾಳಿಸಿದ್ದರಂತೆ. ಅದನ್ನೇ ಸವಾಲಾಗಿ ಸ್ವೀಕರಿಸಿದ ಸಿದ್ದರಾಮಯ್ಯ, ಉತ್ತಮ ರೀತಿಯ ಬಜೆಟ್ ಮಂಡಿಸಿ ಎಲ್ಲರೂ ನಿಬ್ಬೆರಗಾಗುವಂತೆ ಮಾಡಿದರು. ಹೆಚ್.ಡಿ.ದೇವೇಗೌಡರು 1996ರಲ್ಲಿ ಪ್ರಧಾನಿಯಾದಾಗ ಜೆ.ಹೆಚ್.ಪಟೇಲರ ಮಂತ್ರಿಮಂಡಲದಲ್ಲಿ ಸಿದ್ದರಾಮಯ್ಯ ಅವರು ಉಪಮುಖ್ಯಮಂತ್ರಿಗಳಾದರು.

ಮುಖ್ಯಮಂತ್ರಿ ಗಾದಿಯತ್ತ ಪಯಣ

2013ರ ವಿಧಾನಸಭೆ ಚುನಾವಣೆಯಲ್ಲಿ ತಮ್ಮ ಗೆಲುವಿಗೆ ಮಾತ್ರ ಶ್ರಮಿಸದೆ ರಾಜ್ಯಾದ್ಯಂತ ಕಾಂಗ್ರೆಸ್ ಪರ ಪ್ರಚಾರ ಮಾಡಿ ಪಕ್ಷದ ಗೆಲುವಿಗೆ ಕಾರಣರಾದರು. ಮೇ 10ರಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾಗಿ, ಮೇ 13ರಂದು ರಾಜ್ಯದ 22ನೇ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮರುಕ್ಷಣವೇ ವಿವಿಧ ಭಾಗ್ಯಗಳನ್ನು ಪ್ರಕಟಿಸಿದರು. ಅನ್ನಭಾಗ್ಯ, ಕ್ಷೀರಭಾಗ್ಯ ಮತ್ತು ದಲಿತ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಸಾಲ ಮನ್ನಾ ಸೇರಿದಂತೆ ವಿವಿಧ ಯೋಜನೆಗಳನ್ನು ಘೋಷಿಸಿದರು.

ಅಲ್ಲದೆ ಪಕ್ಷದ ಪ್ರಣಾಳಿಕೆಯಲ್ಲಿ ನೀಡಿದ್ದ 165 ಭರವಸೆಗಳಲ್ಲಿ 60ರಷ್ಟನ್ನು ತಮ್ಮ ಮೊದಲ ಬಜೆಟ್‌ನಲ್ಲಿಯೇ ಈಡೇರಿಸಿದರು. ಎರಡನೇ ಬಜೆಟ್‌ನಲ್ಲಿ ಪ್ರಣಾಳಿಕೆಯಲ್ಲಿನ ಇನ್ನೂ 30 ಭರವಸೆಗಳನ್ನು ಈಡೇರಿಸಿದರು. ಇದು ಸಿದ್ದರಾಮಯ್ಯನವರ ಜನಪರ ಧೋರಣೆ, ಬಡವರ ಕಲ್ಯಾಣದ ಬಗ್ಗೆ ಬದ್ಧತೆ ಮತ್ತು ಪ್ರಾಮಾಣಿಕ ನಡವಳಿಕೆಗೆ ಸಾಕ್ಷಿ ಎಂದು ಬಿಂಬಿತವಾಯಿತು. 2018ರ ಮೇ 12ರಂದು ನಡೆದ ವಿಧಾನಸಭಾ ಚುನಾವಣೆಯಲ್ಲಿ ಚಾಮುಂಡೇಶ್ವರಿ ಮತ್ತು ಬಾದಾಮಿ ಎರಡು ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದರು. ತವರು ಕ್ಷೇತ್ರ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಜೆಡಿಎಸ್‌ನ ಜಿ.ಟಿ.ದೇವೇಗೌಡರ ವಿರುದ್ಧ ಭಾರೀ ಅಂತರದಲ್ಲಿ ಸೋತು, ಬಾದಾಮಿಯಲ್ಲಿ ಮಾತ್ರ ಕಡಿಮೆ ಮತಗಳ ಅಂತರದಲ್ಲಿ ಗೆದ್ದಿದ್ದರು. ಆ ವೇಳೆ ಅತಂತ್ರ ಫಲಿತಾಂಶ ಬಂದಿದ್ದರಿಂದ ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರ್ಕಾರ ರಚನೆಯಾಗಿ, ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾದರು. ಆದರೆ, ಉಭಯ ಪಕ್ಷಗಳ ಹಲವು ಶಾಸಕರು ಬಿಜೆಪಿ ಸೇರಿದ್ದರಿಂದ ಮೈತ್ರಿ ಸರ್ಕಾರ ಬಿದ್ದು, ಬಿಜೆಪಿ ಸರ್ಕಾರ ರಚನೆಯಾಯಿತು. 2023ರ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನಾಯಕತ್ವದಲ್ಲಿ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬಂತು. ಸಿದ್ದರಾಮಯ್ಯನವರು 24ನೇ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು ಚುನಾವಣಾ ಪ್ರಣಾಳಿಕೆಯಲ್ಲಿರುವಂತೆ ಪಂಚ ಗ್ಯಾರಂಟಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದರು. ಎರಡನೇ ಅವಧಿಯಲ್ಲಿ 3 ವರ್ಷ ಸಮರ್ಥ ಆಡಳಿತ ನಡೆಸಿರುವ ಇವರು, ಇದೀಗ ಮುಖ್ಯಮಂತ್ರಿ ಸ್ಥಾನಕ್ಕೆ ವಿದಾಯ ಹೇಳುವ ಮೂಲಕ ಸರ್ಕಾರ ರಚನೆಯಲ್ಲಿ ಸಮಾನ ಪರಿಶ್ರಮ ವಹಿಸಿದ್ದ ಡಿ.ಕೆ.ಶಿವಕುಮಾರ್ ಅವರಿಗೆ ಅವಕಾಶದ ಹಾದಿ ತೆರೆದಿದ್ದಾರೆ.

ಭಾರೀ ಸಂಚಲನ ಸೃಷ್ಟಿಸಿದ ಬೆಂಗಳೂರು–ಬಳ್ಳಾರಿ ಪಾದಯಾತ್ರೆ



2008ರಲ್ಲಿ ವಿಧಾನಸಭೆ ಕ್ಷೇತ್ರಗಳ ಮರುವಿಂಗಡಣೆ ಆದಾಗ ವರುಣಾ ಕ್ಷೇತ್ರ ಹೊಸದಾಗಿ ರಚನೆ ಆಯಿತು. ಆ ಕ್ಷೇತ್ರದಿಂದ ಸಿದ್ದರಾಮಯ್ಯ ಕಾಂಗ್ರೆಸ್ ಶಾಸಕರಾಗಿ ವಿಧಾನಸಭೆ ಪ್ರವೇಶಿಸಿದರು. ಬಳಿಕ ಅವರು ವಿಧಾನಸಭೆ ಪ್ರತಿಪಕ್ಷ ನಾಯಕ ರಾದರು. ಆಗ ಸಿದ್ದರಾಮಯ್ಯ ಬಳ್ಳಾರಿಯ ಗಣಿ–ಧಣಿಗಳ ವಿರುದ್ಧ ರಣಕಹಳೆ ಮೊಳಗಿಸಿ ಬೆಂಗಳೂರಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಿದ್ದು, ರಾಜ್ಯ ರಾಜಕೀಯದಲ್ಲಿ ಹೊಸ ಸಂಚಲನವನ್ನೇ ಸೃಷ್ಟಿಸಿಬಿಟ್ಟಿತು.

ಪೊಲೀಸರ ಲಾಠಿ ಏಟು ತಿಂದಿದ್ದರು...

ಕಾಲೇಜು ದಿನಗಳಲ್ಲಿ ಸಾಮಾಜಿಕ ಚಳವಳಿಗಳಲ್ಲಿ ಭಾಗವಹಿಸುತ್ತಿದ್ದ ಸಿದ್ದರಾಮಯ್ಯನವರು, 1971 ಇಂದಿರಾಗಾಂಧಿ ಅವರು ಮೈಸೂರಿನ ಸಾರ್ವಜನಿಕ ಸಭೆಗೆ ಆಗಮಿಸಿದ್ದ ವೇಳೆ ಕಪ್ಪು ಬಾವುಟ ಪ್ರದರ್ಶಿಸಿದರು. ಕಡೇ ಗಳಿಗೆಯಲ್ಲಿ ಸ್ನೇಹಿತರೆಲ್ಲಾ ಕೈಕೊಟ್ಟಾಗ ಸಿದ್ದರಾಮಯ್ಯ ಹಾಗೂ ಕಾಡಯ್ಯ ಮಾತ್ರ ಇಂದಿರಾಗಾಂಧಿ ಅವರಿಗೆ ಕಪ್ಪು ಬಾವುಟ ತೋರಿಸಿದಾಗ ಪೊಲೀಸರು ಇಬ್ಬರಿಗೂ ಲಾಠಿ ರುಚಿ ತೋರಿಸಿದ್ದರಂತೆ. ಈ ವಿಚಾರವನ್ನು ಸಿದ್ದರಾಮಯ್ಯನವರೇ ಹಲವು ಬಾರಿ ಸ್ಮರಿಸಿಕೊಂಡಿದ್ದಾರೆ. ಅಂದು ಇಂದಿರಾಗಾಂಧಿ ಅವರನ್ನು ವಿರೋಧಿಸಲು ಮುಂದಾಗಿದ್ದ ಸಿದ್ದರಾಮಯ್ಯ ಅವರು ಅದೇ ಕಾಂಗ್ರೆಸ್ ಪಕ್ಷ ಸೇರಿ 2 ಬಾರಿ ಮುಖ್ಯಮಂತ್ರಿಯಾದರು.

■ ಎಸ್. ಬಿ. ದೇವರಾಜ

ಕೇರಳದ ಮಾಜಿ ಸಿಎಂ ಪಿಣರಾಯಿ ವಿಜಯನ್ ವಿರುದ್ಧ ಇಡಿ ದಾಳಿ ಖಂಡಿಸಿ ಸಿಪಿಐ (ಎಂ) ಪ್ರತಿಭಟನೆ

ಮೈಸೂರು,ಮೇ 28(ಪಿಎಂ)– ಕೇರಳದ ಮಾಜಿ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ವಿರುದ್ಧ ಇಡಿ ದಾಳಿ ನಡೆಸಿರುವುದನ್ನು ಖಂಡಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಮೈಸೂರು ಜಿಲ್ಲಾ ಸಮಿತಿ ವತಿಯಿಂದ ಗುರುವಾರ ಪ್ರತಿಭಟನೆ ನಡೆಸಲಾಯಿತು.



ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಗುರುವಾರ ಸಿಪಿಐ (ಎಂ) ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಸಿಪಿಐ (ಎಂ) ಪಾಲಿಟ್ ಬ್ಯುರೊ ಸದಸ್ಯರೂ ಆದ ಪಿಣರಾಯಿ ವಿಜಯನ್ ಅವರ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ ನಡೆಸಿದ ದಾಳಿ ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ದಾಳಿಯು ರಾಜಕೀಯ ಪ್ರೇರಿತ ಮತ್ತು ದ್ವೇಷದ ರಾಜಕಾರಣದ ಪರಮಾವಧಿಯಾಗಿದೆ. ಎಕ್ಸಾಲಾಜಿಕ್ ಪ್ರಕರಣಕ್ಕೂ ಪಿಣರಾಯಿ ವಿಜಯನ್ ಅವರಿಗೂ ಯಾವುದೇ ಸಂಬಂಧವಿಲ್ಲ ಎಂದು ನ್ಯಾಯಾಲಯಗಳು ಪದೇ ಪದೇ ಅವಲೋಕಿಸಿವೆ. ಆದರೂ ಅವರ ವಿರುದ್ಧದ ರಾಜಕೀಯ ಬೇಟೆ ಅವಿರತವಾಗಿ ಮುಂದುವರಿದಿದೆ. ಈಗ ಅವರು ವೀಣಾ ಅವರ ತಂದೆ ಎಂಬ ಒಂದೇ ಕಾರಣಕ್ಕಾಗಿ ಅವರನ್ನು ಗುರಿ ಮಾಡಲಾಗುತ್ತಿದೆ ಎಂದು ಕಿಡಿಕಾರಿದರು.

ಕೇರಳದ ಮುಖ್ಯಮಂತ್ರಿ ವಿ.ಡಿ.ಸತೀಶನ್ ಅವರು ದೆಹಲಿಯಲ್ಲಿ ಪ್ರಧಾನಮಂತ್ರಿಯವರನ್ನು ಭೇಟಿ ಮಾಡಿದ ತಕ್ಷಣವೇ ಇಂತಹದೊಂದು ಕ್ರಮ ಜರುಗಿರುವುದು ಹಲವು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಸಿಎಂಆರ್‌ಎಲ್ ಡೈರಿಯಲ್ಲಿ ಯಾರ ಹೆಸರು ಬಂದಿವೆ ಎಂದು ವರದಿಯಾಗಿದೆಯೋ, ಅಂತಹ ಹಲವು ವ್ಯಕ್ತಿಗಳು ಇಂದಿಗೂ ರಾಜ್ಯ ಸರ್ಕಾರದಲ್ಲಿ ಪ್ರಮುಖ ಹುದ್ದೆಗಳಲ್ಲಿದ್ದಾರೆ. ಆದರೆ ಅವರೆಲ್ಲರನ್ನೂ ಬಿಟ್ಟು ಕೇವಲ ಪಿಣರಾಯಿ ವಿಜಯನ್ ಅವರನ್ನು ನಿರಂತರವಾಗಿ ಗುರಿ ಮಾಡುತ್ತಿರುವುದು ರಾಜಕೀಯ ದ್ವೇಷವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಸಿಪಿಐ (ಎಂ) ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ, ಜಿಲ್ಲಾ ಸಮಿತಿ ಸದಸ್ಯರಾದ ಜಿ.ಜಯರಾಂ, ಎನ್. ವಿಜಯ್ ಕುಮಾರ್, ಶಾಕುಂತಲ, ಸ್ಥಳೀಯ ಸಮಿತಿ ಕಾರ್ಯದರ್ಶಿ ಎನ್. ಸುಬ್ರಹ್ಮಣ್ಯ, ಸದಸ್ಯರಾದ ರಾಜೇಂದ್ರ, ಅಣ್ಣಪ್ಪ, ಬಸವಯ್ಯ, ಶಶಿಕುಮಾರ್, ಬೀರೇಶ್ವರ್, ಬಲರಾಂ, ಬಾಲಾಜಿರಾವ್, ರಘು ಪೂಜಾರಿ, ಈಶ್ವರ್, ಸೋಮಶಂಕರ್, ಶ್ರೀಧರ್, ಆರ್.ಸುಬ್ರಹ್ಮಣ್ಯ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಸಿದ್ದರಾಮಯ್ಯ ರಾಜೀನಾಮೆ: ಅಭಿಮಾನಿ ಆತ್ಮಹತ್ಯೆ ಯತ್ನ

ಯಾದಗಿರಿ: ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ್ದನ್ನು ವಿರೋಧಿಸಿ ಯಾದಗಿರಿಯಲ್ಲಿ ಅಭಿಮಾನಿಗಳು ಪ್ರತಿಭಟನೆ ನಡೆಸಿದ್ದಾರೆ. ಈ ವೇಳೆ ಅಭಿಮಾನಿಯೋರ್ವ ವಿಷದ ಬಾಟಲಿ ಹಿಡಿದು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ನಡೆದಿದೆ. ಯಾದಗಿರಿಯ ಸುಭಾಷ್ ವೃತ್ತದಲ್ಲಿ ನೂರಾರು ಅಭಿಮಾನಿಗಳು ಸಿದ್ದರಾಮಯ್ಯ ಪರವಾಗಿ ಘೋಷಣೆ ಕೂಗುತ್ತಾ ಬೃಹತ್ ಪ್ರತಿಭಟನೆ ನಡೆಸಿದ್ದಾರೆ. ಈ ವೇಳೆ ಭೀಮು ಪೂಜಾರಿ ಎಂಬ ಅಭಿಮಾನಿ ಯೊಬ್ಬರು ಸಿದ್ದರಾಮಯ್ಯ ರಾಜೀನಾಮೆ ನೀಡಿದರೆ ನನ್ನ ಸಾವಿಗೆ ಕಾಂಗ್ರೆಸ್ ಹೈಕಮಾಂಡ್ ನಾಯಕರು ಕಾರಣರಾಗುತ್ತಾರೆಂದು ಹೇಳಿ, ಸಾರ್ವಜನಿಕರ ಎದುರೇ ಕ್ರಿಮಿನಾಶಕದ ಬಾಟಲಿ ಹಿಡಿದು ಆತ್ಮಹತ್ಯೆಗೆ ಯತ್ನಿಸಿದ್ದಾರೆ.


ಕೂಡಲೇ ಸ್ಥಳದಲ್ಲಿಯೇ ಇದ್ದ ಇತರೆ ಪ್ರತಿಭಟನಾಕಾರರು ಹಾಗೂ ಸ್ಥಳದಲ್ಲಿದ್ದ ಪೊಲೀಸರು ತಕ್ಷಣವೇ ತಡೆದು, ಬಾಟಲಿಯನ್ನು ವಶಕ್ಕೆ ಪಡೆದಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಲ್ಲಿ ಬಕ್ರೀದ್ ಹಬ್ಬ ಅರ್ಥಪೂರ್ಣ ಆಚರಣೆ

ತಿಲಕ್‌ನಗರದ ಈದ್ಗಾ ಮೈದಾನದಲ್ಲಿ ಭಕ್ತಿ-ಭಾವದ ಸಾಮೂಹಿಕ ಪ್ರಾರ್ಥನೆ

- ತ್ಯಾಗ-ಬಲಿದಾನದ ಸಂಕೇತವಾದ ಹಬ್ಬ
- ನಗರದ ಎಲ್ಲಾ ಮಸೀದಿಗಳಲ್ಲಿ ಪ್ರಾರ್ಥನೆ
- ಸೂಕ್ಷ್ಮ ಸ್ಥಳಗಳಲ್ಲಿ ಪೊಲೀಸ್ ಬಂದೋಬಸ್ತ್





ಮೈಸೂರಿನ ತಿಲಕ್ ನಗರದ ಈದ್ಗಾ ಮೈದಾನದಲ್ಲಿ ಗುರುವಾರ ಮೈಸೂರಿನ ಸರ್ ಖಾಜಿ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಶರೀಫ್ ಅವರು ಸಾಮೂಹಿಕ ಪ್ರಾರ್ಥನೆ ವೇಳೆ ದೇಶ ಪ್ರೇಮ ಹಾಗೂ ಭಾವೈಕ್ಯತೆಯ ಸಂದೇಶ ನೀಡಿದರು (ಎಡಚಿತ್ರ). ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆಯಲ್ಲಿ ನಿರತರಾಗಿರುವ ಮುಸ್ಲಿಂ ಬಾಂಧವರನ್ನು (ಬಲಚಿತ್ರ) ಕಾಣಬಹುದು.

ಮೈಸೂರು, ಮೇ28(ಬಿಎಲ್‌ಯು)- ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಇಂದು ತ್ಯಾಗ ಹಾಗೂ ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಮೈಸೂರಿನ ಈದ್ಗಾ ಮೈದಾನದಲ್ಲಿ ಇಂದು ಸಾವಿರಾರು ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಬಕ್ರೀದ್ ಮುಸ್ಲಿಂರ ಪ್ರಮುಖ ಹಬ್ಬಗಳಲ್ಲಿ ಒಂದಾಗಿದ್ದು, ತ್ಯಾಗ ಹಾಗೂ ಬಲಿದಾನದ ಸಂಕೇತವಾಗಿ ಈ ಹಬ್ಬವನ್ನು ಆಚರಣೆ ಮಾಡಲಾಗುತ್ತದೆ. ಮುಸ್ಲಿಂರು ಮಾತ್ರವಲ್ಲದೆ ವಿವಿಧ ಧರ್ಮಿಯರನ್ನು ಮನೆಗೆ ಕರೆದು ಹಬ್ಬದ ರುಚಿ ರುಚಿಯಾದ ಊಟ ಬಡಿಸಿ ಭಾವೈಕ್ಯತೆಯಿಂದ ಕೂಡ ಈ ಹಬ್ಬದ ಆಚರಣೆ ಮಾಡಲಾಗುತ್ತದೆ. ಮೈಸೂರಿನ ತಿಲಕ್ ನಗರದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಸಮುದಾಯದವರು ಇಂದು ಬೆಳಿಗ್ಗೆ 9 ಗಂಟೆಗೆ ಸಮಾವೇಶಗೊಂಡಿದ್ದರು. ಈ ವೇಳೆ ಮೈಸೂರಿನ ಸರ್ ಖಾಜಿ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್ ಅವರ ನೇತೃತ್ವದಲ್ಲಿ ಸಾವಿರಾರು ಮುಸ್ಲಿಂ ಬಾಂಧವರು ಪ್ರಾರ್ಥನೆ ಸಲ್ಲಿಸಿದರು. ಈ ವೇಳೆ ಬಕ್ರೀದ್ ಹಬ್ಬದ ಧಾರ್ಮಿಕ ಹಿನ್ನೆಲೆಯನ್ನು ಸರ್ ಖಾಜಿ ಅವರು ಸವಿವರವಾಗಿ ವಿವರಿಸಿದರು.

ಆರ್ಥಿಕವಾಗಿ ಸದೃಢವಾಗಿ ಇರುವವರು ಕುರಿಗಳನ್ನು ಬಲಿ ಕೊಟ್ಟು, ದಾನ ಮಾಡಬೇಕೆಂದು ಸೂಚಿಸಿದ ಸರ್ ಖಾಜಿ ಅವರು, ವಿವಿಧ ಧರ್ಮದ ಜನರನ್ನು ಪ್ರೀತಿಸುವುದರ ಮೂಲಕ ಕೋಮು ಸೌಹಾರ್ದತೆ ಕಾಪಾಡಬೇಕೆಂದು ಭಾವೈಕ್ಯತೆಯ ಸಂದೇಶ ಸಾರಿದರು. ಪ್ರತಿಯೊಬ್ಬರು ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಹಾಗೂ ದೇಶದ ಕಾನೂನನ್ನು ಪಾಲಿಸುವಂತೆ ಸಲಹೆ ನೀಡಿದರು. ದೇಶದ ಶಾಂತಿ ಮತ್ತು ಕಲ್ಯಾಣಕ್ಕಾಗಿ ಪ್ರಾರ್ಥಿಸಿದ ಸರ್ ಖಾಜಿ ಅವರು ಪ್ರತಿ ಯೊಬ್ಬರಿಗೂ ಹಬ್ಬದ ಶುಭಾಶಯ ತಿಳಿಸಿದರು.

ತಿಲಕ್‌ನಗರದ ಈದ್ಗಾ ಮೈದಾನದಲ್ಲಿ ಮಾತ್ರವಲ್ಲದೆ ರಾಜೀವ್‌ನಗರ, ಗೌಸಿಯಾ ನಗರದ, ಉದಯಗಿರಿ ಸೇರಿದಂತೆ ನಗರದ ವಿವಿಧ ಪ್ರಾರ್ಥನಾ ಮಂದಿರಗಳಲ್ಲಿ ಇಂದು ಬೆಳಿಗ್ಗೆ 6.15 ಗಂಟೆಗೆ ಪ್ರಾರ್ಥನೆ ಸಲ್ಲಿಸಲಾಯಿತು.

ಶಾಸಕ ತನ್ವೀರ್ ಸೇಠ್ ಅವರು ಇರ್ವಿನ್ ರಸ್ತೆಯ ಮಸ್ಜೀದ್-ಇ-ಕಚ್ಚಿ ಮೆನನ್‌ನಲ್ಲಿ ಪ್ರಾರ್ಥನೆ ಸಲ್ಲಿಸಿದರು. ನಗರದ ಪ್ರಸಿದ್ಧ ವೈದ್ಯರೂ ಆದ 'ಸ್ಟಾರ್ ಆಫ್ ಮೈಸೂರ್' ಅಂಕಣಕಾರ ಡಾ.ಕೆ. ಜಾವೀದ್ ನಯೀಮ್, ಮೈಸೂರು ಜಿಲ್ಲಾ ವಕ್ಫ್ ಸಲಹಾ ಸಮಿತಿ ಅಧ್ಯಕ್ಷ ಅಜೀಜ್ ಉಲ್ಲಾ ಅಜ್ಜು, ವಕ್ಫ್ ಅಧಿಕಾರಿ ಮೊಹಮ್ಮದ್ ಮುಸ್ತಾಕ್ ಅಹಮ್ಮದ್, ಮಾಜಿ ಕಾರ್ಪೊರೇಟರ್ ಸುಹೇಲ್ ಬೇಗ್, ಮುಸ್ಲಿಂ ಸಹಕಾರ ಬ್ಯಾಂಕ್ ನಿರ್ದೇಶಕ ಮೊಹಮ್ಮದ್ ತಂಝೀಲ್ ಫೈಜಾನ್, ಜಮೀಲ್ ಅಹ್ಮದ್ ಅಶ್ರಫಿ, ಮೊಹಮ್ಮದ್ ಮುಮ್ತಾಜ್ ಅಹ್ಮದ್, ಶಬ್ಬೀರ್ ಸೈಯಿದ್, ನಾಸೀರುದ್ದೀನ್ ಬಾಬು, ಫಿಯಾಜ್ ಪಾಷ ಹಾಗೂ ಇತರರು ಈದ್ಗಾ ಮೈದಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು. ಈ ವೇಳೆ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಸೇರಿದಂತೆ ಹಲವರು ಮುಸ್ಲಿಂ ಸಮುದಾಯದವರಿಗೆ ಹಬ್ಬದ ಶುಭಾಶಯ ಕೋರಿದರು.

ಡಯಾಲಿಸಿಸ್ ರೋಗಿಗಳಿಗೆ ಆರ್ಥಿಕ ಸಹಾಯ ಮಾಡಲು ಮಸ್ಜೀದ್ ಒನ್ ಮೂಮೆಂಟ್‌ನವರು ಈದ್ಗಾ ಮೈದಾನದಲ್ಲಿ ದೇಣಿಗೆ ಸಂಗ್ರಹಿಸಿದರು.

ಪ್ರಾರ್ಥನೆ ಮುಗಿದ ನಂತರ ಮುಸ್ಲಿಂ ಬಾಂಧವರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ತರುವಾಯ ಮನೆಗೆ ಹೋಗಿ ಕುರಿ ಮಾಂಸವನ್ನು ತ್ಯಾಗ ಮಾಡಿದರು.

ಒಂದು ಭಾಗವನ್ನು ಸಂಬಂಧಿಕರಿಗೆ, ಮತ್ತೊಂದು ಬಾಗವನ್ನು ಬಡವರು, ನಿರ್ಗತಿಕರು ಹಾಗೂ ಇನ್ನೊಂದು ಭಾಗದ ಕುರಿ ಮಾಂಸವನ್ನು ತಮಗಾಗಿ ಇಟ್ಟುಕೊಂಡು ರುಚಿ ರುಚಿಯಾದ ಆಹಾರ ತಯಾರಿಸಿ ಸವಿದರು.

ಯಾವುದೇ ಅಹಿತಕರ ಘಟನೆಗೆ ಅವಕಾಶ ಆಗದಂತೆ ಈದ್ಗಾ ಮೈದಾನ, ನಗರದ ವಿವಿಧೆಡೆ ಇರುವ ಮಸೀದಿಗಳು ಸೇರಿದಂತೆ ನಗರದ ಸೂಕ್ಷ್ಮ ಸ್ಥಳಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಈದ್ಗಾ ಮೈದಾನದ ಬಳಿ ಸಂಚಾರ ದಟ್ಟಣೆ ನಿಯಂತ್ರಿಸಲು ಸಂಚಾರಿ ಪೊಲೀಸರು ಮೈದಾನದ ಸುತ್ತಲಿನ ರಸ್ತೆಗಳಿಗೆ ಬ್ಯಾರಿಕೇಡ್ ಅಳವಡಿಸಿ ವಾಹನ ಸಂಚಾರ ನಿರ್ಬಂಧಿಸಿದರು.

ಪ್ರಾಣಿಗಳ ತ್ಯಾಜ್ಯ ಸಂಗ್ರಹ ಹಾಗೂ ವಿಲೇವಾರಿ ಮಾಡಲು ನಗರದ ಪ್ರಮುಖ 25 ಸ್ಥಳಗಳಲ್ಲಿ ಪ್ರತ್ಯೇಕ ವಾಹನಗಳನ್ನು ನಿಯೋಜಿಸಲಾಗಿತ್ತು. ಈ ಮೂಲಕ ಸ್ವಚ್ಛತೆ ಕಾಪಾಡಲು ನಗರ ಪಾಲಿಕೆ ಎಲ್ಲಾ ರೀತಿಯ ಕ್ರಮ ಕೈಗೊಂಡಿತ್ತು.

ಜಯಪುರದಲ್ಲಿ ಭಕ್ತಿಭಾವದ ಬಕ್ರೀದ್ ಆಚರಣೆ...



ಮೈಸೂರು ತಾಲೂಕಿನ ಜಯಪುರ ಗ್ರಾಮದಲ್ಲಿ ಮುಸಲ್ಮಾನ ಬಾಂಧವರು ಗುರುವಾರ ಬಕ್ರೀದ್ ಹಬ್ಬದ ಪ್ರಯುಕ್ತ ಮಸೀದಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿ, ನಂತರ ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಮೇಕೆದಾಟು ವಿಚಾರದಲ್ಲಿ ಪ್ರಧಾನಿ ಮೋದಿ ಮಧ್ಯ ಪ್ರವೇಶಿಸಲಿ

ಕಾವೇರಿ ಕ್ರಿಯಾ ಸಮಿತಿ ಗೌರವಾಧ್ಯಕ್ಷ ಸಿ.ಎನ್.ಮಂಜೇಗೌಡ ಆಗ್ರಹ

ಮೈಸೂರು, ಮೇ28(ಜಿಎ)-ಮೇಕೆದಾಟು ಯೋಜನೆಯ ವಿಚಾರವಾಗಿ ಪ್ರಧಾನಿ ಮೋದಿ ಅವರು ಮಧ್ಯಪ್ರವೇಶ ಮಾಡಿ, ರಾಜ್ಯಕ್ಕೆ ನ್ಯಾಯ ಒದಗಿಸಬೇಕು ಎಂದು ಕಾವೇರಿ ಕ್ರಿಯಾ ಸಮಿತಿ ಗೌರವಾಧ್ಯಕ್ಷ ಹಾಗೂ ವಿಧಾನಪರಿಷತ್ ಸದಸ್ಯರೂ ಆದ ಸಿ.ಎನ್.ಮಂಜೇಗೌಡ ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್, ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ, ಮೇಕೆದಾಟು ಯೋಜನೆಗೆ ಅನುಮತಿ ನೀಡಬಾರದು ಎಂದು ಆಗ್ರಹಿಸಿರುವುದು ಸರಿಯಲ್ಲ ಎಂದರು.

ಮೇಕೆದಾಟು ಯೋಜನೆಯಿಂದ ಎರಡು ರಾಜ್ಯಗಳಿಗೆ ಅನುಕೂಲವಾಗಲಿದೆ. ಈ ಹಿನ್ನೆಲೆಯಲ್ಲಿ ಪ್ರಧಾನ ಮಂತ್ರಿಗಳು ಈ ವಿಚಾರವಾಗಿ ಮಧ್ಯಸ್ಥಿಕೆ ವಹಿಸಿ, ಮೇಕೆದಾಟುವಿನಲ್ಲಿ ಅಣೆಕಟ್ಟೆ ಕಟ್ಟಲು ಅವಕಾಶ ಕೊಡಿಸಬೇಕು. ಕಾವೇರಿ ಹುಟ್ಟುವುದು ಕೊಡಗಿನಲ್ಲಿ. ಇಲ್ಲಿನ ನೀರು ಇಲ್ಲಿಗೆ ಸಲ್ಲಬೇಕು. ನೀರು ವ್ಯರ್ಥವಾಗಬಾರದು ಎಂಬ ಉದ್ದೇಶದಿಂದ ಅಣೆಕಟ್ಟು ಕಟ್ಟಲಾಗುತ್ತಿದೆ. ಇದರಿಂದ ತಮಿಳುನಾಡಿಗೆ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂದು ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿ ಅಧ್ಯಕ್ಷ ಎಸ್.ಜಯಪ್ರಕಾಶ್(ಜೆಪಿ) ಮಾತನಾಡಿದರು.

ರಾಜಕೀಯ ಪಕ್ಷಗಳ ಕಿತ್ತಾಟದಿಂದ ರಾಜ್ಯದಲ್ಲಿ ಕಾವೇರಿ ವಿವಾದ ಇಂದಿಗೂ ಮುಂದುವರೆದಿದೆ. ಆದರೆ, ತಮಿಳುನಾಡಿನಲ್ಲಿ ಜಲ, ನೆಲ, ಭಾಷೆಯ ವಿಷಯ ಬಂದಾಗ ಪಕ್ಷಭೇದ ಮರೆತು ಎಲ್ಲಾ ಪಕ್ಷದವರು ಒಂದಾಗುತ್ತಾರೆ. ಆದರೆ, ನಮ್ಮಲ್ಲಿ ಒಗ್ಗಟ್ಟಿನ ಕೊರತೆ ಕಾಣುತ್ತಿದೆ. ಇದನ್ನು ಬಿಟ್ಟು ಪಕ್ಷಾತೀತವಾಗಿ ಮೋದಿಯವರನ್ನು ಭೇಟಿ ಮಾಡಿ ಕಾವೇರಿ ನೀರಿನ ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದ ಅವರು, ತಮಿಳುನಾಡಿನಲ್ಲಿ ಯಾವುದೇ ಪಕ್ಷ ಅಧಿಕಾರಕ್ಕೆ ಬಂದರೂ, ಕಾವೇರಿ ನೀರಿನ ವಿಚಾರವಾಗಿ ಧ್ವನಿ ಎತ್ತುತ್ತಿವೆ. ಅದೇ ರೀತಿ ನೂತನ ಸಿಎಂ ಜೋಸೆಫ್ ವಿಜಯ್ ಮೇಕೆದಾಟು ವಿಚಾರವಾಗಿ ಧ್ವನಿ ಎತ್ತಿದ್ದಾರೆ ಎಂದರು.

ಶೀಘ್ರದಲ್ಲಿಯೇ ರಾಷ್ಟ್ರಪತಿ, ಪ್ರಧಾನಿ, ಕೇಂದ್ರ ನೀರಾವರಿ ಮಂತ್ರಿಗಳನ್ನು ಕಾವೇರಿ ಕ್ರಿಯಾ ಸಮಿತಿ ನಿಯೋಗದಿಂದ ಭೇಟಿ ಮಾಡಿ, ಮೇಕೆದಾಟು ಯೋಜನೆಗೆ ನಿರ್ಮಾಣಕ್ಕೆ ಅನುಮತಿ ಕೊಡಿಸುವಂತೆ ಮನವಿ ಮಾಡುತ್ತೇವೆ ಎಂದರು.

ಸಮಿತಿ ಅಧ್ಯಕ್ಷ ಎಸ್.ಜಯಪ್ರಕಾಶ್ (ಜೆಪಿ) ಮಾತನಾಡಿ, ತಮಿಳುನಾಡು ನೂತನ ಸಿಎಂ ಜೋಸೆಫ್ ವಿಜಯ್ ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಿ ಮೇಕೆದಾಟು ಯೋಜನೆ ಕೈ ಬಿಡುವಂತೆ ಮನವಿ ಸಲ್ಲಿಸಿದ್ದಾರೆ. ಇದಕ್ಕೂ ಮೊದಲು ವಿಜಯ್ ಮೇಕೆದಾಟು ಯೋಜನೆಯ ವಿಚಾರವನ್ನು ಸರಿಯಾಗಿ ಅರಿಯಲಿ ಎಂದರು.

ಮೇಕೆದಾಟು ಯೋಜನೆ ಆರಂಭಿಸುವಂತೆ ರಾಜ್ಯ ಸರ್ಕಾರವು, ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು. ಈ ಯೋಜನೆಯಿಂದ ರೈತರಿಗೆ ಹಾಗೂ ಜನರಿಗೆ ಸಾಕಷ್ಟು ಅನುಕೂಲವಾಗಲಿದೆ. ಈ ಯೋಜನೆ ಕೈ ಬಿಟ್ಟರೆ, ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕಾವೇರಿ ಕ್ರಿಯಾ ಸಮಿತಿ ಪ್ರಧಾನ ಸಂಚಾಲಕ ಮೂಗೂರು ನಂಜುಂಡಸ್ವಾಮಿ, ಕಾರ್ಯದರ್ಶಿ ಮೆಲ್ಲಹಳ್ಳಿ ಮಹದೇವಸ್ವಾಮಿ, ಎಂ.ಜೆ. ಸುರೇಶ್‌ಗೌಡ, ರೈತ ಶಿವಕುಮಾರ್, ರವೀಶ್, ಹನುಮಂತೇಗೌಡ, ಸ್ವಾಮಿಗೌಡ, ನಟಿ ಶುಭರಕ್ಷ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಪಾಲಿಕೆ ಬೇಜವಾಬ್ದಾರಿ ಕಾರ್ಯ ನಿರ್ವಹಣೆಗೆ ತಾಜಾ ಉದಾಹರಣೆ!



ಯಲ್ಲಮ್ಮ ಕಾಲೋನಿಯ ಮನೆ ಮುಂದೆ ನಿಂತಿದ್ದ ಕೊಳಚೆ ನೀರು ಹೊರಹಾಕಲು ರಸ್ತೆ ಮಧ್ಯದಲ್ಲಿ ಜೆಸಿಬಿಯಿಂದ ಅಗೆದಿರುವುದು.

ಮೈಸೂರು, ಮೇ 28(ಎಂಕೆ)- ಮೈಸೂರು ಮಹಾನಗರ ಪಾಲಿಕೆ ಬೇಕಾಬಿಟ್ಟಿ ಕೆಲಸಕ್ಕೆ ಹೆಸರುವಾಸಿ ಎಂಬುದಕ್ಕೆ ಇದೊಂದು ತಾಜಾ ಉದಾಹರಣೆ

ಮೈಸೂರಿನ ವಾರ್ಡ್ ನಂ.8ರ ವ್ಯಾಪ್ತಿಯ ಬನ್ನಿಮಂಟಪ ಕೈಗಾರಿಕಾ ಪ್ರದೇಶಕ್ಕೆ ಹೊಂದಿಕೊಂಡಂತಿರುವ ಯಲ್ಲಮ್ಮ ಕಾಲೋನಿಯಲ್ಲಿ ಕಂಡ ಕಂಡಲ್ಲಿ ಕಸದ ರಾಶಿ, ಮನೆ ಮುಂದೆ ಶೇಖರಣೆಯಾಗುವ ಕೊಳಚೆ ನೀರು ಸೇರಿದಂತೆ ಇಲ್ಲಿನ ನಿವಾಸಿಗಳು ಅನುಭವಿಸುತ್ತಿರುವ ಕಷ್ಟಗಳ ಬಗ್ಗೆ ಕಣ್ಣಾರೆ ಕಂಡರೂ ಪಾಲಿಕೆ ಮತ್ತು ಕೊಳಗೇರಿ ಅಭಿವೃದ್ಧಿ ಮಂಡಳಿ ಅಧಿಕಾರಿಗಳು ತೀವ್ರ ನಿರ್ಲಕ್ಷ್ಯ ತೋರಿದ್ದಾರೆ.

ಮೇ 25ರ 'ಮೈಸೂರು ಮಿತ್ರ' ಸಂಚಿಕೆಯಲ್ಲಿ 'ಮೈಸೂರಿನ ಯಲ್ಲಮ್ಮ ಕಾಲೋನಿಯಲ್ಲಿ ನರಕ ದರ್ಶನ' ಶೀರ್ಷಿಕೆಯಡಿ ವರದಿ ಪ್ರಕಟಗೊಂಡ ಕೂಡಲೇ ತೋರ್ಪಡಿಕೆಗೆ ಒಂದು ಜೆಸಿಬಿ ಸಹಿತ ಇಡೀ ಯಲ್ಲಮ್ಮ ಕಾಲೋನಿ ಸುತ್ತು ಹಾಕಿದ ಪಾಲಿಕೆ ಮತ್ತು ಕೊಳಗೇರಿ ಅಭಿವೃದ್ಧಿ ಮಂಡಳಿ ಅಧಿಕಾರಿ-ಸಿಬ್ಬಂದಿ ಒಂದೇ ಒಂದು ಪ್ಲಾಸ್ಟಿಕ್ ಕವರ್ ಅನ್ನು ವಿಲೇವಾರಿ ಮಾಡದೆ ತೆರಳಿದ್ದಾರೆ.

ಅಂದು ಬೆಳಗ್ಗೆ 10 ಗಂಟೆ ಸುಮಾರಿಗೆ ಕಾಲೋನಿಗೆ ಭೇಟಿ ನೀಡಿದ ಅಧಿಕಾರಿಗಳು, ನರ್ಮ್ ಮನೆಗಳ ಮುಂದೆ ಶೇಖರಣೆಯಾಗಿದ್ದ ಕೊಳಚೆ ನೀರನ್ನು ಹೊರ ಹಾಕಲು ಜೆಸಿಬಿ ಮೂಲಕ ರಸ್ತೆಯ ಮಧ್ಯದಲ್ಲಿ ಸಣ್ಣದಾಗಿ ಮೋರಿ ತೆರೆದು ಕಾಲ್ಕಿತ್ತರೇ ಹೊರತು ಇಡೀ ಕಾಲೋನಿಯಲ್ಲಿ ಬಿದ್ದಿರುವ ಲೋಡ್‌ಗಟ್ಟಲೇ ಕಸ ವಿಲೇವಾರಿ ಮಾಡಿಲ್ಲ. ಸುತ್ತಲಿನ ಕೈಗಾರಿಕೆಗಳಿಂದ ಹೊರಬರುವ ಹೊಗೆ, ಧೂಳಿನ ಜೊತೆಗೆ ಕಸದ ರಾಶಿ, ಕೊಳಚೆ ನೀರಿನ ದುರ್ವಾಸನೆ ನಡುವೆ ಬದುಕು ಸವೆಸುತ್ತಿದ್ದೇವೆ. ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಎಷ್ಟೇ ಮನವಿಗಳನ್ನು ಮಾಡಿದರೂ ಯಾವುದೇ ಪ್ರಯೋಜನವಿಲ್ಲ. ಒಂದರ್ಥದಲ್ಲಿ ನಮ್ಮನ್ನು ಪ್ರಾಣಿಗಳಿಗಿಂತ ಕಡೆಯಾಗಿ ಕಾಣುತ್ತಾರೆ ಎಂದು ಯಲ್ಲಮ್ಮ ಕಾಲೋನಿ ನಿವಾಸಿಗಳು 'ಮೈಸೂರು ಮಿತ್ರ'ನಲ್ಲಿ ಅಳಲು ತೋಡಿಕೊಂಡಿದ್ದಾರೆ.

ಮೈಸೂರಿನ ಎಸ್‌ಎಂಟಿ ಆಸ್ಪತ್ರೆಯಲ್ಲಿ ವಿಶ್ವ ಋತುಸ್ರಾವ ನೈರ್ಮಲ್ಯ ದಿನಾಚರಣೆ

ಮೈಸೂರು, ಮೇ 28(ಎಂಕೆ)- 'ಮುಟ್ಟು ಪ್ರಕೃತಿಯ ನಿಯಮ, ಮುಜುಗರ ಬಿಡಿ ನೈರ್ಮಲ್ಯ ಕಾಪಾಡಿ' ಘೋಷವಾಕ್ಯದೊಂದಿಗೆ ಮೈಸೂರಿನ ಎಸ್‌ಎಂಟಿ (ಸೇಠ್ ಮೋಹನ್‌ದಾಸ್ ತುಳಸಿದಾಸ್ ತಾಯಿ ಮತ್ತು ಮಕ್ಕಳ ಆಸ್ಪತ್ರೆ) ಆಸ್ಪತ್ರೆಯಲ್ಲಿ ಗುರುವಾರ 'ವಿಶ್ವ ಋತುಸ್ರಾವ ನೈರ್ಮಲ್ಯ ದಿನ' ಆಚರಿಸಲಾಯಿತು.

ಜಿಲ್ಲಾಡಳಿತ, ಜಿಪಂ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಆಯೋಜಿಸಿದ್ದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಮುನೀಂದ್ರಮ್ಮ, ಗರ್ಭ ಸಂಬಂಧಿತ ಸೋಂಕು ಅಥವಾ ಕಾಯಿಲೆಗಳನ್ನು ತಡೆಗಟ್ಟಲು ಹೆಣ್ಣು ಮಕ್ಕಳಲ್ಲಿ ಋತುಸ್ರಾವದ ಕುರಿತ ಅರಿವು ಅತ್ಯಗತ್ಯವಾಗಿದೆ ಎಂದರು.



ಎಸ್‌ಎಂಟಿ ಆಸ್ಪತ್ರೆಯಲ್ಲಿ 'ವಿಶ್ವ ಋತುಸ್ರಾವ ನೈರ್ಮಲ್ಯ ದಿನ' ಆಚರಿಸಲಾಯಿತು.

ಮುಖ್ಯವಾಗಿ ಶಾಲಾ-ಕಾಲೇಜು ಹೆಣ್ಣು ಮಕ್ಕಳು ಇಡೀ ದಿನ ಒಂದೇ ಸ್ಯಾನಿಟರಿ ಪ್ಯಾಡ್ ಬಳಕೆ ಬದಲು ಮೂರರಿಂದ ನಾಲ್ಕು ಸ್ಯಾನಿಟರಿ ಪ್ಯಾಡ್ ಬಳಕೆ ಮಾಡಬೇಕು. ಬಳಕೆ ನಂತರ ಪ್ರತ್ಯೇಕವಾಗಿಟ್ಟು, ಕಸದ ಬುಟ್ಟಿಗೆ ಹಾಕುವುದು ಇಲ್ಲವೆ ಸುಟ್ಟು ಹಾಕಬೇಕು. ಹಾಗೆಯೇ ಗ್ರಾಮೀಣ ಭಾಗದಲ್ಲಿ ಬಟ್ಟೆ ಬಳಸುವ ಹೆಣ್ಣು ಮಕ್ಕಳು, ಬಟ್ಟೆಯನ್ನು ಶುಚಿಯಾಗಿಟ್ಟುಕೊಳ್ಳಬೇಕು. ಇದರಿಂದ ಹೆಣ್ಣು ಮಕ್ಕಳಲ್ಲಿ ಕಂಡುಬರಬಹುದಾದ ಸೋಂಕುಗಳನ್ನು ತಡೆಗಟ್ಟಬಹುದಾಗಿದೆ ಎಂದು ತಿಳಿಸಿದರು.

ಋತುಸ್ರಾವದ ಆರಂಭದಲ್ಲಿ ಶುಚಿತ್ವದ ಬಗ್ಗೆ ಹೆಣ್ಣು ಮಕ್ಕಳು ತಿಳಿದುಕೊಳ್ಳಬೇಕು. ಏನಾದರೂ ಸಮಸ್ಯೆಗಳು ಇದ್ದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇರುವ ಸ್ನೇಹ ಕ್ಲಿನಿಕ್‌ಗೆ ಸಂಪರ್ಕಿಸಿ ಅಗತ್ಯ ಸಲಹೆಗಳನ್ನು ಪಡೆದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಈ ವೇಳೆ ಎಸ್‌ಎಂಟಿ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಅನುರಾಧ, ಸ್ತ್ರೀರೋಗ ತಜ್ಞರಾದ ಡಾ.ತೇಜಸ್ವಿನಿ, ಡಾ.ಪಲ್ಲವಿ, ಡಾ.ನವೀನ್, ಮಕ್ಕಳ ತಜ್ಞೆ ಡಾ.ತೇಜಸ್ವಿನಿ ಆರೋಗ್ಯ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಬೈಕ್ ಮೇಲೆ ಕುಳಿತು ಕ್ರಿಕೆಟ್ ನೋಡುತ್ತಿದ್ದ ಯುವಕನಿಗೆ ಬಿಯರ್ ಬಾಟಲಿನಿಂದ ಹಲ್ಲೆ

ಮೈಸೂರು, ಮೇ28(ಜಿಎ)-ಕ್ರಿಕೆಟ್ ನೋಡಲು ಹೋಗಿದ್ದ ಯುವಕನಿಗೆ ಬಿಯರ್ ಬಾಟಲ್‌ನಿಂದ ಹಲ್ಲೆ ಮಾಡಿರುವ ಘಟನೆ ಎನ್.ಆರ್.ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದೆ.

ಎನ್.ಆರ್.ಮೊಹಲ್ಲಾದ ಗಾಂಧಿನಗರದ ಎಜೆ ಬ್ಲಾಕ್‌ನ ಯುವಕ ಮೇ 24ರಂದು ಕೆಲಸಕ್ಕೆ ಹೋಗಿ ಬಂದು ಮನೆಯಲ್ಲಿ ಬಟ್ಟೆ ಬದಲಿಸಿ, ಮಧ್ಯಾಹ್ನ 2 ಗಂಟೆಗೆ ಗಾಂಧಿನಗರದ ಸಿದ್ಧಾರ್ಥ ಶಾಲೆಯ ಮುಂಭಾಗದ ಪಾರ್ಕ್ ಗ್ರೌಂಡ್‌ನಲ್ಲಿ ಹುಡುಗರು ಕ್ರಿಕೆಟ್ ಆಡುವುದನ್ನು ನೋಡೋಣ ಎಂದು ಪಾರ್ಕ್ ಬಳಿ ಬೈಕ್ ನಿಲ್ಲಿಸಿ, ಬೈಕ್ ಮೇಲೆ ಕುಳಿತಿದ್ದಾನೆ.

ಈ ವೇಳೆ ಪಾರ್ಕ್‌ನ ಗ್ರಿಲ್ ಬಳಿ ಮಧ್ಯಪಾನ ಮಾಡುತ್ತಿದ್ದ ಅಪರಿಚಿತರು ಈ ಯುವಕನನ್ನು ನೋಡಿದ ಓರ್ವ ಎಲ್ಲೋ ನಿನ್ನ ಮನೆ ಇರುವುದು ಎಂದು ಕೇಳಿದ್ದಾನೆ. ಯುವಕ ಇಲ್ಲೆ ಮುಂದೆ ಇದೆ ಎಂದು ಹೇಳುವಷ್ಟರಲ್ಲಿ ಅಪರಿಚಿತ ವ್ಯಕ್ತಿಯು ಏಕಾಏಕಿ ಕೈನಲ್ಲಿದ್ದ ಬಿಯರ್ ಬಾಟಲ್‌ನಿಂದ ಯುವಕನ ತಲೆಗೆ ಹೊಡೆಯಲು ಮುಂದಾದಾಗ ಯುವಕ ತಕ್ಷಣ ತನ್ನ ಬಲಗೈಯನ್ನು ಅಡ್ಡ ನೀಡಲಾಗಿ ಬಾಟಲ್ ಯುವಕನ ಕೈಗೆ ಬಿದ್ದು ಗಾಯವಾಗಿದೆ. ನಂತರ ಯುವಕನ ಕೈಯಲ್ಲಿ ರಕ್ತ ಬರುತ್ತಿದ್ದಂತೆ ಇಬ್ಬರು ಅಪರಿಚಿತರು ಅಲ್ಲಿಂದ ಓಡಿ ಹೋಗಿದ್ದಾರೆ. ನಂತರ ಯುವಕ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಎನ್.ಆರ್. ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾನೆ.

ಇಂದು ಫೋನ್ ಇನ್ ಕಾರ್ಯಕ್ರಮ

ಮೈಸೂರು, ಮೇ 28-ಜೆಎಸ್‌ಎಸ್ ರೇಡಿಯೋ 91.2FM ಸಮುದಾಯ ಬಾನುಲಿ ಕೇಂದ್ರದ ವತಿಯಿಂದ ಸಾರ್ವಜನಿಕರಿಗಾಗಿ ವಿಶೇಷ ನೇರ ಸಂದರ್ಶನ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದ ವಿಷಯವಾಗಿ 'ಸಮಾಜ ಕಲ್ಯಾಣ ಇಲಾಖೆ ಸೇವಾ ಸೌಲಭ್ಯಗಳು' ಕುರಿತು ಚರ್ಚೆ ನಡೆಯಲಿದೆ. ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಎಂ.ರಂಗೇಗೌಡ ಭಾಗವಹಿಸಿ ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರ ನೀಡಲಿದ್ದಾರೆ. ಕಾರ್ಯಕ್ರಮವು 2026ರ ಮೇ 29ರಂದು ಬೆಳಿಗ್ಗೆ 11:30ರಿಂದ ಮಧ್ಯಾಹ್ನ 12:30ರವರೆಗೆ ನಡೆಯಲಿದೆ. ಕರೆಮಾಡುವ ಸಂಖ್ಯೆ: ಮೊ. 82967 25912, 0821-2546563.

ಮೈಸೂರು ವಾಸುದೇವಾಚಾರ್ಯರ 192ನೇ ಜನ್ಮದಿನೋತ್ಸವ

ಕಾರ್ಯಕ್ರಮಕ್ಕೆ ಸಂಸದ ಯದುವೀರ್ ಒಡೆಯರ್ ಚಾಲನೆ; ಶ್ರೀಯುತರ ಕೊಡುಗೆ ಸ್ಮರಣೆ

ಮೈಸೂರು,ಮೇ28(ಎಂಕೆ)-ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಸುಪ್ರಸಿದ್ಧ ವಾಗ್ಗೇಯಕಾರ ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯರ 192ನೇ ಜನ್ಮದಿನೋತ್ಸವ ಆಚರಿಸಲಾಯಿತು.

ಮೈಸೂರು ವಾಸುದೇವಾಚಾರ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಕಾರ್ಯಕ್ರಮ ಉದ್ಘಾಟಿಸಿದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಮೈಸೂರಿನಲ್ಲಿರುವ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ರಾಮಮಂದಿರದಲ್ಲಿ ಪಾರಂಪರಿಕ ಕಲೆ ಅಡಗಿದೆ. ದಸರಾ ಸಂದರ್ಭ ಸೇರಿದಂತೆ ನಿರಂತರವಾಗಿ ಸಂಗೀತ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಂಗೀತ ಕ್ಷೇತ್ರ ಮತ್ತು ಮೈಸೂರು ಸಂಗೀತ ಪರಂಪರೆ ಉಳಿಸುವ ನಿಟ್ಟಿನಲ್ಲಿ ಅಪಾರ ಕೊಡುಗೆ ನೀಡಲಾಗಿದೆ ಎಂದು ಸ್ಮರಿಸಿದರು.

ಮೈಸೂರಿನ ಬಹುತೇಕ ಸಂಗೀತ ವಿದ್ವಾಂಸರು, ಮೈಸೂರು ವಾಸುದೇವಾಚಾರ್ಯರ ಮಾರ್ಗದರ್ಶನ ಪಡೆದಿದ್ದಾರೆ. ಮೈಸೂರು ಅರಮನೆಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದ ಮೈಸೂರು ವಾಸುದೇವಾಚಾರ್ಯರು, ಕರ್ನಾಟಕ ಸಂಗೀತದ ಪ್ರಮುಖ ವಾಗ್ಗೇಯಕಾರರು. ವಾಗ್ಗೇಯಕಾರರಲ್ಲಿ ಮುಂಚೂಣಿಯಲ್ಲಿ ನಿಲ್ಲುವಂತಹ ಇವರು, ತ್ಯಾಗರಾಜರ ಶಿಷ್ಯಪರಂಪರೆಗೆ ಸೇರಿದ್ದಾರೆ ಎಂದರು.



ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರದಲ್ಲಿ ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯರ 192ನೇ ಜನ್ಮದಿನೋತ್ಸವ ಆಚರಿಸಲಾಯಿತು.

ರಾಮಮಂದಿರ ರಕ್ಷಣೆ: ಶ್ರೀ ಪ್ರಸನ್ನ ಸೀತಾರಾಮ ಮಂದಿರ ಮೈಸೂರಿನ ಪಾರಂಪರಿಕ ಕಟ್ಟಡಗಳಲ್ಲಿ ಒಂದಾಗಿದ್ದು, ಮೈಸೂರು ಶೈಲಿ ಅಪಾರ ಕಲಾಕೃತಿಗಳನ್ನು ಒಳಗೊಂಡಿದೆ. ಪಾರಂಪರಿಕ ವಾತಾವರಣವನ್ನು ಒಳಗೊಂಡಿರುವ ಈ ರಾಮಮಂದಿರ ಕಟ್ಟಡವನ್ನು ಸಂರಕ್ಷಣೆ ಮಾಡಲಾಗುವುದು. ಮುಂದಿನ ದಿನಗಳಲ್ಲಿ ಪ್ರಮೋದಾದೇವಿ ಒಡೆಯರ್ ಅವರನ್ನು ಇಲ್ಲಿಗೆ ಕರೆತರಲಿದ್ದು, ಅವರ ಮಾರ್ಗದರ್ಶನದೊಂದಿಗೆ ಆಧುನಿಕ ಮೈಸೂರು ಶೈಲಿಯಲ್ಲಿ ಪಾರಂಪರಿಕ ಕಟ್ಟಡಗಳನ್ನು ಉಳಿಸುವ ಕಾರ್ಯ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಸರ್ಕಾರಕ್ಕೆ ಅಭಿನಂದನೆಗಳು: ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯರ ಜಯಂತಿಯನ್ನು ಸರ್ಕಾರ ಆಚರಣೆ ಮಾಡಲು ಮುಂದಾಗಿರುವುದಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ. ಮೈಸೂರಿಗೆ ಯಾರೇ ಶ್ರೇಷ್ಠ ಸಂಗೀತಗಾರರು ಆಗಮಿಸಿದರು, ಮೈಸೂರು ವಾಸುದೇವಾಚಾರ್ಯರ ಮನೆಯಲ್ಲಿ ಒಂದೆರಡು ಕೃತಿಗಳನ್ನು ಹಾಡುತ್ತಿದ್ದರು. ಹಾಗಾಗಿ ಮೈಸೂರು ವಾಸುದೇವಾಚಾರ್ಯರು ಎಲ್ಲರಿಗೂ ಚಿರಪರಿಚಿತರಾಗಿದ್ದಾರೆ. ಮುಂದಿನ ವರ್ಷ ಮೈಸೂರು ಅರಮನೆಯಲ್ಲೇ ಮೈಸೂರು ವಾಸುದೇವಾಚಾರ್ಯರ ಜಯಂತಿ ಆಚರಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಈ ವೇಳೆ ಕನ್ನಡ-ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸುದರ್ಶನ್, ಕರ್ನಾಟಕ ಶಾಸ್ತ್ರೀಯ ಸಂಗೀತದ ಹಿರಿಯ ಕಲಾವಿದೆ ಟಿ.ಎಸ್.ಸತ್ಯವತಿ, ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರದ ಕಾರ್ಯದರ್ಶಿ ಲಕ್ಷ್ಮಿನಾರಾಯಣಬಾಬು ಇನ್ನಿತರರು ಉಪಸ್ಥಿತರಿದ್ದರು.

ಎಸ್.ಎಂ.ಕೃಷ್ಣ ಅವರಿಗೆ 'ಕರ್ನಾಟಕ ರತ್ನ' ಘೋಷಿಸಿ

ರಾಜ್ಯ ಸರ್ಕಾರಕ್ಕೆ ವಿಶ್ವ ಒಕ್ಕಲಿಗರ ಮಠಾಧೀಶ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಒತ್ತಾಯ



ಗಣ್ಯರು ಮದ್ದೂರು ತಾಲೂಕಿನ ಜನಪ್ರತಿನಿಧಿಗಳು ಹಾಗೂ ಶಿಕ್ಷಣ ಒಂದು ಮುನ್ನೋಟ ಗ್ರಂಥ ಬಿಡುಗಡೆಗೊಳಿಸಿದರು.

ಮದ್ದೂರು, ಮೇ 28– ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಅವಿಸ್ಮರಣೀಯ ಸಾಧನೆಗಳ ನೆನಪಿಗೆ ರಾಜ್ಯ ಸರ್ಕಾರ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ಘೋಷಣೆ ಮಾಡಬೇಕೆಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಒತ್ತಾಯಿಸಿದರು.

ನಗರದ ಮಹಿಳಾ ಸರ್ಕಾರಿ ಕಾಲೇಜು ಆವರಣದಲ್ಲಿ ಚುಂಚಶ್ರೀ ಗೆಳೆಯರ ಬಳಗ, ನಾಡಪ್ರಭು ಕೆಂಪೇಗೌಡ ಒಕ್ಕಲಿಗರ ಸಂಘ, ನಾಗರಿಕ ವೇದಿಕೆ ಮತ್ತು ಟೌನ್ ಕ್ಲಬ್ ವತಿಯಿಂದ ಆಯೋಜಿಸಿದ್ದ ಪದ್ಮಭೂಷಣ ಎಸ್.ಎಂ.ಕೃಷ್ಣ ಅವರ 94ನೇ ಜನ್ಮದಿನೋತ್ಸವ ಮತ್ತು ಎಸ್.ಎಂ.ಕೃಷ್ಣ ಆಡಳಿತ ಶ್ರೀ ಸೇವಾ ರತ್ನ ಪ್ರಶಸ್ತಿ ಪ್ರದಾನ ಮತ್ತು ಮದ್ದೂರು ತಾಲೂಕಿನ ಜನಪ್ರತಿನಿಧಿಗಳು ಹಾಗೂ ಶಿಕ್ಷಣ ಒಂದು ಮುನ್ನೋಟ ಎಂಬ ಗ್ರಂಥ ಬಿಡುಗಡೆ ಸಮಾರಂಭದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಅತ್ಯುನ್ನತ ಸಾಧನೆ ಮಾಡಿದ್ದು, ಅವರ ಸಾಧನೆ ಪರಿಗಣಿಸಿ ನವೆಂಬರ್ ತಿಂಗಳಲ್ಲಿ ಎಸ್.ಎಂ.ಕೃಷ್ಣ ಅವರಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ಘೋಷಿಸಲು ಶಾಸಕರುಗಳು, ಮುಖ್ಯಮಂತ್ರಿ ಹಾಗೂ ಸರ್ಕಾರದ ಮೇಲೆ ಒತ್ತಡ ಹಾಕಬೇಕೆಂದರು.

ಎಸ್.ಎಂ.ಕೃಷ್ಣ ಅವರ ಹಾದಿಯಲ್ಲಿ ಸಾಗುವ ಮೂಲಕ ಹಲವಾರು ಸಾಧನೆ ಮಾಡುತ್ತಿರುವ ಶಾಸಕ ಕೆ.ಎಂ. ಉದಯ್ ಅವರ ಕಾರ್ಯ ವೈಖರಿ ಶ್ಲಾಘನೀಯವಾಗಿದ್ದು, ಕಾಯಕಯೋಗಿ ಎಸ್.ಎಂ. ಕೃಷ್ಣ ಅವರ ಹೆಸರು ಚಿರಸ್ಥಾಯಿಯಾಗಿ ಉಳಿಯಲು ಶ್ರಮಿಸುತ್ತಿರುವ ಚುಂಚಶ್ರೀ ಗೆಳೆಯರ ಬಳಗದ ಕಾರ್ಯ ಅಪಾರ. ಮುಂದಿನ ದಿನಗಳಲ್ಲಿ ಶಾಸಕರು ಎಸ್.ಎಂ.ಕೃಷ್ಣ ಅವರ ಹೆಸರಲ್ಲಿ ನಿಧಿ ಸ್ಥಾಪಿಸಿ ಪ್ರತಿ ವರ್ಷವೂ ಕಾರ್ಯಕ್ರಮ ಆಯೋಜಿಸಬೇಕೆಂದು ಸಲಹೆ ನೀಡಿದರು.

ಕಾರ್ಯಕ್ರಮಕ್ಕೂ ಮುನ್ನಾ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪ ನಮನ ಸಲ್ಲಿಸಿದರು. ಇದೇ ವೇಳೆ ಶಾಸಕ ಕೆ.ಎಂ. ಉದಯ್ ಅವರಿಗೆ ಡಾ.ಎಸ್.ಎಂ.ಕೃಷ್ಣ ಆಡಳಿತ ಶ್ರೀಸೇವಾ ರತ್ನ ಪ್ರಶಸ್ತಿಯನ್ನು ಶಾಸಕ ದಿನೇಶ್ ಗೂಳಿಗೌಡ ಹಾಗೂ ಗಣ್ಯರು ಪ್ರದಾನ ಮಾಡಿದರು.

ಎಂಎಲ್‌ಸಿ ದಿನೇಶ್ ಗೂಳಿಗೌಡ ಮಾತನಾಡಿ, ಎಸ್.ಎಂ.ಕೃಷ್ಣ ಅವರು ತಮ್ಮ ಅಧಿಕಾರವಧಿಯಲ್ಲಿ ಜನಪರ ಯೋಜನೆಗಳ ಜಾರಿ ಸೇರಿದಂತೆ ಬೆಂಗಳೂರನ್ನು ಸಿಲಿಕಾನ್ ಸಿಟಿಯನ್ನಾಗಿ ಮಾಡಿ, ಆರ್ಥಿಕವಾಗಿ ಮುಂದುವರಿಯುವುದಕ್ಕೆ ಕಾರಣಕರ್ತರಾದರು. ಇಂದು ಅದರಿಂದ ಲಕ್ಷಾಂತರ ಜನಕ್ಕೆ ಉದ್ಯೋಗ ಸಿಕ್ಕಿ ಜೀವನ ನಡೆಸುತ್ತಿದ್ದಾರೆಂದು ಸ್ಮರಿಸಿದರು.

ಪುಸ್ತಕ ಲೋಕಾರ್ಪಣೆ: ಕರ್ನಾಟಕ ಸಂಘದ ಅಧ್ಯಕ್ಷ ಡಾ.ಬಿ.ಜಯಪ್ರಕಾಶ್‌ಗೌಡ ಅವರು ಮದ್ದೂರು ತಾಲೂಕಿನ ಜನಪ್ರತಿನಿಧಿಗಳು ಹಾಗೂ ಶಿಕ್ಷಣ ಒಂದು ಮುನ್ನೋಟ ಎಂಬ ಗ್ರಂಥವನ್ನು ಬಿಡುಗಡೆಗೊಳಿಸಿ ಮಾತನಾಡಿದರು. ಚುಂಚಶ್ರೀ ಗೆಳೆಯರ ಬಳಗದ ಅಧ್ಯಕ್ಷ ಡಾ.ಬಿ.ಕೃಷ್ಣ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಈ ವೇಳೆ ಮನ್‌ಮುಲ್ ಮಾಜಿ ಅಧ್ಯಕ್ಷ ಕದಲೂರು ರಾಮಕೃಷ್ಣ, ಜಿಪಂ ಮಾಜಿ ಅಧ್ಯಕ್ಷ ಸುರೇಶ್ ಕಂಠಿ, ನಾಡಪ್ರಭು ಕೆಂಪೇಗೌಡ ಒಕ್ಕಲಿಗರ ಸಂಘದ ಅಧ್ಯಕ್ಷ ವಿ.ಟಿ.ರವಿಕುಮಾರ್, ಸಾಹಿತಿ ತೈಲೂರು ವೆಂಕಟಕೃಷ್ಣ, ನಿವೃತ್ತ ಪ್ರಾಂಶುಪಾಲ ಎಸ್.ಬಿ.ಶಂಕರೇಗೌಡ, ರಾಣಿ ಐಶ್ವರ್ಯ ಡೆವಲಪರ್ಸ್ ಮಾಲೀಕ ಹಳ್ಳಿಕೆರೆ ಸತೀಶ್, ಮಹಿಳಾ ಸರ್ಕಾರಿ ಕಾಲೇಜು ಪ್ರಾಂಶುಪಾಲ ಸಿ.ರವಿ, ಕಾರ್ಯದರ್ಶಿ ಶಿವಲಿಂಗಯ್ಯ ಸೇರಿದಂತೆ ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಎಸ್.ಎಂ.ಕೃಷ್ಣ ಅವರು ಪ್ರಧಾನಿಯಾಗಿದ್ದರೆ ದೇಶದ ಗೌರವ ಮತ್ತು ಭವಿಷ್ಯಕ್ಕೆ ಮುನ್ನುಡಿ ಬರೆಯುತ್ತಿದ್ದರು. ಜೊತೆಗೆ 10 ವರ್ಷ ಮುಂದೆ ಅಭಿವೃದ್ಧಿ ಹೊಂದಿದ ದೇಶವಾಗಿ ಹೊರಹೊಮ್ಮುತ್ತಿತ್ತು. ಅವರ ಅಧಿಕಾರಾವಧಿಯಲ್ಲಿ ಕಾವೇರಿ ಸಮಸ್ಯೆ ವೀರಪ್ಪನ್ ಡಾ.ರಾಜಕುಮಾರ್ ಅಪಹರಣ, ಬರಗಾಲ ಇನ್ನಿತರ ಸಮಸ್ಯೆಗಳು ಕಂಡು ಬಂದರೂ ಯಾವುದೇ ಅಂಜಿಕೆಗೆ ಒಳಗಾಗದೆ ಸಮರ್ಥರವಾಗಿ ನಿಭಾಯಿಸಿದ ಕೀರ್ತಿ ಕೃಷ್ಣ ಅವರಿಗೆ ಸಲ್ಲುತ್ತದೆ. – ಕೆ.ಎಂ.ಉದಯ್, ಶಾಸಕ.

ನಾಳೆ ಹೆಜ್ಜೆ ಗುರುತು ಕವನ ಸಂಕಲನ ಬಿಡುಗಡೆ



ಗೋಷ್ಠಿಯಲ್ಲಿ ಕೃತಿಯ ಕರ್ತೃ, ವೈದ್ಯ ಡಾ.ಚಂದ್ರಶೇಖರ್ ಮಾತನಾಡಿದರು.

ಮಂಡ್ಯ: ಸಿರಿ ಪ್ರಕಾಶನ ಮತ್ತು ಕರ್ನಾಟಕ ಸಂಘದ ಆಶ್ರಯದಲ್ಲಿ ಹೆಜ್ಜೆ ಗುರುತು ಕವನ ಸಂಕಲನ ಬಿಡುಗಡೆ ಸಮಾರಂಭ ಮೇ 30ರಂದು ನಗರದ ಕೆವಿಎಸ್ ಶತಮಾನೋತ್ಸವ ಭವನದಲ್ಲಿ ನಡೆಯಲಿದೆ ಎಂದು ಕೃತಿಯ ಕರ್ತೃ ಹಾಗೂ ವೈದ್ಯ ಡಾ.ಚಂದ್ರಶೇಖರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ವೈದ್ಯನಾಗಿ, ಕವಿಯಾಗಿ ರಚಿಸಿರುವ 4ನೇ ಕವನ ಸಂಕಲನ ಇದಾಗಿದೆ. ಅಂತರಾಷ್ಟ್ರೀಯ ಖ್ಯಾತಿಯ ವೈದ್ಯ, ಶಿಕ್ಷಣ ತಜ್ಞ ಲೇಖಕ ಮತ್ತು ಸಾಮಾಜಿಕ ವಿಜ್ಞಾನಿ ಡಾ.ಗುರುರಾಜ ಕರಜಗಿ ಹಾಗೂ ಕನ್ನಡ ಪ್ರಭ ಪತ್ರಿಕೆಯ ಪುರವಣಿ ಸಂಪಾದಕ ಶ್ರೀಹರ್ಷ ಕೃತಿಯನ್ನು ಬಿಡುಗಡೆಗೊಳಿಸುವರು. ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ. ಜಯಪ್ರಕಾಶಗೌಡ ಅಧ್ಯಕ್ಷತೆ ವಹಿಸುವರು. ಮಿಮ್ಸ್ ನಿವೃತ್ತ ಅಧೀಕ್ಷಕ ಡಾ.ಆಲಿಂಗೇಗೌಡ, ಮಿಮ್ಸ್ ನಿರ್ದೇಶಕ ಡಾ.ನರಸಿಂಹಸ್ವಾಮಿ ಭಾಗವಹಿಸುವರು ಎಂದರು.

ಗೋಷ್ಠಿಯಲ್ಲಿ ಸಾಹಿತಿ, ಪತ್ರಕರ್ತ ಎಸ್.ಕೃಷ್ಣಸ್ವರ್ಣಸಂದ್ರ ಇದ್ದರು.

ರಾಜ್ಯಾಧ್ಯಕ್ಷರಾಗಿ ಸುಧೀರ್‌ಕುಮಾರ್ ಆಯ್ಕೆ



ಮಂಡ್ಯ: ತಾಲೂಕಿನ ಕಾರಸವಾಡಿ ಗ್ರಾಮದ ಕೆ.ಎಸ್.ಸುಧೀರ್ ಕುಮಾರ್ ಅವರನ್ನು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯಾಧ್ಯಕ್ಷರನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಸಂಘದ ರಾಜ್ಯ ಗೌರವಾಧ್ಯಕ್ಷ ಸಿದ್ದನಗೌಡ ಪಾಟೀಲ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ತಿಳಿಸಿದ್ದಾರೆ.

ಶಿಗ್ಗಾಂವಿ ತಾಲೂಕಿನ ಕಡಸ ಗ್ರಾಮದ ರೈತ ಸಂಘದ ಸಭಾ ಭವನ ಉದ್ಘಾಟನೆ ಸಂದರ್ಭ ಕರೆಯಲಾಗಿದ್ದ ರಾಜ್ಯ ಸಮಿತಿ ಸಭೆಯಲ್ಲಿ ಚರ್ಚಿಸಿ, ಸರ್ವಾನುಮತದಿಂದ ಪದಾಧಿಕಾರಿಗಳ ಹಾಗೂ ರಾಜ್ಯ ಸಂಘದ ಸದಸ್ಯರ ಒಪ್ಪಿಗೆ ಮೇರೆಗೆ ಸುಧೀರ್ ಕುಮಾರ್ ಅವರನ್ನು ಆಯ್ಕೆ ಮಾಡಿ ಘೋಷಣೆ ಮಾಡಲಾಗಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಇಂದು ಅಂಬರೀಶ್ ಕಾಯಕ ಯೋಗಿ ಪ್ರಶಸ್ತಿ ಪ್ರದಾನ



ಸುದ್ದಿಗೋಷ್ಠಿಯಲ್ಲಿ ಬೇಲೂರು ಸೋಮಶೇಖರ್ ಮಾತನಾಡಿದರು.

ಭಾರತೀನಗರ, ಮೇ 28– ಡಾ.ಎಂ.ಹೆಚ್. ಅಂಬರೀಶ್ ಫೌಂಡೇಶನ್, ಮದ್ದೂರು ತಾಲೂಕು ಅಂಬರೀಶ್ ಅಭಿಮಾನಿಗಳ ಒಕ್ಕೂಟದ ಸಹಯೋಗದಲ್ಲಿ ರೆಬಲ್ ಸ್ಟಾರ್ ಅಂಬರೀಶ್ ಅವರ 74ನೇ ಹುಟ್ಟುಹಬ್ಬ ಅಂಗವಾಗಿ ಕೆ.ಎಂ.ದೊಡ್ಡಿ ಪೊಲೀಸ್ ಠಾಣಾ ಮುಂಭಾಗ ಮೇ 29ರಂದು ಮಧ್ಯಾಹ್ನ 1 ಗಂಟೆಗೆ ಅಂಬರೀಶ್ ಸಮಾಜ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಅಖಿಲ ಕರ್ನಾಟಕ ಅಂಬರೀಶ್ ಅಭಿಮಾನಿಗಳ ಸಂಘದ ಅಧ್ಯಕ್ಷ ಬೇಲೂರು ಸೋಮಶೇಖರ್ ತಿಳಿಸಿದರು.

ಪಾಂಡವಪುರ ತಾಲೂಕು ಹರಳಹಳ್ಳಿ ಪುಸ್ತಕ ಮನೆಯ ಎನ್.ಅಂಕೇಗೌಡ, ಹೊಳಲಿನ ಕೀಲು, ಮೂಳೆ ತಜ್ಞ ಡಾ.ಹೆಚ್.ಎಸ್. ರವಿಕುಮಾರ್, ನೆಲದನಿ ಬಳಗದ ಅಧ್ಯಕ್ಷ ಎಂ.ಸಿ.ಲಂಕೇಶ್ ಅವರಿಗೆ ಅಂಬಿ ಕಾಯಕ ಯೋಗಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಪ್ರಶಸ್ತಿಯು 25 ಸಾವಿರ ನಗದು ಪುರಸ್ಕಾರವನ್ನೊಳಗೊಂಡಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಸಾಧನೆಗೈದ ಮತ್ತು ಯುಪಿಎಸ್‌ಸಿ ಪರೀಕ್ಷೆಯಲ್ಲಿ ತೇರ್ಗಡೆಗೊಂಡು ಐಪಿಎಸ್‌ಗೆ ಆಯ್ಕೆಯಾಗಿರುವ ನಾಗಮಂಗಲದ ಕರಡಹಳ್ಳಿ ಗ್ರಾಮದ ಆರ್. ಧನಂಜಯ, ಎಸ್‌ಎಸ್‌ಎಲ್‌ಸಿಯಲ್ಲಿ ರಾಜ್ಯಕ್ಕೆ 5ನೇ ಸ್ಥಾನಗಳಿಸಿದ ಮಂಡ್ಯದ ಸೆಂಟ್ ಜೋಸೆಫ್ ಬಾಲಕಿಯರ ಪ್ರೌಢಶಾಲೆಯ ಶ್ರೀಲಕ್ಷ್ಮಿ, ವಿಜ್ಞಾನ ವಿಭಾಗದಲ್ಲಿ ಜಿಲ್ಲೆಗೆ ಪ್ರಥಮ ಹಾಗೂ ರಾಜ್ಯಕ್ಕೆ 7ನೇ ಸ್ಥಾನ ಗಳಿಸಿರುವ ಪಾಂಡವಪುರ ತಾಲೂಕು ಚಿನಕುರಳಿಯ ಎಸ್‌ಟಿಜಿ ಪಿಯು ಕಾಲೇಜಿನ ಪಿ.ಎಸ್.ಸಹನ, ಮಾಂಡವ್ಯ ಎಕ್ಸಲೆನ್ಸ್ ಪಿಯು ಕಾಲೇಜಿನ ಕೆ.ವೈ.ಸಂಜನ, ಪಿಇಎಸ್ ಪಿಯು ಕಾಲೇಜಿನ ಹೆಚ್.ಡಿ. ತೇಜಸ್ವಿನಿ, ಕಾರ್ಮೆಲ್ ಬಾಲಕಿಯರ ಪಿಯು ಕಾಲೇಜಿನ ಫೈಜಾ ಅಲೀಸ್ ಸೈಯದ್ ಅವರನ್ನು ಅಭಿನಂದಿಸಲಾಗುವುದು ಎಂದರು.

ಮಾಜಿ ಸಂಸದೆ ಸುಮಲತಾ ಅಂಬರೀಶ್, ಚಿತ್ರ ನಟ ಅಭಿಷೇಕ್ ಅಂಬರೀಶ್, ಶಾಸಕ ಕೆ.ಎಂ.ಉದಯ್, ಚಿತ್ರ ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್ ಮತ್ತಿತರರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಗೋಷ್ಠಿಯಲ್ಲಿ ಮದ್ದೂರು ತಾಲೂಕು ಅಂಬರೀಶ್ ಅಭಿಮಾನಿಗಳ ಒಕ್ಕೂಟದ ಅಧ್ಯಕ್ಷ ಮುಟ್ಟನಹಳ್ಳಿ ಎಂ.ಇ.ಮಹೇಂದ್ರ, ಪ್ರಧಾನ ಕಾರ್ಯದರ್ಶಿ ಹಾಗಲಹಳ್ಳಿ ಬಸವರಾಜು, ಗೌರವ ಕಾರ್ಯದರ್ಶಿ ತೊರೆಚಾಕನಹಳ್ಳಿ ಶಂಕರೇಗೌಡ, ಮುಟ್ಟನಹಳ್ಳಿ ರವಿ, ನಾಗೇಶ್, ಮರಿಸ್ವಾಮಿ, ಮಂಡ್ಯ ಕಾರ್ತಿಕ್, ಸಿದ್ದರಾಜು ಇದ್ದರು.

ಕೆ.ಆರ್.ಪೇಟೆ ಟಿಎಪಿಸಿಎಂಎಸ್ ನಿರ್ದೇಶಕರಾಗಿ ತಮ್ಮಣ್ಣ ಆಯ್ಕೆ



ನೂತನ ನಿರ್ದೇಶಕ ತಮ್ಮಣ್ಣ ಅವರನ್ನು ಅಧ್ಯಕ್ಷ ಬಲದೇವ್ ಮತ್ತು ನಿರ್ದೇಶಕರು ಅಭಿನಂದಿಸಿದರು.

ಕೆ.ಆರ್.ಪೇಟೆ, ಮೇ 28– ತಾಲೂಕು ಟಿಎಪಿಸಿಎಂಎಸ್ ನೂತನ ನಿರ್ದೇಶಕರಾಗಿ ರಾಯಸಮುದ್ರ ತಮ್ಮಣ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪರಿಶಿಷ್ಟ ಮೀಸಲು ಕ್ಷೇತ್ರದ ಜೆಡಿಎಸ್ ಬೆಂಬಲಿತ ಅಭ್ಯರ್ಥಿಯಾಗಿ ಸ್ಪರ್ಧಿಸಿ, ಹ್ಯಾಟ್ರಿಕ್ ಗೆಲುವು ಸಾಧಿಸುವ ಮೂಲಕ ಟಿಎಪಿಸಿಎಂಎಸ್ ನಿರ್ದೇಶಕರಾಗಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದ ರಂಗನಾಥಪುರ ನಾಗರಾಜು ಅವರ ನಿಧನದಿಂದ ತೆರವಾದ ಸ್ಥಾನಕ್ಕೆ ತಾಲೂಕು ಮಾದಾರ ಮಹಾಸಭಾ ಅಧ್ಯಕ್ಷ ಆರ್.ಟಿ. ಉಮೇಶ್ ಅವರ ತಂದೆ ರಾಯಸಮುದ್ರ ತಮ್ಮಣ್ಣ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಚುನಾವಣಾಧಿಕಾರಿಯಾಗಿ ತಹಸೀಲ್ದಾರ್ ಕಾರ್ಯ ನಿರ್ವಹಿಸಿದರು.

ನೂತನ ಟಿಎಪಿಸಿಎಂಎಸ್ ನಿರ್ದೇಶಕ ರಾಯಸಮುದ್ರ ತಮ್ಮಣ್ಣ ಅವರನ್ನು ಇಂದು ನಡೆದ ಟಿಎಪಿಸಿಎಂಎಸ್ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷ ಬಲದೇವ್, ಉಪಾಧ್ಯಕ್ಷೆ ಲತಾ ಮಂಜೇಗೌಡ, ನಿರ್ದೇಶಕರಾದ ಹೆಚ್.ಟಿ.ಲೋಕೇಶ್, ಎಸ್.ಎಲ್.ಮೋಹನ್, ಮಲ್ಲೇನಹಳ್ಳಿ ಮೋಹನ್, ನಾಗರಘಟ್ಟ ದಿಲೀಪ್‌ಕುಮಾರ್, ಎಂ.ಪಿ. ಲೋಕೇಶ್, ಬಿ.ಎಂ.ಕಿರಣ್, ಕಿಕ್ಕೇರಿ ಮಧು, ಬೊಮ್ಮೇನಹಳ್ಳಿ ಮಂಜುನಾಥ್, ವಿಜಯ್ ಕುಮಾರ್, ಕಾಯಿ ಸುರೇಶ್ ಹಾಗೂ ಸಂಸ್ಥೆಯ ಕಾರ್ಯದರ್ಶಿ ಎಸ್.ಬೋರೇಗೌಡ ಮತ್ತಿತರರು ಅಭಿನಂದಿಸಿದರು.

ನೂತನ ಟಿಎಪಿಸಿಎಂಎಸ್ ನಿರ್ದೇಶಕ ರಾಯಸಮುದ್ರ ತಮ್ಮಣ್ಣ ಮಾತನಾಡಿ, ಪ್ರತಿಷ್ಠಿತ ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ನಿರ್ದೇಶಕನಾಗಿ ಆಯ್ಕೆಯಾಗಲು ಸಹಕಾರ ನೀಡಿದ ಶಾಸಕರಾದ ಹೆಚ್.ಟಿ. ಮಂಜು, ಶಾಸಕರ ಸಹೋದರ ಹೆಚ್.ಟಿ. ಲೋಕೇಶ್, ಟಿಎಪಿಸಿಎಂಎಸ್ ಸಂಸ್ಥೆ ಅಧ್ಯಕ್ಷರು–ಉಪಾಧ್ಯಕ್ಷರು ಸೇರಿದಂತೆ ಎಲ್ಲಾ ನಿರ್ದೇಶಕರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ನನಗೆ ಸಿಕ್ಕಿರುವ ಅಧಿಕಾರದ ಅವಧಿಯಲ್ಲಿ ರೈತರ ಸೇವೆಯನ್ನು ಮಾಡಲು ಶ್ರಮಿಸುತ್ತೇನೆ ಎಂದು ತಿಳಿಸಿದರು.

ಅರ್ಜಿ ಆಹ್ವಾನ

ಮಂಡ್ಯ, ಮೇ 28– ಮಳವಳ್ಳಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 19 ಹುದ್ದೆಗಳಿಗೆ ಅಂಗನವಾಡಿ ಕಾರ್ಯಕರ್ತೆಯರು ಮತ್ತು 56 ಅಂಗನವಾಡಿ ಸಹಾಯಕಿಯರ ಹುದ್ದೆ ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಹ ಸ್ಥಳೀಯ ಅಭ್ಯರ್ಥಿಗಳು ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸಂಪರ್ಕಿಸಿ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಭರ್ತಿ ಮಾಡಿ ಅರ್ಜಿಗಳನ್ನು ಆಯಾ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳ ಕಚೇರಿಗೆ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂ.29 ಕೊನೆ ದಿನ. ಹೆಚ್ಚಿನ ಮಾಹಿತಿಗೆ ಮಳವಳ್ಳಿ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳ ಕಚೇರಿ ಹಾಗೂ ದೂ:08231–242004 ಅನ್ನು ಸಂಪರ್ಕಿಸಬಹುದು ಎಂದು ಮಳವಳ್ಳಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಸಿದ್ದರಾಮಯ್ಯ ರಾಜೀನಾಮೆ

ಆಗಿದ್ದ ಒಪ್ಪಂದದಂತೆ ಅಧಿಕಾರದಿಂದ ಕೆಳಗಿಳಿಯುತ್ತಿದ್ದೇನೆ. ವರಿಷ್ಠರು ಸೂಚಿಸಿದ್ದನ್ನು ಪಾಲಿಸುವುದು ನನ್ನ ಕರ್ತವ್ಯ ಎಂದರಾದರೂ, ತಮ್ಮ ನಂತರ ಯಾರು ಮುಖ್ಯಮಂತ್ರಿ ಎಂಬುದನ್ನು ಬಹಿರಂಗಪಡಿಸಲಿಲ್ಲ. ದೆಹಲಿಯಲ್ಲಿ ಮಂಗಳವಾರ ನಡೆದ ಮಾತುಕತೆ ವೇಳೆ ವರಿಷ್ಠರು ನೀವು ಮುಖ್ಯ ಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿ, ನಂತರ ಯಾರು ನಾಯಕರು ಎಂಬುದನ್ನು ನಾವು ನಿರ್ಧರಿ ಸುತ್ತೇವೆ ಎಂಬುದಾಗಿ ತಿಳಿಸಿದ್ದಾರೆ ಎಂದರು.

ಸಿದ್ದರಾಮಯ್ಯ ರಾಜೀನಾಮೆ ಪದ ಬಳಸುತ್ತಿದ್ದಂತೆ ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕ ಸಚಿವರು ಬಾವುಕರಾದರು. ಉಪಹಾರದ ನಂತರ ಕಾವೇರಿ ನಿವಾಸದಲ್ಲಿ ಸಚಿವರು, ಶಾಸಕರು ಮತ್ತು ಮುಖಂಡರೊಂದಿಗೆ ಸಮಾಲೋಚಿಸಿ, ಮಧ್ಯಾಹ್ನ ರಾಜೀನಾಮೆ ನೀಡಲು ಲೋಕಭವನಕ್ಕೆ ತೆರಳಲು ಸಜ್ಜಾದರು. ಈ ವೇಳೆ ಕೆಲವು ಶಾಸಕರು ಮತ್ತು ಅಭಿಮಾನಿಗಳು ಬಾಗಿಲಲ್ಲಿ ಅಡ್ಡ ನಿಂತು 'ನೀವು ರಾಜೀನಾಮೆ ನೀಡಬೇಡಿ' ಎಂದು ಬೇಡಿಕೊಂಡರು.

ಆದರೆ, ಸಿದ್ದರಾಮಯ್ಯ ಏನನ್ನೂ ಪ್ರತಿಕ್ರಿಯಿಸದೆ, ಅವರನ್ನು ದೂರ ಸರಿಸಿ ಲೋಕಭವನಕ್ಕೆ ತೆರಳಿದರು. ಲೋಕಭವನದಿಂದ ಹಿಂತಿರುಗಿ, ಪತ್ರಿಕಾಗೋಷ್ಠಿ ನಡೆಸಿದ ತಕ್ಷಣವೇ ಪಕ್ಷದ ವರಿಷ್ಠರ ಭೇಟಿಗಾಗಿ ದೆಹಲಿಗೆ ದೌಡಾಯಿಸಿದರು. ಈ ಮಧ್ಯೆ, ಸಿದ್ದರಾಮಯ್ಯ ತಮ್ಮ ರಾಜೀನಾಮೆ ಪತ್ರ ನೀಡುತ್ತಿದ್ದಂತೆ ಉಪಮುಖ್ಯಮಂತ್ರಿಗಳ ಕಾರ್ಯಾಲಯ ಐದಾರು ಪುಟಗಳ ವ್ಯಕ್ತಿ ಪರಿಚಯ ಪತ್ರವನ್ನು ಮಾಧ್ಯಮಗಳಿಗೆ ಬಿಡುಗಡೆ ಮಾಡಿದೆ.

ನಿಮ್ಮ ಪ್ರೀತಿಗೆ ಧನ್ಯವಾದ...

ಹಳ್ಳಿಗಾಡಿನಲ್ಲಿ ಹುಟ್ಟಿ ಬೆಳೆದ ನಾನು ಮುಂದೊಂದು ದಿನ ಈ ರಾಜ್ಯದ ಶಾಸಕ, ಮಂತ್ರಿ, ವಿರೋಧ ಪಕ್ಷದ ನಾಯಕ, ಎರಡೆರಡು ಬಾರಿ ಮುಖ್ಯಮಂತ್ರಿಯಾಗುತ್ತೇನೆ ಎಂಬ ಕನಸನ್ನು ಸಹ ಕಂಡಿರಲಿಲ್ಲ. ಇಂತದ್ದೊಂದು ದುಬಾರಿಯಾದ ಕನಸು ನನಸಾಗಿರುವುದು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದಿಂದ. ಬುದ್ಧ, ಬಸವ, ಬಾಬಾ ಸಾಹೇಬರು, ಮಹಾತ್ಮ ಗಾಂಧಿ ಯವರೇ ನನ್ನ ಆದರ್ಶ. ನನ್ನ ನಲವತ್ತೆಂಟು ವರ್ಷಗಳ ರಾಜಕೀಯ ಜೀವನದಲ್ಲಿ ನಾಡಿನ ಅವಕಾಶ ವಂಚಿತ, ಶೋಷಿತ, ಬಡ ಜನರ ಪರವಾಗಿ ಪ್ರಾಮಾಣಿಕವಾಗಿ ದುಡಿದ ಸಂತೃಪ್ತಿಯಿದೆ ಎಂದು ಅವರು ಹೇಳಿದ್ದಾರೆ.

ಸಂವಿಧಾನವೇ ನನ್ನ ಧರ್ಮ ಮತ್ತು ಜನರೇ ದೇವರು ಎಂದಿದ್ದು, ಮುಖ್ಯಮಂತ್ರಿ ಹುದ್ದೆಗೆ ಮಾತ್ರ ರಾಜೀನಾಮೆ ನೀಡಿದ್ದೇನೆ. ಸಾರ್ವಜನಿಕ ಜೀವನ ಅಥವಾ ಜನರ ಮೇಲಿನ ಬದ್ಧತೆಗೆ ಅಲ್ಲ ಎಂದು ಹೇಳಿದ್ದಾರೆ. ನನ್ನ ಕೊನೆಯ ಉಸಿರಿನವರೆಗೂ ಸಾಮಾಜಿಕ ನ್ಯಾಯಕ್ಕಾಗಿ ಹೋರಾಡುತ್ತಲೇ ಇರುತ್ತೇನೆ. ನಮ್ಮ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ ನಡೆಯುವ ಕೋಮು ಶಕ್ತಿಗಳ ವಿರುದ್ಧ ನಿಲ್ಲುತ್ತೇನೆ. ಈ ಪ್ರಯಾಣದ ಪ್ರತಿ ಹಂತದಲ್ಲೂ ನೀವು ತೋರಿದ ಪ್ರೀತಿ, ವಿಶ್ವಾಸ ಮತ್ತು ಒಡನಾಟಕ್ಕೆ ಧನ್ಯವಾದಗಳು ಎಂದು ಅವರು ಹೇಳಿದ್ದಾರೆ.

ಡಿ.ಕೆ. ಶಿವಕುಮಾರ್ ಮುಂದಿನ ಸಿಎಂ

ಕಾವೇರಿಯಿಂದ ಹೊರಡುವ ವೇಳೆ ಸಚಿವ ಹೆಚ್.ಕೆ.ಪಾಟೀಲ್ ಸುದ್ದಿಗಾರರೊಂದಿಗೆ ಮಾತನಾಡಿ, ಡಿ.ಕೆ.ಶಿವಕುಮಾರ್ ಅವರೇ ಮುಂದಿನ ಮುಖ್ಯಮಂತ್ರಿ ಎಂದು ಸಿದ್ದರಾಮಯ್ಯ ಅವರು ತಿಳಿಸಿದ್ದಾಗಿ ಹೇಳಿದರು. ಇದರೊಂದಿಗೆ ಮುಂದಿನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಂಬುದು ಖಚಿತವಾಗಿದೆ.

ಸರ್ಕಾರ ರಚನೆ ಪ್ರಕ್ರಿಯೆ: ಇನ್ನು, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದಂತೆ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ರಾಜ್ಯಭಾರಕ್ಕೆ ಕೌಂಟ್‌ಡೌನ್ ಶುರುವಾಗಿದೆ. ರಾಜ್ಯಪಾಲರು ರಾಜೀನಾಮೆ ಅಂಗೀಕರಿಸುತ್ತಿದ್ದಂತೆ, ಹೊಸ ಸರ್ಕಾರ ರಚನೆ ಪ್ರಕ್ರಿಯೆ ಆರಂಭಗೊಳ್ಳಲಿದೆ.

ಶುಕ್ರವಾರ (ಮೇ 29) ಉಪರಾಷ್ಟ್ರಪತಿಗಳು ಬೆಂಗಳೂರಿಗೆ ಆಗಮಿಸುತ್ತಿದ್ದು, ರಾಜ್ಯಪಾಲರು ಕಾರ್ಯದ ಒತ್ತಡದಲ್ಲಿದ್ದಾರೆ. ಶುಕ್ರವಾರ ಸಂಜೆಯೊಳಗೆ ರಾಜೀನಾಮೆ ಅಂಗೀಕಾರವಾಗಬೇಕಿದೆ. ಶನಿವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯುವ ಸಾಧ್ಯತೆಗಳಿವೆ. ಸಿಎಲ್‌ಪಿ ನಾಯಕರಾಗಿ ಡಿಕೆಶಿ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ. ಎಲ್ಲವೂ ಅಂದುಕೊಂಡಂತೆ ನಡೆದರೆ ಸೋಮವಾರ ಸಂಜೆ ಗೋಧೂಳಿ ಮುಹೂರ್ತದಲ್ಲಿ ಡಿಕೆಶಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಗಳಿವೆ.

ಎಲ್ಲಿ ಪ್ರಮಾಣ ಸ್ವೀಕಾರ: ವಿಧಾನ ಸೌಧದ ಗ್ರ್ಯಾಂಡ್ ಸ್ಟೆಪ್ ಮೇಲೆ ಅಥವಾ ಕಂಠೀರವ ಸ್ಟೇಡಿಯಂನಲ್ಲಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಗಳಿವೆ. ದೊಡ್ಡ ಪ್ರಮಾಣದಲ್ಲಿ ಜನರನ್ನ ಸೇರಿಸಿ ಪದಗ್ರಹಣ ನಡೆಸಲು ಸಿದ್ಧತೆ ನಡೆಸಲಾಗಿದೆ.

ಗೋಧೂಳಿ ಮುಹೂರ್ತ ಮಂಗಳಕರ: ಸೂರ್ಯಾಸ್ತ ಅಥವಾ ಕತ್ತಲಿನ ನಡುವಿನ ಸಮಯವನ್ನು ಗೋಧೂಳಿ ಅವಧಿ ಎಂದು ಕರೆಯಲಾಗುತ್ತದೆ. ಈ ಸಮಯ ಸಂಜೆ 05 ರಿಂದ 07 ರವರೆಗೆ ಮಾತ್ರ ಇರುತ್ತದೆ. ಈ ಗೋಧೂಳಿ ಅವಧಿಯನ್ನು ಅಥವಾ ಸಮಯವನ್ನು ಹಿಂದೂ ಧರ್ಮದಲ್ಲಿ ಬಹಳ ಮಂಗಳಕರವೆಂದು ಪರಿಗಣಿಸಲಾಗುತ್ತದೆ.

ಹೋಗಲ್ಲ; ಸಕ್ರಿಯ ರಾಜಕಾರಣ ಬಿಡಲ್ಲ...

ವರಿಷ್ಠರಿಗೆ ಆಭಾರಿಯಾಗಿದ್ದೇನೆ : ನಾನು 2006ರಲ್ಲಿ ಕಾಂಗ್ರೆಸ್ ಸೇರಿದ ನಂತರ ಇಲ್ಲಿಯವರೆಗೂ, ಅಂದರೆ, ಎರಡು ಬಾರಿ 8 ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಹಾಗೂ ವಿರೋಧ ಪಕ್ಷದ ನಾಯಕನಾಗಿ ಕಾರ್ಯ ನಿರ್ವಹಿಸಲು ಅವಕಾಶ ಮಾಡಿಕೊಟ್ಟ ಪಕ್ಷದ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರುಗಳಿಗೆ ಅಭಾರಿಯಾಗಿದ್ದೇನೆ.

ಮತದಾರ ದೇವರುಗಳಿಗೆ ಕೃತಜ್ಞತೆ : ಎರಡು ಬಾರಿ ಸರ್ಕಾರ ರಚಿಸಲು ಮತದಾರ ದೇವರುಗಳು ಅವಕಾಶ ಮಾಡಿಕೊಟ್ಟಿದ್ದಕ್ಕೆ ಅವರಿಗೂ ನಾನು ಕೃತಜ್ಞನಾಗಿರುತ್ತೇನೆ.

ಅಧಿಕಾರದಲ್ಲಿ ಇದ್ದ ಸಂದರ್ಭದಲ್ಲಿ ಕುವೆಂಪು ಹೇಳಿದಂತೆ ಸರ್ವಜನಾಂಗದ ತೋಟವಾಗಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿದ್ದೇನೆ. ನಾನು ನಂಬಿರುವ ಸಿದ್ಧಾಂತಕ್ಕೆ ಬದ್ಧನಾಗಿ ಕಟ್ಟ ಕಡೆಯ ಮನುಷ್ಯನೂ ಜೀವನ ನಡೆಸುವಂತಹ ಸೌಲಭ್ಯ ಕಲ್ಪಿಸಿದ್ದೇನೆ. ಕೊಟ್ಟ ಭರವಸೆಗಳನ್ನು ಈಡೇರಿಸುವ ಮೂಲಕ ರಾಷ್ಟ್ರದಲ್ಲೇ ಕರ್ನಾಟಕದ ಜನರ ತಲಾ ಆದಾಯ ಹೆಚ್ಚಿಸಿದ್ದೇನೆ.

ನಮ್ಮ ಯೋಜನೆಗಳಿಗೆ ಬಿಜೆಪಿ, ಅದರಲ್ಲೂ ಪ್ರಧಾನಿ ನರೇಂದ್ರ ಮೋದಿ ವಿರೋಧ ಮಾಡಿದರೂ ಗ್ಯಾರಂಟಿಗಳ ಅನುಷ್ಠಾನದ ಮೂಲಕ ಕರ್ನಾಟಕ ಇಡೀ ದೇಶಕ್ಕೆ ಮಾದರಿಯಾಗಿದೆ. ನಮ್ಮ ಯೋಜನೆಗಳನ್ನೇ ಇತರ ಪಕ್ಷಗಳು ಬೇರೆ ರಾಜ್ಯಗಳಲ್ಲಿ ಅನುಷ್ಠಾನಕ್ಕೆ ತಂದಿವೆ ಎಂದರು.

ಗ್ರಾಮೀಣ ಭಾಗದಿಂದ ಬಂದ ನಾನು ಶಾಸಕ, ಮಂತ್ರಿ, ಎರಡು ಬಾರಿ ಉಪಮುಖ್ಯಮಂತ್ರಿ, ವಿರೋಧ ಪಕ್ಷದ ನಾಯಕ ಹಾಗೂ ಎರಡು ಸಲ ಮುಖ್ಯಮಂತ್ರಿಯಾಗಿ ಅಧಿಕಾರ ನಡೆಸುತ್ತೇನೆ ಎಂಬುದನ್ನು ಕನಸು–ಮನಸಿನಲ್ಲೂ ಕಂಡಿರಲಿಲ್ಲ. ನಮ್ಮ ಕುಟುಂಬಕ್ಕೆ ರಾಜಕಾರಣದ ನೆರಳೂ ಇರಲಿಲ್ಲ. ಆದರೂ, ನಾನು ಜನರ ಆಶೀರ್ವಾದದಿಂದ ಇಲ್ಲಿವರೆಗೆ ಬಂದಿದ್ದೇನೆ. ತಮ್ಮ ಆಡಳಿತಾವಧಿಯಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಎಳೆ ಎಳೆಯಾಗಿ ಬಿಡಿಸಿಟ್ಟ ಸಿದ್ದರಾಮಯ್ಯ, ತಾವು ಎರಡು ದಶಕಗಳ ಹಿಂದೆ ಕಾಂಗ್ರೆಸ್ ಸೇರಿದ ಹಾಗೂ ನಂತರದ ಬೆಳವಣಿಗೆಗಳನ್ನು ವಿವರಿಸಿದರು. ಇದೇ ವೇಳೆ ನನ್ನ ಕೊನೆ ಉಸಿರು ಇರುವವರೆಗೂ ಕೋಮುವಾದದ ವಿರುದ್ಧ ಹೋರಾಡುವೆ ಎಂದರು. ಪತ್ರಿಕಾ ಗೋಷ್ಠಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಂಪುಟ ಸಹೋದ್ಯೋಗಿಗಳು ಉಪಸ್ಥಿತರಿದ್ದರು.

ಸಿಎಂ ಬದಲಾವಣೆ ಆದ್ರೂ ಒಳ್ಳೆ ಆಡಳಿತ ನಡೆಸ್ತಾರೆ ಅನ್ನೋ ನಂಬಿಕೆ ಉಳಿದಿಲ್ಲ



ಬಳ್ಳಾರಿ, ಮೇ 28– ಸಿಎಂ ಬದಲಾವಣೆ ಆದ್ರೂ ಕಾಂಗ್ರೆಸ್‌ನವರು ಒಳ್ಳೆ ಆಡಳಿತ ನಡೆಸುತ್ತಾರೆ ಎನ್ನುವ ನಂಬಿಕೆ ಉಳಿದಿಲ್ಲ ಎಂದು ಕಾಂಗ್ರೆಸ್ ನಾಯಕತ್ವ ಬದಲಾವಣೆ ಬೆಳವಣಿಗೆಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಲೇವಡಿ ಮಾಡಿದ್ದಾರೆ.

ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಮಾತನಾಡಿದ ವಿಜಯೇಂದ್ರ, ಮುಖ್ಯಮಂತ್ರಿಗಳು ರಾಜ್ಯಪಾಲರ ಭೇಟಿಗೆ ಅನುಮತಿ ಕೇಳಿದರೆ, ಅದು ಮುಖ್ಯಮಂತ್ರಿಗಳ ಟಿಪಿಯಲ್ಲಿ ಇರುತ್ತೆ ಸಿಎಂ ಬದಲಾವಣೆ ವಿಚಾರದಲ್ಲಿ ಬಿಜೆಪಿ ಬಳಸಿಕೊಳ್ಳಲ್ಲ ರಾಜ್ಯ ಕಾಂಗ್ರೆಸ್‌ಗೆ 136 ಸ್ಥಾನ ನೀಡಿ ಸ್ಥಿರ ಸರ್ಕಾರ ನೀಡಿದೆ. ಈ ವಿಚಾರದಲ್ಲಿ ನಾವು ಯಾವುದೇ ಕಾರಣಕ್ಕೂ ಕೈ ಹಾಕಲ್ಲವೆಂದ ತಿಳಿಸಿದರು.

ಕಾಂಗ್ರೆಸ್ ಪಕ್ಷದ ಆಂತರಿಕ ವಿಚಾರ ಅಷ್ಟು ಬೇಗ ಬಗೆಹರಿಯೋ ಹಾಗೆ ಕಾಣಿಸ್ತಿಲ್ಲ. ವರ್ಷದಿಂದ ಕಾಂಗ್ರೆಸ್ ಆಂತರಿಕ ಕಚ್ಚಾಟದಿಂದ ರಾಜ್ಯದಲ್ಲಿ ಆಡಳಿತ ಸಂಪೂರ್ಣ ಕುಸಿದಿದೆ. ಎರಡ್ಮೂರು ದಿನಗಳಿಂದ ಘಟನಾವಳಿಗಳು ನಡೆಯುತ್ತಿವೆ. ಮುಖ್ಯಮಂತ್ರಿ ರಾಜೀನಾಮೆ ಕೊಡ್ತಾರೆ ಎನ್ನುವ ಬೆಳವಣಿಗೆಗಳು ನಡೆಯುತ್ತಿವೆ. ಮುಂದಿನ ಬೆಳವಣಿಗೆ ಹೇಗೆ ನಡೆಯುತ್ತವೆ ಎನ್ನುವ ಊಹೆ ಯಾರಿಗೂ ಇಲ್ಲ. ರಾಜೀನಾಮೆ ಕೊಟ್ಟ ನಂತರ ಈ ಗೊಂದಲ ಮುಂದುವರೆಯುತ್ತವೆ ಎಂದರು.

ಆಡಳಿತ ಪಕ್ಷದ ಆಂತರಿಕ ಕಚ್ಚಾಟದ ಪರಿಣಾಮ ಕರ್ನಾಟಕ ರಾಜ್ಯ ಆರ್ಥಿಕವಾಗಿ, ಆಡಳಿತಾತ್ಮಕವಾಗಿ ಸಂಪೂರ್ಣ ನೆಲಕಚ್ಚಿದೆ. ಆರ್ಥಿಕ ದಿವಾಳಿಯತ್ತ ರಾಜ್ಯ ಸಾಗುತ್ತಿದೆ. ಭ್ರಷ್ಟಾಚಾರ ತಾಂಡವವಾಡುತ್ತಿರುವುದನ್ನು ನೋಡಿ ಜನರು ಬೇಸತ್ತಿದ್ದಾರೆ. ಗ್ರಾಮೀಣ ಭಾಗದಲ್ಲಿ ರಸಗೊಬ್ಬರ ಸಮಸ್ಯೆಯಾಗುತ್ತಿದ್ದರೂ, ರೈತರ ಗೋಳನ್ನ ಕೇಳುವವರೇ ಇಲ್ಲದಂತಾಗಿದೆ. ಉಸ್ತುವಾರಿ ಸಚಿವರೆಲ್ಲರೂ ಬೆಂಗಳೂರು, ದೆಹಲಿಯಲ್ಲಿ ಬೀಡು ಬಿಟ್ಟಿದ್ದಾರೆ. ರಾಜ್ಯದ ಜನರ ಪರವಾಗಿ ಕಾಂಗ್ರೆಸ್ ಸರ್ಕಾರ ಶಾಪವಾಗಿ ಪರಿಣಮಿಸಿದೆ. ಮುಂದಿನ ಮುಖ್ಯಮಂತ್ರಿ ಆದರೂ ಒಳ್ಳೆಯ ಆಡಳಿತ ನಡೆಸ್ತಾರೆ ಎನ್ನುವ ನಂಬಿಕೆ ಉಳಿದಿಲ್ಲ. ಯಾರೇ ಮುಖ್ಯಮಂತ್ರಿ ಆದರೂ ಸುಧಾರಣೆ ತರಲು ಸಾಧ್ಯವಿಲ್ಲ ಎಂದು ಟೀಕಿಸಿದರು.

ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆಗೆ ಬಿ.ಸಿ.ಪಾಟೀಲ್ ಭಾವುಕ ಪೋಸ್ಟ್



ಬೆಂಗಳೂರು, ಮೇ 28– ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡುತ್ತಲೇ ಮಾಜಿ ಸಚಿವ ಬಿ.ಸಿ. ಪಾಟೀಲ್ ಭಾವುಕರಾಗಿದ್ದು, ಸಿದ್ದು ಜೊತೆಗಿನ ಒಡನಾಟದ ಕುರಿತು ಭಾವುಕ ಪೋಸ್ಟ್ ಹಾಕಿದ್ದಾರೆ. ನಾನು ಆ ಪಕ್ಷದಲ್ಲಿ ಇಲ್ಲದೆ ಇರಬಹುದು, ಆದರೆ ಅವರೊಂದಿಗಿನ ಒಡನಾಟ ಮರೆಯುವಂತದ್ದಲ್ಲ ಎಂದು ಹೇಳಿದ್ದಾರೆ.

ಸಿಎಂ ಸಿದ್ದರಾಮಯ್ಯನವರ ಮುಖ್ಯಮಂತ್ರಿ ಪಟ್ಟಕ್ಕೆ ರಾಜೀನಾಮೆ ಮತ್ತು ವಿದಾಯ ಎಲ್ಲೋ ಒಂದು ಕಡೆ ನನಗೆ ಗೊತ್ತಿಲ್ಲದೆ ನೋವನ್ನ ಕೊಡ್ತಾ ಇದೆ. ಅವರೊಂದಿಗೆ ಒಡನಾಟ ಮರೆಯುವಂತದ್ದಲ್ಲ. ನಾನು ಅವರನ್ನು ಪೊಲೀಸ್ ಅಧಿಕಾರಿಯಾಗಿ ನೋಡಿದ್ದೇನೆ. 2004ರಿಂದ ಅವರೊಂದಿಗೆ ಶಾಸಕನಾಗಿ ಕೂಡ ಅವರೊಂದಿಗಿದ್ದೆ' ಎಂದಿದ್ದಾರೆ. ಅಂತೆಯೇ ನನಗೆ ನೋವುಂಟಾಗಿದೆ. ನನಗೆ ಅವರ ಬಗ್ಗೆ ಇದ್ದಂತಹ ಗೌರವ ಮತ್ತು ಪ್ರೀತಿ. ನನ್ನ ಮನೆಗೆ ಎಷ್ಟು ಬಾರಿ ಬಂದಿದ್ದಾರೋ ಗೊತ್ತಿಲ್ಲ. ಕರೆದಾಗಲೆಲ್ಲ ಬರ್ತಾ ಇದ್ರು, ಪ್ರೀತಿ ಹಂಚಿಕೊಳ್ತಾ ಇದ್ರು ಎಂದಿದ್ದಾರೆ.

ಅವರು ಮುಖ್ಯಮಂತ್ರಿಯಾದ ಮೇಲೆ 2023ರ ನಂತರ ಹೋಗಿ ಭೇಟಿಯಾಗಲಿಲ್ಲ. ಒಂದು ಬಾರಿ ದೆಹಲಿಯಲ್ಲಿ ಭೇಟಿಯಾದಾಗ ನನ್ನ ಅತ್ಯಂತ ಪ್ರೀತಿ ವಿಶ್ವಾಸದಿಂದ ಮಾತನಾಡಿ ನನಗೆ ಬೆನ್ನು ತಟ್ಟಿದರು. ಸಿದ್ದರಾಮಯ್ಯ ಒಬ್ಬ ಇತಿಹಾಸಕಾರ, ಅರ್ಥಶಾಸ್ತ್ರಜ್ಞ, ಚಾಣಾಕ್ಷ ಹೃದಯವಂತ, ನೇರ ನಿಷ್ಠುರ ನುಡಿಗೆ ಹೆಸರಾದವರು ಇಂದು ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಮುಂದಿನ ದಿನಗಳಲ್ಲಿ ಭಗವಂತ ಅವರಿಗೆ ಆಯುರಾರೋಗ್ಯ ಭಾಗ್ಯವನ್ನು ಕೊಡಲಿ. ಅವರು ಆರೋಗ್ಯದ ಬಗ್ಗೆ ಹೆಚ್ಚು ಗಮನವನ್ನು ನೀಡಿ ಯುವಕರಿಗೆ ಮಾರ್ಗದರ್ಶನ ನೀಡಲಿ ಎಂದು ಬಿ.ಸಿ ಪಾಟೀಲ್ ಟ್ವೀಟ್ ಮಾಡಿದ್ದಾರೆ.

ಸಿದ್ದರಾಮಯ್ಯ ರಾಜೀನಾಮೆಗೂ ಮುನ್ನ ಸಿಎಂ ಕಚೇರಿ ಸಿಬ್ಬಂದಿಗೆ ವರ್ಗಾವಣೆ ಭಾಗ್ಯ

ಬೆಂಗಳೂರು, ಮೇ 28– ಸಿದ್ದರಾಮಯ್ಯ ರಾಜೀನಾಮೆಗೂ ಮುನ್ನ ಸಿಎಂ ಕಚೇರಿ ಸಿಬ್ಬಂದಿ ವರ್ಗಾವಣೆ ಮಾಡಿದ್ದಾರೆ.

ಸಿದ್ದರಾಮಯ್ಯ ಆಪ್ತ ಕಾರ್ಯದರ್ಶಿ ಡಾ.ವೆಂಕಟೇಶಯ್ಯ, ಸಿಎಂ ವಿಶೇಷ ಕರ್ತವ್ಯಾಧಿಕಾರಿ ರಮೇಶ್ ಪಿ.ಕೋನರೆಡ್ಡಿ, ಸಿಎಂ ಜಂಟಿ ಕಾರ್ಯದರ್ಶಿಯಾಗಿದ್ದ ಟಿ.ಎನ್.ಕೃಷ್ಣಮೂರ್ತಿ ಹಾಗೂ ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ಅವರನ್ನ ವರ್ಗಾವಣೆ ಮಾಡಲಾಗಿದೆ.

ವಿವಿಧ ಆಪ್ತ ಅಧಿಕಾರಿಗಳ ವರ್ಗಾವಣೆ: ಸಿಎಂ ಸಿದ್ದರಾಮಯ್ಯ ಆಪ್ತ ಕಾರ್ಯದರ್ಶಿಯಾಗಿದ್ದ ಕೆಎಎಸ್ ಅಧಿಕಾರಿ ಡಾ.ವೆಂಕಟೇಶಯ್ಯ ಅವರನ್ನು ವರ್ಗಾವಣೆ ಕೃಷಿ ಮಾರಾಟ ಇಲಾಖೆ ನಿರ್ದೇಶಕರಾಗಿ ವರ್ಗಾವಣೆ ಮಾಡಲಾಗಿದೆ. ಇನ್ನು ಸಿಎಂ ವಿಶೇಷ ಕರ್ತವ್ಯಾಧಿಕಾರಿಯಾಗಿದ್ದ ರಮೇಶ್ ಪಿ.ಕೋನರೆಡ್ಡಿ ಅವರನ್ನು ವಿದ್ಯುತ್ ಪ್ರಸರಣ ನಿಗಮದ ನಿರ್ದೇಶಕರಾಗಿ ವರ್ಗಾಯಿಸಲಾಗಿದೆ. ಈ ಮೂಲಕ ಸಿದ್ದರಾಮಯ್ಯ ಪದತ್ಯಾಗಕ್ಕೂ ಮುನ್ನವೇ ತಮ್ಮ ಆಪ್ತ ಅಧಿಕಾರಿಗಳನ್ನು ಆಯಾ ಕಟ್ಟಿನ ಸ್ಥಳಗಳಿಗೆ ನಿಯುಕ್ತಿಗೊಳಿಸಿದ್ದಾರೆ. ಸಿಎಂ ಜಂಟಿ ಕಾರ್ಯದರ್ಶಿಯಾಗಿದ್ದ ಟಿ.ಎನ್.ಕೃಷ್ಣಮೂರ್ತಿ ನಗರಾಭಿವೃದ್ಧಿ ಇಲಾಖೆ ಜಂಟಿ ಕಾರ್ಯದರ್ಶಿ–2 ಹುದ್ದೆಗೆ ವರ್ಗಾವಣೆ ಮಾಡಲಾಗಿದೆ. ಹಾಗೇ ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ಅವರನ್ನ ಕ್ರೈಸ್ಟ್ ಶಿಕ್ಷಣ ಸಂಸ್ಥೆಗಳ ಕಾರ್ಯನಿರ್ವಾಹಕ ನಿರ್ದೇಶಕ ಹುದ್ದೆಗೆ ವರ್ಗಾಯಿಸಲಾಗಿದೆ.

2023ರಲ್ಲಿ ಎರಡನೇ ಬಾರಿಗೆ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಯಾಗಿದ್ದ ವೇಳೆ ಕೆಎಎಸ್ ಅಧಿಕಾರಿ ಡಾ. ವೆಂಕಟೇಶಯ್ಯ ಅವರನ್ನು ಗುತ್ತಿಗೆ ಆಧಾರದ ಮೇಲೆ ಸಿಎಂ ಆಪ್ತ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿತ್ತು. ಜೊತೆಗೆ ಕೆಎಎಸ್(ಹಿರಿಯ ಶ್ರೇಣಿ) ಅಧಿಕಾರಿಯಾಗಿರುವ ರಮೇಶ್ ಪಿ.ಕೋನರೆಡ್ಡಿ ಅವರನ್ನು ಸಿಎಂ ವಿಶೇಷ ಕರ್ತವ್ಯಾಧಿಕಾರಿಯಾಗಿ ನೇಮಿಸಲಾಗಿತ್ತು. ಆದರೆ ಇದೀಗ ಸಿದ್ದರಾಮಯ್ಯನವರು ಪದತ್ಯಾಗ ಮಾಡುವ ಮೊದಲೇ ಅವರ ಆಪ್ತ ಅಧಿಕಾರಿಗಳನ್ನ ಬೇರೆ ಇಲಾಖೆಗಳಿಗೆ ವರ್ಗಾವಣೆ ಮಾಡಿರುವುದು ಕುತೂಹಲ ಮೂಡಿಸಿದೆ.

ಕಾಂಗ್ರೆಸ್‌ನಿಂದ ಹಿಂದುಳಿದವರಿಗೆ ನಂಬಿಕೆ ದ್ರೋಹ

ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಆರೋಪ



ಬೆಂಗಳೂರು, ಮೇ 28– ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿರುವುದು ಕಾಂಗ್ರೆಸ್ ಪಕ್ಷದ ಮೇಲೆ ಹಾಗೂ ಕರ್ನಾಟಕದ ಚುನಾವಣಾ ರಾಜಕಾರಣದ ಮೇಲೆ ಪರಿಣಾಮ ಬೀರಲಿದೆ. ಕಾಂಗ್ರೆಸ್‌ನಿಂದ ಹಿಂದುಳಿದವರಿಗೆ ನಂಬಿಕೆ ದ್ರೋಹವಾಗಿದ್ದು, ಹಿಂದುಳಿದ ವರ್ಗ ಕಾಂಗ್ರೆಸ್ ವಿರುದ್ಧ ತಿರುಗಿ ಬೀಳಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಮಾಧ್ಯಮದೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಿಂದ ಹಿಂದುಳಿದವರಿಗೆ ನಂಬಿಕೆ ದ್ರೋಹ ಮಾಡಿದಂತಾಗಿದೆ. ವಿಶೇಷವಾಗಿ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಒಬಿಸಿ ಪರವಾಗಿ ಪ್ರಚಾರ ಮಾಡುತ್ತಾರೆ. ಆದರೆ, ಒಬಿಸಿ ಮುಖ್ಯಮಂತ್ರಿಯನ್ನು ಕಿತ್ತು ಹಾಕಿದ್ದಾರೆ. ಹಿಂದುಳಿದ ವರ್ಗಗಳ ಬಗ್ಗೆ ಅವರು ಮೊಸಳೆ ಕಣ್ಣೀರು ಸುರಿಸುವುದು ಈಗ ಬಹಿರಂಗವಾಗಿದೆ. ಇದರಿಂದ ಹಿಂದುಳಿದ ವರ್ಗದವರು ಬೇಸರಗೊಂಡಿದ್ದು, ಅವರು 2028ರ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸುವುದಾಗಿ ತೀಕ್ಷ್ಣವಾಗಿ ಪ್ರತಿಕ್ರಿಯಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಆಡಳಿತ ಪಕ್ಷವನ್ನು ಅಶಕ್ತಗೊಳಿಸಿದ್ದು, ಬಿಜೆಪಿ ಇನ್ನಷ್ಟು ಬಲಿಷ್ಠವಾಗಿ ನಮ್ಮದೇ ಆದ ಶಕ್ತಿಯೊಂದಿಗೆ 2028ಕ್ಕೆ ರಾಜ್ಯದಲ್ಲಿ ಅಧಿಕಾರಕ್ಕೆ ಬರುತ್ತೇವೆ ಎಂದು ಹೇಳಿದರು.

ಪಕ್ಷ ಸಂಘಟನೆಗೆ ಸೂಚನೆ: ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ರಾಜ್ಯಕ್ಕೆ ಭೇಟಿ ನೀಡಿದಾಗ ರಾಜ್ಯ ನಾಯಕರಿಗೆ ನೀಡಿರುವ ಸೂಚನೆಗಳ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ರಾಷ್ಟ್ರೀಯ ಅಧ್ಯಕ್ಷರು ಪಕ್ಷದ ಸಂಘಟನೆಯನ್ನು ಬೂತ್ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಸಂಘಟಿಸಲು ಸೂಚಿಸಿದ್ದಾರೆ. ಅಲ್ಲದೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪಕ್ಷದ ಬಿಎಲ್‌ಎ ಮತ್ತು ಬಿಎಲ್‌ಎ 2 ಹೇಗೆ ಕೆಲಸ ನಿರ್ವಹಿಸಬೇಕೆನ್ನುವುದನ್ನು ಗಂಭೀರವಾಗಿ ತೆಗೆದುಕೊಳ್ಳಲು ಸೂಚಿಸಿದ್ದಾರೆ. ಅವರು ಕರ್ನಾಟಕಕ್ಕೆ ಮೇಲಿಂದ ಮೇಲೆ ಭೇಟಿ ನೀಡಲಿದ್ದು, 2028ಕ್ಕೆ ಕರ್ನಾಟಕದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತರುವುದು ಅವರ ಗುರಿಯಾಗಿದೆ ಎಂದು ಹೇಳಿದ್ದಾರೆ.

ಜಮೀನಿನ ವಿಚಾರದಲ್ಲಿ ಅಕ್ರಮ ಎಸಗಿರುವ ವಿಎ, ಆರ್‌ಐ ವಿರುದ್ಧ ಕ್ರಮಕ್ಕೆ ಆಗ್ರಹ

ಮೈಸೂರು, ಮೇ28(ಜಿಎ)–ಹೆಚ್.ಡಿ. ಕೋಟೆ ತಾಲೂಕು ಅಂತರಸಂತೆ ಹೋಬಳಿಯ ನೂರಲಕುಪ್ಪೆ ಗ್ರಾಮದ ಜಮೀನಿನ ವಿಚಾರದಲ್ಲಿ ಅಕ್ರಮ ಎಸಗಿರುವ ಲೆಕ್ಕಿಗ(ವಿಎ) ಮತ್ತು ರೆವಿನ್ಯೂ ಇನ್ಸ್‌ಪೆಕ್ಟರ್(ಆರ್‌ಐ) ಮೇಲೆ ಕ್ರಮ ಜರುಗಿಸುವಂತೆ ನಗರದ ನಿವಾಸಿ ಕೃಷ್ಣ ಮೋಹನ್ ಆಗ್ರಹಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ತಂದೆ–ತಾಯಿಯ ವಂಶಸ್ಥರ ಜಮೀನಿಗೆ ಪೌತಿ ಖಾತೆ ಮಾಡಿಸುವುದಕ್ಕೆ ಸಂಬಂಧಿಸಿದಂತೆ ತಮ್ಮ ಸೋದರ ಮಾವಂದಿರಿಂದ ಹಣ ಪಡೆದಿರುವ ಅಧಿಕಾರಿಗಳು ನಾಲ್ವರು ಹೆಣ್ಣು ಮಕ್ಕಳನ್ನು ಕೈಬಿಟ್ಟಿರುವ ನಕಲಿ ವಂಶವೃಕ್ಷವನ್ನು ಅವರಿಗೆ ನೀಡಿದ್ದಾರೆ ಎಂದು ಆರೋಪಿಸಿದರು.

ತಾವು ಮರಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದರೆ ತಾಲೂಕು ಅಧಿಕಾರಿಗಳು ಸಮರ್ಪಕ ದಾಖಲೆ ನೀಡಿಲ್ಲ, ಬದಲಾಗಿ ಅಲಭ್ಯ ಎಂದು ನೀಡಿ, ತಮ್ಮ ಸೋದರ ಮಾವಂದಿರಿಗೆ ಮರಣ ಪ್ರಮಾಣ ಪತ್ರ ನೀಡಿದ್ದಾರೆ. ನಕಲಿ ವಂಶವೃಕ್ಷ ಪಡೆದ ಅವರು ಪೌತಿ ಖಾತೆ ಮಾಡಿಸಿಕೊಂಡಿದ್ದಾರೆ. ಈ ಬಗ್ಗೆ ತಹಸೀಲ್ದಾರ್‌ಗೆ ದೂರು ನೀಡಿದ ಬಳಿಕ ಖಾತೆ ಬದಲಾವಣೆ ಮಾಡಿದ್ದಾರೆ. ಆದರೆ ಅಕ್ರಮ ಎಸಗಿದ ವಿಎ ಮತ್ತು ಆರ್‌ಐ ವಿರುದ್ಧ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಇವರೆಲ್ಲರ ವಿರುದ್ಧ ಸಂಬಂಧಿಸಿದವರಿಗೆ ದೂರು ನೀಡಿದರೂ ಪ್ರಯೋಜನವಾಗಿಲ್ಲ. ಹೀಗಾಗಿ ಕೂಡಲೇ ಕ್ರಮ ಜರುಗಿಸಬೇಕು. ಇಲ್ಲದಿದ್ದಲ್ಲಿ ನ್ಯಾಯಾಲಯದ ಮೊರೆ ಹೋಗುವುದಾಗಿ ಎಚ್ಚರಿಸಿದರು.

ಕಿದ್ವಾಯಿ ಆಸ್ಪತ್ರೆ ಉದ್ಘಾಟನೆ; ನಿಮ್ಹಾನ್ಸ್ ಆಸ್ಪತ್ರೆ ಶಂಕುಸ್ಥಾಪನೆಗೆ ಮುನ್ನ

ನಿರ್ಗಮಿಸಿದ ಸಿದ್ದರಾಮಯ್ಯ!



ಮೈಸೂರು, ಮೇ 28(ಎಂಟಿವೈ)– ಮೊದಲ ಅವಧಿಯಲ್ಲಿ ಮೈಸೂರಿಗೆ ಜಯದೇವ ಹೃದ್ರೋಗ ಆಸ್ಪತ್ರೆ, ಜಿಲ್ಲಾಸ್ಪತ್ರೆ, ಟ್ರಾಮಾ ಕೇರ್ ಸೆಂಟರ್ ಸೇರಿದಂತೆ ವಿವಿಧ ಆಸ್ಪತ್ರೆಗಳನ್ನು ಕೊಡುಗೆ ನೀಡಿದ್ದ ಸಿದ್ದರಾಮಯ್ಯ, ಎರಡನೇ ಅವಧಿಯಲ್ಲಿ ಸಿಎಂ ಆಗಿದ್ದಾಗ ಕಿದ್ವಾಯಿ ಮತ್ತು ನಿಮ್ಹಾನ್ಸ್ ಆಸ್ಪತ್ರೆಯನ್ನು ಕೊಡುಗೆ ನೀಡಿದ್ದು, ಈ ಹೊಸ ಆಸ್ಪತ್ರೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಮಾಡುವ ಅವಕಾಶದಿಂದ ವಂಚಿತರಾಗಿದ್ದಾರೆ.

ಮೈಸೂರಿನ ಜಿಲ್ಲಾಸ್ಪತ್ರೆ ಆವರಣದಲ್ಲಿ 50 ಕೋಟಿ ವೆಚ್ಚದಲ್ಲಿ ಎರಡು ವರ್ಷದ ಹಿಂದೆ ಕಿದ್ವಾಯಿ ಆಸ್ಪತ್ರೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದ ಸಿದ್ದರಾಮಯ್ಯ, ತ್ವರಿತಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಆದೇಶಿಸಿದ್ದರು. ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದ್ದು, ಆಂತರಿಕ ಕೆಲಸ ಭರದಿಂದ ಸಾಗಿದೆ. ಶೀಘ್ರದಲ್ಲಿ ಕಿದ್ವಾಯಿ ಆಸ್ಪತ್ರೆ ಉದ್ಘಾಟಿಸಿ, ಅದಕ್ಕೆ ಬೇಕಾದ ಸೌಲಭ್ಯ ಒದಗಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲು ಇತ್ತೀಚೆಗಷ್ಟೇ ಸಿದ್ದರಾಮಯ್ಯ ಅವರು ಆಪ್ತರೊಂದಿಗೆ ಇಂಗಿತ ವ್ಯಕ್ತಪಡಿಸಿದ್ದರು.

ಅಲ್ಲದೆ, ಮೈಸೂರು ತಾಲೂಕಿನ ಗುಡಮಾದನಹಳ್ಳಿ ಬಳಿ ಸರ್ಕಾರಿ ಭೂಮಿಯಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ನಿಮ್ಹಾನ್ಸ್ ಆಸ್ಪತ್ರೆ ನಿರ್ಮಾಣಕ್ಕೆ ಅಣಿಯಾಗಿದ್ದರು. ನಿಗದಿಯಂತೆ 15 ದಿನದ ಹಿಂದೆಯೇ ಗುದ್ದಲಿ ಪೂಜೆ ಮಾಡಬೇಕಾಗಿತ್ತು. ಆದರೆ, ನಿಮ್ಹಾನ್ಸ್ ಆಸ್ಪತ್ರೆ ನಿರ್ಮಾಣಕ್ಕೆ ಗುರುತಿಸಿರುವ ಸ್ಥಳ ಹಸಿರು ವಲಯವಾಗಿದ್ದು, ಬೇರೆ ಸ್ಥಳ ಗುರುತಿಸುವಂತೆ ಒತ್ತಾಯಿಸಿ ರೈತ ಸಂಘಟನೆ ಪ್ರತಿಭಟನೆ ಮಾಡುತ್ತಿರುವುದರಿಂದ ಶಂಕುಸ್ಥಾಪನಾ ಕಾರ್ಯವನ್ನು ಮುಂದೂಡಲಾಗಿತ್ತು.

ಪ್ರತಿಭಟನಾ ನಿರತರ ಮನವೊಲಿಸಿ ರೈತ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಶೀಘ್ರದಲ್ಲಿಯೇ ನಿಮ್ಹಾನ್ಸ್ ಆಸ್ಪತ್ರೆಯ ಶಂಕುಸ್ಥಾಪನೆ ಮಾಡುವುದಕ್ಕೆ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದರು. ಮೈಸೂರು ಭಾಗದ ಜನರಿಗೆ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಅವಶ್ಯಕತೆ ಇರುವ ಕಿದ್ವಾಯಿ ಹಾಗೂ ನಿಮ್ಹಾನ್ಸ್ ಆಸ್ಪತ್ರೆಯನ್ನು ನಿರ್ಮಿಸಿ, ಈ ಭಾಗದ ಜನರಿಗೆ ನೆರವಾಗುವ ನಿಟ್ಟಿನಲ್ಲಿ ಕ್ರಮ ಕೈಗೊಂಡಿದ್ದರು. ಆದರೆ, ಇದೀಗ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವ ಮೂಲಕ ಹೊಸ ಆಸ್ಪತ್ರೆಯ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಅವಕಾಶದಿಂದ ವಂಚಿತರಾಗಿದ್ದಾರೆ.

ಮಹಾರಾಣಿ ಹಾಸ್ಟೆಲ್, ವೈಟ್ ಟ್ಯಾಪಿಂಗ್ ಕಾಮಗಾರಿ ವೀಕ್ಷಣೆ: ಇತ್ತೀಚೆಗಷ್ಟೇ ಮೈಸೂರು ಪ್ರವಾಸ ಕೈಗೊಂಡಿದ್ದ ಸಿದ್ದರಾಮಯ್ಯ ಅವರು ಮೈಸೂರಿನ 12 ರಸ್ತೆಗಳನ್ನು 393 ಕೋಟಿ ರೂ. ವೆಚ್ಚದಲ್ಲಿ ವೈಟ್ ಟ್ಯಾಪಿಂಗ್ ಮಾಡಲು ಮುಂದಾಗಿರುವ ಕಾಮಗಾರಿ ಬಗ್ಗೆ ಮಾಹಿತಿ ಪಡೆದಿದ್ದರು. ಅಲ್ಲದೆ, ಮಾನಂದವಾಡಿ ರಸ್ತೆಯಲ್ಲಿ ನಡೆಯುತ್ತಿರುವ ವೈಟ್ ಟ್ಯಾಪಿಂಗ್ ಕಾಮಗಾರಿಯನ್ನು ಖುದ್ದಾಗಿ ಪರಿಶೀಲಿಸಿ, ನಿಗದಿತ ಸಮಯದೊಳಗೆ ಸಾರ್ವಜನಿಕರಿಗೆ ತೊಂದರೆಯಾಗದಂತೆ ಪೂರ್ಣಗೊಳಿಸುವಂತೆ ಸೂಚಿಸಿದ್ದರು.

ಅಲ್ಲದೆ, ಮೈಸೂರಿನ ಜೆಎಲ್‌ಬಿ ರಸ್ತೆಯ ಮೆಟ್ರೋಪೋಲ್ ವೃತ್ತದ ಬಳಿ ನೂತನವಾಗಿ ನಿರ್ಮಿಸುತ್ತಿರುವ ಮಹಾರಾಣಿ ಹಾಸ್ಟೆಲ್ ಕಾಮಗಾರಿಯನ್ನು ವೀಕ್ಷಿಸಿದ್ದರು. ಹಾಸ್ಟೆಲ್ ಕಟ್ಟಡದ ಗುಣಮಟ್ಟ ಕಾಪಾಡಿಕೊಳ್ಳುವಂತೆ ಸೂಚಿಸಿದ್ದರು. ಬಳಿಕ ಚೆಸ್ಕಾಂ ವತಿಯಿಂದ ಮೈಸೂರಲ್ಲಿ ನಡೆಸುತ್ತಿರುವ ಭೂಗತ ಕೇಬಲ್ ಅಳವಡಿಕೆ ಕಾಮಗಾರಿಯ ಬಗ್ಗೆ ಮಾಹಿತಿ ಪಡೆದಿದ್ದರು.

ಡಾ.ಅಂಬೇಡ್ಕರ್ ಭವನ ಕಾಮಗಾರಿ: ಮೈಸೂರಿನ ಹೃದಯ ಭಾಗದಲ್ಲಿ ನಿರ್ಮಿಸುತ್ತಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದ ಕಾಮಗಾರಿ ಪೂರ್ಣಗೊಳಿಸುವಂತೆ ಸಿದ್ದರಾಮಯ್ಯ ಅವರು ಹಲವು ಬಾರಿ ಸೂಚಿಸಿದ್ದರು. ಹೆಚ್ಚುವರಿ ಕಾಮಗಾರಿಗಾಗಿ ಬೇಕಾದ ಅನುದಾನವನ್ನು ಬಿಡುಗಡೆ ಮಾಡಿದ್ದ ಅವರು ಮುಂದಿನ ವರ್ಷದೊಳಗೆ ಸುಸಜ್ಜಿತ ಅಂಬೇಡ್ಕರ್ ಭವನ ಪೂರ್ಣಗೊಳಿಸುವಂತೆ ತಾಕೀತು ಮಾಡಿದ್ದರು.

ಧರ್ಮಸೇನಾರನ್ನು ಎಂಎಲ್‌ಸಿ ಮಾಡುವಂತೆ ಆಗ್ರಹ


ಆರ್.ಧರ್ಮಸೇನಾ

ಮೈಸೂರು, ಮೇ28(ಜಿಎ)–ಕಾಂಗ್ರೆಸ್ ಮುಖಂಡ ಆರ್.ಧರ್ಮಸೇನಾ ಅವರನ್ನು ಎಂಎಲ್‌ಸಿ ಮಾಡುವ ಮೂಲಕ ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕೆಂದು ಮೈಸೂರು ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ವಿಭಾಗದ ಅಧ್ಯಕ್ಷ ಕೆ.ರಮೇಶ್ ಪಕ್ಷದ ವರಿಷ್ಠರಲ್ಲಿ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್.ಧರ್ಮಸೇನಾ ತಿ.ನರಸೀಪುರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ, ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರಾಗಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಸುಮಾರು 11 ವರ್ಷ ಸೇವೆ ಸಲ್ಲಿಸಿದ್ದಾರೆ. ಎರಡು ಬಾರಿ ವಿಧಾನ ಪರಿಷತ್ ಸದಸ್ಯರಾಗಿಯೂ ಜನಸೇವೆ ಮಾಡಿದ್ದಾರೆ. ದಲಿತ ಸಮುದಾಯದಲ್ಲಿ ಅತ್ಯಂತ ಅಧಿಕ ಹಾಗೂ ತಳ ಸಮುದಾಯವಾದ ಆದಿ ಜಾಂಬವ ಎಡಗೈ ಸಮಾಜದಲ್ಲಿ ಮೈಸೂರು ಭಾಗದಲ್ಲಿ ನಾಯಕತ್ವದ ಕೊರತೆಯಿದ್ದು, ಧರ್ಮ ಸೇನಾ ಅವರನ್ನು ಎಂಎಲ್‌ಸಿ ಮಾಡುವ ಮೂಲಕ ಈ ಕಂದಕ ತುಂಬಬಹುದಾಗಿದೆ ಎಂದು ಮನವಿ ಮಾಡಿದರು. ಗೋಷ್ಠಿಯಲ್ಲಿ ರಂಗನಾಥ್ ಪ್ರಸಾದ್, ಚಿಕ್ಕಣ್ಣ, ಶ್ರೀನಿವಾಸ್, ಶಶಿಕುಮಾರ್, ರೋಹಿಣಿ ಉಪಸ್ಥಿತರಿದ್ದರು.

ಡಿ.ಕೆ.ಶಿವಕುಮಾರ್ ಪರ ವಿಶೇಷ ಪೂಜೆ


ಡಿ.ಕೆ.ಶಿವಕುಮಾರ್ ಪರ ಅಭಿಮಾನಿಗಳು ಮೈಸೂರಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಮೈಸೂರು, ಮೇ 28–ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಶುಕ್ರವಾರವೇ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲೆಂದು ಅಖಿಲ ಕರ್ನಾಟಕ ಒಕ್ಕಲಿಗರ ಸಂಘ, ಮೈಸೂರು ಜಿಲ್ಲಾ ಘಟಕದ ವತಿಯಿಂದ ಅಗ್ರಹಾರದ 101 ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, 101 ತೆಂಗಿನ ಕಾಯಿ ಒಡೆಯಲಾಯಿತು.

ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ ನೇತೃತ್ವದಲ್ಲಿ ಕೆ.ಎನ್.ನಾಗೇಗೌಡ, ಬೋಗಾದಿ ಸಿದ್ದೇಗೌಡ, ಸಿಂಧುವಳ್ಳಿ ಶಿವಕುಮಾರ್, ಕೃಷ್ಣಪ್ಪ, ವರಕೂಡು ಕೃಷ್ಣೇಗೌಡ, ಗಿರೀಶ್, ಸೋಮೇಗೌಡ, ಹನುಮಂತಯ್ಯ, ನಾರಾಯಣಗೌಡ, ಕುಮಾರ್‌ಗೌಡ, ಬಸವರಾಜು, ತ್ಯಾಗರಾಜ್, ಹೊಂಬೇಗೌಡ, ನೇಹಾ, ಸುಜಾತಾ, ಪದ್ಮಾ, ಶಿವರಾಂಗೌಡ, ಶಿವರಾಜ್, ರವೀಶ್, ಸುಬ್ಬೇಗೌಡ, ಚಂದ್ರಶೇಖರ್, ರಮೇಶ್, ಕೇದಾರ್, ಪ್ರಭಾಕರ್, ಶಿವಲಿಂಗಯ್ಯ, ಶ್ರೀನಿವಾಸ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಹಿರಿಯ ಶಾಸಕರಾದ ಜಿ.ಟಿ.ದೇವೇಗೌಡ ದಂಪತಿಗೆ ವಿವಾಹ ವಾರ್ಷಿಕೋತ್ಸವ...


ಮಾಜಿ ಸಚಿವರು, ಚಾಮುಂಡೇಶ್ವರಿ ಕ್ಷೇತ್ರದ ಶಾಸಕರಾದ ಜಿ.ಟಿ.ದೇವೇಗೌಡರು ಹಾಗೂ ಶ್ರೀಮತಿ ಲಲಿತಾ ಜಿ.ಟಿ.ದೇವೇಗೌಡ ದಂಪತಿಗೆ ಅಭಿಮಾನಿಗಳು ವಿವಾಹ ವಾರ್ಷಿಕೋತ್ಸವದ ಶುಭಾಶಯ ಕೋರಿದರು. ಕೆ.ಜಿ.ಕೊಪ್ಪಲಿನ ಮುಖಂಡರಾದ ಬಸಪ್ಪ, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕ ಎನ್.ಯೋಗಾನಂದ ಮುಖಂಡರಾದ ಮಂಜು, ಮಹೇಂದ್ರ ಇತರರಿದ್ದರು.

ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಸಚಿವ ಸಂತೋಷ್‌ಲಾಡ್ ಕಣ್ಣೀರು



ಬೆಂಗಳೂರು, ಮೇ 28– ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಸಚಿವ ಸಂತೋಷ್ ಲಾಡ್ ಕಣ್ಣೀರಿಟ್ಟಿದ್ದಾರೆ. ರಾಜೀನಾಮೆಗೂ ಮುನ್ನ ಸಚಿವರ ಜೊತೆ ಸಿಎಂ ಸಿದ್ದರಾಮಯ್ಯ ಇಂದು ಬ್ರೇಕ್‌ಫಾಸ್ಟ್ ಸಭೆ ನಡೆಸಿದರು. ಈ ವೇಳೆ ತಮ್ಮ ರಾಜೀನಾಮೆಯನ್ನು ಸಹ ಘೋಷಣೆ ಮಾಡಿದರು. ಸಿದ್ದರಾಮಯ್ಯ ರಾಜೀನಾಮೆ ಘೋಷಣೆ ಕೇಳಿ ಸಭೆಯಲ್ಲೇ ಆಪ್ತ ಸಚಿವರು ಕಣ್ಣೀರಿಟ್ಟರು. ಸಭೆ ಬಳಿಕ ಒಬ್ಬೊಬ್ಬರಾಗಿ ಹೊರಬಂದ ಸಚಿವರ ಮುಖದಲ್ಲಿ ಬೇಸರದ ಭಾವ ಕಂಡುಬಂದಿತು. ಸಿಎಂ ರಾಜೀನಾಮೆ ವಿಚಾರವಾಗಿ ಪ್ರತಿಕ್ರಿಯೆ ನೀಡಲು ನಿರಾಕರಿಸಿದರು. ರಾಜೀನಾಮೆ ಕುರಿತು ಸಚಿವ ಸಂತೋಷ್ ಲಾಡ್ ಬಳಿ ಮಾಧ್ಯಮದವರು ಪ್ರಶ್ನೆ ಕೇಳಿದರು. ಈ ವೇಳೆ, ಗದ್ಗದಿತರಾದ ಸಂತೋಷ್ ಲಾಡ್ ದುಃಖ ತಡೆಯಲಾಗದೇ ಕಣ್ಣೀರಿಟ್ಟರು. ಯಾವುದೇ ಪ್ರತಿಕ್ರಿಯೆ ನೀಡದೇ ಕಾರಲ್ಲಿ ಹೊರಟುಹೋದರು.

ಇಂದು ಸ್ವಾತಿ ನಕ್ಷತ್ರ ಪೂಜೆ

ಮೈಸೂರು: ಮೈಸೂರಿನ ವಿಜಯನಗರದಲ್ಲಿರುವ ಶ್ರೀ ಯೋಗಾನರಸಿಂಹಸ್ವಾಮಿ ದೇವಸ್ಥಾನದಲ್ಲಿ ಮೇ 29 (ಶುಕ್ರವಾರ) ಸ್ವಾತಿ ನಕ್ಷತ್ರ ವಿಶೇಷ ಪೂಜೆಯನ್ನು ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ 9 ಗಂಟೆಗೆ ಅಭಿಷೇಕ ಮತ್ತು ವಿಶೇಷ ಪೂಜೆ ನಡೆಯಲಿದ್ದು, ಮಧ್ಯಾಹ್ನ 12 ಗಂಟೆಗೆ ಭಕ್ತರಿಗೆ ಪ್ರಸಾದ ವಿತರಿಸಲಾಗುವುದು ಎಂದು ದೇವಸ್ಥಾನದ ಆಡಳಿತಾಧಿಕಾರಿ ಶ್ರೀನಿವಾಸನ್ ತಿಳಿಸಿದ್ದಾರೆ.

ಸಿದ್ದರಾಮಯ್ಯ ರಾಜೀನಾಮೆ ಬೇಸರ ತಂದಿದೆ


ಕೆ.ವಿ.ಮಲ್ಲೇಶ್

ಮೈಸೂರು, ಮೇ 28– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವ ಮೂಲಕ ನಾಡಿನ ಸೈದ್ಧಾಂತಿಕ ರಾಜಕಾರಣದ ಕೊನೆಯ ಕೊಂಡಿ ಕಳಚಿ ಬಿದ್ದಂತಾಗಿದೆ ಎಂದು ಮೈಸೂರು ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ. ಮಲ್ಲೇಶ್ ಅಭಿಪ್ರಾಯಪಟ್ಟಿದ್ದಾರೆ.

ಕಳೆದ 5 ದಶಕಗಳಿಂದ ಕೋಮುವಾದಿಗಳ ವಿರುದ್ಧ ದಿಟ್ಟ ರಾಜಕಾರಣ ಮಾಡಿಕೊಂಡು ಬಂದಿದ್ದ ಸಿದ್ದರಾಮಯ್ಯ, ಎಂದಿಗೂ ಸಿದ್ಧಾಂತದಲ್ಲಿ ರಾಜೀ ಮಾಡಿಕೊಳ್ಳಲಿಲ್ಲ. ತಮ್ಮ ರಾಜಕೀಯ ಜೀವನದುದ್ದಕ್ಕೂ ತಾವು ನಂಬಿದ ಸಿದ್ಧಾಂತವನ್ನು ಬಿಟ್ಟು ಕದಲಲಿಲ್ಲ. ಬಡವರು, ದಲಿತರು, ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸದಾಕಾಲ ಚಿಂತಿಸುತ್ತಿದ್ದ ಅವರು ಅಧಿಕಾರ ಸಿಕ್ಕಾಗಲೆಲ್ಲ ಬಡವರ ಉದ್ಧಾರಕ್ಕೆ ಶ್ರಮಿಸಿದರು. ಸಮಸಮಾಜದ ನಿರ್ಮಾಣಕ್ಕೆ ಹಾತೊರೆಯುತ್ತಿದ್ದ ಅವರು ಜನರ ಕಲ್ಯಾಣಕ್ಕಾಗಿ ಮೊದಲ ಅವಧಿಯಲ್ಲಿ ಭಾಗ್ಯಗಳನ್ನು ನೀಡಿದರೆ, ಎರಡನೇ ಅವಧಿಯಲ್ಲಿ ಗ್ಯಾರಂಟಿಗಳನ್ನು ನೀಡಿ ಗ್ಯಾರಂಟಿರಾಮಯ್ಯನಾದ ಮಹಾ ಮಾನವತಾವಾದಿ.

ಇಂತಹ ನಾಯಕ ಅಧಿಕಾರ ರಾಜಕಾರಣದಿಂದ ಹೊರ ನಡೆಯುವ ಮನಸ್ಸು ಮಾಡಿರಬಹುದು. ಆದರೆ, ಅವರು ಎಂದಿಗೂ ಸಕ್ರಿಯ ರಾಜಕಾರಣದಿಂದ ದೂರ ಸರಿಯಬಾರದು. ಸದಾ ಕಾಲ ರಾಜಕಾರಣದಲ್ಲಿ ಉಳಿದು ಯುವ ರಾಜಕಾರಣಿಗಳಲ್ಲಿ ಸೈದ್ಧಾಂತಿಕ ನಿಲುವನ್ನು ತುಂಬಬೇಕು.

ಈಗಾಗಲೇ ಕೇಳಿಬರುತ್ತಿರುವ ಮಾತುಗಳಂತೆ ಮುಂದಿನ ದಿನಗಳಲ್ಲಿ ಅವರು ರಾಷ್ಟ್ರ ರಾಜಕಾರಣದಲ್ಲಿ ತೊಡಗಿಸಿಕೊಂಡು ಕೋಮುವಾದಿ ಶಕ್ತಿಗಳ ವಿರುದ್ಧ ಹೋರಾಡಬೇಕು. ಅಂತಹ ಶಕ್ತಿ ಸಿದ್ದರಾಮಯ್ಯ ಅವರಲ್ಲಿ ಖಂಡಿತ ಇದೆ. ಇದೇ ಕಾರಣಕ್ಕೆ ಕಾಂಗ್ರೆಸ್ ಹೈಕಮಾಂಡ್ ಅವರನ್ನು ರಾಷ್ಟ್ರ ರಾಜಕಾರಣಕ್ಕೆ ಆಹ್ವಾನಿಸಿದೆ.

ಬಾಲಕಿಯರ ವಸತಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 28– ಮೈಸೂರು ತಾಲೂಕಿನ ವರಕೋಡು ಗ್ರಾಮದಲ್ಲಿರುವ ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕೆ 9ರಿಂದ 12ನೇ ತರಗತಿ ವ್ಯಾಸಂಗ ಮಾಡುತ್ತಿರುವ ಮೈಸೂರು ಜಿಲ್ಲಾ ವ್ಯಾಪ್ತಿಯ ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿನಿಯರು ಜೂನ್ 10ರೊಳಗೆ ವಸತಿ ನಿಲಯದ ಮೇಲ್ವಿಚಾರಕರನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗೆ ಮೊ: 9900887447, 9591933060, 9663002884 ಸಂಪರ್ಕಿಸಬಹುದು.

ನಾಳೆ ಸೌರಮಾನ ಶ್ರೀ ಲಕ್ಷ್ಮೀನರಸಿಂಹ ಜಯಂತಿ; ವಿಶೇಷ 'ಸ್ವಾತಿ' ಪೂಜೆ





ಮೈಸೂರು, ಮೇ 28–ನಗರದ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಮೇ 30ರ ಶನಿವಾರ ಶ್ರೀ ಶ್ರೀ ಯದುಗಿರಿ ಯತಿರಾಜ ರಾಮಾನುಜ ಜೀಯರ್‌ರವರ ದಿವ್ಯ ಅನುಗ್ರಹದೊಂದಿಗೆ ಸೌರಮಾನ ಶ್ರೀ ಲಕ್ಷ್ಮೀ ನರಸಿಂಹ ಜಯಂತಿ ಹಾಗೂ ವಿಶೇಷ 'ಸ್ವಾತಿ' ಪೂಜೆ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 7.30ಕ್ಕೆ ವಿಶ್ವರೂಪ ದರ್ಶನ, 8.45ಕ್ಕೆ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ನವಕಲಶ ಸ್ಥಾಪನ ತಿರುಮಂಜನ (ಅಭಿಷೇಕ) ಮತ್ತು ದಿವ್ಯ ಪ್ರಬಂದ ಪಾರಾಯಣ, ಮಧ್ಯಾಹ್ನ 1ಕ್ಕೆ ವಿಶೇಷ ಅಲಂಕಾರ, ಮಂತ್ರಪುಷ್ಪ, ಅಷ್ಟೋತ್ತರ, 1.30ಕ್ಕೆ ಮಹಾ ನೈವೇದ್ಯ, ಮಂಗಳಾರತಿ ಮತ್ತು ತೀರ್ಥ ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ. ಸಂಜೆ 7.00 ಗಂಟೆಗೆ ತಿರುವೀಧಿ ಉತ್ಸವ (ಮುಖ್ಯ ರಸ್ತೆಗಳಲ್ಲಿ), 8ಕ್ಕೆ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ, 9ಕ್ಕೆ ದೇವರಿಗೆ ಏಕಾಂತ ಸೇವೆ ನಡೆಯಲಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್. ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಕೋರಿದ್ದಾರೆ. ಮಾಹಿತಿಗೆ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಎಸ್‌ಯುಸಿಐ(ಸಿ) ಪ್ರತಿಭಟನೆ



ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಖಂಡಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ(ಕಮ್ಯುನಿಸ್ಟ್) ಪಕ್ಷದ ಜಿಲ್ಲಾ ಸಮಿತಿ ವತಿಯಿಂದ ಗುರುವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಮೇ 28(ಎಂಕೆ)– ಕೇಂದ್ರ ಸರ್ಕಾರ ಕಳೆದ 10 ದಿನಗಳಲ್ಲಿ 4 ಬಾರಿ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಮಾಡಿರುವ ಕ್ರಮವನ್ನು ಖಂಡಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ(ಕಮ್ಯುನಿಸ್ಟ್) ಪಕ್ಷದ ಜಿಲ್ಲಾ ಸಮಿತಿ ವತಿಯಿಂದ ಗುರುವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಜಮಾವಣೆಗೊಂಡ ಪ್ರತಿಭಟನಾಕಾರರು, ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿದರಲ್ಲದೆ ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಸೇರಿದಂತೆ ಇಂಧನ ದರ ಏರಿಕೆ ಕ್ರಮವನ್ನು ವಾಪಸ್ ಪಡೆಯುವಂತೆ ಒತ್ತಾಯಿಸಿದರು.

ಪಶ್ಚಿಮ ಏಷ್ಯಾದ ಯುದ್ಧದ ಕಾರಣದಿಂದ ಕಚ್ಚಾತೈಲದ ಬೆಲೆ ಏರಿಕೆಯಾಗಿದೆ. ಈ ಏರಿಕೆಗೆ ತಕ್ಕಂತೆ ತೈಲ ಕಂಪನಿಗಳು ದರ ಪರಿಷ್ಕರಣೆ ಮಾಡಿವೆ ಎಂಬುದಾಗಿ ಕೇಂದ್ರ ಸರ್ಕಾರ ಸಮರ್ಥನೆ ನೀಡುತ್ತಿದೆ. ಆದರೆ, ಯುದ್ಧ ಆರಂಭವಾಗಿದ್ದು ಫೆ.28ರಂದು ಪಂಚ ರಾಜ್ಯಗಳ ಚುನಾವಣೆ ಫಲಿತಾಂಶ ಬರುವವರೆಗೆ ದರ ಏರಿಕೆಯನ್ನು ಕಂಪನಿಗಳೇ ತಡೆ ಹಿಡಿದವೇ ಎಂಬುದಕ್ಕೆ ಬಿಜೆಪಿಯೇ ಉತ್ತರಿಸಬೇಕು. ಸಾಲದೆಂಬಂತೆ ಅಡುಗೆ ಅನಿಲ, ಸಿಎನ್‌ಜಿಗಳ ದರವನ್ನೂ ಏರಿಕೆ ಮಾಡಲಾಗಿದೆ. ಇದರಿಂದ ಜನಸಾಮಾನ್ಯರು, ಹೋಟೆಲ್ ಉದ್ಯಮಿಗಳು, ಆಟೋ ಚಾಲಕರು ಸೇರಿದಂತೆ ಎಲ್ಲರಿಗೂ ಹೊರೆಯಾಗಿದೆ ಎಂದು ಕಿಡಿಕಾರಿದರು.

ಬಿಜೆಪಿ ಮತ್ತು ಕಾಂಗ್ರೆಸ್ ಸರ್ಕಾರಗಳು ಪರಸ್ಪರ ದೂಷಿಸುತ್ತಾ ಜನರನ್ನು ಮೂರ್ಖರನ್ನಾಗಿ ಮಾಡುತ್ತಿವೆ. ಹೊಸ ಉದ್ಯೋಗಗಳು ಸೃಷ್ಟಿಯಾಗುತ್ತಿಲ್ಲ. ಜನರ ಸಂಕಷ್ಟ ಪರಿಸ್ಥಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಮ್ಮ ತೆರಿಗೆಗಳನ್ನು ಕಡಿತ ಮಾಡಬೇಕು. ಪರ್ಯಾಯ ತೈಲ ಮೂಲಗಳನ್ನು ಹುಡುಕಬೇಕು. ತಮ್ಮ ಸ್ವಾರ್ಥಕ್ಕೆ ಯುದ್ಧ ಮಾಡದಂತೆ ಅಮೆರಿಕಾ– ಇಸ್ರೇಲ್ ದೇಶಗಳ ಮೇಲೆ ಜಾಗತಿಕ ಒತ್ತಡ ತರಬೇಕು ಎಂದು ಒತ್ತಾಯಿಸಲಾಯಿತು.

> ಜಾಗತಿಕ ಮಾರುಕಟ್ಟೆಯ ದರ ಏರಿಕೆ ನೆಪ ನೀಡುವ ಕೇಂದ್ರ ಸರ್ಕಾರ, ಕೋವಿಡ್ ಮತ್ತು ನಂತರದ ಅವಧಿಯಲ್ಲಿ ಕಚ್ಚಾ ತೈಲದ ಬೆಲೆ ಕುಸಿತವಾದಾಗ ಮತ್ತು ರಷ್ಯಾ ದೇಶದಿಂದ ರಿಯಾಯಿತಿ ದರದಲ್ಲಿ ಖರೀದಿ ಮಾಡಿದಾಗ ಅದರ ಪ್ರಯೋಜನವನ್ನು ದೇಶದ ಜನರಿಗೆ ಕೊಡಲಿಲ್ಲವೇಕೇ? ಕೇಂದ್ರದ ಅಬಕಾರಿ ಸುಂಕ ಏರಿಕೆ ಜೊತೆಗೆ ಕಳೆದ 12 ವರ್ಷಗಳಿಂದ ಪೆಟ್ರೋಲ್, ಡೀಸೆಲ್ ಮೇಲೆ 43 ಲಕ್ಷ ಕೋಟಿ ರೂ. ತೆರಿಗೆಯನ್ನು ಜನರಿಂದ ಸುಲಿಗೆ ಮಾಡಿದೆ.
> –ಪ್ರತಿಭಟನಾಕಾರರು.

ಎಸ್‌ಯುಸಿಐ(ಸಿ) ಜಿಲ್ಲಾ ಕಾರ್ಯದರ್ಶಿ ಬಿ.ರವಿ, ಜಿಲ್ಲಾ ಸಮಿತಿ ಸದಸ್ಯರಾದ ಎಂ.ಉಮಾದೇವಿ, ಚಂದ್ರಶೇಖರ ಮೇಟಿ, ಪಿ.ಎಸ್.ಸಂಧ್ಯಾ, ಬಿ.ಎಸ್. ಸೀಮಾ, ಯಶೋಧರ್, ಹರೀಶ್, ಸುನಿಲ್, ಸುಮಾ, ಬಸವರಾಜು, ಚಂದ್ರಕಲಾ, ನೀತುಶ್ರೀ, ಪುಷ್ಪ, ರಣಜಿತ್, ಪೂರ್ಣಿಮಾ, ನಿತಿನ್ ಮತ್ತಿತರರಿದ್ದರು.

ದೇಶ - ವಿದೇಶ

ಜಿರಳೆಗಳಿಗಾಗಿ ಮೊದಲ ಡಿಎನ್‌ಎ ಬಾರ್‌ಕೋಡ್ ಗ್ರಂಥಾಲಯ ಅಭಿವೃದ್ಧಿ!



ಪುಣೆ: ಕಳೆದ ಕೆಲವು ದಿನಗಳಿಂದ ದೇಶಾದ್ಯಂತ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಾರಂಭವಾದ 'ಕಾಕ್ರೋಚ್ ಜನತಾ ಪಾರ್ಟಿ' ತೀವ್ರ ಚರ್ಚೆಯ ವಿಷಯವಾಗಿದೆ. ಗಮನಾರ್ಹವಾಗಿ, ಈ ವೇದಿಕೆಯನ್ನು ಯುವ ಜನರಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಎತ್ತಿತೋರಿಸಲು ಬಳಸಿಕೊಳ್ಳಲಾಗುತ್ತಿದೆ. ಒಂದೆಡೆ ಈ ವಿಷಯವು ದೇಶಾದ್ಯಂತ ಚರ್ಚೆಯಾಗುತ್ತಿದ್ದರೆ, ಮತ್ತೊಂದೆಡೆ, ಭಾರತದ ಪ್ರಾಣಿಶಾಸ್ತ್ರ ಸಮೀಕ್ಷೆಯ ಪಶ್ಚಿಮ ಪ್ರಾದೇಶಿಕ ಕೇಂದ್ರ ಭಾರತದ ಮೊದಲ ಸಮಗ್ರ ಡಿಎನ್‌ಎ ಬಾರ್‌ಕೋಡ್ ಗ್ರಂಥಾಲಯವನ್ನು ವಿಶೇಷವಾಗಿ ಜಿರಳೆಗಳಿ ಗಾಗಿಯೇ ಅಭಿವೃದ್ಧಿಪಡಿಸಿದೆ. ಭಾರತೀಯ ಪ್ರಾಣಿ ಸಮೀಕ್ಷೆಯ ಸಂಶೋಧಕರಾದ ಶಬ್ನಮ್ ಅನ್ಸಾರಿ ಮತ್ತು ಕೆ.ಪಿ.ದಿನೇಶ್, ಚೆನ್ನೈನ ZSIಯ ಎಂ.ಸೇನ್ರಾಜ್ ಮತ್ತು ಪುಣೆಯ ಪ್ರೊ. ರಾಮಕೃಷ್ಣ ಮೋರ್ ಕಾಲೇಜಿನ ರಶ್ಮಿ ಮೋರ್ ಈ ಅಧ್ಯಯನವನ್ನು ನಡೆಸಿ, ಭಾರತದಲ್ಲಿ ಜಿರಳೆಗಳಿಗಾಗಿ ಮೊದಲ ಮತ್ತು ಅತಿದೊಡ್ಡ ಡಿಎನ್‌ಎ ಬಾರ್‌ಕೋಡ್ ಗ್ರಂಥಾಲಯವನ್ನು ಅಭಿವೃದ್ಧಿಪಡಿಸಿದ್ದಾರೆ. ಭಾರತೀಯ ಜೀವವೈವಿಧ್ಯತೆಯ ಅಧ್ಯಯನದಲ್ಲಿ ಐತಿಹಾಸಿಕ ಮೈಲಿಗಲ್ಲನ್ನು ಗುರುತಿಸುವ ಮೂಲಕ, ಭಾರತದ ಪ್ರಾಣಿಶಾಸ್ತ್ರ ಸಮೀಕ್ಷೆಯ ಪಶ್ಚಿಮ ಪ್ರಾದೇಶಿಕ ಕೇಂದ್ರದ ವಿಜ್ಞಾನಿಗಳು ಜಿರಳೆಗಳಿಗಾಗಿ ಭಾರತದ ಮೊದಲ ಮತ್ತು ಅತಿದೊಡ್ಡ ಡಿಎನ್‌ಎ ಗ್ರಂಥಾಲಯವೊಂದನ್ನು ಅಭಿವೃದ್ಧಿಪಡಿಸಿದ್ದಾರೆ.

ಬಕ್ರೀದ್‌ಗೆ ಬಲಿ ಕೊಡಲು ಖರೀದಿಸಿದ್ದ ಟ್ರಂಪ್ ಹೋಲುವ ಎಮ್ಮೆ ಮೃಗಾಲಯಕ್ಕೆ



ಢಾಕಾ: ಇತ್ತೀಚೆಗೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕಣ್ಣುಗಳನ್ನು ಹೋಲುವ ಎಮ್ಮೆಯೊಂದರ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗಿತ್ತು. ಈ ಎಮ್ಮೆಯನ್ನು ಬಕ್ರೀದ್‌ಗೆ ಬಲಿ ಕೊಡಲು ಮುಸ್ಲಿಮರು ಖರೀದಿ ಮಾಡಿದ್ದರು. ಆದರೆ, ಈ ಎಮ್ಮೆಯನ್ನು ಇದೀಗ ರಕ್ಷಿಸಲಾಗಿದ್ದು, ಬಾಂಗ್ಲಾದೇಶದ ರಾಷ್ಟ್ರೀಯ ಮೃಗಾಲಯಕ್ಕೆ ಸ್ಥಳಾಂತರಿಸಲಾಗುತ್ತದೆ ಎಂದು ವರದಿಯಾಗಿದೆ.

ಸುಮಾರು 700 ಕೆ.ಜಿ ತೂಕವಿರುವ ಈ ಎಮ್ಮೆ ವಿಭಿನ್ನವಾದ ದೇಹದ ಮೈಕಟ್ಟು, ಹಣೆ ಹಾಗೂ ಕೂದಲಿನ ಫೋಟೋಗಳು ವೈರಲ್ ಆಗುತ್ತಿವೆ. ಕೆಲವರು ಇದನ್ನು ಡೊನಾಲ್ಡ್ ಟ್ರಂಪ್ ಎಮ್ಮೆ ಎಂದೇ ಇದಕ್ಕೆ ಹೆಸರಿಟ್ಟಿದ್ದರು.

ಈ ಎಮ್ಮೆಯನ್ನು ಈ ಮೊದಲು ಅದರ ಮಾಲೀಕ ಜಿಯಾ ಉದ್ದೀನ್ ಮೃಧಾ ಮಾರಾಟ ಮಾಡಿದ್ದರು. ಆದರೆ, ಹೆಚ್ಚುತ್ತಿರುವ ಸಾರ್ವಜನಿಕ ಹಿತಾಸಕ್ತಿಯ ಹಿನ್ನೆಲೆಯಲ್ಲಿ ಸರ್ಕಾರಿ ಅಧಿಕಾರಿಗಳು ಕೊನೆಯ ಕ್ಷಣದಲ್ಲಿ ಮಧ್ಯಪ್ರವೇಶಿಸಿ ಪ್ರಾಣಿಯನ್ನು ಖರೀದಿಸಿ ಢಾಕಾದ ಬಾಂಗ್ಲಾದೇಶದ ರಾಷ್ಟ್ರೀಯ ಮೃಗಾಲಯಕ್ಕೆ ಸ್ಥಳಾಂತರಿಸಿದರು. ಅಲ್ಲಿ ಈ ಎಮ್ಮೆಯನ್ನು ಬಲಿ ನೀಡುವುದರ ಬದಲು ಸಾರ್ವಜನಿಕ ಪ್ರದರ್ಶನಕ್ಕೆ ಇಡಲಾಗುತ್ತದೆ ಎಂದು ಹೇಳಿದ್ದಾರೆ. ಭದ್ರತಾ ಕಾಳಜಿಯಿಂದಾಗಿ ಪ್ರಾಣಿಯನ್ನು ರಕ್ಷಿಸಲಾಗಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಗಂಗಾ ನದಿಯಲ್ಲಿ ದೋಣಿ ಮುಳುಗಡೆ ಇಬ್ಬರ ದುರ್ಮರಣ, 5 ಮಂದಿ ನಾಪತ್ತೆ



ಪಾಟ್ನಾ: 14 ಮಂದಿಯನ್ನು ಹೊತ್ತೊಯ್ಯುತ್ತಿದ್ದ ದೋಣಿಯೊಂದು ಗಂಗಾ ನದಿಯಲ್ಲಿ ಮುಳುಗಿದ ಪರಿಣಾಮ ಇಬ್ಬರು ಸಾವನ್ನಪ್ಪಿದ್ದು, 5 ಮಂದಿ ನಾಪತ್ತೆಯಾಗಿರುವ ಘಟನೆ ಬಿಹಾರದ ಪಾಟ್ನಾದಲ್ಲಿ ನಡೆದಿದೆ.

ಪ್ರವಾಹ ಪೀಡಿತ ಪಾಟ್ನಾದ ಉಮಾನಾಥ್ ಗಂಗಾ ಘಾಟ್ ಬಳಿ ಗಂಗಾ ನದಿಯಲ್ಲಿ ನೀರಿನ ಮಟ್ಟ ಏರಿಕೆ ಹಾಗೂ ಬಲವಾದ ಗಾಳಿಯಿಂದ ದೋಣಿ ಮುಳುಗಿದೆ. ಕೂಡಲೇ ಸ್ಥಳೀಯರ ನೆರವಿನಿಂದ ದೋಣಿಯಲ್ಲಿದ್ದ 7 ಮಂದಿಯನ್ನು ಎಸ್‌ಡಿಆರ್‌ಎಫ್ ತಂಡ ಸುರಕ್ಷಿತವಾಗಿ ರಕ್ಷಿಸಿದ್ದು, ಇಬ್ಬರ ಮೃತದೇಹವನ್ನು ನೀರಿನಿಂದ ಹೊರತೆಗೆಯಲಾಗಿದೆ. ಸಾಮರ್ಥ್ಯಕ್ಕಿಂತ ಹೆಚ್ಚಿನ ಜನರನ್ನು ದೋಣಿಯಲ್ಲಿ ಕರೆದೊಯ್ದಿದ್ದು, ಯಾವುದೇ ರಕ್ಷಣಾ ಕವಚಗಳನ್ನು ಹೊಂದಿರದ ಕಾರಣ ದುರಂತ ಸಂಭವಿಸಿದೆ ಎಂದು ವರದಿಗಳು ತಿಳಿಸಿವೆ. ಮೃತರನ್ನು ನೀಲಂಕುಮಾರಿ (30) ಹಾಗೂ ಕಾಶಿ ಕುಮಾರ್ (15) ಎಂದು ಗುರುತಿಸಲಾಗಿದೆ. 14 ಮಂದಿ ಪೈಕಿ ಐದು ಮಂದಿ ನಾಪತ್ತೆಯಾಗಿದ್ದು, ಶೋಧಕಾರ್ಯ ಮುಂದುವರಿದಿದೆ. ಪ್ರತಿಕೂಲ ಹವಾಮಾನ ಮತ್ತು ನೀರಿನ ಪರಿಸ್ಥಿತಿಗಳ ಮಧ್ಯೆಯೂ ಮುಳುಗು ತಜ್ಞ ಮತ್ತು ರಕ್ಷಣಾ ಸಿಬ್ಬಂದಿ ನದಿಯ ವಿವಿಧ ಭಾಗಗಳಲ್ಲಿ ಶೋಧಕಾರ್ಯ ನಡೆಸುತ್ತಿದ್ದಾರೆ.

ಕೆನಡಾದಲ್ಲಿ ಭಾರತೀಯ ವಿದ್ಯಾರ್ಥಿನಿಗೆ ಚಾಕು ಇರಿದು ಹತ್ಯೆ



ಒಟ್ಟಾವಾ: ಕೆನಡಾದ ನಯಾಗ್ರಾದಲ್ಲಿ ಗುಜರಾತ್ ಮೂಲದ ವಿದ್ಯಾರ್ಥಿನಿಯನ್ನು ದುಷ್ಕರ್ಮಿಯೊಬ್ಬ ಚಾಕು ಇರಿದು ಹತ್ಯೆ ಮಾಡಿದ್ದಾನೆ.

ಕೊಲೆಯಾದ ಯುವತಿಯನ್ನು ವಿಧಿ ಮೇಘಾ (22) ಎಂದು ಗುರುತಿಸಲಾಗಿದೆ. ಗುಜರಾತ್‌ನ ಆಳಂದ ಜಿಲ್ಲೆಯ ಬೊರ್ಸಾದ್ ಮೂಲದ ವಿಧಿ ಮೇಘಾ ಕಳೆದ 4 ವರ್ಷಗಳಿಂದ ಕೆನಡಾದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿದ್ದಳು. ವಿದ್ಯಾಭ್ಯಾಸದೊಂದಿಗೆ ಪಾರ್ಟ್‌ಟೈಮ್ ಕೆಲಸ ಮಾಡುತ್ತಿದ್ದಳು. ವಿಧಿ ಮೇಘಾ ಎಂದಿನಂತೆ ಕೆಲಸಕ್ಕೆ ಹೊರಟಿದ್ದ ಸಮಯದಲ್ಲಿ ದುಷ್ಕರ್ಮಿ ನಡುರಸ್ತೆಯಲ್ಲೇ ಚಾಕುವಿನಿಂದ ಇರಿದು ಹಲ್ಲೆ ನಡೆಸಿದ್ದಾನೆ. ಗಂಭೀರವಾಗಿ ಗಾಯಗೊಂಡಿದ್ದ ಯುವತಿಯನ್ನು ಸ್ಥಳೀಯರು ತಕ್ಷಣ ಆಸ್ಪತ್ರೆಗೆ ಕರೆದೊಯ್ದರು. ಆದರೆ ಚಿಕಿತ್ಸೆ ಫಲಕಾರಿ ಯಾಗದೇ ಆಕೆ ಮೃತಪಟ್ಟಿದ್ದಾಳೆ. ಪ್ರಾಥಮಿಕ ತನಿಖೆ ಪ್ರಕಾರ, ದರೋಡೆ ಯತ್ನದ ವೇಳೆ ಈ ಹತ್ಯೆ ನಡೆದಿರಬಹುದು ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಪ್ರಕರಣ ಸಂಬಂಧ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ತನಿಖೆ ಮುಂದುವರಿದಿದೆ. ಆದರೆ ಹತ್ಯೆಯ ನಿಖರ ಕಾರಣ ಇನ್ನೂ ಬಹಿರಂಗವಾಗಿಲ್ಲ. ಮೇ 16ರಿಂದ ವಿಧಿ ಕುಟುಂಬದ ಸಂಪರ್ಕಕ್ಕೆ ಸಿಕ್ಕಿರಲಿಲ್ಲ. ಆಕೆ ಓದು ಮತ್ತು ಕೆಲಸದಲ್ಲಿ ಬ್ಯುಸಿಯಾಗಿರಬಹುದು ಎಂದು ಕುಟುಂಬಸ್ಥರು ಭಾವಿಸಿದ್ದರು. ಬಳಿಕ ಕೆನಡಾ ಅಧಿಕಾರಿಗಳ ಮೂಲಕ ಕುಟುಂಬಕ್ಕೆ ವಿಧಿ ಸಾವಿನ ಮಾಹಿತಿ ದೊರೆತಿದೆ.

20 ವರ್ಷಗಳ ಜೈಲುವಾಸದ ಬಳಿಕ ಸೌದಿಯಿಂದ ಕೇರಳಕ್ಕೆ ಮರಳಿದ ರಹೀಮ್



ತಿರುವನಂತಪುರಂ: ವಿಶೇಷ ಚೇತನ ಬಾಲಕನ ಕೊಲೆ ಪ್ರಕರಣದಲ್ಲಿ ಸೌದಿ ಅರೇಬಿಯಾದಲ್ಲಿ ಮರಣ ದಂಡನೆಗೆ ಗುರಿಯಾಗಿ ಬಳಿಕ ಬಿಡುಗಡೆಗೊಂಡ ಕೋಯಿಕ್ಕೋಡ್ ನಿವಾಸಿ ಅಬ್ದುಲ್ ರಹೀಮ್ 20 ವರ್ಷಗಳ ಬಳಿಕ ಕೇರಳಕ್ಕೆ ಮರಳಿದ್ದಾರೆ.2006ರಲ್ಲಿ ಬಾಲಕನ ಕೊಲೆ ನಡೆದಿದ್ದು, ರಹೀಮ್‌ಗೆ ಅಲ್ಲಿನ ನ್ಯಾಯಾಲಯ ಮರಣದಂಡನೆ ವಿಧಿಸಿತ್ತು. 20 ವರ್ಷಗಳ ಬಳಿಕ ಮನೆಗೆ ಮರಳಿದ ಮಗನನ್ನು ಕಂಡು ರಹೀಮ್ ತಾಯಿ ಫಾತಿಮಾ ಭಾವುಕರಾಗಿದ್ದಾರೆ. ಬಕ್ರೀದ್ ಹಬ್ಬದ ಸಂದರ್ಭ ಮನೆಗೆ ಮರಳಿದ ರಹೀಮ್‌ನನ್ನು ಕಂಡು ಸ್ನೇಹಿತರು, ಸಂಬಂಧಿಕರು ಆನಂದಭಾಷ್ಪ ಸುರಿಸಿದ್ದಾರೆ. ಮರಣದಂಡನೆ ಶಿಕ್ಷೆಯಿಂದ ರಹೀಮ್ ಅವರನ್ನು ಕೈಬಿಡಲು ಮೃತ ಬಾಲಕನ ಕುಟುಂಬ ಸುಮಾರು 38 ಕೋಟಿ ಪರಿಹಾರಕ್ಕೆ ಬೇಡಿಕೆ ಇಟ್ಟಿತ್ತು. ಇದನ್ನು ಒಪ್ಪಿಕೊಂಡಿದ್ದ ರಹೀಮ್ ಕುಟುಂಬ ದೇಣಿಗೆ ಸಂಗ್ರಹಿಸಿ ಸುಮಾರು 34 ಕೋಟಿ ರೂ. ನೀಡಿದೆ. ಸಾವಿಗೆ ಪರಿಹಾರವಾಗಿ ನೀಡುವ ಬ್ಲಡ್ ಮನಿ ನೀಡಿ ತಮ್ಮನ್ನು ಮರಣದಂಡನೆಯಿಂದ ಪಾರು ಮಾಡಿದ ಎಲ್ಲರಿಗೂ ರಹೀಮ್ ಧನ್ಯವಾದ ತಿಳಿಸಿದ್ದಾರೆ. 2006ರಲ್ಲಿ ಸೌದಿ ಅರೇಬಿಯಾಗೆ ತೆರಳಿದ್ದ ರಹೀಮ್ ಅಲ್ಲಿನ ಮನೆಯೊಂದರಲ್ಲಿ ಕಾರು ಚಾಲಕನಾಗಿ ಕೆಲಸ ಮಾಡುತ್ತಿದ್ದರು. ತಾವು ಕೆಲಸ ಮಾಡುತ್ತಿದ್ದ ಮನೆಯಲ್ಲಿ ವಿಶೇಷಚೇತನ ಬಾಲಕನೊಂದಿಗೆ ರಹೀಮ್‌ಗೆ ಜಗಳವಾಗಿತ್ತು. ಈ ವೇಳೆ ಬಾಲಕನ ದೇಹಕ್ಕೆ ಅಳವಡಿಸಿದ್ದ ಉಸಿರಾಟದ ಸಾಧನ ಕಳಚಿಬಿದ್ದು, ಬಾಲಕ ಮೃತಪಟ್ಟಿದ್ದ.

ಮೈಸೂರು ಮಿತ್ರ ಶುಕ್ರವಾರ 29 ಮೇ 2026

ಹೊರ ಜಿಲ್ಲೆಯವರಿಗೆ ಬೇಡ, ಕೊಡಗಿನವರಿಗೆ ಮಾತ್ರ ಟೆಂಡರ್

ಕೊಡಗು ಜಿಲ್ಲೆಯ ಗುತ್ತಿಗೆದಾರರ ಸಂಕಷ್ಟ ಪರಿಹಾರಕ್ಕೆ ಈ ನಿರ್ಧಾರ

ಮಡಿಕೇರಿ, ಮೇ 28– ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆದಾರರ ಸಂಕಷ್ಟಗಳ ಪರಿಹಾರಕ್ಕೆ ಪೂರಕವಾಗಿ ಆಯಾ ತಾಲೂಕು ವ್ಯಾಪ್ತಿಯಲ್ಲಿನ 50 ಲಕ್ಷ ರೂ. ಮೊತ್ತದ ಕಾಮಗಾರಿಯ ಟೆಂಡರನ್ನು ಇತರ ತಾಲೂಕು ಮತ್ತು ಜಿಲ್ಲೆಯವರು ಪಡೆಯದೆ ಅದೇ ತಾಲೂಕಿನವರಿಗೆ ಒದಗಿಸುವ ನಿಟ್ಟಿನಲ್ಲಿ ಕೊಡಗು ಜಿಲ್ಲಾ ಲೋಕೋಪಯೋಗಿ ಗುತ್ತಿಗೆದಾರರ ಸಂಘ ಮಹತ್ವದ ನಿರ್ಣಯವನ್ನು ಕೈಗೊಂಡಿದೆ.

ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ವಿ.ಎ. ಲಾರೆನ್ಸ್, ಆಯಾ ತಾಲೂಕು ಮಟ್ಟದಲ್ಲಿ ನಡೆಯುವ 50 ಲಕ್ಷಕ್ಕೆ ಒಳಪಟ್ಟ ಕಾಮಗಾರಿಗಳನ್ನು ಪಡೆಯದಂತೆ ಈಗಾಗಲೆ ಜಿಲ್ಲಾ ಸಂಘವು ಮಡಿಕೇರಿ, ಸೋಮವಾರಪೇಟೆ, ಕುಶಾಲನಗರ ತಾಲೂಕು ಸಂಘಗಳಿಗೆ ಮನವಿ ಮಾಡಿದೆ. ಇದರೊಂದಿಗೆ ಹೊರ ಜಿಲ್ಲೆಯ ಗುತ್ತಿಗೆದಾರರ ಮನವೊಲಿಸುವ ಪ್ರಯತ್ನ ಮಾಡಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಕಡಿಮೆ ಮೊತ್ತಕ್ಕೆ ಟೆಂಡರ್: ಜಿಲ್ಲಾ ವ್ಯಾಪ್ತಿಯಲ್ಲಿ ನಡೆಯುವ ಲೋಕೋಪಯೋಗಿ ಹಾಗೂ ವಿವಿಧ ಇಲಾಖೆಗಳ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಹೊರ ಜಿಲ್ಲೆಯ ಗುತ್ತಿಗೆದಾರರು ಶೇ.25ರಿಂದ 30ರಷ್ಟು ಕಡಿಮೆ ಮೊತ್ತಕ್ಕೆ ಟೆಂಡರ್‌ಗಳನ್ನು ಕರೆಯುತ್ತಿರುವುದು ಸಮಸ್ಯೆಯನ್ನು ಸೃಷ್ಟಿಸಿದೆ. ಇಷ್ಟು ಕಡಿಮೆ ಮೊತ್ತಕ್ಕೆ ಟೆಂಡರ್ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ನಿರ್ವಹಿಸುವುದು ಅಸಾಧ್ಯ. ಕಡಿಮೆ ಮೊತ್ತ ಕರೆದ ಟೆಂಡರ್ ಕಾಮಗಾರಿಗಳ ಗುಣಮಟ್ಟ ಸಂಪೂರ್ಣ ಹದಗೆಟ್ಟಿರುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವುದಕ್ಕೆ ಪೂರಕವಾಗಿ ಲೋಕೋಪಯೋಗಿ ಹಾಗೂ ವಿವಿಧ ಇಲಾಖೆಗಳ ಇಂಜಿನಿಯರ್‌ಗಳು ಕಾರ್ಯ



ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ವಿ.ಎ. ಲಾರೆನ್ಸ್ ಮಾತನಾಡಿದರು.

ನಿರ್ವಹಿಸಬೇಕಾಗುತ್ತದೆ. ಆದರೆ ಜಿಲ್ಲೆಯಲ್ಲಿ ಅಗತ್ಯ ಇಂಜಿನಿಯರ್‌ಗಳ ಕೊರತೆ ಇರುವುದರಿಂದ, ಕಾಮಗಾರಿಗಳ ಗುಣಮಟ್ಟದ ಮೌಲ್ಯಮಾಪನ ಸಮರ್ಪವಾಗಿ ನಡೆಯುತ್ತಿಲ್ಲ. ಇದನ್ನೆ ಬಂಡವಾಳ ಮಾಡಿಕೊಂಡ ಹೊರ ಜಿಲ್ಲೆಯ ಗುತ್ತಿಗೆದಾರರು ಅತ್ಯಂತ ಕಡಿಮೆ ಮೊತ್ತಕ್ಕೆ ಟೆಂಡರ್ ಕರೆದು ಕಳಪೆ ಕಾಮಗಾರಿಗಳನ್ನು ನಿರ್ವಹಿಸುತ್ತಿರುವುದು ತಮ್ಮ ಗಮನಕ್ಕೆ ಬಂದಿದೆ ಎಂದು ತಿಳಿಸಿದರು.

ನಕಲಿ ದಾಖಲೆಯಲ್ಲಿ ಕಾಮಗಾರಿ: ಜಿಲ್ಲೆಯ ಕೆಲವು ಕಡೆಗಳಲ್ಲಿ ಕೆಲವು ಗುತ್ತಿಗೆದಾರರು ನಕಲಿ ದಾಖಲೆಗಳ ಮೂಲಕ ಗುತ್ತಿಗೆಯನ್ನು ಪಡೆಯುತ್ತಿರುವುದು ತಮ್ಮ ಗಮನಕ್ಕೆ ಬಂದಿದೆ. ಈಗಾಗಲೆ ನಾಲ್ಕೈದು ಜನ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸುವ ನಿಟ್ಟಿನಲ್ಲಿ ಜಿಲ್ಲಾ ಸಂಘ ಕಾರ್ಯಪ್ರವೃತ್ತವಾಗಿದೆ. ಅವರ ವಿರುದ್ಧ ಪೊಲೀಸರಿಗೆ ದೂರು ನೀಡುವ ನಿಟ್ಟಿನಲ್ಲಿಯೂ ಪ್ರಯತ್ನಗಳು ನಡೆದಿದೆ ಎಂದು ಸ್ಪಷ್ಟಪಡಿಸಿದರು.

ಸಂಘದಿಂದ 'ಸ್ಕ್ವಾಡ್' ರಚನೆ: ಸರ್ಕಾರದ ಅಭಿವೃದ್ಧಿ ಕಾಮಗಾರಿಗಳನ್ನು ಕಡಿಮೆ ಮೊತ್ತಕ್ಕೆ ಟೆಂಡರ್ ಕರೆದು, ಕಳಪೆ ಗುಣಮಟ್ಟದಿಂದ ನಿರ್ವಹಿಸಲಾಗುತ್ತಿದೆ. ಇದನ್ನು ಪರಿಶೀಲಿಸಲು ತಾಲೂಕು ಮಟ್ಟದಲ್ಲಿ ಸಂಘದಿಂದಲೆ 'ಸ್ಕ್ವಾಡ್' ರಚಿಸಲಾಗುತ್ತದೆ. ಈ ಸ್ಕ್ವಾಡ್‌ಗಳ ಮೂಲಕ ಪರಿಶೀಲನೆ ನಡೆಸಿ, ಕಳಪೆ ಕಾಮಗಾರಿ ನಡೆದಿರುವ ಪ್ರಕರಣಗಳ ಬಗ್ಗೆ ಲೋಕಾಯುಕ್ತಕ್ಕೆ ದೂರನ್ನು ನೀಡಲು ಜಿಲ್ಲಾ ಸಂಘ ನಿರ್ಧರಿಸಿದೆ ಎಂದು ಲಾರೆನ್ಸ್ ತಿಳಿಸಿದರು.

ಬಿಲ್ ಪಾವತಿಗೆ ಮನವಿ: ಜಿಲ್ಲೆಯ ಗುತ್ತಿಗೆದಾರರು ಹಣದ ಮುಗ್ಗಟ್ಟಿನಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಳೆದ ಸುಮಾರು 3 ವರ್ಷಗಳಿಂದ ಮಾಡಿರುವ ಕೆಲಸದ ಬಿಲ್‌ಗಳಿಗೆ ಸಮರ್ಪಕವಾಗಿ ಹಣ ಪಾವತಿಯಾಗಿಲ್ಲ. ಈ ಹಿಂದೆ ಪ್ರಾಕೃತಿಕ ವಿಕೋಪದ ಸಂದರ್ಭ ನಿರ್ವಹಿಸಿದ ಕಾಮಗಾರಿಗಳ ಬಿಲ್ ಹಣವೂ ದೊರಕಿಲ್ಲ. ಇವುಗಳನ್ನು ಶೀಘ್ರ ಬಿಡುಗಡೆ ಮಾಡುವಂತೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಕೆ.ಎ.ರವಿ ಚಂಗಪ್ಪ, ಪ್ರಧಾನ ಕಾರ್ಯದರ್ಶಿ ಎಂ.ಅರುಣ್ ಕುಮಾರ್, ಮಡಿಕೇರಿ ತಾಲೂಕು ಕಾರ್ಯದರ್ಶಿ ಕೆ.ವಿ.ಕವನ್ ಉಪಸ್ಥಿತರಿದ್ದರು.

ಇಂದಿನಿಂದ ಸುಂಟಿಕೊಪ್ಪದಲ್ಲಿ 17ನೇ ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ

ಸುಂಟಿಕೊಪ್ಪ: ಸರ್ವ ಭಾಷಿಕರ ನೆಲಬೀಡು ಎಂದೇ ಕರೆಯಲ್ಪಡುವ ಸುಂಟಿಕೊಪ್ಪದಲ್ಲಿ 17ನೇ ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಮೇ 29 ಮತ್ತು 30ರಂದು ಸುಂಟಿಕೊಪ್ಪದ ಎಸ್.ಎಸ್ ಇಂಟರ್ ನ್ಯಾಷನಲ್ ಸಭಾಂಗಣದಲ್ಲಿ ನಿರ್ಮಿಸಲಾಗಿರುವ ಕವಿಶಿಷ್ಯ ಪಂಜೆ ಮಂಗೇಶರಾಯರ ವೇದಿಕೆಯಲ್ಲಿ ಕಾರ್ಯಕ್ರಮ ನಡೆಯಲಿದೆ.

ಸಮ್ಮೇಳನದ ಸರ್ವಾಧ್ಯಕ್ಷರಾಗಿ ಹಿರಿಯ ಸಾಹಿತಿ ಕೇಂದ್ರ ಸಾಹಿತ್ಯ ಪ್ರಶಸ್ತಿ ಪುರಸ್ಕೃತ ಅಬ್ದುಲ್ ರಶೀದ್ ಅವರು ಕಾರ್ಯನಿರ್ವಹಿಸಲಿದ್ದಾರೆ. ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷರಾಗಿ ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರೂ, ಸಮ್ಮೇಳನದ ಸ್ವಾಗತ ಸಮಿತಿಯ ಅಧ್ಯಕ್ಷರು ಆದ ಡಾ. ಮಂತರ್ ಗೌಡ ನಿರ್ವಹಿಸಲಿದ್ದಾರೆ.

ಕಾರ್ಯಾಧ್ಯಕ್ಷರಾಗಿ ಕೊಡಗು ಜಿಲ್ಲಾ ಕಸಾಪ ಅಧ್ಯಕ್ಷ ಎಂ.ಪಿ ಕೇಶವ ಕಾಮತ್, ಗೌರವಾಧ್ಯಕ್ಷರಾಗಿ ಸಣ್ಣ ನೀರಾವರಿ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಬೋಸರಾಜು ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಎ.ಎಸ್ ಪೊನ್ನಣ್ಣ ಹಾಗೂ ಪೋಷಕರುಗಳಾಗಿ ಸಂಸದರು ವಿಧಾನ ಪರಿಷತ್ ಸದಸ್ಯರು ಸೇವೆ ಸಲ್ಲಿಸುತ್ತಿದ್ದಾರೆ.

ಮೇ29ರ ಬೆಳಿಗ್ಗೆ 8 ಗಂಟೆಗೆ ರಾಷ್ಟ್ರಧ್ವಜ, ನಾಡಧ್ವಜ ಮತ್ತು ಪರಿಷತ್ತಿನ ಧ್ವಜ ಆರೋಹಣದೊಂದಿಗೆ ಸಮ್ಮೇಳನ ಪ್ರಾರಂಭವಾಗಲಿದೆ.

ದೇವರಪುರದಲ್ಲಿ ಬೋಡ್‌ನಮ್ಮೆ ಆಚರಣೆ



ಪೊನ್ನಂಪೇಟೆ ಬಳಿ ಬೋಡ್‌ನಮ್ಮೆ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು.

ಗೋಣಿಕೊಪ್ಪ ಪೊನ್ನಂಪೇಟೆ ತಾಲೂಕಿನ ದೇವರಪುರ ಗ್ರಾಮದಲ್ಲಿರುವ ಹೆಬ್ಬಾಲೆ ಅಯ್ಯಪ್ಪ ಮತ್ತು ಭದ್ರಕಾಳಿ ದೇವಸ್ಥಾನದಲ್ಲಿ ಅದ್ದೂರಿಯಾಗಿ ಬೋಡ್‌ನಮ್ಮೆ ನಡೆಯಿತು.

ಅಸಭ್ಯ ನಡೆಗೆ ಆಕ್ರೋಶದ ಬೆನ್ನಲ್ಲೆ, ವೇಷಧಾರಿಗಳಲ್ಲಿ ಪರಿವರ್ತನೆ ಕಂಡು ಬಂತು. ಎಲ್ಲೂ ಬಲವಂತವಿಲ್ಲ. ಅತಿರೇಕದ ಅಶ್ಲೀಲತೆ ಇಲ್ಲದೆ ಸಾರ್ವಜನಿಕರು ಖುಶಿ ಪಡುವಂತಾಯಿತು. ವಾಹನ ತಡೆಯದೆ ಹಬ್ಬ ಆಚರಿಸಿದರು. ಖುಶಿಯಿಂದ ನೀಡುವ ಹಣ ಪಡೆದು ಮುಂದೆ ಸಾಗಿದರು. ವ್ಯಾಪಕ ಆಕ್ರೋಶ ವ್ಯಕ್ತಗೊಂಡ ಹಿನ್ನೆಲೆ ಪೊಲೀಸ್ ಇಲಾಕೆ ಕೂಡ ಸೂಕ್ತ ಕ್ರಮಕ್ಕೆ ಮುಂದಾದ ಪರಿಣಾಮ ಕಾನೂನಿಗೆ ಗೌರವ ವ್ಯಕ್ತವಾಯಿತು.

ಒಂದೂವರೆ ದಶಕಗಳಿಂದ ಹಬ್ಬದ ಆಚರಣೆಯಲ್ಲಿ ತಪ್ಪುಗಳ ಸಾಕಷ್ಟು ನಿಯಂತ್ರಣಕ್ಕೆ ಬಂದಿದೆ. ಆಚರಣೆ ಹಿನ್ನೆಲೆ ಅರಿಯದೆ ಬುಧವಾರವೇ ಸಾಕಷ್ಟು ವೇಷಧಾರಿಗಳು ಪಟ್ಟಣದಲ್ಲಿ ಕಾಣಿಸಿಕೊಂಡರು. ಪಟ್ಟಣದಲ್ಲಿ ತುಂಬಿ ತುಳುಕುತ್ತಿದ್ದ ವೇಷಧಾರಿಗಳು ಕಡಿಮೆ ಪ್ರಮಾಣದಲ್ಲಿ ಕಂಡು ಬಂದರು. ಪೊಲೀಸ್ ಸೂಚನೆಯಿಂದಾಗಿ ಕಾನೂನಿಗೆ ಗೌರವಿಸಿ, ಮುನ್ನಡೆದರು. ಎಲ್ಲೆಲ್ಲೂ ಮಹಿಳೆಯರನ್ನು ಚುಡಾಯಿಸುತ್ತಿದ್ದ ವೇಷಧಾರಿಗಳಲ್ಲಿ ಪರಿವರ್ತನೆ ಕಂಡು ಬಂತು. ಅಡ್ಡಗಟ್ಟಿ ಹಣ ವಸೂಲಿಗೆ ಬಲವಂತ ಮಾಡುತ್ತಿದ್ದ ವೇಷಧಾರಿಗಳು ತಮ್ಮ ನಡೆಯನ್ನು ಬದಲಿಸಿಕೊಂಡಿರುವುದು ಕಂಡು ಬಂತು. ಖುಶಿಯಲ್ಲಿ ಪಟ್ಟಣದಲ್ಲಿ ಕಂಡು ಬಂದ ವೇಷಧಾರಿಗಳು ಸಾರ್ವಜನಿಕರನ್ನು ಅಡ್ಡಗಟ್ಟುವುದು, ವಾಹನ ತಡೆ ಆಟಗಳಿಂದ ದೂರ ಉಳಿದದ್ದು ಕಂಡು ಬಂತು. ಕೊಟ್ಟ ಹಣವನ್ನು ಪಡೆದು ಕಾಲ್ಕಿತ್ತರು. ಇದರಿಂದಾಗಿ ಸಾರ್ವಜನಿಕವಾಗಿ ತೊಂದರೆ ಮರೆಯಾಯಿತು. ವೇಷಧಾರಿಗಳ ಸಂಖ್ಯೆ ಕೂಡ ಇಳಿಮುಖವಾಗಿ ಕಂಡು ಬಂತು.

ಗುರುವಾರ ಮಧ್ಯಾಹ್ನ 3 ಗಂಟೆ ಸುಮಾರಿಗೆ ಜೋಡಿ ಕುದ್ರೆ ಮತ್ತು ಭದ್ರಕಾಳಿ ದೇವಿ ಮತ್ತು ಮೊಗ ಹೊರ ಬಂತು. ಮೂಲ ಸ್ಥಾನದಿಂದ ಆರಂಭಗೊಂಡು ಸ್ಥಾನಗಳಲ್ಲಿ ಪೂಜೆ ಸಲ್ಲಿಸಲಾಯಿತು. ಜೋಡಿ ಕುದ್ರೆ ಹೆಗಲಿಕೆ ಭದ್ರಕಾಳಿ ದೇವಿ ತೂಗಿಕೊಂಡು ಅಯ್ಯಪ್ಪ ಸ್ಥಾನಕ್ಕೆ ಆಗಮಿಸಿತು. ಭಕ್ತರು ಅಕ್ಕಿ ಪೆರಿ ಸಮರ್ಪಿಸಿ ದೇವಿಯನ್ನು ಪ್ರಾರ್ಥಿಸಿದರು. ಅಯ್ಯಪ್ಪ ಸ್ಥಾನದ ಎದುರು ಸಹಸ್ರ ಸಂಖ್ಯೆಯಲ್ಲಿ ವೇಷಧಾರಿಗಳು ಕುಣಿದು ದೇವರಿಗೆ ಸಮರ್ಪಿಸಿಕೊಂಡರು. ಕುದ್ರೆಗೆ ನಮಸ್ಕರಿಸಿ ತಪ್ಪು ತಿದ್ದಿಕೊಳ್ಳುವಂತೆ ಪ್ರಾರ್ಥಿಸಿಕೊಂಡರು. ಒಲಿಂಪಿಯನ್ ಎಸ್.ಕೆ.ಉತ್ತಪ್ಪ ದೇವರ ಭಂಡಾರ ಪೆಟ್ಟಿಗೆ ಹೊತ್ತು ಆಚರಣೆಯಲ್ಲಿ ಪಾಲ್ಗೊಂಡರು.

ನಾಳೆ ಅದ್ದೂರಿ ಶ್ರೀ ಬಸವ ಜಯಂತಿ ಆಚರಣೆ

ಕುಶಾಲನಗರ: ಕುಶಾಲನಗರ ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಮೇ 30 ರಂದು 6ನೇ ವರ್ಷದ ಶ್ರೀ ಬಸವ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಹಾಸಭಾದ ತಾಲೂಕು ಘಟಕದ ಅಧ್ಯಕ್ಷ ಹೆಚ್.ಎಂ.ಮಧುಸೂದನ್ ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇ 30 ರಂದು ಸಂಜೆ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಬಸವ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಂಜೆ 4 ಗಂಟೆಗೆ ಬೈಚನಹಳ್ಳಿ ಶ್ರೀ ಮಾರಮ್ಮ ದೇವಾಲಯದಿಂದ ಸಭಾಂಗಣದವರೆಗೆ ಮೆರವಣಿಗೆ ನಡೆಯಲಿದೆ. ತೊರೆನೂರು ವಿರಕ್ತ ಮಠದ ಶ್ರೀಮಲ್ಲೇಶ ಸ್ವಾಮೀಜಿಯ ದಿವ್ಯ ಸಾನಿಧ್ಯದಲ್ಲಿ ನಡೆಯುವ ಸಭಾ ಕಾರ್ಯಕ್ರಮವನ್ನು ಮಹಾಸಭಾದ ರಾಜ್ಯಾಧ್ಯಕ್ಷ ಡಾ.ಶಂಕರ ಮಹದೇವ ಬಿದರಿ ಉದ್ಘಾಟಿಸಲಿದ್ದಾರೆ. ಮಹಾಸಭಾದ ಕುಶಾಲನಗರ ತಾಲೂಕು ಘಟಕದ ಅಧ್ಯಕ್ಷ ಹೆಚ್.ಎಂ. ಮಧುಸೂದನ್ ಅಧ್ಯಕ್ಷತೆ ವಹಿಸಲಿದ್ದಾರೆ.

ವಿರಾಜಪೇಟೆಯಲ್ಲಿ ಬಕ್ರೀದ್ ಆಚರಣೆ



ವಿರಾಜಪೇಟೆ, ಮೇ 28– ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ವಿರಾಜಪೇಟೆಯಲ್ಲಿ ಸಂಭ್ರಮ ಸಡಗರದಿಂದ ಆಚರಿಸಲಾಯಿತು.

ಬೆಳಗ್ಗೆಯಿಂದಲೇ ಮೋಡ ಕವಿತ ವಾತಾವರಣ ಮತ್ತು ರಾತ್ರಿ ತುಂತುರು ಮಳೆ ಬಿದ್ದಿದ್ದರೂ ಮುಸ್ಲಿಂ ಬಾಂಧವರು ಅತ್ಯಂತ ಉತ್ಸಾಹದಿಂದ ಹಬ್ಬ ಆಚರಿಸಿದರು. ನಗರದ ವಿವಿಧ ಮಸೀದಿಗಳಲ್ಲಿ ವಿಶೇಷ ಈದ್ ನಮಾಝ್ ಹಾಗೂ ಪ್ರವಚನ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮುದಾಯದ ಬಾಂಧವರು ಭಾಗವಹಿಸಿದ್ದರು.

ಮುಖ್ಯ ರಸ್ತೆಯ ಶಾಫಿ ಜುಮಾ ಮಸೀದಿಯಲ್ಲಿ ಮೌ॥ಹಾರಿಸ್ ಬಾಖ್ವಿ, ಖಾಸಗಿ ಬಸ್ ನಿಲ್ದಾಣದ ಶಾದುಲಿ ಜುಮಾ ಮಸೀದಿಯಲ್ಲಿ ಮೌ॥ಶುಹೈಬ್ ಫೈಝಿ, ಬಂಗಾಳಿ ಬೀದಿಯ ಮಸ್ಜಿದ್–ಎ–ಅಝುಮ್‌ನಲ್ಲಿ ಮೌ॥ಹಸೀಬ್ ಶರೀಫ್, ಸುಣ್ಣದ ಬೀದಿಯ ಮದೀನಾ ಮಸೀದಿಯಲ್ಲಿ ಮೌ॥ಮುಝಮ್ಮಿಲ್, ಕ್ಲಾಕ್ ಟವರ್ ಸಮೀಪದ ಮುರುಡೇಶ್ವರ್ ನವಾಯತ್ ಮಸೀದಿಯಲ್ಲಿ ಮೌ॥ಮಖ್ಸೂದ್ ಅಹಮದ್ ಅವರುಗಳು ಬಕ್ರೀದ್ ಆಚರಣೆ ಕುರಿತು ಸಂದೇಶ ಸಾರಿದರಲ್ಲದೆ ಶುಭಾಶಯಗಳನ್ನು ಕೋರಿದರು.

ನಾಳೆ ಜಿಲ್ಲಾಧಿಕಾರಿ ಕಚೇರಿ ಚಲೋ ಹೋರಾಟ

ಮಡಿಕೇರಿ, ಮೇ 28– ಸರಕಾರಿ ಹಾಗೂ ಖಾಸಗಿ ವಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಕನಿಷ್ಠ ವೇತನಕ್ಕೆ ವೈಜ್ಞಾನಿಕ ರೂಪದ ನಿಯಮ ಜಾರಿಗೆ ತರಬೇಕು ಮತ್ತು ಕೇಂದ್ರ ಸರಕಾರ ಅನುಷ್ಠಾನಗೊಳಿಸುತ್ತಿರುವ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ತಡೆದು ಕಾರ್ಮಿಕರ ಹಕ್ಕುಗಳನ್ನು ರಕ್ಷಿಸಬೇಕು ಎಂದು ಒತ್ತಾಯಿಸಿ ಮೇ.30 ರಂದು ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ ಕೊಡಗು ಜಿಲ್ಲಾ ಸಮಿತಿ 'ಜಿಲ್ಲಾಧಿಕಾರಿ ಕಚೇರಿ ಚಲೋ' ಹೋರಾಟವನ್ನು ರೂಪಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಿಐಟಿಯು ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ಆರ್.ಭರತ್, ರಾಜ್ಯದಲ್ಲಿ ಬೃಹತ್ ಸಂಖ್ಯೆಯಲ್ಲಿರುವ ಸಂಘಟಿತ, ಅಸಂಘಟಿತ ಮತ್ತು ಯೋಜನಾ ಕಾರ್ಮಿಕರ ಬದುಕನ್ನು ರಕ್ಷಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿಯಾಗಿದೆ. ಕೇಂದ್ರ ಸರಕಾರ ಜಾರಿಗೆ ತರುತ್ತಿರುವ 4 ಕಾರ್ಮಿಕ ಸಂಹಿತೆಗಳು ಕಾರ್ಮಿಕರ ಮೂಲಭೂತ ಹಕ್ಕುಗಳನ್ನು ಮೊಟಕುಗೊಳಿಸುತ್ತಿದೆ. ಕಾರ್ಮಿಕರ ಹಕ್ಕುಗಳನ್ನು ರಕ್ಷಿಸಲು ಸಂವಿಧಾನ ನೀಡಿರುವ ಅಧಿಕಾರವನ್ನು ರಾಜ್ಯ ಸರಕಾರ ಬಳಸಿಕೊಂಡು ಇದನ್ನು ತಡೆಯಬೇಕು. ಆ ಮೂಲಕ ಸೂಕ್ತ ತಿದ್ದುಪಡಿಗಳೊಂದಿಗೆ ನಿಯಮಾವಳಿಗಳನ್ನು ರೂಪಿಸಬೇಕು ಎಂದು ಒತ್ತಾಯಿಸಿದರು.

ಕಾಡಿನಲ್ಲಿ ಕೊಳೆತ ಸ್ಥಿತಿಯಲ್ಲಿ ಮೃತದೇಹ ಪತ್ತೆ

ಮಡಿಕೇರಿ, ಮೇ 28– ಭಾಗಮಂಡಲ ಪೊಲೀಸ್ ಠಾಣಾ ವ್ಯಾಪ್ತಿಗೆ ಒಳಪಡುವ ಕರಿಕೆ ಗ್ರಾಮದ ಮೇಲೆಡ್ಕ ಅರಣ್ಯದಲ್ಲಿ ಸಂಪೂರ್ಣ ಕೊಳೆತ ಸ್ಥಿತಿಯಲ್ಲಿ ವ್ಯಕ್ತಿಯ ಮೃತದೇಹ ಪತ್ತೆಯಾಗಿದೆ.

ಕರಿಕೆ ವಲಯ ಅರಣ್ಯಾಧಿಕಾರಿಗಳು ಅರಣ್ಯದಲ್ಲಿ ಬೀಟ್ ತೆರಳುತ್ತಿದ್ದ ಸಂದರ್ಭ ನೇಣು ಬಿಗಿದ ಸ್ಥಿತಿಯಲ್ಲಿ ಮೃತದೇಹ ಕಂಡು ಬಂದಿದೆ. ಈ ಹಿನ್ನೆಲೆಯಲ್ಲಿ ಕರಿಕೆ ಪೊಲೀಸ್ ಉಪ ಠಾಣೆಗೆ ಅರಣ್ಯ ಸಿಬ್ಬಂದಿಗಳು ಮಾಹಿತಿ ನೀಡಿದ್ದಾರೆ.

ಘಟನಾ ಸ್ಥಳಕ್ಕೆ ಕರಿಕೆ ಉಪ ಠಾಣಾ ಪೊಲೀಸ್ ಸಿಬ್ಬಂದಿಗಳು ಮತ್ತು ಭಾಗಮಂಡಲ ಪೊಲೀಸ್ ಠಾಣಾಧಿಕಾರಿಗಳು ಹಾಗೂ ಅರಣ್ಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಮೃತದೇಹವನ್ನು ಕರಿಕೆ ಸರಕಾರಿ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ. ಅಧಿಕಾರಿಗಳು ಹಾಗೂ ಗ್ರಾಮಸ್ಥರು ಮೃತ ವ್ಯಕ್ತಿಯ ಬಗ್ಗೆ ಮಾಹಿತಿ ಕಲೆ ಹಾಕಲು ಪ್ರಯತ್ನ ನಡೆಸಿದ್ದು ಸದ್ಯಕ್ಕೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ.

ನೇಣು ಬಿಗಿದ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿದ್ದು, ಸ್ಥಳದಲ್ಲಿ ನೀಲಿ ಬಣ್ಣದ ಶರ್ಟ್ ಇದ್ದು, ಕಾವಿ ಬಣ್ಣದ ಪಂಚೆಯಲ್ಲಿ ನೇಣು ಕುಣಿಕೆ ಕಂಡು ಬಂದಿದೆ ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ. ಈ ಕುರಿತು ಭಾಗಮಂಡಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಚಾಮರಾಜನಗರ ಜಿಲ್ಲಾದ್ಯಂತ ಶ್ರದ್ಧಾ–ಭಕ್ತಿಯಿಂದ ಬಕ್ರೀದ್ ಆಚರಣೆ

ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಕೆ, ಹೊಸ ಬಟ್ಟೆ ತೊಟ್ಟು ಸಂಭ್ರಮಿಸಿದ ಮುಸ್ಲಿಂ ಬಾಂಧವರು





ಚಾಮರಾಜನಗರ ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು ಬಕ್ರೀದ್ ಹಬ್ಬವನ್ನು ಸಂಭ್ರಮ– ಸಡಗರದಿಂದ ಆಚರಿಸಿದರು. ಇದೇ ವೇಳೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಚಾಮರಾಜನಗರ, ಮೇ 28– ತ್ಯಾಗ, ಬಲಿದಾನದ ಪ್ರತೀಕವಾದ ಹಾಗೂ ಇಸ್ಲಾಂ ಹಬ್ಬಗಳಲ್ಲಿ ಪ್ರಮುಖವಾಗಿರುವ ಬಕ್ರೀದ್ ಹಬ್ಬವನ್ನು ಜಿಲ್ಲೆಯಾದ್ಯಂತ ಗುರುವಾರ ಮುಸ್ಲಿಂ ಬಾಂಧವರು ಸಡಗರ ಸಂಭ್ರಮದಿಂದ ಆಚರಿಸಿದರು.

ಜಿಲ್ಲೆಯ ಚಾಮರಾಜನಗರ, ಗುಂಡ್ಲುಪೇಟೆ, ಯಳಂದೂರು, ಕೊಳ್ಳೇಗಾಲ ಹಾಗೂ ಹನೂರು ತಾಲೂಕು ಕೇಂದ್ರಗಳು ಸೇರಿದಂತೆ ಇತರೆ ಹೋಬಳಿ, ಗ್ರಾಮಗಳ ಈದ್ಗಾ ಮೈದಾನಕ್ಕೆ ತೆರಳಿದ ಮುಸ್ಲಿಂ ಬಾಂಧವರು ಆಯಾ ಕೇಂದ್ರಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ನಗರದ ಸೋಮವಾರಪೇಟೆ ಹಾಗೂ ಪಾಲಿಟೆಕ್ನಿಕ್ ಕಾಲೇಜು ಹಿಂಭಾಗದಲ್ಲಿರುವ ಈದ್ಗಾ ಮೈದಾನಗಳಲ್ಲೂ ಗುರುವಾರ ಬೆಳಗ್ಗೆ ಭಾರಿ ಸಂಖ್ಯೆಯಲ್ಲಿ ನೆರೆದಿದ್ದ ಇಸ್ಲಾಂ ಧರ್ಮದವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಬಳಿಕ, ಒಬ್ಬರಿಗೊಬ್ಬರು ಅಪ್ಪಿ ಕೊಂಡು, ಕೈ–ಕೈ ಕುಲುಕಿಕೊಳ್ಳುವ ಮೂಲಕ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಹಬ್ಬದ ಹಿನ್ನೆಲೆಯಲ್ಲಿ ಹೊಸಬಟ್ಟೆ ತೊಟ್ಟು ಕಂಗೊಳಿಸುತ್ತಿದ್ದ ಚಿಣ್ಣರು ಪರಸ್ಪರ ಅಪ್ಪಿಕೊಂಡು ಶುಭಾಶಯ ವಿನಿಮಯ ಮಾಡಿಕೊಂಡರು. ಹಿರಿಯರು– ಕಿರಿಯರು ಎಂಬ ಬೇಧವಿಲ್ಲದೇ ಮಸೀದಿ ಹಾಗೂ ಈದ್ಗಾ ಮೈದಾನಕ್ಕೆ ತೆರಳಿ ಪ್ರಾರ್ಥನೆ ಸಲ್ಲಿಸಿದರು. ಪ್ರಾರ್ಥನೆ ಮುಗಿಸಿ ಬಂದ ನಂತರ ಹಿರಿಯರನ್ನು ಸ್ಮರಿಸಿದರು.

ಚಾಮರಾಜನಗರ ಮಾತ್ರವಲ್ಲದೇ ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳು ಹಾಗೂ ಗ್ರಾಮೀಣ ಪ್ರದೇಶದಲ್ಲಿಯೂ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ಅರ್ಥಪೂರ್ಣವಾಗಿ ಆಚರಿಸಿದರು. ಇದೇ ವೇಳೆ ಅಲ್ಲಾಹನು ಎಲ್ಲರಿಗೂ ಒಳ್ಳೆಯದು ಮಾಡಲಿ, ಮಕ್ಕಳಿಗೆ ಹೆಚ್ಚಿನ ಆಯಸ್ಸು ಕೊಟ್ಟು ಕಾಪಾಡಲಿ ಎಂದು ಧಾರ್ಮಿಕ ಗುರುಗಳು ಶುಭ ಸಂದೇಶ ತಿಳಿಸಿ ಬಕ್ರೀದ್ ಹಬ್ಬದ ಆಚರಣೆಯ ಮಹತ್ವವನ್ನು ತಿಳಿಸಿಕೊಟ್ಟರು.

ಬೇಗೂರಿನಲ್ಲಿ ಸಂಭ್ರಮ: ಗುಂಡ್ಲುಪೇಟೆ ತಾಲೂಕಿನ ಬೇಗೂರು ಗ್ರಾಮದಲ್ಲಿ ಮುಸ್ಲಿಂ ಬಾಂಧವರಿಂದ ತ್ಯಾಗ ಬಲಿದಾನಗಳ ಹಬ್ಬವಾದ ಬಕ್ರೀದ್ ಆಚರಿಸಲಾಯಿತು.

ಬೇಗೂರಿನ ಮುಖ್ಯ ರಸ್ತೆಯಲ್ಲಿ ಮೆರವಣಿಗೆ ಮೂಲಕ ಸಾಗಿ ಮಸೀದಿ ಹಾಗೂ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಹಬ್ಬ ಆಚರಿಸಿದರು. ಬೆಳಗ್ಗೆ 8:30 ಗಂಟೆಯಿಂದ ಊಟಿ–ಮೈಸೂರು ಮುಖ್ಯ ರಸ್ತೆಯಲ್ಲಿ ಮುಸ್ಲಿಂ ಬಾಂಧವರೆಲ್ಲ ಒಂದು ಕಡೆ ಸೇರಿ ಮೆರವಣಿಗೆಯ ಮೂಲಕ ಮಜೀದ್–ಈ–ಮುಬಾರಕ್ ತಲುಪಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಹಬ್ಬವನ್ನು ಆಚರಿಸಿದರು.

ಈ ಸಂದರ್ಭದಲ್ಲಿ ಧರ್ಮ ಗುರುಗಳಾದ ಮಹಮ್ಮದ್ ಅಸ್ಲಾಂ ಖಾನ್ ಹಬ್ಬದ ಪ್ರವಚನ ನೀಡಿದರು. ಮಸೀದಿಯ ಮುಖಂಡರಾದ ಅಬ್ದುಲ್ ಜಬ್ಬಾರ್, ಕರವೇ ಮೈಸೂರು ಹಾಗೂ ಚಾಮರಾಜನಗರ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಿಯಾಜ್ ಪಾಷ, ಮಹಮ್ಮದ್ ಝಿಕ್ರಿಯಾ ಸಾಬ್, ಮಟನ್ ಬಾಬು, ಮಹಮ್ಮದ್ ಇಲಿಯಾಸ್ ಅಬ್ದುಲ್ ಖಾದರ್(ಟೈಲರ್ ಬಾಬು), ನಿಸಾರ್ ಅಹಮದ್, ಮಹಮ್ಮದ್ ಪಾಷ, ನೂರ್ ಮಹಮ್ಮದ್, ಇಮ್ರಾನ್ ಖಾನ್, ಶಾಮಿಯಾನ ಮುಬಾರಕ್, ಅನ್ಸರ್ ಪಾಷ, ಸಲ್ಮಾನ್, ನವೀದ್, ಆಸೀಫ್, ಟಿಂಬರ್ ಮರ್ಚೆಂಟ್ ಜಾವಿದ್ ಅಹಮದ್, ಮಹಮ್ಮದ್ ಫಾರೂಕ್, ಮಹಮ್ಮದ್ ತನ್ವೀರ್, ನಯಾಜ್ ಅಹಮದ್, ಇಶ್ರೀಫ್ ಬೇಗ್, ನಾಲ್‌ಬಂದ್, ಅಲ್ತಾಫ್, ಅಕ್ಬರ್‌ಖಾನ್, ಅಕ್ರಮ್ ಇಸ್ಮಾಯಿಲ್ ಖಾನ್, ಫೈರೋಜ್ ಖಾನ್, ಸೆಲ್‌ಕಾಂ ಇಕ್ಬಲ್, ತೌಫಿಕ್, ನಬಿ, ಸೋಮಹಳ್ಳಿ ಸಿರಾಜುದ್ದೀನ್, ನಿಟ್ರೆ ಮನ್ಸೂರ್, ಹಬೀಬುಲ್ಲ ಸೇರಿದಂತೆ ನೂರಾರು ಮಂದಿ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡಿದ್ದರು.

ಬೇಗೂರು ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ನವೀನ್ ಹಾಗೂ ವಿಶೇಷ ಪೇದೆ ಶಿವಕುಮಾರ್ ನೇತೃತ್ವದಲ್ಲಿ ಗ್ರಾಮದ ಸುತ್ತ ಮುತ್ತ ಸೂಕ್ತ ಬಂದೋಬಸ್ತ್ ಒದಗಿಸಲಾಗಿತ್ತು.

ಶಾಸಕ ಎಆರ್‌ಕೆಗೆ ಸಚಿವ ಸ್ಥಾನ ನೀಡಲು ಆಗ್ರಹ



ಕೊಳ್ಳೇಗಾಲ: ಕ್ಷೇತ್ರದ ಶಾಸಕ ಎ.ಆರ್. ಕೃಷ್ಣಮೂರ್ತಿ ಅವರಿಗೆ ಸಚಿವ ಸ್ಥಾನ ನೀಡುವಂತೆ ಅಂಬೇಡ್ಕರ್ ಅವರ ಪ್ರತಿಮೆ ಬಳಿ ಜಮಾಯಿಸಿದ ನೂರಾರು ಅಭಿಮಾನಿಗಳು, ಕಾಂಗ್ರೆಸ್ ಕಾರ್ಯಕರ್ತರು ಆಗ್ರಹಿಸಿದರು.

ಹೈಕಮಾಂಡ್ ಹಿರಿತನದ ಮೇಲೆ ಅವರಿಗೆ ಸಚಿವ ಸ್ಥಾನ ನೀಡಬೇಕು. ಕೃಷ್ಣಮೂರ್ತಿ ಅವರು ರಾಜ್ಯಪಾಲರಾದ ಸಜ್ಜನ ರಾಜಕಾರಣಿ ದಿ.ರಾಚಯ್ಯ ಅವರ ಪುತ್ರರೂ, ರಾಜಕೀಯದಲ್ಲಿ ಹೆಚ್ಚು ಅನುಭವ ಹೊಂದಿದ್ದಾರೆ. ಸಂತೇಮರಳ್ಳಿಯಲ್ಲಿ 2ಬಾರಿ, ಕೊಳ್ಳೇಗಾಲ ಕ್ಷೇತ್ರದಲ್ಲಿ ಒಮ್ಮೆ, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಘನತೆ ಹೆಚ್ಚಿಸುವಲ್ಲಿ ಕೆಲಸ ಮಾಡಿದ್ದಾರೆ. ಹಿರಿಯರಾದ ಅವರಿಗೆ ಕೊಳ್ಳೇಗಾಲ ಕ್ಷೇತ್ರದ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಸಚಿವ ಸ್ಥಾನ ನೀಡಬೇಕುಎಂದು ತಾಪಂನ ಮಾಜಿ ಉಪಾಧ್ಯಕ್ಷ ಹಂಪಾಪುರ ಬಸವಣ್ಣ, ನಗರಸಭೆ ಮಾಜಿ ಅಧ್ಯಕ್ಷೆ ರೇಖಾ ರಮೇಶ್, ಬಸ್ತಿಪುರ ಶಾಂತರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್ ಒತ್ತಾಯಿಸಿದರು

ಈಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಕಾರ್ಯದರ್ಶಿ ಬಸ್ತೀಪುರ ರವಿ, ನಗರಸಭೆ ಮಾಜಿ ಸದಸ್ಯರುಗಳಾದ ಸುಮಾಸುಬ್ಬಣ್ಣ, ಮಂಜುನಾಥ್, ಭೀಮನಗರ ದೊಡ್ಡ ಯಜಮಾನ ಚಿಕ್ಕಮಾಳಿಗೆ, ಯಜಮಾನರು ವರದರಾಜು ಸೇರಿದಂತೆ ಇತರರಿದ್ದರು.

ಬಂಗಾರಗಿರಿ ನಾಯಕ ನಿಧನ



ಚಾಮರಾಜನಗರ: ಪಶುವೈದ್ಯ ಇಲಾಖೆ ನಿವೃತ್ತ ನೌಕರ ತಾಲೂಕಿನ ಬದನಗುಪ್ಪೆ ಗ್ರಾಮದ ಬಂಗಾರಗಿರಿ ನಾಯಕ(70) ನಿಧನರಾದರು. ಮೃತರು ಪತ್ನಿ, ಶ್ರೀನಿವಾಸ್ ಸೇರಿದಂತೆ ಮೂವರು ಪುತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮದಲ್ಲಿ ಶುಕ್ರವಾರ ಬೆಳಿಗ್ಗೆ ನೆರವೇರಲಿದೆ.

ಯಳಂದೂರು ತಾಲೂಕಲ್ಲಿ ಬಕ್ರೀದ್ ಆಚರಣೆ



ಯಳಂದೂರು ಪಟ್ಟಣ ಸೇರಿದಂತೆ, ಗುಂಬಳ್ಳಿ, ಯರಗಂಬಳ್ಳಿ, ಮಾಂಬಳ್ಳಿ, ಯರಿಯೂರು, ಇರಸವಾಡಿ ಗ್ರಾಮಗಳಲ್ಲೂ ಸಹ ಸಂಭ್ರಮದ ಬಕ್ರೀದ್ ಹಬ್ಬವನ್ನು ಆಚರಣೆ ಮಾಡಲಾಯಿತು.

ಯಳಂದೂರು, ಮೇ 28– ಬಕ್ರೀದ್ ಹಬ್ಬವನ್ನು ತ್ಯಾಗ ಮತ್ತು ಬಲಿದಾನದ ಸಂಕೇತವಾಗಿ ಪಟ್ಟಣದಲ್ಲಿ ಸಂಭ್ರಮ–ಸಡಗರದಿಂದ ತಾಲೂಕಿನಾದ್ಯಂತ ಆಚರಿಸಲಾಯಿತು.

ಇದು ಇಸ್ಲಾಂ ಧರ್ಮದ ಅತ್ಯಂತ ಪವಿತ್ರವಾದ ಹಬ್ಬವಾಗಿದ್ದು, ಪ್ರವಾದಿ ಇಬ್ರಾಹಿಂ ಅವರು ದೇವರ ಆಜ್ಞೆಗೆ ವಿಧೇಯರಾಗಿ ತಮ್ಮ ಮಗನನ್ನು ಬಲಿ ಕೊಡಲು ಮುಂದಾಗಿದ್ದ ತ್ಯಾಗವನ್ನು ಇದು ಸ್ಮರಿಸುತ್ತದೆ. ಹಬ್ಬದ ದಿನದಂದು ಪಟ್ಟಣದ ಮುಸ್ಲಿಮರು ವಿಶೇಷ ಪ್ರಾರ್ಥನೆ (ನಮಾಜ್) ಸಲ್ಲಿಸಿದರು. ಅಲ್ಲಾಹನಿಗೆ ಕೃತಜ್ಞತೆಯಾಗಿ ಕುರಿ ಅಥವಾ ಮೇಕೆಗಳನ್ನು ಧಾರ್ಮಿಕವಾಗಿ ಬಲಿ ನೀಡಲಾಗುತ್ತದೆ. ಈ ಮಾಂಸವನ್ನು ಮೂರು ಭಾಗಗಳಾಗಿ ವಿಂಗಡಿಸಿ, ಒಂದು ಭಾಗವನ್ನು ತಮ್ಮ ಕುಟುಂಬಕ್ಕೆ, ಇನ್ನೊಂದು ಭಾಗವನ್ನು ಸಂಬಂಧಿಕರಿಗೆ ಮತ್ತು ಮೂರನೇ ಭಾಗವನ್ನು ಬಡವರಿಗೆ ಹಾಗೂ ನಿರ್ಗತಿಕರಿಗೆ ಹಂಚಲಾಗುತ್ತದೆ.

ಇದು ಕೇವಲ ಪ್ರಾಣಿ ಬಲಿ ನೀಡುವುದಲ್ಲದೆ, ಮನುಷ್ಯನ ಹೃದಯದಲ್ಲಿರುವ ಅಹಂಕಾರ, ದುರಾಸೆ ಮತ್ತು ಕೆಟ್ಟ ಆಲೋಚನೆಗಳನ್ನು ತ್ಯಜಿಸುವುದನ್ನು ಕೂಡ ಬಕ್ರೀದ್ ಹಬ್ಬದಲ್ಲಿ ಸಾರಲಾಗಿದೆ ಎಂದು ತಿಳಿಸಿದರು.

ಹಬ್ಬದ ನಂತರ ಮುಸ್ಲಿಂ ಬಾಂಧವರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಯಳಂದೂರು ಪೊಲೀಸ್ ಇಲಾಖೆ ವತಿಯಿಂದ ಬಿಗಿ ಪೊಲೀಸ್ ಬಂದೋ ಬಸ್ತ್ ವ್ಯವಸ್ಥೆ ಮಾಡಲಾಗಿತ್ತು

ಹಣವಿದ್ದ ಪರ್ಸ್ ವಾರಸುದಾರರಿಗೆ ಹಿಂತಿರುಗಿಸಿ ಪ್ರಾಮಾಣಿಕತೆ ಮೆರೆದ ಪೇದೆ

ಕೊಳ್ಳೇಗಾಲ: ಕೈಗೆ ಸಿಕ್ಕ ಪರ್ಸ್ ಹಾಗೂ ಅದರಲ್ಲಿದ್ದ ಹಣವನ್ನು ವಾರಸುದಾರರಿಗೆ ಹಿಂತಿರುಗಿಸುವ ಮೂಲಕ ಕೊಳ್ಳೇಗಾಲ ಪಟ್ಟಣದ ಪೊಲೀಸ್ ಪೇದೆಯೊಬ್ಬರು ಪ್ರಾಮಾಣಿಕತೆಯೊಂದಿಗೆ ಸಾರ್ವಜನಿಕರಿಂದ ಪ್ರಶಂಸೆಗೆ ಪಾತ್ರರಾಗಿದ್ದಾರೆ.

ಪೊಲೀಸ್ ಪೇದೆ ದುಂಡಪ್ಪ ಪೂಜೇರಿ ಅವರು ಕರ್ತವ್ಯದಲ್ಲಿದ್ದ ವೇಳೆ (ಐವತ್ತು ಸಾವಿರದಷ್ಟು) ಹಣ ತುಂಬಿದ್ದ ಪರ್ಸ್ ಬಿದ್ದಿರುವುದನ್ನು ಕಂಡು ಎತ್ತಿಕೊಂಡಿದ್ದಾರೆ. ಅದರಲ್ಲಿನ ವಿಳಾಸ, ದೂರ ವಾಣಿ ಸಂಖ್ಯೆ ನೋಡಿ ಪರ್ಸ್ ಕಳೆದುಕೊಂಡಿದ್ದ ಗೌಡಳ್ಳಿ ಶಿವಾನಂದ ಅವರಿಗೆ ಕರೆ ಮಾಡಿ ಕರೆಸಿಕೊಂಡು ಬಳಿಕ ಪರ್ಸ್ ಹಿಂತಿರುಗಿಸಿ ಕೊಟ್ಟಿದ್ದಾರೆ.

ಪರ್ಸ್ ನೀಡಿದ ಬಳಿಕ ನಿಮ್ಮ ಪರ್ಸ್‌ನಲ್ಲಿದ್ದ ಹಣ ಲೆಕ್ಕ ಹಾಕಿಕೊಳ್ಳಿ ಎಂದು ಹೇಳುವ ಮೂಲಕ ಹಾಗೂ ಇದೆ ರೀತಿ ಚಾಲಕರಾಗಿರುವ ನೀವು ಸಹಾ ನಿಮಗೆ ಬೇರೆಯವರ ವಸ್ತು ಆಕಸ್ಮಿಕವಾಗಿ ಸಿಕ್ಕರೆ ಅವರಿಗೂ ಇದೆ ರೀತಿ ತಲುಪಿಸಿ, ಸಂಕಷ್ಟದಲ್ಲಿದ್ದವರಿಗೆ ಸಹಾಯ ಮಾಡಿ ಎಂಬ ಸಂದೇಶ ನೀಡಿ ಪರ್ಸ್ ತಲುಪಿಸಿದ್ದಾರೆ. ಪೇದೆಯ ಈ ನಡೆಗೆ ಸಾಕಷ್ಟು ಪ್ರಶಂಸೆ ವ್ಯಕ್ತವಾಗಿದೆ.

ಪರ್ಸ್ ಪಡೆದುಕೊಂಡ ಶಿವಾನಂದ ಅವರು ನಾನು ವೃತ್ತಿಯಲ್ಲಿ ಚಾಲಕನಾಗಿದ್ದೆ. ನಮ್ಮ ಮನೆಯ ಒಡವೆ ಅಡವಿಟ್ಟು ಹಣ ತೆಗೆದುಕೊಂಡಿದ್ದೆ, ಅದನ್ನ ಪರ್ಸ್‌ನಲ್ಲಿಟ್ಟಿದ್ದೆ. ಆಕಸ್ಮಿಕವಾಗಿ ಪರ್ಸ್ ಕಳೆದು ಹೋಗಿತ್ತು. ದುಂಡಪ್ಪ ಪೂಜಾರಿ ಅವರು ನನಗೆ ಹಿಂತಿರುಗಿಸಿದ್ದಾರೆ. ಇವರ ಕಾರ್ಯಕ್ಕೆ ನಾನು ಅಭಾರಿಯಾಗಿರುವೆ, ನನಗೂ ಸಹಾ ಅನ್ಯರ ವಸ್ತುಗಳು ಸಿಕ್ಕರೆ ಹಿಂತಿರುಗಿಸಿ ನೀಡುವೆ, ಪರ್ಸ್ ಕಳೆದುಕೊಂಡ ಆಕ್ಷಣ ನನಗೆ ದುಃಖವಾಗಿತ್ತು. ಈಗ ಸಂತಸವಾಗಿದೆ ಎಂದು ಸುದ್ದಿಗಾರರಿಗೆ ತಿಳಿಸಿದರು



ಕೊಳ್ಳೇಗಾಲ ಪಟ್ಟಣದಲ್ಲಿ 50 ಸಾವಿರ ನಗದು ಇದ್ದ ಪರ್ಸ್ ಅನ್ನು ವಾರಸುದಾರರಿಗೆ ಹಿಂತಿರುಗಿಸುತ್ತಿರುವ ಪೊಲೀಸ್ ಪೇದೆ.

■ ಸತ್ಯಮೂರ್ತಿ ತೋಳಹುಣಸೆ



ಧನುಷ್ ಮನಸ್ವಿ ನಟನೆಯ ಚಿತ್ರದಲ್ಲಿ 'ಮಳೆಯೇ ನಾಯಕ'



ಎರಡು ವರ್ಷಗಳ ಹಿಂದೆ 'ಟಗರು ಪಲ್ಯ' ಚಿತ್ರನಿರ್ದೇಶಿಸಿದ್ದ ಉಮೇಶ್ ಕೆ.ಕೃಪ ಇದೀಗ ತಮ್ಮ ಎರಡನೇ ಚಿತ್ರಕ್ಕೆ ಕೈಹಾಕಿದ್ದಾರೆ. ಹೆಸರಿಡದ ಈ ಚಿತ್ರದ ಮುಹೂರ್ತ ಇತ್ತೀಚೆಗೆ ಶ್ರೀ ಬಂಡೆ ಮಹಾಕಾಳಿ ದೇವಸ್ಥಾನದಲ್ಲಿ ನೆರವೇರಿತು. ಆಕಾಂಕ್ಷ ಪ್ರೊಡಕ್ಷನ್ಸ್ ಅಡಿ ನಾಗೇಶ್‌ವಾಸ್ಟರ್ ಅವರು ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. 'ಪುಟ್ಟಕ್ಕನ ಮಕ್ಕಳು' ಧಾರಾವಾಹಿಯ ಕಂಠಿ ಪಾತ್ರಧಾರಿ ನಟ ಧನುಷ್ ಹಾಗೂ ನಟಿ ಮನಸ್ವಿ ಈ ಚಿತ್ರದ ನಾಯಕ, ನಾಯಕಿ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ.

ಮುಹೂರ್ತದ ನಂತರ ನಿರ್ದೇಶಕ ಉಮೇಶ್ ಕೆ.ಕೃಪ ಮಾತನಾಡಿ, ನನ್ನ ಮೊದಲ ಚಿತ್ರ ಟಗರು ಪಲ್ಯಕ್ಕೆ ಸಿಕ್ಕ ಪ್ರತಿಕ್ರಿಯೆಯೇ ನಾನು ಮತ್ತೊಂದು ಚಿತ್ರ ಮಾಡಲು ಪ್ರೇರಣೆಯಾಯಿತು. ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆಗಳನ್ನು ನಾನೇ ಬರೆದಿದ್ದೇನೆ. ಇದೊಂದು ವಿಭಿನ್ನ ಜಾನರ್ ಕಥೆಯಾಗಿದ್ದು, ಚಿತ್ರದಲ್ಲಿ ಕಥೆಯೇ ನಾಯಕ. ಪ್ರೀತಿ, ಪ್ರೇಮ, ಕಾಮಿಡಿ, ಸೆಂಟಿಮೆಂಟ್ ಹೀಗೆ ನೋಡುಗರಿಗೆ ಬೇಕಾದ ಎಲ್ಲಾ ರೀತಿಯ ಮನರಂಜನಾತ್ಮಕ ಅಂಶಗಳೂ ನಮ್ಮ ಚಿತ್ರದಲ್ಲಿರಲಿವೆ, ಕುಟುಂಬಸಮೇತ ನೋಡಬಹುದಾದ ಕಂಟೆಂಟ್ ಚಿತ್ರದಲ್ಲಿರುತ್ತದೆ. ಈ ಚಿತ್ರದಲ್ಲೂ ಸಹ ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಇರುತ್ತದೆ.

ಈ ಚಿತ್ರಕ್ಕೆ ಎಸ್.ಕೆ.ರಾವ್ ಅವರ ಛಾಯಾಗ್ರಹಣ, ಪಳನಿ ಡಿ.ಸೇನಾಪತಿ ಅವರ ಸಂಗೀತ ನಿರ್ದೇಶನ, ಮಧು ತುಂಬಕೆರೆ ಅವರ ಸಂಕಲನ, ಅರ್ಜುನ್‌ರಾಜ್ ಅವರ ಸಾಹಸ ನಿರ್ದೇಶನ ಹಾಗೂ ಎ. ಸತೀಶ್ ಅವರ ಕಲಾನಿರ್ದೇಶನವಿದೆ.

ಅಮೂಲ್ಯಗೌಡ ಈಗ 'ಮಹಾಲಕ್ಷ್ಮಿ'





ಮಧ್ಯಮವರ್ಗದ ಕುಟುಂಬದ ಯುವತಿ ಮಹಾಲಕ್ಷ್ಮಿಯಾಗಿ ನಟಿ ಅಮೂಲ್ಯಗೌಡ ಕಾಣಿಸಿಕೊಳ್ಳುತ್ತಿದ್ದಾರೆ. ಈವರೆಗೆ ವಿಭಿನ್ನ ಶೈಲಿಯ ಪಾತ್ರಗಳನ್ನೇ ನಿರ್ವಹಿಸುತ್ತ ಬಂದಿರುವ ನಟಿ ಅಮೂಲ್ಯಗೌಡ ತಂದೆಯ ಆಸರೆ ಇಲ್ಲದೆ, ಮನೆಯ ಸಂಪೂರ್ಣ ಜವಾಬ್ದಾರಿ ಹೊತ್ತ ಗಟ್ಟಿಗಿತ್ತಿ 'ಮಹಾಲಕ್ಷ್ಮಿ'ಗೆ ತಂಗಿಯರನ್ನು ಚೆನ್ನಾಗಿ ಓದಿಸಬೇಕು, ಅಮ್ಮನಿಗೆ ಆಸರೆಯಾಗಬೇಕು ಎಂಬ ಆಸೆ. ಈವರೆಗೆ ವಿಭಿನ್ನಶೈಲಿಯ ಪಾತ್ರಗಳನ್ನೇ ನಿರ್ವಹಿಸುತ್ತ ಬಂದಿರುವ ಅಮೂಲ್ಯಗೌಡ ಅವರೀಗ ಕುಟುಂಬದ ಜವಾಬ್ದಾರಿಯುತ ಮಹಿಳೆಯ ಪಾತ್ರ ನಿರ್ವಹಿಸುತ್ತಿದ್ದಾರೆ. ಒಂದು ಸುಳ್ಳಿನ ಮೂಲಕ ನಡೆಯೋ ಶ್ರೀಹರಿ ಮತ್ತು ಮಹಾಲಕ್ಷ್ಮಿಯ ಮದುವೆ ಮುಂದೆ ಯಾವ ರೀತಿ ಸಾಗುತ್ತೆ ಅನ್ನೋದೆ ಈ ಕತೆಯ ಹೂರಣ.

ನಾಯಕಿ ಮಹಾಲಕ್ಷ್ಮೀ ಪಾತ್ರದಲ್ಲಿ ಅಮೂಲ್ಯಗೌಡ, ನಾಯಕನಾಗಿ ಭರತ್ ಶಿವಣ್ಣ ನಟಿಸುತ್ತಿದ್ದಾರೆ. ಶಿವಾಜಿ ರಾವ್ ಜಾಧವ್, ಸೀತಾಕೋಟೆ, ಅಮೃತಾ ರಾಮಮೂರ್ತಿ, ಪದ್ಮಿನಿ, ಕಾಮಿಡಿ ನಟರಾದ ಮಂಜು ಪಾವಗಡ ಮತ್ತು ಮಾನಸ, ಮೇಘಶ್ರೀ, ಸ್ನೇಹಾಭಟ್, ಪ್ರತೀಕ್ಷಾ, ಧನುಷ್ ಗೌಡ, ಹರಿಪ್ರಿಯಾ ಪ್ರಮುಖ ಪಾತ್ರಗಳಲ್ಲಿ ನಟಿಸುತ್ತಿದ್ದು, ಸನ್ ಉದಯದಲ್ಲಿ ಜೂನ್ 1ರಿಂದ ಪ್ರಾರಂಭವಾಗಲಿದೆ.

'ರೈತರ ಮಕ್ಕಳಿಗೆ ಹೆಣ್ಣು ಕೊಡಿ'



ಚಿತ್ರದಲ್ಲಿ ಅನ್ನದಾತನ ಅಳಲು

ಒಂದು ಕಾಲದಲ್ಲಿ ಸ್ವಂತ ಜಮೀನು ಹೊಂದಿರುವ ರೈತನನ್ನು ಜಮೀನ್ದಾರ ಎನ್ನುತ್ತಿದ್ದರು. ಆತನಿಗೆ ಊರಲ್ಲಿ ದೊಡ್ಡ ಮರ್ಯಾದೆಯೂ ಇರುತ್ತಿತ್ತು. ಆದರೆ ಬದಲಾದ ಕಾಲಮಾನದಲ್ಲಿ ರೈತ ಎಂದರೆ ನಿರ್ಲಕ್ಷ್ಯ ಭಾವನೆ ಬೆಳೆದಿದೆ. ರೈತನ ಮನೆಗೆ ಹೆಣ್ಣು ಕೊಡೋದಕ್ಕೂ ಯೋಚನೆ ಮಾಡುತ್ತಿದ್ದಾರೆ. ರೈತನ ಮಕ್ಕಳಿಗೆ ಹೆಣ್ಣು ಸಿಗೋಲ್ಲ ಎಂದು ಆ ಕಾಲದಿಂದಲೂ ಹೇಳುತ್ತಾ ಬಂದಿರುವ ಮಾತು, ಈಗಲೂ ಚಾಲ್ತಿಯಲ್ಲಿದೆ. ಇಂತಹುದೇ ಅಂಶಗಳನ್ನಿಟ್ಟುಕೊಂಡು ರೈತರ ಮಕ್ಕಳಿಗೆ ಹೆಣ್ಣು ಕೊಡಿ ಎಂಬ ಹೆಸರಿನ ಸಿನಿಮಾವೊಂದು ತಯಾರಾಗುತ್ತಿದೆ, ಕೆಂಪುರಾಮ್ ಹೆಡಿಯಾಲ ಅವರ ನಿರ್ದೇಶನದ ಈ ಚಿತ್ರದ ಚಿತ್ರೀಕರಣ ಹಾಗೂ ಪೋಸ್ಟ್ ಪ್ರೊಡಕ್ಷನ್ ಮುಗಿದಿದ್ದು ಚಿತ್ರವೀಗ ಬಿಡುಗಡೆಗೆ ಸಿದ್ದವಾಗಿದೆ. ಕೆಂಪುರಾಮ್ ಹೆಡಿಯಾಲ ಅವರೇ ಮಲ್ಲುಲಿಗಾನ ಪ್ರೊಡಕ್ಷನ್ ಅಡಿ ಈ ಚಿತ್ರ ನಿರ್ಮಿಸಿದ್ದಾರೆ.




ಈ ಚಿತ್ರವು ನೋಡುಗರಿಗೆ ವಿಭಿನ್ನ ಹಾಗೂ ವಿಶಿಷ್ಟವಾದ ಅನುಭವವನ್ನು ನೀಡುತ್ತದೆ. ರೈತರ ಬದುಕಿನ ಸೂಕ್ಷ್ಮತೆಗಳು, ಚಿತ್ರದಲ್ಲಿನ ಗಂಭೀರ ಅಂಶಗಳು ಗಮನ ಸೆಳೆಯುತ್ತವೆ. ಗೆಲ್ಲುತ್ತಾ ಹೋಗುವವರು ಇತಿಹಾಸ ಸೃಷ್ಟಿಸುತ್ತಾರೆ, ಆದರೆ ಸೋತು ಗೆಲ್ಲುವವರು ಇತಿಹಾಸವನ್ನು ಬದಲಾಯಿಸುತ್ತಾರೆ ಎಂಬ ತೂಕದ ಸಂದೇಶವನ್ನು 'ರೈತರ ಮಕ್ಕಳಿಗೆ ಹೆಣ್ಣು ಕೊಡಿ' ಚಿತ್ರದ ಮೂಲಕ ಹೇಳಲಾಗಿದೆ ಈ ಚಿತ್ರದ ಪ್ರಮುಖ ತಾರಾಗಣದಲ್ಲಿ ಜಗದೀಶ್ ಮೂಕ, ದಿವ್ಯಶ್ರೀ, ಜೈ ಅಮೋಘದಾಸ್, ಅಗಸ್ತ್ಯ ಪ್ರೇಮ್ ಸೇರಿದಂತೆ ರಂಗಭೂಮಿ ಕಲಾವಿದರು ಅಭಿನಯಿಸಿದ್ದಾರೆ.

ಸಿನಿಪದಬಂಧ-628



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______

ವಿಳಾಸ ______

ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1. ರವಿಚಂದ್ರನ್ ಯುದ್ಧ ಶೂರ 4
4. ದುನಿಯಾ ವಿಜಯ್ ಅಭಿನಯದಲ್ಲಿ ಕಾಣಿಸಿಕೊಂಡ ಕಪ್ಪನೆಯ ಪ್ರಾಣಿ 5
6. ಕೋಮಲ್ ಕುಮಾರ್ ಅಭಿನಯದ ಚಿತ್ರ 5
8. ಜಯಪ್ರದ ಅಭಿನಯದ ಚಿತ್ರ ಭಯ ಹುಟ್ಟಿಸಿದೆ 5
10. ಸಮರ ಸಿಂಹ ಚಿತ್ರದ ನಾಯಕಿ 5
15. ಲಕ್ಷ್ಮೀ ಹಗೆ ತೀರಿಸಲು ದೊರೈ – ಭಗವಾನ್ ನಿರ್ದೇಶಕರು 5
17. ರಮೇಶ್ –ಸುಧಾರಾಣಿ ಅಭಿನಯದ ಪ್ರೇಮ ಕಾವ್ಯ! 5
18. ವಿನೋದ್ ಆಳ್ವ ಪರಾಕ್ರಮ ತೋರಿದ್ದಾನೆ 5
20. ಮುರಳಿ – ಭವ್ಯ ಅಭಿನಯದ ಪ್ರೀತಿಯ ಹುಬ್ಬ ! 4

ಮೇಲಿನಿಂದ ಕೆಳಕ್ಕೆ

1. ವಿಷ್ಣು – ಭಾರತಿ ಅಭಿನಯದ ಗೌಪ್ಯತೆಯ ಇರುಳು 5
2. ರಾಕ್ ಲೈನ್ ವೆಂಕಟೇಶ್ ಪರಾಕ್ರಮಿ 2
3. ಪುನೀತ್ ರಾಜ್ ಕುಮಾರ್ 'ಭಗವಂತ' 4
4. ನಾವಾಡುವ ನುಡಿ ಇರಿಸಿಕೊಂಡಿರುವ ಪೋಷಕ ನಟ 5
5. ಪುನೀತ್ – ಪಾರ್ವತಿ ಮೆನನ್ ಅಭಿನಯದ ಸಂಗಮ 3
7. ಕುರುಬನ ರಾಣಿ ಚಿತ್ರದ ನಾಯಕಿ 2
9. ವಿಷ್ಣುವರ್ಧನ್ 'ಒಡೆಯ' 2
11. ಕಲ್ಪನಾ ನಿರ್ಮಿಸಿದ ಬಾಣದ ಗೂಡು 5
12. ಬಿಡುಗಡೆಯಾದರೂ ಹಾಕಿಕೊಂಡ ಕೋಳ 2
13. ಪಾಂಡವರಲ್ಲಿ ಒಬ್ಬ ಬಲಶಾಲಿ.. 2
14. ಪೃಥ್ವಿ ಶಾಮನೂರ್ ಡಿಗ್ರಿಗೂ ಮುಂಚೆ ಓದಿದ್ದು 5
15. ಈ ಪುಷ್ಪವು ಹಾಡಿನಲ್ಲಿ ಬಂತು 3
16. ತರುಣ್ – ಪೂಜಾ ಗಾಂಧಿ ಅಭಿನಯದ ಚಿತ್ರ 4
19. ಓಂ ಚಿತ್ರದ ನಾಯಕಿ 2

ಸಿನಿ ಪದಬಂಧ 627ರ ಉತ್ತರ

ಜ	ಗ	ಜ್ಯೋ	ತಿ	ಬ	ಸ	ವೇ	ಶ್ವ	ರ		ರಾ
ನ					ಪ್ತ			ಮ್ಯ		ಜಾ
ನಾ		ಆ	ನಂ	ದ	ಸಾ	ಗ	ರ		ನಿ	ಧಿ
ಯ		ಘಾ			ಗ		ತ್ನಾ			ರಾ
ಕ		ತ			ರ	ಸಿ	ಕ	ರ	ರಾ	ಜ
			ಮ				ರ			
ಸ	ಮ	ಯ	ದ	ಗೊಂ	ಬೆ			ನ		ಕಿಂ
ತಿ			ನಿ		ದ			ಧ		ದ
ಸಾ	ಧು		ಕೆ	ಜಿಂ	ದ	ರ	ಗಾ	ಬಂ		ರಿ
ವಿ		ಮೀ			ಗೊಂ					ಜೋ
ತ್ರಿ		ನಾ	ನಿ	ರು	ವು	ದೇ	ನಿ	ನ	ಗಾ	ಗಿ

ವಿಜೇತರು: ಜಗದೀಶ್, ನಂ.245, ಮೊದಲ ಕ್ರಾಸ್, ಗಾಯತ್ರಿಪುರಂ, ಮೈಸೂರು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು–570 015

ಜೂನ್ 20ರಂದು 'ರಾಯರ ದರ್ಶನ'



ಮಂತ್ರಾಲಯದ ಶ್ರೀರಾಘವೇಂದ್ರ ಸ್ವಾಮಿಗಳ ಕುರಿತಂತೆ ಈವರೆಗೆ ಸಾಕಷ್ಟು ಭಕ್ತಿಗೀತೆಗಳು ರಚನೆಯಾಗಿವೆ. ಈವರೆಗೂ ಯಾರು ಹೇಳದ ರಾಯರ ಬಗೆಗಿನ ಕೆಲವು ಮಹತ್ವದ ವಿಷಯಗಳು ಹಾಗೂ ಮಂತ್ರಾಲಯದಲ್ಲಿ ರಾಯರಿಗೆ ವರ್ಷಾವಧಿ ನಡೆಯುವ ವಿಶೇಷ ಉತ್ಸವಗಳನ್ನು ಒಳಗೊಂಡ ರಾಯರ ದರ್ಶನ ಮ್ಯೂಸಿಕ್ ಆಲ್ಬಂ ಬಿಡುಗಡೆಗೆ ಸಿದ್ಧವಾಗಿದೆ. ಲಕ್ಷ್ಮೀಗಣೇಶ ಪ್ರೊಡಕ್ಷನ್ಸ್ ಹಾಗೂ ದಿ ನ್ಯೂ ಇಂಡಿಯನ್ ಟೈಮ್ಸ್ ಲಾಂಛನದಲ್ಲಿ ಸುಗುಣ ರಘು ಅವರ ನಿರ್ಮಾಣದ ಈ ಆಲ್ಬಂ ಜೂನ್ 20ರಂದು ಮಂತ್ರಾಲಯದಲ್ಲಿ ಬಿಡುಗಡೆಯಾಗಲಿದೆ

ಶ್ರೀಸುಬುಧೇಂದ್ರ ತೀರ್ಥರ ಸಾನ್ನಿಧ್ಯದಲ್ಲಿ ಹಾಗೂ ವಿವಿಧ ಗಣ್ಯರ ಉಪಸ್ಥಿತಿಯಲ್ಲಿ ಈ ಸಮಾರಂಭ ನಡೆಯಲಿದೆ. ಇದೇ ಸಂಸ್ಥೆಯಿಂದ ಮಾಧ್ಯಮದವರಿಗೆ ನೀಡಲಾಗುವ ಪ್ರಶಸ್ತಿ ಪ್ರದಾನ ಸಮಾರಂಭ ಆಗಸ್ಟ್‌ನಲ್ಲಿ ನೆರವೇರಲಿದೆ. ಈ ಎರಡೂ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಲು ಪತ್ರಿಕಾಗೋಷ್ಠಿ ಆಯೋಜಿಸಲಾಗಿತ್ತು. ರಾಯರ ದರ್ಶನ ಆಲ್ಬಂ ಟೀಸರನ್ನು ಹಿರಿಯ ನಟಿ ತಾರಾ ಅವರು ಬಿಡುಗಡೆ ಮಾಡಿದರು. ಸಂಗೀತ ಸಂಯೋಜಕ ಅಜನೀಶ್ ಲೋಕನಾಥ್, ಸಿ.ಆರ್.ಬಾಬಿ, ಸಾಹಿತಿ ನಾಗಾರ್ಜುನ ಶರ್ಮ ಹಾಗೂ ಗಾಯಕ ಅಬ್ಬಿ ಹಾಜರಿದ್ದರು.

ರಘುಭಟ್ ಮಾತನಾಡಿ ಮಂತ್ರಾಲಯದಲ್ಲಿ ನಡೆಯುವ ಪೂಜೆ ಹಾಗೂ ವೈಭವೋತ್ಸವ, ಆರಾಧನೆ ಮುಂತಾದ ಉತ್ಸವಗಳ ವಿವರಣೆ ಈ ಆಲ್ಬಮ್‌ನಲ್ಲಿದೆ. ಅಜನೀಶ್ ಲೋಕನಾಥ್ ಹಾಗೂ ಸಿ.ಆರ್. ಬಾಬಿ ಅವರ ಸಂಗೀತದಲ್ಲಿ ಮೂಡಿಬಂದಿರುವ ಈ ಹಾಡನ್ನು ಬ್ರಹ್ಮಕಳಶ ಖ್ಯಾತಿಯ ಅಬ್ಬಿ ಹಾಡಿದ್ದಾರೆ. ಜೂನ್ 20ರಂದು ಮಂತ್ರಾಲಯದ ರಾಯರ ಸನ್ನಿಧಿಯಲ್ಲೇ ರಾಯರ ದರ್ಶನ ವೀಡಿಯೊ ಹಾಡನ್ನು ಬಿಡುಗಡೆ ಮಾಡುತ್ತಿದ್ದೇವೆ, ಮೂರು ರಾಜ್ಯಗಳ ಉಪಮುಖ್ಯಮಂತ್ರಿಗಳನ್ನು ಈ ಸಮಾರಂಭಕ್ಕೆ ಆಹ್ವಾನಿಸುತ್ತಿದ್ದೇವೆ. ನಮ್ಮ ಸಂಸ್ಥೆಯಿಂದ ಈ ಸಲ ವಿದ್ಯುನ್ಮಾನದ ಜೊತೆಗೆ ಮುದ್ರಾ ಮಾಧ್ಯಮದವರಿಗೂ ಪ್ರಶಸ್ತಿ ನೀಡಿ ಗೌರವಿಸುತ್ತಿದ್ದೇವೆ. ಆಗಸ್ಟ್‌ನಲ್ಲಿ ಬೆಂಗಳೂರಿನಲ್ಲಿ ಈ ಸಮಾರಂಭ ನಡೆಯಲಿದೆ ಎಂದರು.

ತಂದೆ ಮಗನ ಕಥೆ 'ಕ್ಷಮೆಯಿರಲಿ ತಂದೆ'



ಚಿತ್ರರಂಗದಲ್ಲಿ ಮೂಗ್ ಸುರೇಶ್ ಎಂದೇ ಖ್ಯಾತರಾದ ಹಿರಿಯ ನಟ ಎಂ.ಎನ್.ಸುರೇಶ್ ಇದೀಗ ನಿರ್ಮಾಪಕರಾಗಿದ್ದಾರೆ. ಜತೆಗೆ ಪುತ್ರನ ಚಿತ್ರಕ್ಕೆ ಆಕ್ಷನ್ ಕಟ್ ಕೂಡ ಹೇಳಿದ್ದಾರೆ. ಕ್ಷಮೆಯಿರಲಿ ತಂದೆ ಎಂಬ ಈ ಚಿತ್ರದ ಟ್ರೈಲರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು, ನಿರ್ದೇಶಕ ನಾಗಾಭರಣ, ಉಮೇಶ್ ಬಣಕಾರ್ ಹಾಗೂ ನಾಗತಿಹಳ್ಳಿ ಚಂದ್ರಶೇಖರ್ ಚಿತ್ರದ ಟೀಸರ್, ಟ್ರೈಲರ್, ಸೆಂಟಿಮೆಂಟ್ ಹಾಡಿಗೆ ಚಾಲನೆ ನೀಡಿದರು,

ಮೂರು ದಶಕಗಳಿಂದ ನೂರಾರು ಚಿತ್ರಗಳಲ್ಲಿ ನಟಿಸಿರುವ ಮೂಗ್ ಸುರೇಶ್ ತಮ್ಮ ಮೊದಲ ನಿರ್ಮಾಣ ಹಾಗೂ ನಿರ್ದೇಶನದ ಚಿತ್ರವನ್ನು ಸದ್ಯದಲ್ಲೇ ತೆರೆಗೆ ತರುವ ಸಿದ್ದತೆ ನಡೆಸಿದ್ದಾರೆ. 'ಕ್ಷಮೆಯಿರಲಿ ತಂದೆ' ಜೂನ್ 12ರಂದು ತೆರೆಗೆ ಬರಲು ಸಿದ್ದವಾಗಿದೆ. ತಮ್ಮ ಪ್ರಥಮ ಪ್ರಯತ್ನದ ಸಿನಿಮಾ ಕುರಿತಂತೆ ಮಾತನಾಡಿದ ನಿರ್ದೇಶಕ ಎಂ.ಎನ್. ಸುರೇಶ್, ಈ ಹಿಂದೆ ಕೆಲಚಿತ್ರಗಳಿಗೆ ಸಹನಿರ್ಮಾಪಕನಾಗಿ ಜತೆಯಾಗಿದ್ದೆ. ಇದೀಗ ಪೂರ್ಣ ಪ್ರಮಾಣದ ನಿರ್ಮಾಪಕನಾಗಿದ್ದೇನೆ. ನನ್ನ ನಿರ್ದೇಶನದ ಮೊದಲ ಚಿತ್ರವಿದು, ನಾನು ಈವರೆಗೆ ಕೂಡಿಟ್ಟ ಠೇವಣಿ ಹಣವನ್ನೇ ಈ ಚಿತ್ರಕ್ಕೆ ಹಾಕಿದ್ದೇನೆ. ಶೀರ್ಷಿಕೆಯೇ ತಿಳಿಸುವಂತೆ ಇದು ತಂದೆ, ಮಗನ ನಡುವಿನ ಬಾಂಧವ್ಯದ ಕುರಿತಾದ ಚಿತ್ರ, ಹರೀಶ್ ಅವರ ಕಥೆ ಆಧರಿಸಿ ಈ ಚಿತ್ರ ಮಾಡಿದ್ದೇನೆ. ನನ್ನ ಮಗ ಶ್ರೀಮಂತ, ಮಂಜುನಾಥ್ ಹೆಗ್ಡೆ ತಂದೆ ಮಗನಾಗಿ ಅಭಿನಯಿಸಿದ್ದಾರೆ. ರೇಣುಕಾಬಾಲಿ, ವಿನ್ಯಾಶೆಟ್ಟಿ ಅಲ್ಲದೆ ನಾನು ಕೂಡ ಒಂದು ಪಾತ್ರದಲ್ಲಿ ನಟಿಸಿದ್ದೇನೆ. ಸೂರ್ಯಕಾಂತ್ ಅವರ ಛಾಯಾಗ್ರಹಣ ಹಾಗೂ ಪುಣ್ಯೇಶ್‌ಕುಮಾರ್ ಅವರ ಸಂಗೀತ ಈ ಚಿತ್ರಕ್ಕಿದೆ, ಜೂನ್ 12ರಂದು ಚಿತ್ರ ತೆರೆಗೆ ಬರಲಿದೆ ಎಂದು ಹೇಳಿದರು. ಈ ವೇಳೆ ನಾಯಕನಟ ಶ್ರೀಮಂತ, ಕಥೆಗಾರ ಹರೀಶ್, ಸಂಕಲನಕಾರ ಮುತ್ತುರಾಜ್, ನಟ ಶಿವಕುಮಾರ್ ಆರಾಧ್ಯ ಹಾಗೂ ಕಾರ್ಯಕಾರಿ ನಿರ್ಮಾಪಕಿ ಅಹಲ್ಯ ಸುರೇಶ್ ಪತ್ರಿಕಾಗೋಷ್ಠಿಯಲ್ಲಿದ್ದರು.

ಮೈಸೂರು ಮಿತ್ರ

ದೆಹಲಿಯ ಕೆಂಪು ಕೋಟೆಯಲ್ಲಿ ರಾಷ್ಟ್ರಧ್ವಜ ಹಾರಿಸಿ

ಕರುನಾಡಿನ ಕೀರ್ತಿ ಹೆಚ್ಚಿಸಿದ ಮಾಜಿ ಪ್ರಧಾನಿ ದೇವೇಗೌಡರು

ಮಹಿಳಾ ಕ್ಷೇಮಾಭಿವೃದ್ಧಿ ಸಂಘ ಉದ್ಘಾಟಿಸಿ ಮಾಜಿ ಸಚಿವ ಸಾ.ರಾ.ಮಹೇಶ್ ಬಣ್ಣನೆ

ಕೆ.ಆರ್.ನಗರ, ಮೇ 28– ಒಕ್ಕಲಿಗರಾಗಿ ದೆಹಲಿಯ ಕೆಂಪು ಕೋಟೆಯಲ್ಲಿ ರಾಷ್ಟ್ರಧ್ವಜ ಹಾರಿಸಿ ಕರುನಾಡಿನ ಕೀರ್ತಿ ಹೆಚ್ಚಿಸಿದ್ದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಬಣ್ಣಿಸಿದರು.

ಪಟ್ಟಣದ ಹೆಚ್.ಡಿ.ದೇವೇಗೌಡ ಸಮುದಾಯ ಭವನದಲ್ಲಿ ಗುರುವಾರ ಕೆ.ಆರ್.ನಗರ ಟೌನ್ ಒಕ್ಕಲಿಗರ ಮಹಿಳಾ ಕ್ಷೇಮಾಭಿವೃದ್ಧಿ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ಒಕ್ಕಲಿಗ ಸಮಾಜ ಒಕ್ಕಲುತನದಿಂದ ಎಲ್ಲರನ್ನೂ ಒಂದೇ ರೀತಿ ಕಾಣುವ ಸಮಾಜವಾಗಿದೆ. ಹಾಗಾಗಿ ಕೆ.ಆರ್.ನಗರ ಕ್ಷೇತ್ರದಲ್ಲಿ ಒಕ್ಕಲಿಗ ಸಮುದಾಯ 60 ಸಾವಿರ ಇದ್ದರೂ, ಇತರೆ ಸಮುದಾಯದವರು 1.40 ಲಕ್ಷ ಮತದಾರರು ನನ್ನನ್ನು ಒಮ್ಮೆ ಸೋಲಿಸಿ, ಮೂರು ಬಾರಿ ಗೆಲ್ಲಿಸಿ ಶಾಸಕ, ಸಚಿವನಾಗಿ ಮಾಡಿದ್ದಾರೆ. ಆದ್ದರಿಂದ ನನ್ನನ್ನು ಬಿಟ್ಟು ನನ್ನ ಕುಟುಂಬ ಸದಸ್ಯರು ಸಂಘ ಸಂಸ್ಥೆ ಸೇರಿದಂತೆ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸಲ್ಲ ಎಂದು ಖಡಕ್ಕಾಗಿ ಹೇಳಿದರು.

ಆನ್‌ಲೈನ್ ಬೆಟ್ಟಿಂಗ್ ದಂಧೆಯಲ್ಲಿ ಸಿಲುಕಿ ಮಕ್ಕಳು ಹಾಳಾಗುತ್ತಿದ್ದಾರೆ. ನಿತ್ಯ ಇಂತಹ ಘಟನೆಗಳು ನಮ್ಮ ಕಣ್ಮುಂದೆ ನಡೆಯುತ್ತಿವೆ. ಇದರಿಂದ ಬಹಳಷ್ಟು ಕುಟುಂಬಗಳು ಆನ್‌ಲೈನ್ ಬೆಟ್ಟಿಂಗ್ ದಂಧೆಗೆ ಬಲಿಯಾಗುತ್ತಿವೆ. ಹೀಗಾಗಿ ಮಕ್ಕಳ ಮೇಲೆ ಪೋಷಕರು ನಿಗಾ ವಹಿಸಬೇಕು ಎಂದರು.



ಕೆ.ಆರ್.ನಗರ ಟೌನ್ ಒಕ್ಕಲಿಗರ ಮಹಿಳಾ ಕ್ಷೇಮಾಭಿವೃದ್ಧಿ ಸಂಘವನ್ನು ಮಾಜಿ ಸಚಿವ ಸಾ.ರಾ.ಮಹೇಶ್ ಉದ್ಘಾಟಿಸಿದರು.

ಕೆ.ಆರ್.ನಗರ ಟೌನ್ ಒಕ್ಕಲಿಗರ ಮಹಿಳಾ ಕ್ಷೇಮಾಭಿವೃದ್ಧಿ ಸಂಘ ಅಡಿಯಲ್ಲಿ ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲೂಕಿನ ಸಮುದಾಯದ ಮಹಿಳೆಯರಿಗೆ ಸದಸ್ಯತ್ವ ನೀಡಿ ಎಂದ ಅವರು, ಸಂಘ ಸಂಸ್ಥೆಯಲ್ಲಿ ಯಾವುದೇ ದ್ವೇಷ, ಅಸೂಯೆ, ರಾಜಕೀಯಕ್ಕೆ ಅವಕಾಶ ನೀಡದೇ ಎಲ್ಲರ ಸಹಕಾರದಿಂದ ಸಂಘವನ್ನು ಯಶಸ್ವಿಯಾಗಿ ಮುನ್ನಡೆಸಿ. ಇದಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಮಾತನಾಡಿ, ತಾಲೂಕಿನ ಎಲ್ಲಾ ಸಂಘ ಸಂಸ್ಥೆಗಳಿಗಿಂತ ಹೆಚ್ಚಾಗಿ ಸೇವಾ ಕಾರ್ಯವನ್ನು ಟೌನ್ ಒಕ್ಕಲಿಗರ ಮಹಿಳಾ ಕ್ಷೇಮಾಭಿವೃದ್ಧಿ ಸಂಘ ಮಾಡಬೇಕು. ಅದಕ್ಕೆ ನಮ್ಮ ಸಂಪೂರ್ಣ ಸಹಕಾರ ಇರಲಿದೆ. ಇದರಲ್ಲಿ ಬಹಳಷ್ಟು ಮಂದಿ ತಾಯಂದಿರು ಸದಸ್ಯರಾಗಿದ್ದೀರಿ. ಆದ್ದರಿಂದ ಎಲ್ಲರ ವಿಶ್ವಾಸ ಗಳಿಸಿ ಸಂಘವನ್ನು ಮಾದರಿಯಾಗಿಸಿ ಎಂದರು.

ಸಂಘ ಸ್ಥಾಪಿಸಿದರೇ ಸಾಲದು ಸಮಾಜಮುಖಿ ಕಾರ್ಯ ಹಮ್ಮಿಕೊಂಡು ಸಮಾಜದಲ್ಲಿ ದುಡಿಯುವ ಕೈಗಳಿಗೆ ಸಹಕಾರ ನೀಡಿ, ನೊಂದವರ, ಬಡವರ ಪರವಾಗಿ ಧ್ವನಿ ಎತ್ತಿ ಹೋರಾಟ ಮಾಡಿ ಎಂದು ತಿಳಿಸಿದರು.

ಪಟ್ಟಣದ ಹೆಸರಾಂತ ನವನಗರ ಅರ್ಬನ್ ಕೋಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಕೆ.ಎನ್.ಬಸಂತ್, ಕೆ.ಆರ್.ನಗರ ಮತ್ತು ಸಾಲಿಗ್ರಾಮ ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಶಿವರಾಮು, ಗೌರವಾಧ್ಯಕ್ಷ ಮಿರ್ಲೆ ಅಣ್ಣೇಗೌಡ, ಒಕ್ಕಲಿಗ ಸಮಾಜದ ಹಿರಿಯ ಮುಖಂಡ ಎಸ್.ಪಿ.ತಮ್ಮಯ್ಯ, ತಾಲೂಕು ಒಕ್ಕಲಿಗ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಎಸ್.ರಾಮಲಿಂಗು, ಕೆ.ಆರ್.ನಗರ ಟೌನ್ ಒಕ್ಕಲಿಗರ ಮಹಿಳಾ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳಾದ ಅಧ್ಯಕ್ಷೆ ರೂಪಾ ಮಂಜುನಾಥ್, ಉಪಾಧ್ಯಕ್ಷೆ ಶ್ವೇತಾ ಗೋಪಾಲ್, ಪ್ರಧಾನ ಕಾರ್ಯದರ್ಶಿ ಶೀಲಾ ಚೇತನ್, ನಿರ್ದೇಶಕರಾಗಿ ಭಾಗ್ಯಮ್ಮ ಕೃಷ್ಣಗೌಡ, ಕವಿತಾ ಚನ್ನಕೇಶವ, ನಂದಿನಿ ಗೌತಮ್, ಸುಮತಿ ಕುಮಾರ್, ಮಮತಾ ಲೋಕೇಶ್, ಪೂರ್ಣಿಮಾ ಗಿರೀಶ್, ಮೋಹನಾಂಬ ಚನ್ನೇಗೌಡ, ರೂಪಶ್ರೀ ಮಂಜೇಗೌಡ, ರಮ್ಯ ಎಸ್.ಕೆ. ವಿನಯ್‌ಬಾಬು ಸೇರಿದಂತೆ ನೂರಾರು ಮಹಿಳೆಯರು ಭಾಗವಹಿಸಿದ್ದರು.

> ಈಗಾಗಲೇ 306 ಮಹಿಳಾ ಸದಸ್ಯರು ಸಂಘದ ಸದಸ್ಯತ್ವ ಪಡೆದಿದ್ದಾರೆ. ಸಮಾಜದ ಮಹಿಳೆಯರು ಸದಸ್ಯತ್ವ ಪಡೆಯುವ ಮೂಲಕ ಸಮಾಜದ ಏಳಿಗೆಗೆ ಶ್ರಮಿಸಬೇಕು. ಸಂಘದ ಧ್ಯೇಯೋದ್ದೇಶಗಳನ್ನು ಜಾರಿಗೆ ತಂದು ನಾಡಪ್ರಭು ಕೆಂಪೇಗೌಡ ಜಯಂತಿ, ರಾಷ್ಟ್ರೀಯ ಹಬ್ಬಗಳ ಆಚರಣೆ, ಉಚಿತ ಆರೋಗ್ಯ ತಪಾಸಣೆ ಶಿಬಿರ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ಹಾಗೂ ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಳ್ಳಲಾಗುವುದು.
> – ರೂಪಾ ಮಂಜುನಾಥ್, ಅಧ್ಯಕ್ಷೆ, ಕೆ.ಆರ್.ನಗರ ಟೌನ್ ಒಕ್ಕಲಿಗರ ಮಹಿಳಾ ಕ್ಷೇಮಾಭಿವೃದ್ಧಿ ಸಂಘ.

ಇಂದಿನಿಂದ ಮಾವು, ಹಲಸು ಮೇಳ

ನಂಜನಗೂಡು, ಮೇ 28– ನಗರದ ಜೆಎಸ್‌ಎಸ್ ಮಂಗಳ ಕಲ್ಯಾಣ ಮಂಟಪದಲ್ಲಿ ಮೇ 29, 30 ಹಾಗೂ 31 ರಂದು ಮಾವು ಮತ್ತು ಹಲಸು ಮೇಳ ಆಯೋಜಿಸಲಾಗಿದ್ದು, ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಮೇಳ ಯಶಸ್ವಿಗೊಳಿಸಬೇಕು ಎಂದು ಚತುರಂ ಇವೆಂಟ್ ಆಯೋಜಕ ವಿಘ್ನೇಶ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಸಾಯನಿಕ ಮುಕ್ತವಾಗಿ ಬೆಳೆ ಬೆಳೆದ ರೈತರಿಗೆ ಮಾರುಕಟ್ಟೆ ಕಲ್ಪಿಸುವ ಸಲುವಾಗಿ ಮೈಸೂರು–ಬೆಂಗಳೂರು ಮಹಾನಗರಗಳಲ್ಲಿ ಆಯೋಜಿಸುವಂತೆ ನಗರದಲ್ಲಿ ಮಾವು ಮತ್ತು ಹಲಸು ಮೇಳ ಆಯೋಜಿಸಲಾಗಿದೆ.

ಮೇಳದಲ್ಲಿ ಸುಮಾರು 12 ತಳಿ ಮಾವು ಮತ್ತು 8 ರಿಂದ 10 ತಳಿ ಹಲಸು ಪರಿಚಯಿಸಲಾಗುವುದು. ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಮೇಳಕ್ಕೆ ಆಗಮಿಸಿ ಹೆಚ್ಚಿನ ಪ್ರಮಾಣದಲ್ಲಿ ಖರೀದಿಸುವ ಮೂಲಕ ರೈತರನ್ನು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.



ಆಯೋಜಕ ವಿಘ್ನೇಶ್ ಮಾತನಾಡಿದರು.

ಇವೆಂಟ್‌ನ ರಾಹುಲ್ ಮಾತನಾಡಿ, ರೈತರು ಉದ್ದಿಮೆದಾರರಾಗುವಂತೆ ಅವರಿಗೆ ತಿಳುವಳಿಕೆ ಮೂಡಿಸುವ ಸಲುವಾಗಿ ಮಾವು ಮತ್ತು ಹಲಸಿನಹಣ್ಣಿನ ಉಪ ಉತ್ಪನ್ನಗಳನ್ನು ತಯಾರಿಸುವ ಬಗ್ಗೆ ನುರಿತ ತಜ್ಞರಿಂದ ರೈತರಿಗೆ ಮಾರ್ಗದರ್ಶನ ನೀಡಲಾಗುವುದು. ನಗರದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮೇಳದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಸುದ್ದಿ ಗೋಷ್ಠಿಯಲ್ಲಿ ಬಸವಣ್ಣ ಉಪಸ್ಥಿತರಿದ್ದರು.

ಮರು ಮೌಲ್ಯಮಾಪನ: ದೀಪ್ತಗೆ ಹೆಚ್ಚುವರಿ 8 ಅಂಕ

ತಿ.ನರಸೀಪುರ, ಮೇ 28– ತಿರುಮಲ ಅಂತಾರಾಷ್ಟ್ರೀಯ ಶಾಲೆ ವಿದ್ಯಾರ್ಥಿನಿ, ತಾಲೂಕಿನ



ಕೆಂಪಯ್ಯನಹುಂಡಿ ಗ್ರಾಮದ ವರುಣ ಕ್ಷೇತ್ರದ ಜೆಡಿಎಸ್ ಕ್ಷೇತ್ರಾಧ್ಯಕ್ಷ ಎಂ.ಬಾಲಕೃಷ್ಣ ಅವರ ಪುತ್ರಿ ಬಿ.ದೀಪ್ತ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮರು ಮೌಲ್ಯಮಾಪನದಲ್ಲಿ ಹೆಚ್ಚುವರಿ 8 ಅಂಕ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಇದೀಗ ಈಕೆ ಕನ್ನಡ 125, ಇಂಗ್ಲಿಷ್ 100, ಹಿಂದಿ 100, ಗಣಿತ 95, ವಿಜ್ಞಾನ 94, ಸಮಾಜದಲ್ಲಿ 94 ಅಂಕ ಸೇರಿದಂತೆ 608 (ಶೇ.97.28) ಅಂಕಗಳನ್ನು ಪಡೆದಿದ್ದಾರೆ. ಮರು ಮೌಲ್ಯಮಾಪನಕ್ಕೂ ಮುನ್ನ ಇವರಿಗೆ 600 ಅಂಕ ಬಂದಿದ್ದವು.

ಸರಗೂರಲ್ಲಿ ಶ್ರದ್ಧಾ ಭಕ್ತಿಯ ಬಕ್ರೀದ್ ಆಚರಣೆ



ಸರಗೂರಲ್ಲಿ ಮುಸ್ಲಿಂ ಬಾಂಧವರು ಬಕ್ರೀದ್ ಹಬ್ಬ ಆಚರಿಸಿದರು.

ಸರಗೂರು, ಮೇ 28– ಪಟ್ಟಣದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಮಾಡುವ ಮೂಲಕ ಮುಸ್ಲಿಂ ಬಾಂಧವರು ಶ್ರದ್ಧಾ ಭಕ್ತಿಯಿಂದ ಗುರುವಾರ ಬಕ್ರೀದ್ ಆಚರಿಸಿದರು.

ಇಲ್ಲಿನ ಜಾಮೀಯ ಮಸೀದಿ ಗುರುಗಳಾದ ಅಬ್ದುಲ್ ರಶೀದ್ ಮಾತನಾಡಿ, ತ್ಯಾಗದ ಸಂದೇಶ ಸಾರುವ ಬಕ್ರೀದ್ ಹಬ್ಬ ಆಚರಣೆಯಿಂದ ಪ್ರತಿಯೊಬ್ಬರಲ್ಲೂ ಉತ್ತಮ ಭಾಂದವ್ಯ ಬೆಳೆಯುತ್ತದೆ ಎಂದ ಅವರು ಬಕ್ರೀದ್ ಹಬ್ಬದ ಅಂಗವಾಗಿ ಪಟ್ಟಣದ ಈದ್ಗಾ ಮೈದಾನಕ್ಕೆ ತೆರಳಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ನಾಡಿನ ಜನತೆಗೆ ಹಬ್ಬದ ಶುಭ ಕೋರಲಾಯಿತು ಎಂದರು.

ನೂರ್ ಮಸೀದಿ ಗುರುಗಳಾದ ಅಬ್ದುಲ್ ಜಲೀಲ್ ಮಾತನಾಡಿ, ಎಲ್ಲರೂ ಸಹಬಾಳ್ವೆಯಿಂದ ಬದುಕಬೇಕು. ಹಬ್ಬದ ಆಚರಣೆಯಿಂದ ವಿಶ್ವಾಸ ಹೆಚ್ಚಾಗುತ್ತದೆ. ಎಲ್ಲರಿಗೂ ಬಕ್ರೀದ್ ಹಬ್ಬದ ಶುಭಾಶಯಗಳು. ಅಲ್ಲಾ ಒಳಿತು ಮಾಡಲಿ. ದೇಶದಲ್ಲಿ ಉತ್ತಮ ಮಳೆ, ಬೆಳೆಯಾಗಲಿ ಎಂದರು.

ಹಬ್ಬದ ಅಂಗವಾಗಿ ಮಕ್ಕಳು ಸೇರಿದಂತೆ ಮುಸ್ಲಿಂ ಬಾಂಧವರು ಹೊಸ ಬಟ್ಟೆ ತೊಟ್ಟು ಸಿಹಿ ತಿಂದು ಸಂಭ್ರಮಿಸಿದರು. ಈ ವೇಳೆ ಯಜಮಾನರಾದ ಹಿದಾತುಲ್ಲಾ ಶರೀಫ್, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಅಮೀರ್ ಸುಹೇಲ್, ಮುಖಂಡರಾದ ಖಲೀಲ್, ಜಲೀಲ್, ಸುಭಾನ್, ಮಹಮದ್ ಪಾಷಾ, ಜಾವೀದ್, ನಾಸೀರ್, ಮುಫ್ಪಿರುಲ್ಲಾ, ರಾಹೀಲ್ ಪಾಷಾ, ಹಿಬ್ರಾಹಿಂ, ಹಿದಾಯತ್, ಮಹಮ್ಮದ್ ಸದಾನ್ ಸಾಫ್ವಾನ್, ದಾದು, ಅಬ್ದುಲ್ ವಾಹಿದ್, ಇಸಾಕ್ ಖಾನ್, ಸಿರಾಜ್ ಪಾಷ, ಸಾಧಿಕ್ ಪಾಷಾ, ಮುಸ್ತಾಪ, ಅಕ್ಬರ್, ರಫಿ, ಎಂ.ಹಾದಿ, ರಾಹೀಲ್‌ಪಾಷ, ಶಾಹೀದ್, ಅಸೀಫ್, ಅಬ್ಬಾಸ್, ಇಸಾಕ್ ಕಾನ್, ಇದಾಯತ್ ಅನಸ್, ಸುಹೇಬ್ ಸೇರಿದಂತೆ ಇತರರಿದ್ದರು.

ಯುವಕರು ಉತ್ತಮ ಸಂಸ್ಕಾರ, ಒಳ್ಳೆಯತನ ಬೆಳೆಸಿಕೊಳ್ಳಿ

ನೇಗಿಲಯೋಗಿ ಟ್ರಸ್ಟ್ ಬನ್ನೂರು ಹೋಬಳಿ ಶಾಖೆ ಗೌರವಾಧ್ಯಕ್ಷ ವೈ.ಎಸ್.ರಾಮಸ್ವಾಮಿ ಸಲಹೆ

ತಿ.ನರಸೀಪುರ, ಮೇ 28– ಯುವಕರು ಉತ್ತಮ ಸಂಸ್ಕಾರ ಮತ್ತು ಒಳ್ಳೆಯತನ ಬೆಳೆಸಿಕೊಂಡರೆ ಸಮಾಜದ ಭವಿಷ್ಯ ಉಜ್ವಲವಾಗುತ್ತದೆ ಎಂದು ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಬನ್ನೂರು ಹೋಬಳಿ ಶಾಖೆ ಗೌರವಾಧ್ಯಕ್ಷ ವೈ.ಎಸ್.ರಾಮಸ್ವಾಮಿ ತಿಳಿಸಿದರು.

ತಾಲೂಕಿನ ಬನ್ನೂರು ಪಟ್ಟಣದ ಶ್ರೀನಿವಾಸ ಕಲ್ಯಾಣ ಮಂಟಪದಲ್ಲಿ ಗುರುವಾರ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್‌ನಿಂದ ಆಯೋಜಿಸಿದ್ದ ಒಕ್ಕಲಿಗರ ವಧು–ವರರ ಸಮಾವೇಶದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸ್ತುತ ಯುವಕರು ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳು, ಹಿರಿಯರಿಗೆ ಗೌರವ, ಸಮಾಜ ಸೇವೆ ಮತ್ತು ಶ್ರಮದ ಮಹತ್ವ ಅರಿಯುವುದು ಅಗತ್ಯವಾಗಿದೆ. ಒಳ್ಳೆಯ ಗುಣಗಳನ್ನು ಅಳವಡಿಸಿಕೊಂಡಾಗ ಕುಟುಂಬದಲ್ಲಿ ಶಾಂತಿ, ಸಮಾಜದಲ್ಲಿ ಏಕತೆ ಹಾಗೂ ದೇಶದ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ ಎಂದರು.

ಒಕ್ಕಲಿಗ ಸಮಾಜವು ಕೃಷಿ, ಸಂಸ್ಕೃತಿ ಮತ್ತು ಶ್ರಮದ ಪರಂಪರೆ ಹೊಂದಿದ್ದು, ಯುವಕರು ದುಡಿಮೆ ಮತ್ತು ಪ್ರಾಮಾಣಿಕತೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಯುವಕರೇ ಸಮಾಜದ ಶಕ್ತಿ. ಅವರು ಉತ್ತಮ ಚಿಂತನೆ ಮತ್ತು ಸಕಾರಾತ್ಮಕ ಮನೋಭಾವ ಬೆಳೆಸಿಕೊಂಡರೆ ಸಮಾಜದಲ್ಲಿ ಅನೇಕ ಉತ್ತಮ ಬದಲಾವಣೆಗಳು ಸಾಧ್ಯವಾಗುತ್ತದೆ ಎಂದರು.



ಒಕ್ಕಲಿಗರ ವಧು–ವರರ ಸಮಾವೇಶವನ್ನು ಸರ್ಕಾರಿ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಬಿ.ಎನ್.ರವಿಕುಮಾರ್ ಉದ್ಘಾಟಿಸಿದರು.

> ಸಮಾಜದಲ್ಲಿ ಶಿಕ್ಷಣ, ಸಂಸ್ಕಾರ, ವ್ಯಕ್ತಿತ್ವ ಮತ್ತು ಹೊಣೆಗಾರಿಕೆಗಳಿಗೆ ಹೆಚ್ಚಿನ ಮಹತ್ವ ಸಿಗುತ್ತಿದೆ. ಕೇವಲ ಆರ್ಥಿಕ ಸ್ಥಿತಿ ಮಾತ್ರವಲ್ಲದೆ, ಒಬ್ಬ ಯುವಕನ ನಡೆ–ನುಡಿ, ಮಾತನಾಡುವ ರೀತಿ, ಹಿರಿಯರಿಗೆ ಗೌರವ, ಮಹಿಳೆಯರ ಗೌರವಭಾವ ಹಾಗೂ ಸ್ವಚ್ಛತೆ–ಶಿಸ್ತು ಇವುಗಳನ್ನೂ ಗಮನಿಸಲಾಗುತ್ತದೆ. ಹಾಗಾಗಿ ಗಂಡು ಮಕ್ಕಳು ಜೀವನದಲ್ಲಿ ಸೌಜನ್ಯ, ಸಂಸ್ಕಾರ, ಜವಾಬ್ದಾರಿ ಮತ್ತು ಆತ್ಮವಿಶ್ವಾಸ ಬೆಳೆಸಿಕೊಳ್ಳುವುದು ಅಗತ್ಯವಾಗಿದೆ. ಜೊತೆಗೆ ಶಿಕ್ಷಣ ಮತ್ತು ಉದ್ಯೋಗದ ಮೂಲಕ ಸ್ವಾವಲಂಬನೆ ಸಾಧಿಸುವುದು ಮುಖ್ಯ. ಹಣ ಸಂಪಾದನೆ ಜೀವನದ ಒಂದು ಭಾಗವಾದರೂ, ಒಳ್ಳೆಯ ವ್ಯಕ್ತಿತ್ವ ಮತ್ತು ಮಾನವೀಯ ಮೌಲ್ಯಗಳೇ ದೀರ್ಘಕಾಲದ ಗೌರವ ಮತ್ತು ಉತ್ತಮ ಸಂಬಂಧಗಳಿಗೆ ಆಧಾರವಾಗುತ್ತವೆ. – ಗೋನಾಸ್ವಾಮಿ, ಅಂತರಾಷ್ಟ್ರೀಯ ಜಾನಪದ ಗಾಯಕ.

ಒಕ್ಕಲಿಗ ಸಮಾಜದಲ್ಲಿ ಹೆಚ್ಚು ಹೆಣ್ಣು ಮಕ್ಕಳಿದ್ದಾರೆ. ಆದರೆ ಕೆಲವರಿಗೆ ವಿವಾಹವಾದರೆ ಕೆಲವರು ಅವಿವಾಹಿತರಾಗಿಯೇ ಉಳಿದಿದ್ದಾರೆ. ಅವರು ಮಾಡಿರುವ ಹೆಚ್ಚಿನ ಶಿಕ್ಷಣವೇ ಅವರ ವಿವಾಹಕ್ಕೆ ಅಡ್ಡಿಯಾಗಿದೆ. ಹೆಚ್ಚಿನ ವ್ಯಾಸಾಂಗ ಮಾಡಿರುವುದರಿಂದ ಅವರಿಗೆ ಸರಿ ಸಮಾನವಾದ ವರ ಸಿಗುತ್ತಿಲ್ಲ. ಅದೇ ಪರಿಸ್ಥಿತಿ ಯುವಕರದ್ದೂ ಆಗಿದೆ. ಯವಕರಿಗೆ ಹೆಣ್ಣು ಸಿಗುವುದೇ ಕಷ್ಟಕರವಾಗಿದೆ. ಅಂತಹ ಯುವಕರು ಸಮಾಜ ಆಯೋಜಿಸುವ ಇಂತಹ ವಧು–ವರರ ಸಮಾವೇಶದ ಪ್ರಯೋಜನ ಪಡೆದುಕೊಳ್ಳುವ ಮೂಲಕ ತಮ್ಮ ಬಾಳ ಸಂಗಾತಿ ಆಯ್ಕೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ಸಮಾವೇಶದಲ್ಲಿ 200ಕ್ಕೂ ಹೆಚ್ಚು ಮಂದಿ ಯುವಕರು ವಧುವಿಗಾಗಿ ಹೆಸರು ನೋಂದಾಯಿಸಿಕೊಂಡರು. ವಿಚ್ಛೇದಿತ ಮಹಿಳೆಯರನ್ನು ವರಿಸಲು ಸಿದ್ದವಿರುವುದಾಗಿ ಯುವಕರು ತಮ್ಮ ಮನದಾಳದ ಇಂಗಿತ ಬಹಿರಂಗಪಡಿಸಿದರು.

ಕಾರ್ಯಕ್ರಮವನ್ನು ಸರ್ಕಾರಿ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಬಿ.ಎನ್.ರವಿಕುಮಾರ್ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಜಿಲ್ಲಾಧ್ಯಕ್ಷ ಡಿ.ರವಿಕುಮಾರ್, ಟ್ರಸ್ಟ್ ಅಧ್ಯಕ್ಷ ಬಿ.ದೇವರಾಜು, ಕಾರ್ಯಾಧ್ಯಕ್ಷ ಚೆಲುವರಾಜು, ಪ್ರಧಾನ ಕಾರ್ಯದರ್ಶಿ ಟಿ.ಸಿ.ಮಾದೇಗೌಡ, ಖಜಾಂಚಿ ಎಂ.ಎಸ್. ಜಯರಾಮೇಗೌಡ, ಉಪಾಧ್ಯಕ್ಷ ಡಾ.ಮಲ್ಲಿಕಾರ್ಜುನ ಸ್ವಾಮಿ, ಶ್ರೀನಿವಾಸಮೂರ್ತಿ, ಮಹೇಂದ್ರ, ಎಂ.ಸತೀಶ್, ಕೆ.ಪಿ.ಶಿವಕುಮಾರ್, ಸಂಘಟನಾ ಕಾರ್ಯದರ್ಶಿ ಬಾಲರಾಜ್, ಬಿ.ಆರ್.ನಾರಾಯಣ ಸ್ವಾಮಿ, ಚಿಕ್ಕೀರೇಗೌಡ, ಚನ್ನೇಗೌಡ, ಸಹ ಕಾರ್ಯದರ್ಶಿ ಟಿ.ಸಿ.ಚೌಡೇಗೌಡ, ವೈ.ಟಿ.ಮಹೇಶ್, ಜೆ.ಲೋಕೇಶ್, ಮಹದೇವು, ಟಿ.ಎಸ್.ಪ್ರಸನ್ನ, ಯಾಚೇನಹಳ್ಳಿ ನಾಗೇಂದ್ರ, ನರಸಿಂಹಮೂರ್ತಿ, ತೋಟ ಗಾರಿಕಾ ಅಧಿಕಾರಿ ರಾಮೇಗೌಡ, ವಿಶ್ರಾಂತ ಪ್ರಾಂಶುಪಾಲ ಗೂಳೇಗೌಡ, ಮಂಜೇಶ್, ನಾಗೇಂದ್ರ ಮತ್ತಿತರರಿದ್ದರು.

ತ್ಯಾಗ, ಬಲಿದಾನದ ಸಂಕೇತ ಪವಿತ್ರ ಬಕ್ರೀದ್ ಹಬ್ಬ

ಖ್ಯಾತ ಮೂಳೆ ತಜ್ಞ ಡಾ.ಮೆಹಬೂಬ್ ಖಾನ್ ಅಭಿಪ್ರಾಯ

ಕೆ.ಆರ್.ನಗರ, ಮೇ 28– ತ್ಯಾಗ ಮತ್ತು ಬಲಿದಾನದ ಸಂಕೇತವಾದ ಪವಿತ್ರ ಬಕ್ರೀದ್ ಹಬ್ಬವು ನಿಮ್ಮ ಬಾಳಿನಲ್ಲಿ ಅಪಾರ ಸಂತೋಷ, ಶಾಂತಿ ಮತ್ತು ಸಮೃದ್ಧಿ ತರಲಿ ಎಂದು ಅಲ್ಲಾಹನನ್ನು ಪ್ರಾರ್ಥಿಸುತ್ತೇನೆ ಎಂದು ಖ್ಯಾತ ಮೂಳೆ ತಜ್ಞ ಡಾ.ಮೆಹಬೂಬ್ ಖಾನ್ ತಿಳಿಸಿದರು.

ಪಟ್ಟಣದ ಜಾಮೀಯ ಮಸೀದಿ ಮುಂಭಾಗ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಇಂದು ದೇಶದೆಲ್ಲೆಡೆ ಬಕ್ರೀದ್ ಹಬ್ಬವನ್ನು ಸಂಭ್ರಮದ ಆಚರಣೆ ಮಾಡಲಾಗುತ್ತಿದೆ ಎಂದ ಅವರು ಈದುಲ್ ಅಝ್ಹಾ (ಬಕ್ರೀದ್) ಹಬ್ಬದ ಅಂಗವಾಗಿ ಶಾಂತಿ, ಸೌಹಾರ್ದವಾಗಿ ಸಮುದಾಯದವರು ಜಾಮೀಯ ಮಸೀದಿಯಲ್ಲಿ ಜಮಾವಣೆಗೊಂಡು ನಂತರ ಪಟ್ಟಣದ ಗರಡುಗಂಭ ವೃತ್ತಕ್ಕೆ ತೆರಳಿ ಹುಣಸೂರು ರಸ್ತೆ ಮಾರ್ಗವಾಗಿ ಮೆರವಣಿಗೆ ಮೂಲಕ ಈದ್ಗಾ ಮೈದಾನಕ್ಕೆ ಸಾಗಿ ಸಾಮೂಹಿಕ ಪ್ರಾರ್ಥನೆ(ನಮಾಝ್) ಮಾಡಿ ಹಾಗೂ ಪರಸ್ಪರ ಅಪ್ಪಿಕೊಂಡು ಹಬ್ಬದ ಸಂದೇಶ ಹಂಚಿಕೊಳ್ಳುವ ಮೂಲಕ ವಿಜೃಂಭಣೆಯಿಂದ ಹಬ್ಬ ಆಚರಿಸಲಾಗಿದೆ ಎಂದರು.



ಕೆ.ಆರ್.ನಗರದಲ್ಲಿ ಬಕ್ರೀದ್ ಅಂಗವಾಗಿ ಸಾಮೂಹಿಕ ಪ್ರಾರ್ಥನೆ ನಡೆಯಿತು.

ಜಾಮೀಯ ಮಸೀದಿ ಧರ್ಮಗುರು ಮುಫ್ತಿ ಜೈನೂಲ್ ಅಬಿದ್ದೀನ್ ಮಾತನಾಡಿ, ತ್ಯಾಗದ ಸಂಪ್ರದಾಯವನ್ನು ಸ್ಪಷ್ಟವಾಗಿ ಖುರ್ಬಾನಿ ಎನ್ನುತ್ತಾರೆ ಅಂದರೆ ದೇವರ ಆಜ್ಞೆ ಮೇರೆಗೆ ಪ್ರಾಣಿಗಳನ್ನು (ಟಗರು ಅಥವಾ ಕುರಿ) ಬಲಿ ನೀಡಿ, ಆ ಮಾಂಸವನ್ನು 3 ಸಮಾನ ಭಾಗಗಳಾಗಿ ಮಾಡುತ್ತಾರೆ. ಒಂದು ಭಾಗವನ್ನು ಬಡವರಿಗೆ, ಇನ್ನೊಂದು ಭಾಗ ಸಂಬಂಧಿಕರಿಗೆ ಮತ್ತು ಕೊನೆಯ ಭಾಗವನ್ನು ತಮ್ಮ ಕುಟುಂಬಕ್ಕೆ ಬಳಸಿ ಕೊಳ್ಳುತ್ತಾರೆ ಎಂದು ಹಬ್ಬದ ಮಹತ್ವವನ್ನು ವಿವರಿಸಿದರು.

ರಾಜ್ಯದಲ್ಲಿ ಕಾಲ ಕಾಲಕ್ಕೆ ಮಳೆ, ಬೆಳೆಯನ್ನು ಅಲ್ಲಾಹನು ಕರುಣಿಸಲಿ ಮತ್ತು ರೈತ ಬಾಂಧವರು ಸಂಕಷ್ಟಗಳನ್ನು ಎದುರಿಸುತ್ತಿದ್ದು, ಆ ಸಂಕಷ್ಟಗಳು ನಿವಾರಣೆಯಾಗಲಿ, ದೇಶವು ಸಮೃದ್ಧಿಯಾಗಲಿ ಎಂದು ಪ್ರಾರ್ಥನೆ ಸಲ್ಲಿಸಲಾಯಿತು.

ಪಟ್ಟಣದ ಪೊಲೀಸ್ ಇನ್ಸ್‌ಪೆಕ್ಟರ್ ಶಿವಪ್ರಕಾಶ್ ನೇತೃತ್ವದಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಈ ವೇಳೆ ಪುರಸಭಾ ಮಾಜಿ ಸದಸ್ಯ ಜಾಮೀದ್ ಪಾಷ, ಸೈಯದ್ ಅಸ್ಲಂ, ಜಾಮೀಯ ಮಸೀದಿ ನೂತನ ಅಧ್ಯಕ್ಷ ಎಕ್ಬಾಲ್ ಪಾಷ, ಕಾರ್ಯದರ್ಶಿ ಮುಹಮ್ಮದ್ ತಾಜ್, ಉಪಾಧ್ಯಕ್ಷ ಸೈಯದ್ ಶಾಕೀರ್ ರೆಹಮಾನ್, ಜಂಟಿ ಕಾರ್ಯದರ್ಶಿ ಖಾಲಿದ್ ಪಾಷ(ಖಾಲು), ಜಾಮೀಯ ಮಸೀದಿ ಧರ್ಮಗುರುಗಳಾದ ಮೌಲಾನಾ ಅಲಿ ಹುಸೇನ್, ಮೌಲಾನಾ ಅರ್ಷ ದುಲ್ ಖಾದ್ರಿ, ಮಾಜಿ ಅಧ್ಯಕ್ಷ ಅಫ್ಸರ್ ಬಾಬು, ಮಾಜಿ ಕಾರ್ಯದರ್ಶಿ ತಸವ್ವರ್ ಪಾಷ, ಅನುಷ್ ಖಾನ್, ಮಜೀದ್, ಸೈಯದ್ ಜಾಬೀರ್, ನವೀದ್, ನವಾಜ್, ಸೇರಿದಂತೆ ಸಮುದಾಯದ ಮುಖಂಡರು ಭಾಗವಹಿಸಿದರು.

ನಗರಸಭೆಯಿಂದ ಫುಟ್‌ಪಾತ್ ತೆರವು ಕಾರ್ಯಾಚರಣೆ

ನಂಜನಗೂಡು, ಮೇ 28– ನಗರದ ಬಜಾರ್ ರಸ್ತೆಯ ವಾಣಿಜ್ಯ ಮಳಿಗೆಗಳ ಮಾಲೀಕರು ಅಕ್ರಮವಾಗಿ ಅತಿಕ್ರಮಿಸಿಕೊಂಡಿದ್ದ ಫುಟ್‌ಪಾತ್ ಅನ್ನು ನಗರಸಭೆ ಅಧಿಕಾರಿಗಳು ಜೆಸಿಬಿ ಮೂಲಕ ತೆರವುಗೊಳಿಸಿದರು.

ನಗರದ ಬಜಾರ್ ರಸ್ತೆಯಲ್ಲಿ ಗೀತಾ ಮೆಡಿಕಲ್ ವೃತ್ತದಿಂದ ಶ್ರೀಕಂಠೇಶ್ವರ ದೇವಾಲಯದವರೆಗೆ ಅತಿಕ್ರಮಿಸಿಕೊಂಡಿದ್ದ ಫುಟ್‌ಪಾತ್ ಅನ್ನು ಅಧಿಕಾರಿಗಳು ಜೆಸಿಬಿ ಮೂಲಕ ತೆರವುಗೊಳಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ನಗರಸಭಾ ಆಯುಕ್ತ ಎಂ.ಬಸವರಾಜು ಮಾತನಾಡಿ, ನಂಜನಗೂಡು ಪವಿತ್ರ ಯಾತ್ರಾ ಸ್ಥಳವಾಗಿದ್ದು, ರಾಜ್ಯದ ವಿವಿಧೆಡೆಗಳಿಂದ ಭಕ್ತರು ಶ್ರೀಕಂಠೇಶ್ವರ ದೇವಾಲಯಕ್ಕೆ ಆಗಮಿಸುತ್ತಾರೆ. ರೈಲು ಮೂಲಕ ಆಗಮಿಸುವ ಭಕ್ತರು ಬಜಾರ್ ರಸ್ತೆಯಲ್ಲಿ ತೆರಳುವುದರಿಂದ ಈ ರಸ್ತೆಯಲ್ಲಿ ಜನಸಂದಣಿ ಹೆಚ್ಚಾಗಿರುತ್ತದೆ. ವಾಣಿಜ್ಯ ಮಳಿಗೆಗಳ ಮಾಲೀಕರು ಫುಟ್‌ಪಾತ್ ಅತಿಕ್ರಮಿಸಿಕೊಂಡು ಮುಂಚಾಚು ನಿರ್ಮಿಸಿ ವಸ್ತುಗಳನ್ನು ಇಟ್ಟುಕೊಂಡು ವ್ಯಾಪಾರದಲ್ಲಿ ನಿರತರಾಗುತ್ತಿದ್ದರು. ಇದರಿಂದಾಗಿ ರಸ್ತೆಯಲ್ಲಿ ಸಂಚಾರ ದಟ್ಟಣೆ ಅಧಿಕವಾಗಿ ಸಾರ್ವಜನಿಕರಿಂದ ಫುಟ್‌ಪಾತ್ ತೆರವು ಮಾಡುವಂತೆ ಹಲವು ಬಾರಿ ದೂರು ಕೇಳಿ ಬಂದಿತ್ತು. ಈ ಬಗ್ಗೆ ವಾಣಿಜ್ಯ ಮಳಿಗೆ ಮಾಲೀಕರಿಗೆ ಹಲವು ಬಾರಿ ನೋಟೀಸ್ ಜಾರಿಗೊಳಿಸಿ ಫುಟ್‌ಪಾತ್ ತೆರವುಗೊಳಿಸುವಂತೆ ಎಚ್ಚರಿಕೆ ನೀಡಲಾಗಿತ್ತು. ಆದರೂ ಮಾಲೀಕರು ತೆರವುಗೊಳಿಸದ ಕಾರಣ ಜಿಲ್ಲಾಧಿಕಾರಿಗಳು ಮತ್ತು ನ್ಯಾಯಾಲಯದ ಆದೇಶದಂತೆ ಪೊಲೀಸರ ಜೊತೆಗೂಡಿ ನಗರಸಭೆಯಿಂದ ತೆರವು ಕಾರ್ಯಾಚರಣೆ ನಡೆಸಲಾಗಿದ್ದು, ಮುಂದಿನ ದಿನಗಳಲ್ಲಿ ನಿರಂತರವಾಗಿ ಕಾರ್ಯಾಚರಣೆ ನಡೆಯಲಿದೆ. ಒಂದು ವೇಳೆ ವಾಣಿಜ್ಯ ಮಳಿಗೆಗಳ ಮಾಲೀಕರು ಫುಟ್‌ಪಾತ್ ಅತಿಕ್ರಮಿಸಿಕೊಂಡಿದ್ದಲ್ಲಿ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ನಂ.ಗೂಡಲ್ಲಿ ನಗರಸಭೆಯಿಂದ ಫುಟ್‌ಪಾತ್ ಒತ್ತುವರಿ ತೆರವುಗೊಳಿಸಲಾಯಿತು.

ನಂಜನಗೂಡು ಪ್ರಸಿದ್ಧ ಯಾತ್ರಾಸ್ಥಳ ಆಗಿರುವುದರಿಂದ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ಜೊತೆಗೆ ಸಾರ್ವಜನಿಕರು ಸ್ವಚ್ಛತೆಗೆ ಕೈಜೋಡಿಸುವ ಮೂಲಕ ನಂಜನಗೂಡನ್ನು ಸ್ವಚ್ಛ ನಗರಿಯನ್ನಾಗಿಸಲು ಸಹಕಾರ ನೀಡಬೇಕು ಎಂದರು.

ರಸಗೊಬ್ಬರ, ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ

ಹೆಚ್.ಡಿ.ಕೋಟೆಯಲ್ಲಿ ರೈತ ಸಂಘದಿಂದ ಪ್ರತಿಭಟನೆ

ಹೆಚ್.ಡಿ.ಕೋಟೆ, ಮೇ 28– ರಸಗೊಬ್ಬರ, ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಾಗಿರುವುದರಿಂದ ಅಗತ್ಯ ವಸ್ತುಗಳು, ಸಾರಿಗೆ ಸೇರಿದಂತೆ ಇತರೆ ವೆಚ್ಚಗಳು ದುಬಾರಿಯಾಗಿ ರೈತರು ಸೇರಿದಂತೆ ಎಲ್ಲಾ ವರ್ಗದವರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿ ಪಟ್ಟಣದಲ್ಲಿ ರೈತ ಸಂಘದ ಸದಸ್ಯರು ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಮಾತನಾಡಿದ ಮುಖಂಡರು, ರಸಗೊಬ್ಬರ ಬೆಲೆ ಏರಿಕೆ ಮಾಡಿರುವುದರಿಂದ ರೈತ ಸಮುದಾಯಕ್ಕೆ ದೊಡ್ಡ ಹೊಡೆತ ಬಿದ್ದಿದೆ. ಕೃಷಿ ಉತ್ಪನ್ನಗಳ ವೆಚ್ಚ ಪ್ರತಿ ವರ್ಷ ಹೆಚ್ಚುತ್ತಲೇ ಇದ್ದು, ರೈತರಿಗೆ ದೊರಕುತ್ತಿರುವ ಬೆಲೆ ಕಡಿಮೆ ಆಗುತ್ತಲೇ ಇದೆ. ಕೇಂದ್ರದ ಎನ್‌ಡಿಎ ಸರ್ಕಾರ ಈ ಹಿಂದೆ ನೀಡಿದ್ದ ಭರವಸೆಯಂತೆ ಇದುವರೆಗೂ ಡಾ.ಎಂ.ಎಸ್.ಸ್ವಾಮಿನಾಥನ್ ವರದಿಯನ್ವಯ ಕನಿಷ್ಠ ಬೆಂಬಲ ನೀತಿ ಜಾರಿಗೊಳಿಸದಿರುವುದರಿಂದ ರೈತರು ಕೋಟ್ಯಾಂತರ ರೂ. ನಷ್ಟ ಅನುಭವಿಸುವಂತಾಗಿದೆ. ಈ ನಡುವೆ ರಸಗೊಬ್ಬರದ ಬೆಲೆ ಏರಿಸಿರುವುದರಿಂದ ವ್ಯವಸಾಯವನ್ನೇ ಕೈ ಬಿಡಬೇಕಾದ ಪರಿಸ್ಥಿತಿ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.



ರಸಗೊಬ್ಬರ, ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಖಂಡಿಸಿ ಪ್ರತಿಭಟನೆ ನಡೆಸಲಾಯಿತು.

ಸರ್ಕಾರ ಕೂಡಲೇ ರಸಗೊಬ್ಬರದ ಬೆಲೆ ಕಡಿಮೆ ಮಾಡಿ ಸಬ್ಸಿಡಿ ಹೆಚ್ಚಿಸಿ ರಿಯಾಯಿತಿ ದರದಲ್ಲಿ ರೈತರಿಗೆ ರಸಗೊಬ್ಬರ ಸಿಗುವಂತೆ ಮಾಡಬೇಕು. ಅಲ್ಲದೇ ಕೇಂದ್ರ ಹಾಗೂ ರಾಜ್ಯ ಸರ್ಕಾರ ಪೆಟ್ರೋಲ್, ಡೀಸೆಲ್ ಬೆಲೆ ಕಡಿಮೆ ಮಾಡಬೇಕು. ರಿಯಾಯಿತಿ ದರದಲ್ಲಿ ಕೃಷಿ ಚಟುವಟಿಕೆಗಳಿಗೆ ಡೀಸೆಲ್ ಪೂರೈಸಬೇಕು. ಬರ ಎದುರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮುಂಜಾಗ್ರತೆ ವಹಿಸಿ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಮತ್ತು ಉದ್ಯೋಗ ಖಾತರಿಗೆ ಒತ್ತು ನೀಡಬೇಕು ಎಂದು ಆಗ್ರಹಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವದಲ್ಲಿ ವಾಗ್ದಾನ ನೀಡಿದಂತೆ ಭೂ ಸುಧಾರಣಾ ತಿದ್ದುಪಡಿ ಕಾಯ್ದೆ, ಜಾನುವಾರು ಹತ್ಯೆ ಮತ್ತು ಸಂರಕ್ಷಣಾ ಕಾಯ್ದೆ ವಾಪಸ್ ಪಡೆಯಬೇಕು. ಎಪಿಎಂಸಿಯನ್ನು ರೈತ ಸ್ನೇಹಿಯನ್ನಾಗಿ ಬಲಗೊಳಿಸಬೇಕು. ಕೃಷಿ ಬೆಲೆ ಆಯೋಗವನ್ನು ಶಾಶ್ವತ ಆಯೋಗವನ್ನಾಗಿ ಘೋಷಿಸಬೇಕು ಎಂದರು.

ಕಡ್ಡಾಯ ಲಿಂಕ್ ಪದ್ಧತಿಯನ್ನು ಕೈ ಬಿಟ್ಟು ಡೀಲರ್‌ಗಳು ಕಡ್ಡಾಯವಾಗಿ ಬೇರೆ ಗೊಬ್ಬರ ಅಥವಾ ಕೀಟನಾಶಕ ತೆಗೆದುಕೊಳ್ಳಬೇಕೆಂದು ಒತ್ತಾಯಿಸದೆ ರೈತರು ಕೇಳಿದ ಗೊಬ್ಬರವನ್ನೇ ಪೂರೈಸಬೇಕು. ಗೊಬ್ಬರದ ಕೃತಕ ಅಭಾವ ಸೃಷ್ಟಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪರವಾನಗಿ ಭೂ ಮಾಪಕರ ನ್ಯಾಯಯುತ ಬೇಡಿಕೆಯನ್ನು ಪೂರೈಸಬೇಕು. ಕಂದಾಯ ಇಲಾಖೆ ಮತ್ತು ಭೂ ಮಾಪನ ಇಲಾಖೆಯಲ್ಲಿ ರೈತರ ಪರವಾಗಿ ಕೆಲಸ ನಿರ್ವಹಿಸದ ಅಧಿಕಾರಿಗಳು ಮತ್ತು ನೌಕರರನ್ನು ತಾಲೂಕಿನಿಂದ ಹೊರ ಕಳುಹಿಸಬೇಕು ಎಂದು ಆಗ್ರಹಿಸಿದರು.

ಬಳಿಕ ಉಪ ತಹಸೀಲ್ದಾರ್ ಮಹೇಶ್ ಅವರಿಗೆ ಸಂಘದ ವತಿಯಿಂದ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಪಳನಿಸ್ವಾಮಿ, ಗೌರವಾಧ್ಯಕ್ಷ ಜಕ್ಕಹಳ್ಳಿ ರವಿಕುಮಾರ್, ತಾಲೂಕು ಕಾರ್ಯದರ್ಶಿ ಶಿಂಡೇನಹಳ್ಳಿ ರವಿ, ಉಪಾಧ್ಯಕ್ಷ ಮಂಜು, ಮಹಿಳಾ ಘಟಕದ ಅಧ್ಯಕ್ಷೆ ದೇವಮ್ಮ, ಶಿವಕುಮಾರ್, ಬೊಪ್ಪನಹಳ್ಳಿ ಮಹದೇವ, ಪ್ರಸನ್ನ, ಶಿವಕುಮಾರ್, ಸೋಮೇಶ್, ಮಹಾದೇವ, ರವಿಕುಮಾರ್, ಜವರಯ್ಯ, ದೇವರಾಜ್, ಮಂಜು, ಕುಮಾರಸ್ವಾಮಿ ಇದ್ದರು.

ಹುಣಸೂರು: ಮಹಿಳೆ ನಾಪತ್ತೆ

ಹುಣಸೂರು, ಮೇ 28– ಮಹಿಳೆಯೊಬ್ಬರು ನಾಪತ್ತೆಯಾಗಿರುವ ಸಂಬಂಧ ಹುಣಸೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ನಗರದ ನರಸಿಂಹಸ್ವಾಮಿ ಬಡಾವಣೆ ನಿವಾಸಿ ಲೇ.ಬೋಳರಪ್ಪ ಅವರ ಪುತ್ರಿ ಆಶಾ(44) ನಾಪತ್ತೆಯಾದವರು. ಈಕೆ ಏ.5ರಂದು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಹೋಗಿ ಬರುವುದಾಗಿ ಹೇಳಿ ಮನೆಯಿಂದ ಹೊರ ಹೋದವರು ಇದುವರೆಗೂ ಮನೆಗೆ ವಾಪಸ್ಸಾಗಿಲ್ಲ. ಆಕೆಗೆ ಫೋನ್ ಮಾಡಿದರೇ ಸ್ವಿಚ್ ಆಫ್ ಬರುತ್ತಿದೆ. ಎಲ್ಲಾ ಕಡೆ ಹುಡುಕಾಡಿದರೂ ಆಕೆಯ ಬಗ್ಗೆ ಯಾವುದೇ ಮಾಹಿತಿ ದೊರೆತಿಲ್ಲ. ಹೀಗಾಗಿ ನಾಪತ್ತೆಯಾಗಿರುವ ನನ್ನ ತಂಗಿಯನ್ನು ಹುಡುಕಿಕೊಡುವಂತೆ ಅಕ್ಕ ಜಯಲಕ್ಷ್ಮಿ ಹುಣಸೂರು ನಗರ ಠಾಣೆಗೆ ದೂರು ನೀಡಿದ್ದಾರೆ. ಈಕೆ ಬಗ್ಗೆ ಸುಳಿವು ಸಿಕ್ಕವರು ಹುಣಸೂರು ನಗರ ಠಾಣೆ ದೂ: 08222–253133 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಪ್ರೇಮಲೀಲಾ ನಿಧನ




ತಿ.ನರಸೀಪುರ, ಮೇ 28– ಪಟ್ಟಣದ ಜವಳಿ ಉದ್ಯಮಿ, ವಾಸವಿ ಹಾಲ್ ಮಾಲೀಕ ಸತ್ಯನಾರಾಯಣಶೆಟ್ಟಿ ಅವರ ಪತ್ನಿ ಪ್ರೇಮಲೀಲಾ(85) ಗುರುವಾರ ಬೆಳಗ್ಗೆ ನಿಧನರಾದರು.

ಉದ್ಯಮಿ ರಾಜಪ್ಪ, ಶಂಕರ್ ಸೇರಿದಂತೆ ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಪಟ್ಟಣದ ತ್ರಿವೇಣಿ ಘಾಟ್‌ನಲ್ಲಿ ನಡೆಯಿತು ಎಂದು ಮೂಲಗಳು ತಿಳಿಸಿವೆ.

ಸಿದ್ದರಾಮಯ್ಯ ರಾಜೀನಾಮೆ ; ಜನರ ಮಿಶ್ರ ಪ್ರತಿಕ್ರಿಯೆ

ಮೈಸೂರು,ಮೇ 28(ಪಿಎಂ)– ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಿರುವ ಈ ಸಂದರ್ಭದಲ್ಲಿ ಅವರ ಆಡಳಿತಾವಧಿಯ ಬಗ್ಗೆ ಜನಸಾಮಾನ್ಯರು, ವಿವಿಧ ಪಕ್ಷಗಳ ರಾಜಕೀಯ ಮುಖಂಡರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಉತ್ತಮ ಪರಂಪರೆ...



ಸಿದ್ದರಾಮಯ್ಯನವರು ನುರಿತ ರಾಜಕಾರಣಿ. ಅವರು ಬುದ್ಧಿವಂತರು ಹಾಗೂ ಅಧ್ಯಯನಶೀಲರು. ಅಗಾಧ ಜ್ಞಾಪಕಶಕ್ತಿ ಅವರ ವಿಶೇಷ. ಅವರು ತಾವು ಬೆಳೆದು ಬಂದ ದಾರಿ ಮರೆಯದೇ ಸಮಾಜಕ್ಕೆ ಅಗತ್ಯವಾದ ಸೌಲಭ್ಯಗಳಾದ ಗ್ಯಾರಂಟಿ ಯೋಜನೆಗಳನ್ನು ತಮ್ಮ ಅಧಿಕಾರಾವಧಿಯಲ್ಲಿ ಸಮರ್ಥವಾಗಿ ಅನುಷ್ಠಾನಗೊಳಿಸಿದ್ದಾರೆ. ತಮ್ಮ ಜನಪರ ಕಾರ್ಯಗಳ ಮೂಲಕ ಜನಪ್ರಿಯತೆ ಹೊಂದಿದ್ದಾರೆ. ಅಧಿಕಾರ ಅಂದರೆ ಹೀಗೆಂಯೇ. ಒಬ್ಬರಾದ ಮೇಲೆ ಮತ್ತೊಬ್ಬರು ಬರಬೇಕಾಗುತ್ತದೆ. ಸಿದ್ದರಾಮಯ್ಯನವರು ಹಾಕಿಕೊಟ್ಟಿರುವ ಉತ್ತಮ ಪರಂಪರೆಯನ್ನು ಮುಂದೆ ಬರುವವರು ಆಡಳಿತದಲ್ಲಿ ಮುಂದುವರೆಸಲಿ. ರೈತರ ಕಲ್ಯಾಣ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವಂತಾಗಲಿ.

–ಆಲೂರು ಮೂರ್ತಿ, ರೈತರು

ದಲಿತರಿಗೆ ದ್ರೋಹ ಮಾಡಿದರು...



ಹೈಕಮಾಂಡ್ ನಿರ್ಧಾರದಂತೆ ರಾಜೀನಾಮೆ ನೀಡಿದ್ದಾರೆ ಎನ್ನಲಾಗುತ್ತಿದೆ. ಅವರು ಅಧಿಕಾರ ಬಿಟ್ಟುಕೊಟ್ಟು ಬೇರೆಯವರಿಗೆ ಅವಕಾಶ ಕಲ್ಪಿಸುತ್ತಿರುವುದು ಸರಿಯಾಗಿದೆ. ಸಿದ್ದರಾಮಯ್ಯನವರು ತಾವು ಸಮಾಜವಾದಿ ಚಿಂತನೆ ಹೊಂದಿರುವುದಾಗಿ ಹೇಳಿಕೊಂಡವರು. ಆದರೆ ಅವರ ಆಡಳಿತಾವಧಿಯಲ್ಲಿ ಮೊದಲಿನ ಸಿದ್ದರಾಮಯ್ಯರನ್ನು ಕಾಣಲಾಗಲಿಲ್ಲ. ಇವರ ಆಡಳಿತದಲ್ಲಿ ಭ್ರಷ್ಟಾಚಾರ ಹೆಚ್ಚೇ ಇತ್ತು. ಜೊತೆಗೆ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ವಿನಿಯೋಗಿಸಿ ದಲಿತರಿಗೆ ದ್ರೋಹ ಮಾಡಿದರು. ಎನ್‌ಇಪಿ ಕೋಮುವಾದಿ ಎಂದು ಟೀಕಿಸುತ್ತಲೇ ಅದೇ ನೀತಿಯಂತೆಯೇ ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚುವ ನಿರ್ಧಾರ ಕೈಗೊಂಡಿದ್ದಾರೆ. ಇದು ಬಡಮಕ್ಕಳ ಶಿಕ್ಷಣ ಕಸಿಯುವ ಹುನ್ನಾರ. ಬಿಜೆಪಿ ಮತ್ತು ಕಾಂಗ್ರೆಸ್ ಒಂದೇ ನಾಣ್ಯದ ಎರಡು ಮುಖಗಳು. ಇವುಗಳಿಂದ ಜನಪರ ಆಡಳಿತ ನಿರೀಕ್ಷಿಸಲಾಗದು.

–ಚೋರನಹಳ್ಳಿ ಶಿವಣ್ಣ, ಜಿಲ್ಲಾ ಸಂಚಾಲಕರು, ದಲಿತ ಸಂಘರ್ಷ ಸಮಿತಿ, ಮೈಸೂರು.

ಜನಪರ ಆಳ್ವಿಕೆ ಮುಂದುವರಿಕೆ...



ನಂಬಿಕೆ ರಾಜಕಾರಣಕ್ಕೆ ಸಿದ್ದರಾಮಯ್ಯ ನಮಗೆ ಬಹುದೊಡ್ಡ ಮಾದರಿ. ಅವರು 50 ವರ್ಷಗಳಿಂದ ಜನಪರ ರಾಜಕಾರಣ ಮಾಡುತ್ತಿರುವ ಅನುಭವಿಗಳು. ಇವರ ರಾಜೀನಾಮೆ ನಿರ್ಧಾರ ಭಾರತದಲ್ಲಿ ನಂಬಿಕೆ ಮತ್ತು ನೈತಿಕತೆ ರಾಜಕಾರಣಕ್ಕೆ ದೊಡ್ಡ ಹೆಗ್ಗುರುತು ಮತ್ತು ಆದರ್ಶ. ಅವರ ಮಾರ್ಗದರ್ಶನದಲ್ಲಿ ಮುಂದಿನ ಮುಖ್ಯಮಂತ್ರಿಗಳು ರಾಜ್ಯದಲ್ಲಿ ಜನಪರ ಆಡಳಿತ ಮುಂದುವರೆಸಲಿದ್ದಾರೆ.

–ಡಾ.ಬಿ.ಜೆ.ವಿಜಯ್‌ಕುಮಾರ್, ಜಿಲ್ಲಾಧ್ಯಕ್ಷರು, ಮೈಸೂರು


ಅಹಿಂದ ವರ್ಗಕ್ಕೆ ಅನ್ಯಾಯ...



ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ಅಹಿಂದ ವರ್ಗಕ್ಕೆ ಅನ್ಯಾಯವಾದಂತೆ. ಏಕೆಂದರೆ ಮುಖ್ಯಮಂತ್ರಿಯಾಗಿ ಹಿಂದುಳಿದ ಸಮುದಾಯಗಳಿಗೆ ಅವರೊಂದು ಶಕ್ತಿಯಾಗಿದ್ದರು. ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ಅವರನ್ನೇ ಮುಖ್ಯಮಂತ್ರಿಯಾಗಿ ಮುಂದುವರೆಸಲು ಅವಕಾಶ ನೀಡಿದ್ದರೆ, 2028ರಲ್ಲಿ ಡಿ.ಕೆ.ಶಿವಕುಮಾರ್ ಅವರಿಗೆ ಅವಕಾಶ ನೀಡಬಹುದಿತ್ತು.

–ರವಿನಂದನ್, ಸಂಚಾಲಕರು, ಹಿಂದುಳಿದ ವರ್ಗಗಳ ಜಾಗೃತ ವೇದಿಕೆ.

ಅಧಿಕಾರದಿಂದ ನಿರ್ಗಮನ ಅನಿವಾರ್ಯ...



ಇಂದು ರಾಜೀನಾಮೆ ಕೊಟ್ಟಿರುವುದು ಮೈಸೂರು ಭಾಗದ ಜನತೆಗೆ ಸ್ವಲ್ಪ ದುಃಖದ ಸಂಗತಿಯೇ. ಆದರೆ ಅಧಿಕಾರ ಎನ್ನುವುದು ಯಾರಿಗೂ ಶಾಶ್ವತವಲ್ಲ. ಅಧಿಕಾರ ಪಡೆಯುವುದು, ಅದರಿಂದ ನಿರ್ಗಮಿಸುವುದು ಎಲ್ಲರಿಗೂ ಅನಿವಾರ್ಯ. ನಮ್ಮ ಪಕ್ಷದಿಂದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರ ವಹಿಸಿಕೊಳ್ಳಲಿದ್ದಾರೆ ಎಂದು ಹೇಳಲಾಗುತ್ತಿದೆ. ಅವರು ಸಹ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರಂತೆಯೇ ಉತ್ತಮವಾಗಿ ಕೆಲಸ ಮಾಡಲು ಸಮರ್ಥರಿದ್ದಾರೆ. ಕಾರ್ಯಕರ್ತರನ್ನು ಒಟ್ಟಾಗಿ ಕೊಂಡೊಯ್ಯಲಿದ್ದಾರೆ.

–ಎನ್.ಜಿ.ಸುಧೀರ್, ಕಾರ್ಯದರ್ಶಿ, ಮೈಸೂರು ನಗರ ಕಾಂಗ್ರೆಸ್

ಜನಪರ ಆಡಳಿತ ನೀಡಬೇಕು...



ಸಿದ್ದರಾಮಯ್ಯನವರ ರಾಜೀನಾಮೆ ಅವರ ಪಕ್ಷದ ಆಂತರಿಕ ವಿಚಾರ. ಅವರ ಪಕ್ಷದ ಹೈಕಮಾಂಡ್ ನಿರ್ಣಯದಂತೆ ಎಲ್ಲವೂ ನಡೆದಿದೆ ಎಂದು ಹೇಳಲಾಗುತ್ತಿದೆ. ಮುಖ್ಯಮಂತ್ರಿ ಯಾರೇ ಆಗಲಿ. ಅವರು ಜನಪರ ಆಡಳಿತ ನೀಡಬೇಕೆಂದು ಜನ ಒತ್ತಾಯ ಮಾಡಬೇಕು. ಸಿದ್ದರಾಮಯ್ಯನವರ ಅವಧಿಯಲ್ಲಿ ಕೇಂದ್ರ ಸರ್ಕಾರದ ಎನ್‌ಇಪಿ ವಿರೋಧಿಸುತ್ತಲೇ ಅದೇ ನೀತಿ ಮಾದರಿಯಲ್ಲಿ ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚಲು ನಿರ್ಧಾರ ಕೈಗೊಳ್ಳಲಾಗಿದೆ. ಭರವಸೆಯಂತೆ ಇವರ ಅವಧಿಯಲ್ಲಿ ಕೃಷಿ ಸಂಬಂಧ ರೈತ ವಿರೋಧಿ ಕಾಯ್ದೆಗಳನ್ನು ರದ್ದು ಮಾಡಿಲ್ಲ. ಕೇಂದ್ರ ಸರ್ಕಾರದ ಕಾರ್ಮಿಕ ಸಂಹಿತೆಗಳನ್ನು ರಾಜ್ಯ ಒಪ್ಪಬೇಕೆಂದೇನೂ ಇಲ್ಲ. ಕರ್ನಾಟಕದಲ್ಲಿ ಕಾರ್ಮಿಕರ ಪರವಾಗಿ ತಿದ್ದುಪಡಿ ಮಾಡಲು ಅವಕಾಶ ಇದ್ದರೂ ಈವರೆಗೆ ಮಾಡಿಲ್ಲ. ಸದರಿ ಸಂಹಿತೆ ಇನ್ನೂ ಜಾರಿಗೆ ಬಂದಿಲ್ಲ. ಸಿದ್ದರಾಮಯ್ಯ ಅವರ ಮೇಲೆ ಅಪಾರ ನಿರೀಕ್ಷೆ ಇತ್ತು. ಅಂತಹವರೇ ಆ ರೀತಿಯಲ್ಲಿ ನಡೆದುಕೊಂಡಿಲ್ಲ. ಇನ್ನು ಬೇರೆಯವರು ಮುಖ್ಯಮಂತ್ರಿಯಾಗಿ ಜನರ ನಿರೀಕ್ಷೆಯಂತೆ ನಡೆಯುತ್ತಾರೆಯೇ ನೋಡಬೇಕು.

–ಚಂದ್ರಶೇಖರ ಮೇಟಿ, ಜಿಲ್ಲಾ ಕಾರ್ಯದರ್ಶಿ, ಎಐಯುಟಿಯುಸಿ, ಮೈಸೂರು


ಉಚಿತವಾಗಿ ಕೊಡುವ ಯೋಜನೆ ಬೇಕಿರಲಿಲ್ಲ...



ಸಿದ್ದರಾಮಯ್ಯನವರ ಮುಖ್ಯಮಂತ್ರಿ ಅವಧಿಯಲ್ಲಿ ಜಾರಿಗೊಂಡಿರುವ ಗ್ಯಾರಂಟಿ ಯೋಜನೆಗಳನ್ನು ಇನ್ನಾದರೂ ಕೈಬಿಡಬೇಕು. ಸಾಲ ಮಾಡಿ ಜನರಿಗೆ ಉಚಿತವಾಗಿ ಕೊಡುವಂತಹ ಯೋಜನೆಗಳು ಬೇಡ. ಮುಂದೆ ಅಧಿಕಾರ ವಹಿಸಿಕೊಳ್ಳುವವರು ಬೆಲೆ ಏರಿಕೆ ನಿಯಂತ್ರಿಸಲು ಆದ್ಯತೆ ನೀಡಬೇಕು. ಶಿಕ್ಷಣ, ವೈದ್ಯಕೀಯ ಸೇವೆ ಉಚಿತ ಮಾಡಬೇಕು. ಈ ನಿಟ್ಟಿನಲ್ಲಿ ಮುಂದಿನ ಮುಖ್ಯಮಂತ್ರಿ ಕಾರ್ಯನಿರ್ವಹಿಸಬೇಕು.

–ರಮೇಶ್, ಛಾಯಾಗ್ರಾಹಕರು, ಮೈಸೂರು.

ಇನ್ನು 20 ವರ್ಷ ಬೇಕೇನೋ...



ಪಕ್ಷದಲ್ಲಿ ಏನು ಒಪ್ಪಂದ ಆಗಿದೆಂಯೋ ಗೊತ್ತಿಲ್ಲ. ಸಿದ್ದರಾಮಯ್ಯನವರು ಜನಪರ ಕಾಳಜಿ ಹೊಂದಿರುವವರು. ತಾಳ್ಮೆಯಿಂದ ಜನಸಾಮಾನ್ಯರ ಅಹವಾಲು ಆಲಿಸುವವರು. ಅವರೇ ಸಿಎಂ ಆಗಿ ಮುಂದುವರೆಯಬೇಕೆಂಬ ಅಪೇಕ್ಷೆ ಇತ್ತು. ಹಳೇ ಮೈಸೂರು ಭಾಗದಿಂದ ಮತ್ತೊಬ್ಬರು ಮುಖ್ಯಮಂತ್ರಿ ಆಗಲು ಇನ್ನು 20 ವರ್ಷಗಳೇ ಬೇಕಾಗಬಹುದು.

–ಎಸ್.ಬಾಲಕೃಷ್ಣ, ಅಧ್ಯಕ್ಷರು, ಮೈಸೂರು ಕನ್ನಡ ವೇದಿಕೆ.

ರೈತ ವಿರೋಧಿ ಕೃಷಿ ಕಾಯ್ದೆ ರದ್ದು ಮಾಡಲಿಲ್ಲ...



ಸಿದ್ದರಾಮಯ್ಯನವರು ಸಾಮಾಜಿಕ ಕಳಕಳಿಯುಳ್ಳವರು. ದೀನ ದಲಿತರ ಬಗ್ಗೆ ಕಳಕಳಿ ಹೊಂದಿರುವ ವ್ಯಕ್ತಿತ್ವ ಅವರದು. ಹಾಗಾಗಿ ಮುಖ್ಯಮಂತ್ರಿಯಾಗಿ ಅವರ ಅಧಿಕಾರದಲ್ಲಿ ಜನಪರ ಆಡಳಿತ ನೀಡಿದರು. ಇವರ ಅಧಿಕಾರಾವಧಿಯಲ್ಲೇ ರೈತ ವಿರೋಧಿಯಾದ ಮೂರು ಕೃಷಿ ಕಾಯ್ದೆಗಳನ್ನು ರದ್ದುಪಡಿಸುತ್ತಾರೆ ಎಂಬ ನಿರೀಕ್ಷೆ ಹೊಂದಿದ್ದೆವು. ಆದರೆ ಅದಾಗಲಿಲ್ಲ ಎಂಬ ಬೇಸರ ಇದೆ.

–ಮರಂಕಯ್ಯ, ಜಿಲ್ಲಾ ಪ್ರಧಾನ ಕಾರ್ಯದರ್ಶಿ, ರೈತ ಸಂಘ

ಮುಂದಿನ ಮುಖ್ಯಮಂತ್ರಿ ಒಳ್ಳೆಯ ಕೆಲಸ ಮಾಡಲಿ...



ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರ ರಾಜೀನಾಮೆ ಅವರ ಪಕ್ಷದ ಆಂತರಿಕ ವಿಚಾರ. ರೈತರು, ಮಧ್ಯಮ ವರ್ಗದವರು, ಕಾರ್ಮಿಕರ ಪರವಾಗಿ ಹೆಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಮುಖ್ಯಮಂತ್ರಿ ಅವಧಿಯಲ್ಲಿ ಜನರ ನಡುವೆ ಇದ್ದು ಕೆಲಸ ಮಾಡಿದವರು. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಮಾರ್ಗದರ್ಶನದಲ್ಲಿ ಸಿಎಂ ಆಗಿ ಹೆಚ್.ಡಿ.ಕುಮಾರಸ್ವಾಮಿ ರಾಜ್ಯದ ಜನತೆಯ ಕಷ್ಟಕ್ಕೆ ಸ್ಪಂದಿಸಿದರು. ಅದೇ ರೀತಿಯಲ್ಲಿ ಒಳ್ಳೆಯ ಕೆಲಸವನ್ನು ಮುಂದಿನ ಮುಖ್ಯಮಂತ್ರಿಗಳು ಮಾಡಲಿ.


–ಎಸ್‌ಬಿಎಂ ಮಂಜು, ನಗರಾಧ್ಯಕ್ಷರು, ಜೆಡಿಎಸ್, ಮೈಸೂರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಬ್ಲಾಸ್ಟ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ರೆಬೆಲ್ (ತೆ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಕೆಡಿ (ಕ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಮಾದೇವ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಲೋ ನವೀನ (ಕ)	4 ಪ್ರದರ್ಶನಗಳು
ರಾಜಕಮಲ್	
ಕರುಪ್ಪು (ತ)	4 ಪ್ರದರ್ಶನಗಳು
ಸಂಗಂ	
ಕಾಟಾಳನ್ (ಕ)	4 ಪ್ರದರ್ಶನಗಳು
ಲಿಡೋ	
ಆತುಡು(ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಕುಚುಕು (ಕ)	4 ಪ್ರದರ್ಶನಗಳು

ಬಿಎಸ್‌ಎಫ್ ಗೆ 600 ಹೆಕ್ಟೇರ್ ಭೂಮಿ ಹಸ್ತಾಂತರಿಸಿದ ಬಂಗಾಳ ಸರ್ಕಾರ

ನುಸುಳುಕೋರರ ವಿರುದ್ಧ ಕಠಿಣ ಕ್ರಮಕ್ಕೆ ಅಮಿತ್ ಶಾ ಸೂಚನೆ





ಗಾಂಧಿನಗರ: ಗಡಿ ಮೂಲಸೌಕರ್ಯ ಮತ್ತು ಭದ್ರತೆಯನ್ನು ವೇಗಗೊಳಿಸಲು ಸುವೇಂಧು ಅಧಿಕಾರಿ ನೇತೃತ್ವದ ಸರ್ಕಾರವು ಕೇವಲ 7 ದಿನಗಳಲ್ಲಿ 600 ಹೆಕ್ಟೇರ್‌ನಷ್ಟು ಭೂಮಿಯನ್ನು ಗಡಿ ಭದ್ರತಾ ಪಡೆಗೆ ಹಸ್ತಾಂತರಿಸಿದೆ ಎಂದು ಕೇಂದ್ರ ಗೃಹಸಚಿವ ಅಮಿತ್ ಶಾ ತಿಳಿಸಿದರು. ಈ ಬಗ್ಗೆ ಸಿಎಂ ಸುವೇಂಧು ಅಧಿಕಾರಿ ಕೂಡ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ಗುಜರಾತ್‌ನ ಗಾಂಧಿನಗರದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಬಂಗಾಳದಲ್ಲಿ ಅಕ್ರಮ ಒಳನುಸುಳುವಿಕೆ ಕುರಿತು ಬಲವಾದ ಹೇಳಿಕೆ ನೀಡಿದರು. ಭಾರತ ಬಾಂಗ್ಲಾ ಗಡಿಯಲ್ಲಿ ಅಕ್ರಮ ಒಳನುಸುಳುವಿಕೆ ತಡೆಯಲು ಆಕ್ರಮಣಕಾರಿ ಗಡಿಭದ್ರತಾ ಕ್ರಮಕ್ಕೆ ಕೇಂದ್ರ ಸಿದ್ಧತೆ ನಡೆಸುತ್ತಿದೆ ಎಂದು ಎಚ್ಚರಿಸಿದರು.

ಕಣ್ಗಾವಲು ಮತ್ತು ರಾಷ್ಟ್ರೀಯ ಭದ್ರತಾ ಕ್ರಮಗಳನ್ನ ಬಲಪಡಿಸುವ ಕಾರ್ಯತಂತ್ರದ ಭಾಗವಾಗಿ 'ಚಿಕನ್ ನೆಕ್' ಕಾರಿಡಾರ್ ಮೇಲೆ ವಿಶೇಷ ಗಮನ ಹರಿಸಲಾಗಿದೆ. ಅಕ್ರಮ ಒಳನುಸುಳುವವರ ಮೇಲೆ ತೀವ್ರಗೊಂಡ ಕ್ರಮವು ಈಗಾಗಲೇ ಒತ್ತಡ ಸೃಷ್ಟಿಸಲು ಪ್ರಾರಂಭಿಸಿದೆ. ಅನೇಕರು ತಾವಾಗಿಯೇ ದೇಶ ಬಿಟ್ಟು ಓಡುತ್ತಿದ್ದಾರೆ ಎಂದ ಗೃಹಸಚಿವರು ಅಕ್ರಮ ವಲಸೆ ಪ್ರಕರಣಗಳನ್ನು ಹೆಚ್ಚಿನ ಪರಿಣಾಮಕಾರಿ ಯಾಗಿ ನಿಭಾಯಿಸಲು ರಾಜ್ಯಾದ್ಯಂತ ಕೈಗೊಂಡ ಕ್ರಮಗಳ ಬಗ್ಗೆ ಎತ್ತಿತೋರಿಸಿದರು.

ಮುಂದುವರಿದು.. ಭಾರತ–ಬಾಂಗ್ಲಾ ದೇಶ ಗಡಿಯಲ್ಲಿ ದೀರ್ಘಕಾಲದಿಂದ ಬಾಕಿ ಇರುವ ಬೇಲಿ ಹಾಕುವ ಕೆಲಸ ಶೀಘ್ರದಲ್ಲೇ ಪುನರಾರಂಭಗೊಳ್ಳುವ ನಿರೀಕ್ಷೆಯಿದೆ. ಒಳನುಸುಳುವಿಕೆ ಮಾರ್ಗಗಳನ್ನು ಸಂಪೂರ್ಣವಾಗಿ ಮುಚ್ಚುವ ಗುರಿ ಹೊಂದಿದೆ ಎಂದು ಸ್ಪಷ್ಟಪಡಿಸಿದರು.

ಟ್ರೇಡಿಂಗ್ ಹೆಸರಿನಲ್ಲಿ ರೈತನಿಗೆ 9.91 ಲಕ್ಷ ರೂ. ವಂಚನೆ; ಕೇಸ್ ದಾಖಲು

ಶಿವಮೊಗ್ಗ, ಮೇ 28– ಷೇರು ಮಾರುಕಟ್ಟೆ ಟ್ರೇಡಿಂಗ್‌ನಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭಾಂಶ ನೀಡುವುದಾಗಿ ನಂಬಿಸಿ, ಕೃಷಿಕರೊಬ್ಬರಿಂದ 9.91 ಲಕ್ಷ ರೂ. ಪಡೆದು ವಂಚಿಸಿರುವ ಘಟನೆ ಶಿವಮೊಗ್ಗದಲ್ಲಿ ನಡೆದಿದೆ.

ಕಳೆದ ಮಾರ್ಚ್‌ನಲ್ಲಿ ವಾಟ್ಸಪ್ ನೋಡುತ್ತಿದ್ದಾಗ, ಅಪರಿಚಿತರು ಇವರ ಮೊಬೈಲ್ ಸಂಖ್ಯೆಯನ್ನು ವಿಐಪಿ ಹೆಸರಿನ ವಾಟ್ಸಪ್ ಗ್ರೂಪ್‌ವೊಂದಕ್ಕೆ ಸೇರಿಸಿದ್ದರು. ಆ ಗ್ರೂಪ್‌ನಲ್ಲಿ ಟ್ರೇಡಿಂಗ್ ಕಂಪನಿಯೊಂದರ ಹೆಸರಿನಲ್ಲಿ ಮೆಸೇಜ್‌ಗಳನ್ನು ಕಳುಹಿಸಲಾಗಿತ್ತು ಕಂಪನಿಯ ಪ್ರತಿನಿಧಿಗಳಂತೆ ನಟಿಸಿದ ವಂಚಕರು, ತಮ್ಮಲ್ಲಿ ಹಣ ಹೂಡಿಕೆ ಮಾಡಿದರೆ ಅತಿಹೆಚ್ಚು ಲಾಭಗಳಿಸಿ ಕೊಡುವುದಾಗಿ ನಂಬಿಸಿದ್ದರು.

ಇದನ್ನು ನಿಜವೆಂದು ನಂಬಿದ ಕೃಷಿಕ, ಮಾರ್ಚ್ 20ರಿಂದ ಮೇ15ರ ಅವಧಿಯಲ್ಲಿ ವಂಚಕರು ನೀಡಿದ ವಿವಿಧ ಬ್ಯಾಂಕ್ ಖಾತೆಗಳಿಗೆ ನಾಲ್ಕು ಹಂತಗಳಲ್ಲಿ ಒಟ್ಟು 9,91,081 ರೂ. ಹಣ ವರ್ಗಾವಣೆ ಮಾಡಿದ್ದರು. ನಂತರ ತಮ್ಮ ಖಾತೆಯಲ್ಲಿದ್ದ ಹಣವನ್ನು ವಿತ್‌ಡ್ರಾ ಮಾಡಲು ಯತ್ನಿಸಿದಾಗ, ಒಟ್ಟು ಮೊತ್ತದ ಶೇ.20ರಷ್ಟು ಹಣವನ್ನು ಕಮಿಷನ್ ರೂಪದಲ್ಲಿ ಮುಂಚಿತವಾಗಿ ಪಾವತಿಸುವಂತೆ ವಂಚಕರು ಷರತ್ತು ವಿಧಿಸಿ ವೆಬ್ ಪೇಜ್ ಬಂದ್ ಮಾಡಿದ್ದರು ಎಂದು ದೂರಿನಲ್ಲಿ ಆರೋಪಿಸಿದ್ದಾರೆ.

ಮೋಸ ಹೋಗಿರುವುದು ಅರಿವಾದ ಹಿನ್ನೆಲೆ ಬೆಂಗಳೂರಿನಲ್ಲಿರುವ ಆ ಕಂಪನಿಯ ಅಧಿಕೃತ ನಂಬರ್‌ಗೆ ಕರೆಮಾಡಿ ವಿಚಾರಿಸಿದ್ದಾರೆ. ಈ ವೇಳೆ ಕಂಪನಿ ಹೆಸರು ದುರ್ಬಳಕೆ ಮಾಡಿಕೊಂಡು ಸೈಬರ್ ಕಳ್ಳರು, ಈ ಕೃತ್ಯ ಎಸಗಿರುವುದು ದೃಢಪಟ್ಟಿದೆ. ಈ ಹಿನ್ನೆಲೆಯಲ್ಲಿ ಶಿವಮೊಗ್ಗದ ಸಿಇಎನ್ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಾಗಿದೆ.

ಕಾರ್ಯಾಗಾರ



ನಗರದ ಜೆಎಸ್‌ಎಸ್ ದಂತ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಇತ್ತೀಚೆಗೆ ರಾಷ್ಟ್ರೀಯ ಲೇಖಕರ–ವಿಮರ್ಶಕರ ಕಾರ್ಯಾಗಾರ ನಡೆಯಿತು. ಈ ವೇಳೆ ಡಾ.ಸೀಮಾ ದೇಶ್‌ಮುಖ್, ಡಾ.ಬೃಂದಾ ಸುಹಾಸ್ ಗೋಧಿ, ಡಾ.ಎಂ.ಆರ್.ದಾಕ್ಷಾಯಿಣಿ, ಡಾ.ಶರತ್ ಅಶೋಕನ್, ಡಾ,ಸುಧೀಂದ್ರ ಬಾಳಿಗಾ, ಡಾ.ಬಿ.ಮಂಜುನಾಥ್, ಡಾ.ಬಿ.ನಂದಾಲಾಲ್, ಡಾ.ಹೆಚ್.ಪಿ.ಚೈಶಂಕರ್, ಡಾ.ರಾಘವೇಂದ್ರ ಶಾನಭೋಗ್, ಡಾ.ಎಸ್.ಶ್ರುತಿ, ಡಾ.ಟಿ.ಪ್ರಿಯಾಂಕಾ ಭಾಗವಹಿಸಿದ್ದರು.

ತೆಪ್ಪೋತ್ಸವ



ಶ್ರೀ ದತ್ತ ವೆಂಕಟೇಶ್ವರ ಕ್ಷೇತ್ರದ 27ನೇ ಬ್ರಹ್ಮೋತ್ಸವ ಅಂಗವಾಗಿ ಗಣಪತಿ ಸಚ್ಚಿದಾನಂದ ಆಶ್ರಮದ ಸಪ್ತರ್ಷಿ ಸರೋವರದಲ್ಲಿ ವೆಂಕಟೇಶ್ವರ ಸ್ವಾಮಿಗೆ ಗುರುವಾರ ತೆಪ್ಪೋತ್ಸವ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ನೆರೆದಿದ್ದ ಸಾವಿರಾರು ಭಕ್ತರು ತೆಪ್ಪೋತ್ಸವವನ್ನು ಕಣ್ತುಂಬಿಕೊಂಡು ದೇವರ ಕೃಪೆಗೆ ಪಾತ್ರರಾದರು.

ಮೇ 31ರಂದು ಅರಿವು ಸಂಸ್ಥೆ ವತಿಯಿಂದ ಗಣಪತಿ ಸಚ್ಚಿದಾನಂದ ಶ್ರೀಗಳಿಗೆ ಗುರುವಂದನೆ

ಮೈಸೂರು: ಅರಿವು ಸಂಸ್ಥೆ ವತಿಯಿಂದ ಅವಧೂತ ದತ್ತಪೀಠ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮಿಗಳಿಗೆ 84ನೇ ವರ್ಷದ ಹುಟ್ಟು ಹಬ್ಬದ ಹಿನ್ನೆಲೆಯಲ್ಲಿ ನಂಜನಗೂಡು ರಸ್ತೆಯಲ್ಲಿರುವ ಗಣಪತಿ ಸಚ್ಚಿದಾನಂದ ಆಶ್ರಮದ ನಾಗಮಂಟಪದಲ್ಲಿ ಮೇ 31ರ ಬೆಳಿಗ್ಗೆ 10:30 ಗಂಟೆಗೆ ಶ್ರೀಗಳಿಗೆ ಗುರುವಂದನೆಯನ್ನು ಹಮ್ಮಿಕೊಂಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸಬೇಕೆಂದು ಅರಿವು ಸಂಸ್ಥೆ ಅಧ್ಯಕ್ಷ ಶ್ರೀಕಾಂತ ಕಶ್ಯಪ್ ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಆರ್‌ಎಸ್‌ಎಸ್‌ನ ನಗರ ಪ್ರಚಾರಕರಾದ ನವೀನ್, ಸಮಾಜ ಸೇವಕ ರಘುರಾಮ್ ವಾಜಪೇಯಿ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆ ಅಧ್ಯಕ್ಷ ಕೆ.ಬಿ ಲಿಂಗರಾಜು, ಕ್ರೆಡಿಟ್ ಐ ಸಂಸ್ಥೆಯ ವರ್ಷ, ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಕೆ ಆರ್ ಸತ್ಯನಾರಾಯಣ್, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಇನ್ನಿತರರು ಭಾಗವಹಿಸಲಿದ್ದಾರೆ.

ಸಂಗೀತ, ಸಾಹಿತ್ಯ ಜೋಡೆತ್ತಿನ ಬಂಡಿ ಇದ್ದಂತೆ

ಕರ್ನಾಟಕ ಸುಗಮ ಸಂಗೀತ ಪರಿಷತ್‌ನಿಂದ ಕವಿ ಕಾ.ವೆಂ. ಶ್ರೀನಿವಾಸಮೂರ್ತಿ ಗೀತ ಸಂಜೆ



ಮೈಸೂರಿನ ಪುರಭವನದಲ್ಲಿ ಗುರುವಾರ ಡಾ.ಕಾವೆಂಶ್ರೀ ಗೀತ ಸಂಜೆ ಕಾರ್ಯಕ್ರಮ ನಡೆಯಿತು.

ಮೈಸೂರು: ಸಂಗೀತ ಮತ್ತು ಸಾಹಿತ್ಯ ಜೋಡೆತ್ತಿನ ಬಂಡಿ ಇದ್ದಂತೆ ಎಂದು ಖ್ಯಾತ ಕವಿ ಡಾ.ಕಾ.ವೆಂ. ಶ್ರೀನಿವಾಸಮೂರ್ತಿ ಬಣ್ಣಿಸಿದರು.

ಕರ್ನಾಟಕ ಸುಗಮ ಸಂಗೀತ ಪರಿಷತ್ತು ಜಿಲ್ಲಾ ಘಟಕ ಹಾಗೂ ಶ್ರೀ ಅನಂತೇಶ್ವರ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಗುರುವಾರ ಪುರಭವನದಲ್ಲಿ ಏರ್ಪಡಿಸಿದ್ದ ತಮ್ಮ ಸಾಹಿತ್ಯ ಮತ್ತು ಕಾವ್ಯ ಲೋಕವನ್ನು ಪರಿಚಯಿಸುವ ಗೀತ ಸಂಜೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಸುಗಮ ಸಂಗೀತಕ್ಕೆ ಸಂಗೀತ ಮತ್ತು ಸಾಹಿತ್ಯ ಎರಡೂ ಮುಖ್ಯ ಎಂದರು.

ಯಾವುದೇ ಕವಿ ಗೀತೆಗಳನ್ನು ಮನರಂಜನೆಗಾಗಿ, ವಾಣಿಜ್ಯ ಉದ್ದೇಶಕ್ಕಾಗಿ ಬರೆಯುವುದಿಲ್ಲ ಆ ರೀತಿ ಮಾಡಿದರೆ ಅದು ಕಾಗದದ ಹೂವು ಆಗುತ್ತದೆಯೇ ಹೊರತು ಸಹಜ ಹೂವು ಆಗುವುದಿಲ್ಲ ಎಂದರು.

ಈ ರೀತಿಯ ಕಾರ್ಯಕ್ರಮಗಳಿಂದ ಕವಿಯ ಗೀತೆಗಳ ಗಾಯನದ ಜೊತೆಗೆ ಅವರ ವಿಚಾರಧಾರೆಯೂ ಗೊತ್ತಾಗುತ್ತದೆ. ಎಲ್ಲಾ ರೀತಿಯ ಕಲಾ ಪ್ರಕಾರಗಳಿಂದ ಜನರ ಮನ ಹಾಗೂ ಹೃದಯ ಪರಿವರ್ತನೆ ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಸುಗಮ ಸಂಗೀತ ಪರಿಷತ್ ಜಿಲ್ಲಾ ಅಧ್ಯಕ್ಷ ನಾಗರಾಜ್ ವಿ. ಬೈರಿ ಮಾತನಾಡಿ, ಡಾ.ಕಾ.ವೆಂ. ಶ್ರೀನಿವಾಸಮೂರ್ತಿ ಅವರು ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿರುವ ಪ್ರಮುಖ ಕವಿ ಹಾಗೂ ಲೇಖಕರು. ಕನ್ನಡ ಭಾಷೆಯ ಸೊಗಡನ್ನು ಉಳಿಸಿಕೊಂಡು ಆಧುನಿಕ ಬದುಕಿನ ನೋವು, ಭಾವನೆ, ಮಾನವೀಯತೆ ಮತ್ತು ಸಾಮಾಜಿಕ ಮೌಲ್ಯಗಳನ್ನು ತಮ್ಮ ಕವನಗಳಲ್ಲಿ ಅತ್ಯಂತ ಸರಳ ಹಾಗೂ ಮನಮುಟ್ಟುವಂತೆ ಅಭಿವ್ಯಕ್ತಿಸಿದ್ದಾರೆ ಎಂದರು.

ಅವರ ಸಾಹಿತ್ಯದಲ್ಲಿ ಜೀವನದ ತತ್ತ್ವ, ಸಮಾಜದ ವಾಸ್ತವತೆ ಮತ್ತು ಮಾನವ ಸಂಬಂಧಗಳ ಸೂಕ್ಷ್ಮತೆಗಳು ಸ್ಪಷ್ಟವಾಗಿ ಮೂಡಿಬರುತ್ತವೆ. ಕನ್ನಡ ಸಾಹಿತ್ಯ, ವಿಮರ್ಶೆ, ಭಾಷಣ ಹಾಗೂ ಚಿಂತನಾ ಕ್ಷೇತ್ರಗಳಲ್ಲಿಯೂ ಅವರು ಮಹತ್ವದ ಕೊಡುಗೆ ನೀಡಿದ್ದಾರೆ. ಅನೇಕ ಸಾಹಿತ್ಯ ವೇದಿಕೆಗಳಲ್ಲಿ ಅವರ ಉಪನ್ಯಾಸಗಳು ಹಾಗೂ ಕವನ ವಾಚನಗಳು ಜನಮನ ಗೆದ್ದಿವೆ. ಯುವ ಪೀಳಿಗೆಗೆ ಸಾಹಿತ್ಯದ ಮೂಲಕ ಮೌಲ್ಯಗಳನ್ನು ತಲುಪಿಸುವ ಕಾರ್ಯದಲ್ಲಿ ಅವರು ಸದಾ ತೊಡಗಿಸಿಕೊಂಡಿದ್ದಾರೆ ಎಂದು ಅವರು ಹೇಳಿದರು.

ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ. ಲಿಂಗರಾಜು, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಬ್ರಾಹ್ಮಣ ಸಮಾಜದ ಮುಖಂಡ ಕೆ. ರಘುರಾಂ ವಾಜಪೇಯಿ, ಕವಿ ಜಯಪ್ಪ ಹೊನ್ನಾಳಿ ಮುಖ್ಯ ಅತಿಥಿಗಳಾಗಿದ್ದರು.

ಗಾಯಕಿ ಶ್ವೇತಾ ದಿನೇಶ್ ಅವರ ಗಾಯನದ ಸಾರಥ್ಯದಲ್ಲಿ ಸಿ,ಎಂ. ನರಸಿಂಹಮೂರ್ತಿ, ಎಸ್.ವಿ. ಎರ್ರಿಸ್ವಾಮಿ, ಎಚ್.ವಿ. ತಿರುಮಲೇಶ್, ನಿಂಗರಾಜು, ಗೀತಾ ಲಕ್ಷ್ಮೀ ಕಿಣಿ, ಸುಜಾತಾ ಜಯಕುಮಾರ್, ರೇಖಾ, ಪದ್ಮಾ ರಾವ್, ಜಾಯ್ಸ್ ಥಾಮಸ್, ಎಸ್. ಶ್ವೇತಾ ಹಾಗೂ ನೇತ್ರಾವತಿ ಕಾವ್ಯಗಾಯನ ನಡೆಸಿಕೊಟ್ಟರು. ಆಕಾಶವಾಣಿಯ ಜಿ.ಎನ್. ಮಂಜುನಾಥ್ ಕಾರ್ಯಕ್ರಮ ನಿರೂಪಿಸಿದರು.

ಗೀತ ಗಾಯನ ಹಾಗೂ ಸಂಗೀತ ಕಾರ್ಯಕ್ರಮಗಳು ವಿಶೇಷ ಆಕರ್ಷಣೆಯಾಗಿತ್ತು. ಶಾರದಾದೇವಿ ಗೀತೆ, ಹರಿದಿದೆ ನೋಡ ಕನ್ನಡ ರಥವು, ಹಸಿರು ಚಿಗುರಿದೆ, ಮದುವೆಯ ಆಟ ತಿಳಿಯದ, ಎತ್ತ ಸಾಗಿದೆ ಭಾರತ, ನಿನ್ನ ಕಣ್ಣ ಹೂಬಾಣ, ನಲ್ಲ ನೀನೊಂದು ಕವನ, ಲಬ್ ಡಬ್ ಲಬ್ ಡಬ್, ಕನ್ನಡದನ್ನವ ಉಂಡವರೇ, ನಾವೆಲ್ಲರೂ ಹಿಂದು, ಓ ಬೆಟ್ಟ ಬಯಲುಗಳೇ, ಬಿಸಿದರೇನು ಬಿರುಗಾಳಿ, ಕಳೆದುಕೊಂಡ ಅಮ್ಮ ನೀನು, ಗ್ರಂಥಾಲಯವೇ ದೇವಾಲಯ, ಗನ್ನು ನಿಮ್ಮದು ಪೆನ್ನು ನಮ್ಮದು, ಮಳೆ ಸುರಿಯಲಿ ಹೊಳೆ ಹರಿಯಲಿ, ಕನ್ನಡ ಎಂದರೆ ಬರಿ ನುಡಿಯಲ್ಲ, ಹುಣ್ಣಿಮೆಯ ಚಂದ್ರ, ಹಾಡಲಿ ಕೋಗಿಲೆ, ಮಾತು ಕವಿತೆಯಾಗುವುದು, ಕೆರಳಸಿನ ಕೊಳದಲ್ಲಿ... ಗೀತೆಗಳನ್ನು ಹಾಡಿ, ಸಭಿಕರ ಮನಗೆದ್ದರು.

ಈ ವೇಳೆ ಸಾಹಿತ್ಯಾಸಕ್ತರು, ಸಂಗೀತ ಪ್ರಿಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ವೀರ ಸಾವರ್ಕರ್ ಮಹಾನ್ ಚೇತನ

ಸಮಾಜ ಸೇವಕ ಡಾ.ರಘುರಾಂ ವಾಜಪೇಯಿ ಬಣ್ಣನೆ



ಹಿರಿಯ ಸಮಾಜ ಸೇವಕ ಡಾ.ರಘುರಾಂ ವಾಜಪೇಯಿ, ವಿನಾಯಕ ದಾಮೋದರ ಸಾವರ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಮೈಸೂರು, ಮೇ 28(ವಿವಿಹೆಚ್)– ಸಂಘಟನೆಗೆ ಮತ್ತೊಂದು ಹೆಸರೇ ಸಾವರ್ಕರ್. ಸ್ವಾತಂತ್ರ್ಯ ಪೂರ್ವದಲ್ಲೇ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹಾನ್ ಚೇತನ ಎಂದು ಹಿರಿಯ ಸಮಾಜ ಸೇವಕ ಡಾ. ರಘುರಾಂ ವಾಜಪೇಯಿ ಬಣ್ಣಿಸಿದರು.

ಮೈಸೂರಿನ ಕುವೆಂಪುನಗರದ ವಾಸವಿ ವಿದ್ಯಾನಿಕೇತನ ಆವರಣದಲ್ಲಿ ಯುವ ಪ್ರತಿಷ್ಠಾನ ವತಿಯಿಂದ ಗುರುವಾರ ಆಯೋಜಿಸಿದ್ದ ವಿನಾಯಕ ದಾಮೋದರ ಸಾವರ್ಕರ್ ಜಯಂತಿ ಕಾರ್ಯಕ್ರಮದಲ್ಲಿ 'ಯುವ ಪ್ರತಿಷ್ಠಾನ' ಉದ್ಘಾಟಿಸಿ ಅವರು ಮಾತನಾಡಿದರು.

ಸಾವರ್ಕರ್ ತಮ್ಮ ಜೀವನದುದ್ದಕ್ಕೂ ಕೇವಲ ಹೋರಾಟ, ಸಂಘಟನೆ, ದೇಶದ ಸ್ವಾತಂತ್ರ್ಯಕ್ಕಾಗಿಯೇ ದುಡಿದವರು. ದೇಶ ಸೇವೆಯಲ್ಲಿ ತಮ್ಮ ಜೀವನವನ್ನೆ ಸವೆಸಿದ ಮಹಾನ್ ಶಕ್ತಿ ಸಾವರ್ಕರ್ ಎಂದು ತಿಳಿಸಿದರು.

ಸಾವರ್ಕರ್ ಅವರ ನಡೆ, ನುಡಿ, ಬದುಕಿದ ರೀತಿ ಎಲ್ಲವೂ ರಾಷ್ಟ್ರಭಕ್ತಿ ಮೂಡಿಸುವಂತಿವೆ ಬ್ರಿಟಿಷರನ್ನು ದೇಶದಿಂದ ಹೊರಹಾಕುವ ಧ್ಯೇಯೋದ್ದೇಶವನ್ನು ಹೊಂದಿದ್ದ ಅವರು, ಇದಕ್ಕಾಗಿ ಅಂಡ ಮಾನ್–ನಿಕೋಬಾರ್‌ನಲ್ಲಿ ಕಾರಾಗೃಹ ಶಿಕ್ಷೆಯನ್ನು ಅನುಭವಿಸಿದರು. ತಮ್ಮ ಅಗಾಧವಾದ ನೋವಿನಲ್ಲೂ ದೇಶ ಭಕ್ತಿ ಮೆರೆದ ವ್ಯಕ್ತಿ ಎಂದು ಕೊಂಡಾಡಿದರು.

ಸಾವರ್ಕರ್ ಅವರು ಭಾರತ ಸ್ವಾತಂತ್ರ್ಯ ವಿಚಾರವಾಗಿ ಹೇಗ್‌ನಲ್ಲಿರುವ ಅಂತಾರಾಷ್ಟ್ರೀಯ ನ್ಯಾಯಾಲಯದ ಮೆಟ್ಟಿಲೇರಿದವರು. ಪ್ರಪಂಚದ ಮಹಾಯುದ್ಧ, ದೇಶದ ಸ್ವಾತಂತ್ರ್ಯ ಸಂಗ್ರಾಮದ ನಡುವೆಯೂ ಅವರ ವಿಚಾರ ನ್ಯಾಯಾಲಯದಲ್ಲಿ ಪ್ರಸ್ತಾಪಿಸಲಾಗಿತ್ತು ಎಂದು ನೆನೆದರು.

ಸಾವರ್ಕರ್ ಅವರ ಸಾಧನೆಗಳನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯಲು ಯುವ ಪ್ರತಿಷ್ಠಾನ ಸ್ಥಾಪಿಸಿ ಶ್ರಮಿಸಲು ಮುಂದಾಗಿರುವುದು ಮೆಚ್ಚುಗೆಯ ಸಂಗತಿ. ಯುವಕ ಮಿತ್ರರಿಗೆ ಸಾವರ್ಕರ್ ಮಾದರಿಯಾಗಬೇಕು. ಅವರ ಬದುಕು–ಬರಹವನ್ನು ಜೀವನದಲ್ಲಿ ಅಳವಡಿಸಿಕೊಂಡು ದೇಶ ಸೇವೆ ಮಾಡಲು ಯುವ ಸಮೂಹ ಮುಂದಾಗಬೇಕು ಎಂದು ಆಶಿಸಿದರು.

ಇದಕ್ಕೂ ಮೊದಲು 'ಯುವ ಪ್ರತಿಷ್ಠಾನ' ಪೋಸ್ಟರ್ ಅನ್ನು ಸಮಾಜ ಸೇವಕ ರಘುರಾಂ ವಾಜಪೇಯಿ ಬಿಡುಗಡೆ ಮಾಡುವ ಮೂಲಕ ಸಂಸ್ಥೆ ಉದ್ಘಾಟಿಸಿದರು.

ಈ ವೇಳೆ ಹಿರಿಯ ಸಂಸ್ಕೃತ ವಿದುಷಿ ಡಾ.ಕೆ.ಲೀಲಾ ಪ್ರಕಾಶ್, ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ್, ವಾಸುದೇವ ಮಹಾರಾಜ್ ಪ್ರತಿಷ್ಠಾನದ ಅಧ್ಯಕ್ಷ ಎಂ.ವಿ.ನಾಗೇಂದ್ರ ಬಾಬು, ಯುವ ಪ್ರತಿಷ್ಠಾನ ಅಧ್ಯಕ್ಷ ಎ.ಹರ್ಷವರ್ಧನ, ಕಾರ್ಯದರ್ಶಿ ಬಿ.ಜೀವನ್ ಸಿಂಗ್ ಉಪಸ್ಥಿತರಿದ್ದರು.

ಸ್ಟೇರಿಂಗ್ ಗಾರ್ಡ್ ಕಟ್; ಡಿವೈಡರ್‌ಗೆ ಬಸ್ ಡಿಕ್ಕಿ

● ಚಾಲಕನ ಸಮಯ ಪ್ರಜ್ಞೆಯಿಂದ ತಪ್ಪಿದ ಬಾರೀ ಅನಾಹುತ ● ಆಕಾಶವಾಣಿ ಮುಂದೆ ಕೆಆರ್‌ಎಸ್ ರಸ್ತೆಯಲ್ಲಿ ಅವಘಡ

ಮೈಸೂರು, ಮೇ 28(ವಿವಿಹೆಚ್)– ನಗರದ ಆಕಾಶವಾಣಿ ಪಾರ್ಕ್ ಮುಂಭಾಗ ಕೆಆರ್‌ಎಸ್ ರಸ್ತೆಯಲ್ಲಿ ಸಂಚರಿಸುತ್ತಿದ್ದ ನಗರ ಸಾರಿಗೆ ಬಸ್‌ನ ಸ್ಟೇರಿಂಗ್ ಗಾರ್ಡ್ ಕಟ್ ಆಗಿದ್ದು, ಬಸ್ ನಿಯಂತ್ರಣ ತಪ್ಪಿ ಅವಘಡ ಸಂಭವಿಸ ಬಹುದಾಗಿದ್ದ ಅನಾಹುತ ತಪ್ಪಿದೆ.

ಈ ವೇಳೆ ಸಮಯಪ್ರಜ್ಞೆ ಪ್ರದರ್ಶಿಸಿದ ಚಾಲಕ, ಬಸ್ ಅನ್ನು ರಸ್ತೆ ಡಿವೈಡರ್‌ಗೆ ಗುದ್ದಿಸಿ ದೊಡ್ಡ ಅನಾಹುತವನ್ನು ತಪ್ಪಿಸಿದ್ದು, ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಆದರೆ, ಬಸ್‌ನ ಗ್ಲಾಸ್ ಸಂಪೂರ್ಣವಾಗಿ ಜಖಂ ಆಗಿದ್ದು, ಡಿವೈಡರ್ ಕಲ್ಲುಗಳು ರಸ್ತೆ ತುಂಬೆಲ್ಲಾ ಹರಡಿತ್ತು.

ಆಕಾಶವಾಣಿ ಎದುರು ಸಂಜೆ 5 ಗಂಟೆ ವೇಳೆಯಲ್ಲಿ ಏಕಾಏಕಿ ಸ್ಟೇರಿಂಗ್ ವ್ಯವಸ್ಥೆಯಲ್ಲಿ ತಾಂತ್ರಿಕ ದೋಷ ಉಂಟಾಗಿದೆ. ಪರಿಣಾಮ ಬಸ್ ಚಾಲಕನ ನಿಯಂತ್ರಣ ತಪ್ಪಿದೆ. ಆದರೆ ವಿಚಲಿತನಾಗದೇ ಅಪಾಯವನ್ನು ಅರಿತ ಚಾಲಕ, ಎದುರು ಬರುತ್ತಿದ್ದ ವಾಹನಗಳು ಹಾಗೂ ಸಾರ್ವಜನಿಕರ ಗಮನಿಸಿ, ಬಸ್ ಅನ್ನು ರಸ್ತೆ ಡಿವೈಡರ್‌ಗೆ ಗುದ್ದಿಸಿ ನಿಲ್ಲಿಸಿದ್ದಾರೆ. ಇದರಿಂದಾಗಿ ಒಳಗಿದ್ದ ಕೆಲ ಪ್ರಯಾಣಿಕರು ಗಾಬರಿಗೊಂಡರು.

ಘಟನೆಯಲ್ಲಿ ಓರ್ವ ಮಹಿಳೆಗೆ ತಲೆಗೆ ಪೆಟ್ಟು ಬಿದ್ದಿದ್ದು, ತಕ್ಷಣವೇ ಸ್ಥಳೀಯರು ಹಾಗೂ ಪೊಲೀಸರು ಸಹಾಯಕ್ಕೆ ಧಾವಿಸಿ ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿದ್ದು, ಉಳಿದ ಪ್ರಯಾಣಿಕರು ಯಾವುದೇ ಗಂಭೀರ ಗಾಯಗಳಿಲ್ಲದೆ ಪಾರಾಗಿದ್ದಾರೆ.

ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಸಂಚಾರ ಪೊಲೀಸರು ಪರಿಶೀಲನೆ ನಡೆಸಿ, ಬಸ್‌ನ ತಾಂತ್ರಿಕ ದೋಷದ ಕುರಿತು ಮಾಹಿತಿ ಸಂಗ್ರಹಿಸಿದರು. ಘಟನೆ ಹಿನ್ನೆಲೆಯಲ್ಲಿ ಕೆಲಕಾಲ ವಾಹನ ಸಂಚಾರ ಅಸ್ತವ್ಯಸ್ತಗೊಂಡಿತು. ಬಳಿಕ ಪೊಲೀಸರು ಸಂಚಾರವನ್ನು ಸುಗಮಗೊಳಿಸಿದರು.

ಮೈಸೂರು–ಕೆಆರ್‌ಎಸ್ ಮಾರ್ಗವಾಗಿ ದಿನನಿತ್ಯ ಸಾವಿರಾರು ವಾಹನಗಳು ಸಂಚರಿಸುತ್ತವೆ. ಸದಾ ಶಾಲಾ ಕಾಲೇಜು ವಿದ್ಯಾರ್ಥಿಗಳು ಈ ಬಸ್ ನಿಲ್ದಾಣದಲ್ಲಿ ಹೆಚ್ಚಾಗಿ ಬಸ್‌ಗೆ ಕಾಯುತ್ತಾರೆ. ಮೈಸೂರು ನಗರ ಹಾಗೂ ಗ್ರಾಮಾಂತರ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ಇದಾಗಿದ್ದು, ಹಲವಾರು ಮಹಿವಾಟುಗಳು ಈ ರಸ್ತೆ ಮೂಲಕವೇ ನಡೆಯುತ್ತವೆ. ಚಾಲಕನ ಸಮಯಪ್ರಜ್ಞೆಯಿಂದ ಭಾರೀ ಅನಾಹುತ ತಪ್ಪಿದೆ.



ಸಾರಿಗೆ ಬಸ್‌ನ ಸ್ಟೇರಿಂಗ್ ಗಾರ್ಡ್ ತುಂಡಾಸಿದ ವೇಳೆ ಚಾಲಕ ಬಸ್‌ಅನ್ನು ಡಿವೈಡರ್‌ಗೆ ಡಿಕ್ಕಿ ಹೊಡೆಸಿ, ನಿಲ್ಲಿಸಿರುವುದು.

ಸಿದ್ದು, ಡಿಕೆ ಫೋಟೋ ಸ್ಟೇಟಸ್; ಒಗ್ಗಟ್ಟಿನ ಸಂದೇಶನಾ...!

ಮೈಸೂರು, ಮೇ28(ಬಿಎಲ್‌ಯು)– ಡಿ.ಕೆ.ಶಿವಕುಮಾರ್ ಅವರು ಸಿದ್ದರಾಮಯ್ಯ ಅವರ ಕಾಲಿಗೆರಗಿ ಆಶೀರ್ವಾದ ಪಡೆದ ಫೋಟೋವನ್ನು ಕಾಂಗ್ರೆಸ್‌ನ ಬಹುತೇಕ ನಾಯಕರು ಹಾಗೂ ಕಾರ್ಯಕರ್ತರು ಮೊಬೈಲ್‌ನ ತಮ್ಮ ಸ್ಟೇಟಸ್‌ನಲ್ಲಿ ಹಾಕಿಕೊಂಡಿದ್ದಾರೆ.

ಡಿ.ಕೆ.ಶಿವಕುಮಾರ್ ಅವರು ಇಂದು ಮುಖ್ಯಮಂತ್ರಿ ಅಧಿಕೃತ ನಿವಾಸ ಕಾವೇರಿಗೆ ಭೇಟಿ ನೀಡಿ ಮೊದಲು ಸಿದ್ದರಾಮಯ್ಯ ಅವರನ್ನು ಆಲಂಗಿಸಿಕೊಂಡರು. ತರುವಾಯ ಸಿದ್ದರಾಮಯ್ಯ ಅವರ ಕಾಲಿಗೆರಗಿ ಆಶೀರ್ವಾದ ಕೂಡ ಪಡೆದರು.



ಕಾಂಗ್ರೆಸ್‌ನ ಬಹುತೇಕ ನಾಯಕರು ಹಾಗೂ ಕಾರ್ಯಕರ್ತರು ಈ ಎರಡು ಫೋಟೋಗಳನ್ನು ತಮ್ಮ ಸ್ಟೇಟಸ್‌ನಲ್ಲಿ ಹಾಕಿಕೊಂಡಿದ್ದಾರೆ. ಈ ಮೂಲಕ ಕಾಂಗ್ರೆಸ್‌ನಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಒಗ್ಗಟ್ಟಿದೆ ಎಂಬುದನ್ನು ಸಾರಿ ಹೇಳಲು ಹೊರಟಿದ್ದಾರೆ.

ಡಿ.ಕೆ.ಶಪಥ: ಮುಖ್ಯಮಂತ್ರಿ ಆಗುವ ತನಕ ನಾನು ಗಡ್ಡ ತೆಗೆಯುವುದಿಲ್ಲ ಎಂದು ಡಿ.ಕೆ.ಶಿವಕುಮಾರ್ ಶಪಥ ಮಾಡಿದ್ದರಂತೆ. ಈ ವಿಚಾರವಾಗಿ ವಿಧಾನಸಭೆ ಹಾಗೂ ವಿಧಾನ ಪರಿಷತ್‌ನಲ್ಲಿ ಸ್ವಾರಸ್ಯಕರ ಚರ್ಚೆ ಕೂಡ ನಡೆದಿತ್ತು. ಸ್ವಾರಸ್ಯಕರ ಚರ್ಚೆ ವೇಳೆ ಬಿಜೆಪಿ ಶಾಸಕರು ಕಾಲೆಳೆದಾಗ ಯಾವುದೇ ಪತ್ರಿಕ್ರಿಯೆ ನೀಡದ ಡಿ.ಕೆ.ಶಿವಕುಮಾರ್ ಅವರು ನಕ್ಕು ಸುಮ್ಮನಾಗಿದ್ದಾರೆ ಹೊರತು ಯಾವುದೇ ಪ್ರತಿಕ್ರಿಯೆ ನೀಡಿರಲಿಲ್ಲ.


ಈಗ ಡಿ.ಕೆ.ಶಿವಕುಮಾರ್ ಸಿಎಂ ಆಗುತ್ತಿದ್ದು, ಶಪಥ ಈಡೇರಿದ ಕಾರಣ ಗಡ್ಡ ತೆಗೆಯುತ್ತಾರೆಯೇ ಕಾದು ನೋಡಬೇಕು.

ಎರಡನೇ ಸಿಎಂ: ಮೈಸೂರು ಜಿಲ್ಲೆಯವರಾಗಿ ಡಿ.ದೇವರಾಜ ಅರಸ್ ಅವರು ಮುಖ್ಯಮಂತ್ರಿಯಾಗಿದ್ದರು. ತರುವಾಯ ಸಿದ್ದರಾಮಯ್ಯ ಅವರು ಎರಡು ಬಾರಿ ಮುಖ್ಯಮಂತ್ರಿ ಸ್ಥಾನ ಅಲಂಕರಿಸಿದ್ದರು. ಕರ್ನಾಟಕದ ಅತಿ ಹೆಚ್ಚು ದೀರ್ಘಾವಧಿ ಮುಖ್ಯಮಂತ್ರಿ ಹಾಗೂ 18 ಬಾರಿ ಬಜೆಟ್ ಮಂಡಿಸುವ ಮೂಲಕ ದಾಖಲೆ ನಿರ್ಮಾಣ ಮಾಡಿದರು. ಮುಂದಿನ ರಾಜಕೀಯ ಬೆಳವಣಿಗೆಯಲ್ಲಿ ಮೈಸೂರು ಜಿಲ್ಲೆಯಿಂದ ಮುಖ್ಯಮಂತ್ರಿ ಆಗುವ ಯೋಗ ಯಾರಿಗೆ ಬರುತ್ತದೆಯೊ ಕಾಲವೇ ನಿರ್ಧರಿಸುತ್ತದೆ.

ಸಿಎಂ ಆತ್ಯಾಪ್ತರಿಗೆ ಬೇಸರ: ಮೈಸೂರು ಜಿಲ್ಲೆಯಲ್ಲಿ ಸಿದ್ದರಾಮಯ್ಯ ಅವರಿಗೆ ಆಪ್ತರ ದಂಡೇ ಇದೆ. ಜೆಡಿಎಸ್‌ನಲ್ಲಿ ಇದ್ದಾಗ ಸಿದ್ದರಾಮಯ್ಯ ಅವರ ಜೊತೆಗಿದ್ದು, ಕಾಂಗ್ರೆಸ್‌ಗೆ ಬಂದಾಗ ಕೂಡ ಅವರನ್ನು ಹಿಂಬಾಲಿಸಿದ್ದರು. ಆದರೆ, ಈಗ ಸಿಎಂ ಸ್ಥಾನಕ್ಕೆ ರಾಜಿನಾಮೆ ನೀಡಿದ್ದರಿಂದ ಅವರ ಬಹಳಷ್ಟು ಆಪ್ತರಿಗೆ ನಿರಾಸೆಯಾಗಿದೆ.

ಈ ಬಾರಿ ಕೋಲ್ಕತ್ತಾದಲ್ಲಿ ಯೋಗ ದಿನಾಚರಣೆಯಲ್ಲಿ ಪ್ರಧಾನಿ ಮೋದಿ ಭಾಗಿ

ಕೋಲ್ಕತ್ತಾ, ಮೇ 28– ಈ ಬಾರಿ ಕೋಲ್ಕತ್ತಾದಲ್ಲಿ ನಡೆಯಲಿರುವ 2026ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಲಿದ್ದಾರೆ.



ಜೂ.21 ಕೋಲ್ಕತ್ತಾದಲ್ಲಿ ಯೋಗ ದಿನಾಚರಣೆ ಕಾರ್ಯಕ್ರಮ ನಡೆಯಲಿದೆ ಎಂದು ಕೇಂದ್ರ ಆಯುಷ್ ಸಚಿವ ಪ್ರತಾಪ್‌ರಾವ್ ಜಾಧವ್ ತಿಳಿಸಿದ್ದಾರೆ. ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಈ ಬಾರಿಯ ಥೀಮ್ ಆಗಿದೆ. ದೈಹಿಕ ಆರೋಗ್ಯ, ಮಾನಸಿಕ ಯೋಗಕ್ಷೇಮ, ಆರೋಗ್ಯಕರ ವೃದ್ಧಾಪ್ಯವನ್ನು ಉತ್ತೇಜಿಸುವಲ್ಲಿ ಯೋಗದ ಪಾತ್ರ ಮಹತ್ವದ್ದು ಎಂಬ ಆಶಯ ಹೊಂದಲಾಗಿದೆ.

ಆಯುಷ್ ಸಚಿವಾಲಯದ ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯ ಯೋಗ ಉತ್ಸಾಹಿಗಳು ಭಾಗವಹಿಸಲಿದ್ದಾರೆ.

ಶ್ರೀಮಂತ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಹೊಂದಿರುವ ಖಜುರಾಹೊ, ಭಾರತದ ಪ್ರಾಚೀನ ಸಂಪ್ರದಾಯಗಳು ಮತ್ತು ಕ್ಷೇಮ ಪದ್ಧತಿಗಳ ನಡುವಿನ ಸಾಮರಸ್ಯವನ್ನು ಪ್ರತಿನಿಧಿಸುತ್ತದೆ ಎಂದು ಜಾಧವ್ ತಿಳಿಸಿದ್ದಾರೆ.

ಯೋಗವು ದೈನಂದಿನ ಜೀವನದ ಒಂದು ಭಾಗವಾಗಬೇಕು. ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯಡಿಯಲ್ಲಿ ಆಯುಷ್ ಸಚಿವಾಲಯವು ನಿರಂತರ ಸಂಪರ್ಕ ಮತ್ತು ಸಾರ್ವಜನಿಕ ಭಾಗವಹಿಸುವಿಕೆಯ ಮೂಲಕ ಪ್ರತಿಯೊಂದು ಹಳ್ಳಿ, ಮನೆ, ಶಾಲೆ, ಕಚೇರಿ ಮತ್ತು ಸಮುದಾಯಕ್ಕೆ ಯೋಗವನ್ನು ಕೊಂಡೊಯ್ಯಲು ನಿರಂತರವಾಗಿ ಕೆಲಸ ಮಾಡುತ್ತಿದೆ ಎಂದು ಸಚಿವರು ಬಣ್ಣಿಸಿದ್ದಾರೆ.

ಮಾಸ್ ಲೀಡರ್‌ನ ಕೆಳಗಿಳಿಸಿದರೆ ಜನ ಸುಮ್ಮನಿರುವುದಿಲ್ಲ!

ಲಖನ್ ಜಾರಕಿಹೊಳಿ ಆಕ್ರೋಶ

ಬೆಳಗಾವಿ, ಮೇ 28– ಕಾಂಗ್ರೆಸ್ ಹೈಕಮಾಂಡ್ ನೇರವಾಗಿ ಜೇನುಗೂಡಿಗೆ ಕೈ ಹಾಕಿದೆ. ಸಿದ್ದರಾಮಯ್ಯ ಅವರನ್ನು ಕೆಳಗಿಳಿಸುವ ಮೂಲಕ ರಾಜ್ಯವನ್ನು ಸರ್ವನಾಶ ಮಾಡಿದೆ ಸಿದ್ದರಾಮಯ್ಯ ಕಣ್ಣೀರು 2028ಕ್ಕೆ ಜ್ವಾಲಾಮುಖಿ ಆಗಿ ಸ್ಫೋಟಿಸಲಿದೆ ಎಂದು ವಿಧಾನ ಪರಿಷತ್ತಿನ ಪಕ್ಷೇತರ ಸದಸ್ಯ ಲಖನ್ ಜಾರಕಿಹೊಳಿ ಹೇಳಿಕೆ ನೀಡಿದ್ದಾರೆ.



ಮಾಧ್ಯಮಗಳಿಗೆ ವಿಡಿಯೊ ಹೇಳಿಕೆ ಬಿಡುಗಡೆ ಮಾಡಿದ ಅವರು, ಸಿದ್ದರಾಮಯ್ಯ ರಾಜೀನಾಮೆ ಕಾಂಗ್ರೆಸ್ ಪತನಕ್ಕೆ ಕಾರಣವಾಗುತ್ತದೆ. ರಾಜ್ಯವೂ ಅಧಃಪತನಕ್ಕೆ ಹೋಗುತ್ತದೆ. ಅಹಿಂದ ಚಳವಳಿಯನ್ನೇ ಹೈಕಮಾಂಡ್ ತಿಳಿದುಹಾಕಿದೆ ಎಂದಿದ್ದಾರೆ.


ಸಿದ್ದರಾಮಯ್ಯ ಗ್ಯಾರಂಟಿ ಯೋಜನೆಗಳನ್ನು ಶಿಸ್ತಿನಿಂದ ಜಾರಿಗೊಳಿಸಿದ್ದರು. ಆರ್ಥಿಕ ನಷ್ಟವಾಗದಂತೆ ನಿಭಾಯಿಸಿದ್ದರು. ಇನ್ನು ಮುಂದೆ ಯಾವುದೇ ಗ್ಯಾರಂಟಿ ಯೋಜನೆ ಮುಂದುವರಿಯುವುದಿಲ್ಲ. ಕಾಂಗ್ರೆಸ್ ನಾಯಕರಾದ ವೇಣುಗೋಪಾಲ ಹಾಗೂ ಸುರ್ಜೇವಾಲಾ ಅವರಿಗೆ ರಾಜ್ಯದ ನಿಜವಾದ ಸಮಸ್ಯೆಯ ಅರಿವಿಲ್ಲ. ತಾವೇ ಹೋರಾಟ ಮಾಡಿ ಸರ್ಕಾರ ತಂದಂತೆ ವರ್ತಿಸುತ್ತಿದ್ದಾರೆ ಎಂದೂ ಕಿಡಿ ಕಾರಿದ್ದಾರೆ.

2028ಕ್ಕೆ ಕಾಂಗ್ರೆಸ್ ರಾಜ್ಯದಲ್ಲಿ 40 ಸ್ಥಾನ ಕೂಡ ಗೆಲ್ಲಲು ಸಾಧ್ಯವಾಗುವುದಿಲ್ಲ. ಸಿದ್ದರಾಮಯ್ಯ ಐದೂ ವರ್ಷ ಪೂರೈಸಿ ಚುನಾವಣೆಗೆ ಹೋಗಬೇಕಿತ್ತು. ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ ಆಗಿದ್ದರು, ಹಿರಿಯ ನಾಯಕರಿಗೂ ಸಚಿವ ಸ್ಥಾನಗಳಿದ್ದವು. ಇನ್ನು ಮುಂದೆ ಪರಿಸ್ಥಿತಿ ಹದಗೆಡಲಿದೆ. ಯಡಿಯೂರಪ್ಪ ಅವರನ್ನು ಕೆಳಗಿಳಿಸಿ ಬಸವರಾಜ ಬೊಮ್ಮಾಯಿ ಅವರನ್ನು ಮುಖ್ಯಮಂತ್ರಿ ಮಾಡಿದ ಪರಿಣಾಮವನ್ನು ಬಿಜೆಪಿ ಈಗಲೂ ಎದುರಿಸುತ್ತಿದೆ. ಮುಂದೆ ಕಾಂಗ್ರೆಸ್‌ಗೂ ಇದೇ ಪರಿಸ್ಥಿತಿ ಬರಲಿದೆ. ಮಾಸ್ ಲೀಡರ್ ಒಬ್ಬರನ್ನು ಅಧಿಕಾರದಿಂದ ಕಿತ್ತೊಗೆಯುವುದನ್ನು ಜನ ಸಹಿಸುವುದಿಲ್ಲ ಎಂದಿದ್ದಾರೆ.

ದಾವಣಗೆರೆ, ಬಾಗಲಕೋಟೆ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಗೆಲ್ಲಲು ಅಹಿಂದ ಮತಗಳೇ ಕಾರಣ. ಈಗ ಅಹಿಂದ ನಾಯಕನನ್ನೇ ತುಳಿದಿದ್ದಾರೆ. ಕುರುಬ ಸಮಾಜ ಯಾವತ್ತೂ ಇದನ್ನು ಕ್ಷಮಿಸಬಾರದು, ಪಾಠ ಕಲಿಸಬೇಕು ಎಂದು ಹೇಳಿಕೆ ನೀಡಿದ್ದಾರೆ.

ನಿಮ್ಮ ಆಡಳಿತ ಸುವರ್ಣಾಕ್ಷರಗಳಲ್ಲಿ ಉಳಿಯಲಿದೆ: ಸಿದ್ದರಾಮಯ್ಯ ಗುಣಗಾನ ಮಾಡಿದ ವೇಣುಗೋಪಾಲ್

ಬೆಂಗಳೂರು, ಮೇ 28: ಕರ್ನಾಟಕ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ್ದು, ಆ ಬೆನ್ನಲ್ಲೇ ಹೈಕಮಾಂಡ್ ಭೇಟಿಗಾಗಿ ದೆಹಲಿಗೆ ತೆರಳಿದ್ದಾರೆ. ವಿಶೇಷ ಅಂದರೆ ನಾಯಕತ್ವ ಬದಲಾವಣೆ ಸಂದರ್ಭದಲ್ಲಿಯೂ ರಾಜ್ಯ ನಾಯಕರು ಒಗ್ಗಟ್ಟಿನ ಸಂದೇಶ ಸಾರಿರುವುದು ವಿಪಕ್ಷಗಳ ಹುಬ್ಬೇರಿಸಿದೆ. ಉಪಹಾರ ಕೂಟದಿಂದ ಹಿಡಿದು ರಾಜಭವನದಲ್ಲಿ ಸಿದ್ದರಾಮಯ್ಯ ರಾಜೀನಾಮೆ ಪತ್ರ ನೀಡುವವರೆಗೂ ಡಿಸಿಎಂ ಡಿಕೆಶಿ ಮತ್ತು ಸಿಎಂ ಸಿದ್ದರಾಮಯ್ಯ ಒಟ್ಟಾಗಿಯೇ ಕಾಣಿಸಿಕೊಂಡಿದ್ದಾರೆ. ಈ ಕುರಿತು ಎಕ್ಸ್ ಪೋಸ್ಟ್ ಮಾಡಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಸ್ವಾರ್ಥಕ್ಕಿಂತ ಪಕ್ಷ, ಅಧಿಕಾರಕ್ಕಿಂತ ಜನ, ಕಾಂಗ್ರೆಸ್‌ಗೆ ಪಕ್ಷವೇ ಕುಟುಂಬ, ಜನರೇ ಧ್ಯೇಯ ಎಂದು ಬರೆದುಕೊಂಡಿದ್ದಾರೆ.



ಕರ್ನಾಟಕದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರು ನೀಡಿದ ಅದ್ಭುತ ಆಡಳಿತ ಅವಧಿಯ ಬಗ್ಗೆ ನಾವು ಎಲ್ಲರೂ ಅಪಾರ ಹೆಮ್ಮೆ ಹೊಂದಿದ್ದೇವೆ. ಅವರ ನಾಯಕತ್ವದಲ್ಲಿ ಕರ್ನಾಟಕವು ಕಾಗದದ ಮಟ್ಟದಲ್ಲೇ ಉಳಿಯದ ಪರಿವರ್ತನಾ ಅಭಿವೃದ್ಧಿಯನ್ನು ಕಂಡಿದ್ದು, ಸಮಾಜದ ಅಂಚಿನಲ್ಲಿರುವ ಪ್ರತಿಯೊಬ್ಬ ಕನ್ನಡಿಗನ ಬದುಕಿಗೂ ಸ್ಪರ್ಶಿಸಿದೆ. ಸರಳ ಕೃಷಿಕ ಕುಟುಂಬದ ಹಿನ್ನೆಲೆಯಿಂದ ಹೊರಹೊಮ್ಮಿ, ತಮ್ಮ ತತ್ವನಿಷ್ಠೆ, ಜನಪರ ಬದ್ಧತೆ ಮತ್ತು ಆಡಳಿತ ಜಾಣ್ಮೆಯ ಬಲದಿಂದ ರಾಜ್ಯದ ಅತ್ಯುನ್ನತ ಹುದ್ದೆ ತಲುಪಿದ ನಾಯಕ ಸಿದ್ದರಾಮಯ್ಯ, ಬಡವರು, ಹಿಂದುಳಿದವರು ಹಾಗೂ ಸಮಾಜದ ಅಂಚಿನ ವರ್ಗಗಳ ಸಬಲೀಕರಣಕ್ಕಾಗಿ ಮಾಡಿದ ಕಾರ್ಯಗಳಿಂದ ಅವರ ಆಡಳಿತ ಇತಿಹಾಸದಲ್ಲಿ ಚಿನ್ನದ ಅಕ್ಷರಗಳಲ್ಲಿ ಉಳಿಯಲಿದೆ.

ಇಂದು ಪಕ್ಷದ ಹಿತದೃಷ್ಟಿಯಿಂದ ಅವರು ತೆಗೆದುಕೊಂಡ ನಿಸ್ವಾರ್ಥ ನಿರ್ಧಾರವನ್ನು ಕಾಂಗ್ರೆಸ್ ಅತ್ಯಂತ ಗೌರವದಿಂದ ಸ್ವಾಗತಿಸುತ್ತದೆ. ಅವರು ತೋರಿದ ಗೌರವಯುತ ಹಾಗೂ ಪ್ರೌಢ ನಡೆ, ಸಾರ್ವಜನಿಕ ಜೀವನದಲ್ಲಿರುವ ನಾಯಕರು ಹೇಗೆ ವರ್ತಿಸಬೇಕು ಎಂಬುದಕ್ಕೆ ಮಾದರಿಯಾಗಿದೆ. ಅವರ ಮುಂದಿನ ರಾಜಕೀಯ ಹಾಗೂ ಸಾರ್ವಜನಿಕ ಜೀವನಕ್ಕೆ ನಮ್ಮ ಹಾರೈಕೆಗಳು. ಕಾಂಗ್ರೆಸ್ ಪಕ್ಷದ ಅಮೂಲ್ಯ ನಾಯಕರಾಗಿ, ಅವರ ಜ್ಞಾನ ಮತ್ತು ಅನುಭವ ನಮ್ಮ ರಾಜಕೀಯ ಪಯಣದಲ್ಲಿ ಸದಾ ಅಪ್ರತಿಮವಾಗಿಯೇ ಉಳಿಯಲಿದೆ ಎಂದು ವೇಣುಗೋಪಾಲ್ ತಿಳಿಸಿದ್ದಾರೆ.

PUBLIC NOTICE

Notice is hereby given that my client has agreed to purchase the schedule mentioned property from **Sri. R.V. Narayana Swamy** Son of T.R. Venkatamadaiah resident of #304, School Street, Rampura Village, Kasaba Hobli, Channapatnna Taluk, Bangalore South District.

Any person/s having or claiming any right, title, estate or interest by way of inheritance, mortgage, sale, lease lien, charge, trust, maintenance, easements, transfer, license, possession, gift, encumbrance or in whatsoever manner are hereby required to give notice of the same to the undersigned in the address mentioned below within 07 days from the date of publication thereof, together with the copies of all documents on the basis of which such claims are made, failing which any such right, title, interest or claim, if any will be deemed to have been waived and not binding on my client and my client will proceed to conclude the transaction of purchase without reference to the same if any.

SCHEDULE

All the peace and parcel of Site No.1187, the Property No.3621051986, Property document No.26803950, Property assessment No.1187 as per the forum No.3 in the records of Bogadi Pattana Panchayithi, Mysuru measuring East to West 10.363221 meters and North to South 6.096012 meters in totally measuring 63.174320 Square Meters situated at Rajarajeshwiri Nagara, B.E.M.L layout, Bogadi, Mysore, together with all rights, appurtenances whatsoever underneath or above the surface is bounded on the:- East : Road, West : Property No.1199, North : Property No. 1186, South : Property No. 1188.

Sd/- P. Thejasvi B.A.L., LL.B., Advocate, #1143/1E, 2nd Floor, Chanakya Circle, Geetha Road, Chamarajapuram, Mysuru - 570005 Mob.: 9945697527 Email : thejas.pg@gmail.com

Date : 28-05-2026
Place : Mysuru